ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಡಿಸೆಂಬರ್ 10 ಬುಧವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871


ಸಂಪುಟ: 46 | ಸಂಚಿಕೆ: 232 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಅಮಾಯಕರಿಗೆ ತೊಂದರೆ ಮಾಡಲ್ಲ

ಭೂಮಿ ಲೂಟಿಕೋರರ ಬಿಡಲ್ಲ!

- ಕಂದಾಯ ಸಚಿವ ಕೃಷ್ಣ ಬೈರೇಗೌಡರ ಎಚ್ಚರಿಕೆ
- ಪ್ರಾಮಾಣಿಕರ ಭೂ ಮಂಜೂರು ರದ್ದಾಗಿದ್ದರೆ ಕ್ರಮ
- ಭೂ ಲೂಟಿಕೋರರಿಗೆ ಉದಾರತೆ ತೋರಲಾಗಲ್ಲ
- ಅಕ್ರಮದಲ್ಲಿ ಶಾಮೀಲಾದ ಅಧಿಕಾರಿಗಳ ವಿರುದ್ಧ ಕ್ರಮ
- 24 ಅಧಿಕಾರಿಗಳ ವಿರುದ್ಧ ದೋಷಾರೋಪ ಪಟ್ಟಿ



ಬೆಳಗಾವಿ ಡಿ.9– ಬಗರ್ ಹುಕುಂ ಫಾರ್ಮ್ 50–53 ರಲ್ಲಿ ಜಮೀನು ಮಂಜೂರು ಪ್ರಕರಣಗಳಲ್ಲಿ ಪ್ರಾಮಾಣಿಕರು ಹಾಗೂ ಅಮಾಯಕರಿಗೆ ತೊಂದರೆ ನೀಡಲ್ಲ. ಆದರೆ, ಅಕ್ರಮವಾಗಿ ಭೂ ಮಂಜೂರಾತಿ ಪಡೆದ ಲೂಟಿಕೋರರು ಹಾಗೂ ಅಕ್ರಮದಲ್ಲಿ ಶಾಮೀಲಾದ ಅಧಿಕಾರಿಗಳ ವಿರುದ್ಧ ಕಠಿಣ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಸದನಕ್ಕೆ ತಿಳಿಸಿದರು.

ಮಂಗಳವಾರ ವಿಧಾನಸಭೆ ಪ್ರಶ್ನೋತ್ತರ ಅವಧಿಯಲ್ಲಿ ಚಿಕ್ಕಮಗಳೂರು ಕ್ಷೇತ್ರದ ಶಾಸಕ ಎಚ್.ಡಿ. ತಮ್ಮಯ್ಯ ಅವರು ಮಾತನಾಡಿ, ಬಗರ್ ಹುಕುಂ ಫಾರ್ಮ್ 50–53ರ ಅಡಿಯಲ್ಲಿ ಹತ್ತಾರು ವರ್ಷಗಳ ಹಿಂದೆಯೇ ಬಡ ರೈತರಿಗೆ ಜಮೀನು ಮಂಜೂರಾಗಿದೆ. ರೈತರು ಆ ಜಮೀನಿನ ಮೇಲೆ ಸಾಲವನ್ನೂ ಸಹ ಪಡೆದಿದ್ದಾರೆ. ಆದರೆ, ಈಗ ಆ ಮಂಜೂರಾತಿಗಳನ್ನು ರದ್ದು ಮಾಡಿದರೆ ಕಡೂರು, ಮೂಡಿಗೆರೆ ಭಾಗದ ಬಡವರು, ರೈತರು ಬೀದಿಗೆ ಬೀಳುವ ಸ್ಥಿತಿ ಎದುರಾಗುತ್ತದೆ ಎಂದು ವಿಷಾದ ವ್ಯಕ್ತಪಡಿಸಿದರು.

ಶಾಸಕರಾದ ಎಚ್.ಡಿ. ತಮ್ಮಯ್ಯ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವ ಕೃಷ್ಣ ಬೈರೇಗೌಡ ಅವರು, ಈ ವಿಚಾರದಲ್ಲಿ ಅಮಾಯಕರಿಗೆ ಹಾಗೂ ಪ್ರಾಮಾಣಿಕರಿಗೆ ತೊಂದರೆ ಮಾಡಲ್ಲ. ಯಾರು ಹಗರಣ ಮಾಡಿದ್ದಾರೆ, ಅಧಿಕಾರಿಗಳ ಜೊತೆ ಶಾಮೀಲಾಗಿ ಸರ್ಕಾರಕ್ಕೆ ಮೋಸ ಮಾಡಿದ್ದಾರೆ ಅವರು ಪಾಪದವರಲ್ಲ. ಅಂತಹವರಿಗೆ ವಿನಾಯಿತಿ ನೀಡುವಷ್ಟು ನಾವು ಉದಾರಿಗಳಲ್ಲ ಎಂದರು.

ಈ ಹಿಂದೆ ಬಗರ್ ಹುಕುಂ ಭೂ ಮಂಜೂರಾತಿ ಪ್ರಕರಣಗಳಲ್ಲಿ ನಡೆದಿರುವ ಅಕ್ರಮಗಳ ಬಗ್ಗೆಯೂ ಸದನಕ್ಕೆ ಮಾಹಿತಿ ನೀಡಿದ ಅವರು, ನಮ್ಮ ಅಧಿಕಾರಿಗಳು ಭೂಮಿಗಾಗಿ ಅರ್ಜಿ ಕೊಡದವರು, ಸಾಗುವಳಿದಾರರಲ್ಲದವರಿಗೂ ಭೂ ಮಂಜೂರು ಮಾಡಿದ್ದಾರೆ. ಅರಣ್ಯ ಜಾಗದಲ್ಲಿ ಭೂ ಮಂಜೂರು ಮಾಡಿದ್ದಾರೆ. ಅಷ್ಟೇ ಏಕೆ ತುಮಕೂರಿನ ವ್ಯಕ್ತಿಗೆ ಚಿಕ್ಕಮಗಳೂರಿನಲ್ಲಿ ಭೂ ಮಂಜೂರು ಮಾಡಲಾಗಿದೆ. ಅಂದಾಜಿನ ಪ್ರಕಾರ ಕಡೂರು ತಾಲೂಕು ಒಂದರಲ್ಲೇ ಸುಮಾರು 6000 ಎಕರೆ ಭೂಮಿಯನ್ನು ಅಕ್ರಮವಾಗಿ ಮಂಜೂರು ಮಾಡಿ ಖಾತೆ ಮಾಡಿಕೊಡಲಾಗಿದೆ ಎಂದರು.

ಅಕ್ರಮದಲ್ಲಿ ಬಾಗಿ ಆಗಿ ಲೂಟಿ ಮಾಡಿದವರ ವಿರುದ್ಧ ನಾವು ಉದಾರತೆ ಮೆರೆಯಲು ಸಾಧ್ಯವಿಲ್ಲ. ತಪ್ಪು ಮಾಡಿದವರು ಅಮಾಯಕರಲ್ಲ. ಇಂತಹ ಅಕ್ರಮಗಳಲ್ಲಿ ಭಾಗಿಯಾದ 24 ಅಧಿಕಾರಿಗಳ ವಿರುದ್ಧ ಈಗಾಗಲೇ ದೋಷಾರೋಪ ಪಟ್ಟಿ ಸಿದ್ಧ ಮಾಡಿದ್ದೇನೆ. ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು. ಹೀಗಾಗಿ ಅಕ್ರಮದಲ್ಲಿ ಭಾಗಿಯಾದ ಅಧಿಕಾರಿಗಳಿಗೆ ಒಂದು ಕಾನೂನು

■ 6ನೇ ಪುಟಕ್ಕೆ

ಯತೀಂದ್ರ ವರಿಷ್ಠರೇ...!

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣ ಕಿಡಿ

ಬೆಳಗಾವಿ, ಡಿ.9(ಕೆಎಂಶಿ)– ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ. ಈ ಬಗ್ಗೆ ಡಿ.ಕೆ. ಶಿವಕುಮಾರ್ ಅವರಿಗೆ ವರಿಷ್ಠರು ಸ್ಪಷ್ಟಪಡಿಸಿದ್ದಾರೆ ಎಂದು ಹೇಳಿಕೆ ನೀಡಿದ್ದ ಎಂಎಲ್ಸಿ ಹಾಗೂ ಸಿಎಂ ಸಿದ್ದರಾಮಯ್ಯ ಪುತ್ರ ಡಾ. ಯತೀಂದ್ರರ ಮೇಲೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣ ಮುಗಿ ಬಿದ್ದಿದೆ.



ಯತೀಂದ್ರ

ಅಧಿಕಾರ ಹಂಚಿಕೆ ಕುರಿತಂತೆ ಸ್ಪಷ್ಟನೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಪುತ್ರ ಪಕ್ಷದ ವರಿಷ್ಠರೇ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಬಣ ಕಿಡಿಕಾರಿದೆ.

ಸಿದ್ದರಾಮಯ್ಯ ಐದು ವರ್ಷ ಆಡಳಿತಾವಧಿ ಪೂರೈಸುತ್ತಾರೆ ಎಂಬುದಾಗಿ ಯತೀಂದ್ರ ಸೋಮವಾರ ನೀಡಿದ ಹೇಳಿಕೆ ಉಭಯ ಬಣಗಳಲ್ಲಿ ಈಗ ಜ್ವಾಲೆಯಾಗಿ ಉರಿಯುತ್ತಿದೆ. ಯತೀಂದ್ರ ಹೇಳಿಕೆ ನಂತರ ಡಿ.ಕೆ. ಶಿವಕುಮಾರ್ ಬಣದ ಶಾಸಕರು ವಿಧಾನಸಭೆ ಒಳಗೆ ಮತ್ತು ಹೊರಗೆ ಒಟ್ಟಾಗಿ ಕುಳಿತು ಬಲ ಪ್ರದರ್ಶನಕ್ಕೆ ಮುಂದಾದರು.

ಹೈಕಮಾಂಡ್ ದಾರಿ ತಪ್ಪಿಸುವುದು ಬೇಡ: ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್ ಬಣದ ಇಕ್ಬಾಲ್ ಹುಸೇನ್, ಮುಖ್ಯಮಂತ್ರಿ ಪುತ್ರ ಎಂಬುದನ್ನೂ ಲೆಕ್ಕಿಸದೆ ಇಂದೂ ಯತೀಂದ್ರ ವಿರುದ್ಧ ವಾಗ್ದಾಳಿ ನಡೆಸಿದರು.

ವರಿಷ್ಠರ ಸ್ಥಾನವನ್ನು ಯತೀಂದ್ರ ತುಂಬುವುದು ಬೇಡ. ಇಂತಹ ಹೇಳಿಕೆಗಳಿಂದ ಹೈಕಮಾಂಡ್ ದಾರಿ ತಪ್ಪಿಸಲು ಹೊರಟಿದ್ದಾರೆ. ವರಿಷ್ಠರ ಕೆಲಸ ವರಿಷ್ಠರೇ ಮಾಡಲಿ, ಗೊಂದಲ ಬಗೆಹರಿಸಲು ನಮ್ಮ ದೆಹಲಿ ನಾಯಕರು ಗಟ್ಟಿ ಇದ್ದಾರೆ. ಯತೀಂದ್ರ ಅವರಿಗೆ ಏನು ಕೆಲಸ ಇದೆಯೋ ಅದನ್ನು ಮಾಡಿಕೊಂಡು ಹೋಗಲಿ ಎಂದು ಇಕ್ಬಾಲ್ ಕಿಡಿಕಾರಿದ್ದಾರೆ.

ನನ್ನ ಹೇಳಿಕೆ ಅಚಲ: ಶಿವಕುಮಾರ್ ಬಣ ಹಾಗೂ ಅವರ ಹೇಳಿಕೆಗಳ ಬಗ್ಗೆ ಯಾವುದಕ್ಕೂ ತಲೆ ಕೆಡಿಸಿಕೊಳ್ಳದ

■ 6ನೇ ಪುಟಕ್ಕೆ

ಯತೀಂದ್ರ ಹೇಳಿಕೆ ನನ್ನ ಗಮನಕ್ಕೆ ಬಂದಿಲ್ಲ

ಬೆಳಗಾವಿ, ಡಿ.9(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ನನ್ನ ನಡುವೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ ಎಂದಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನ ಪರಿಷತ್ ಸದಸ್ಯ ಯತೀಂದ್ರ ನೀಡಿರುವ ಹೇಳಿಕೆ ನನ್ನ ಗಮನಕ್ಕೆ ಬಂದಿಲ್ಲ ಎಂದಿದ್ದಾರೆ.



ವಿಧಾನಮಂಡಲದ ಕಲಾಪದಲ್ಲಿ ಭಾಗವಹಿಸಲು ಬೆಳಗಾವಿಗೆ ಆಗಮಿಸಿದ ಶಿವಕುಮಾರ್ ಸುದ್ದಿಗಾರರೊಂದಿಗೆ ಮಾತನಾಡಿ, ಅಧಿಕಾರ ಹಸ್ತಾಂತರ ಕುರಿತಂತೆ ಯತೀಂದ್ರ ನೀಡಿರುವ ಹೇಳಿಕೆ ಬಗ್ಗೆ ನನಗೆ ಗೊತ್ತಿಲ್ಲ. ಸಿದ್ದರಾಮಯ್ಯ ಮತ್ತು ನನ್ನ ನಡುವೆ ಉತ್ತಮ ಬಾಂಧವ್ಯ ಇದೆ. ಅಧಿಕಾರ ಹಸ್ತಾಂತರ ಕುರಿತಂತೆ ಯಾವುದೇ ಗೊಂದಲ ಇಲ್ಲ. ಎಲ್ಲದರ ಬಗ್ಗೆಯೂ ವರಿಷ್ಠರೇ ತೀರ್ಮಾನ ಮಾಡುತ್ತಾರೆ. ವರಿಷ್ಠರಿಂದ ನನಗೇನೂ ಆಹ್ವಾನ ಬಂದಿಲ್ಲ. ಅವರು ಕರೆದಾಗ ಹೋಗುತ್ತೇನೆ ಎಂದರು.

ಯಾವುದೇ ಹೇಳಿಕೆ ನೀಡದಂತೆ ಯತೀಂದ್ರಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಾಕೀತು!

ಬೆಳಗಾವಿ, ಡಿ.9(ಕೆಎಂಶಿ)– ಅಧಿಕಾರ ಹಸ್ತಾಂತರ ಕುರಿತು ಸಾರ್ವಜನಿಕವಾಗಿ ಯಾವುದೇ ಹೇಳಿಕೆ ನೀಡದಂತೆ ಪುತ್ರ ಹಾಗೂ ವಿಧಾನ ಪರಿಷತ್ ಸದಸ್ಯ ಯತೀಂದ್ರ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಾಕೀತು ಮಾಡಿದ್ದಾರೆ.

ಸಿದ್ದರಾಮಯ್ಯ ಐದು ವರ್ಷ ಮುಖ್ಯಮಂತ್ರಿಯಾಗಿ ಅಧಿಕಾರದಲ್ಲಿ ಇರುತ್ತಾರೆ ಎಂದು ಯತೀಂದ್ರ ಸೋಮವಾರ ನೀಡಿದ ಹೇಳಿಕೆ ಭಾರೀ ವಿವಾದಕ್ಕೆ ಎಡೆ ಮಾಡಿತ್ತು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಬಲಿತ ಶಾಸಕರು ಜನವರಿ ಮಧ್ಯಭಾಗದಲ್ಲಿ ಅಧಿಕಾರ ಹಸ್ತಾಂತರ ಆಗಲಿದೆ ಎಂದು ಬಹಿರಂಗವಾಗೇ ಹೇಳಿಕೆ ನೀಡಿದ್ದರು.



ಯತೀಂದ್ರ ಹೇಳಿಕೆ ಭಾರೀ ಚರ್ಚೆಗೆ ಗ್ರಾಸವಾಗುತ್ತಿದ್ದಂತೆ ನಿನ್ನೆ ರಾತ್ರಿ ತಾವು ತಂಗಿದ್ದ ಬೆಳಗಾವಿಯ ಸರ್ಕೀಟ್ ಹೌಸ್‌ಗೆ ಕರೆಸಿಕೊಂಡು ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಪುತ್ರನ ಜೊತೆ ಸಮಾಲೋಚನೆ ನಡೆಸಿದ್ದಲ್ಲದೆ, ಇನ್ನು ಮುಂದೆ ಇಂತಹ ಯಾವುದೇ ಹೇಳಿಕೆ ನೀಡದಂತೆ ತಾಕೀತು ಮಾಡಿದ್ದಾರೆ.

ಅಧಿಕಾರ ಹಸ್ತಾಂತರ ಕುರಿತಂತೆ ವರಿಷ್ಠರು ತೀರ್ಮಾನ ತೆಗೆದುಕೊಳ್ಳುತ್ತಾರೆ. ನೀನು ಮಾತನಾಡುವುದು ಬೇಡ. ಈ ವಿಷಯದಲ್ಲಿ ಸಾರ್ವಜನಿಕವಾಗಿ ಹೇಳಿಕೆ ನೀಡಬಾರದೆಂದು ಎಐಸಿಸಿ ಸ್ಪಷ್ಟವಾಗಿ ತಿಳಿಸಿದೆ.

ವರಿಷ್ಠರ ಅಣತಿಯಂತೆ ಯಾವುದೇ ಶಾಸಕರು, ಸಚಿವರು ಹೇಳಿಕೆ ನೀಡುತ್ತಿಲ್ಲ. ನೀನೊಬ್ಬನೇ ಮಾತನಾಡಿದರೆ ಬೇರೆ ಸಂದೇಶ ಹೋಗುತ್ತದೆ. ವಿಧಾನಮಂಡಲದ ಅಧಿವೇಶನ ನಡೆಯುವ ಸಂದರ್ಭದಲ್ಲಿ ಇಂತಹ ವಿಷಯಗಳು ಅತಿರೇಕಕ್ಕೆ ಹೋಗಲಿದ್ದು ನೀನು ಸಾರ್ವಜನಿಕವಾಗಿ ಮಾತನಾಡುವಾಗ ಎಚ್ಚರಿಕೆಯಿಂದಿರು ಎಂದು ಕಿವಿಮಾತು ಹೇಳಿದ್ದಾರೆ.

ಬಿಜೆಪಿ ಸಭೆಗೆ ರಮೇಶ್ ಜಾರಕಿಹೊಳಿ ಗೈರು

ಬೆಳಗಾವಿ: ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಿತು. ಖಾಸಗಿ ಹೋಟೆಲ್‌ನಲ್ಲಿ



ನಡೆದ ಸಭೆಯಲ್ಲಿ ಬಿಜೆಪಿ ಶಾಸಕರು, ಪರಿಷತ್ ಸದಸ್ಯರು ಭಾಗಿಯಾಗಿದ್ದರು. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ನೇತೃತ್ವದಲ್ಲಿ ನಡೆದ ಸಭೆಗೆ ಬಿಜೆಪಿ ರೆಬೆಲ್ ಶಾಸಕ ರಮೇಶ್ ಜಾರಕಿಹೊಳಿ ಗೈರಾಗಿದ್ದರು. ಉಳಿದಂತೆ ರಮೇಶ್ ಜಾರಕಿಹೊಳಿ ಜೊತೆ ಗುರುತಿಸಿಕೊಂಡಿರುವ ಶಾಸಕ ಬಿಪಿ ಹರೀಶ್ ಸೇರಿ

■ 6ನೇ ಪುಟಕ್ಕೆ

ಗ್ಯಾರಂಟಿ ನಂಬಿಕೊಂಡು ನಾವು ಚುನಾವಣೆ ಎದುರಿಸಲು ಸಾಧ್ಯವಿಲ್ಲ

ಕಾಂಗ್ರೆಸ್ ಶಾಸಕರ ಬೇಸರ

ಬೆಳಗಾವಿ: ಗ್ಯಾರಂಟಿ ಯೋಜನೆ ಮಾತ್ರ ನಂಬಿಕೊಂಡು ಚುನಾವಣೆ ಎದುರಿಸಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್ ಶಾಸಕರು ಬೇಸರ ವ್ಯಕ್ತಪಡಿಸಿದ್ದಾರೆ.

ಖಾಸಗಿ ಹೋಟೆಲಿನಲ್ಲಿ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಬಗ್ಗೆ ಹಲವು ಶಾಸಕರು ಮಾತನಾಡಿರುವ ವಿಚಾರ ಮೂಲಗಳಿಂದ ತಿಳಿದು ಬಂದಿದೆ. ಗ್ಯಾರಂಟಿ ಬಿಟ್ಟು ನಮಗೆ ಅಭಿವೃದ್ಧಿ ಯೋಜನೆಗಳನ್ನು ಕೊಡಿ. ಜನರು ಗ್ಯಾರಂಟಿಗಳ ಬಗ್ಗೆ ಇತ್ತೀಚೆಗೆ ಮೆಚ್ಚುಗೆ ಮಾತಾಡುತ್ತಿಲ್ಲ. ಹಾಗಾಗಿ ಗ್ಯಾರಂಟಿಯೇ ನಮಗೆ ಚುನಾವಣೆಯಲ್ಲಿ ಕೆಲಸ ಮಾಡುತ್ತದೆ ಎಂದು ಹೇಳಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಜನರು ದೇವಸ್ಥಾನ, ಸಭಾ ಭವನ, ರಸ್ತೆ ಅಭಿವೃದ್ಧಿ ಸೇರಿ ಹಲವು ಕಾರ್ಯಕ್ರಮಗಳಿಗೆ ಅನುದಾನ ಕೇಳುತ್ತಿದ್ದಾರೆ. ಮುಖ್ಯವಾಗಿ ರಸ್ತೆಗೆ ಹೆಚ್ಚಿನ ಬೇಡಿಕೆ ವ್ಯಕ್ತವಾಗುತ್ತಿದೆ. ಹೀಗಾಗಿ ಸರ್ಕಾರ ನಮ್ಮ ನೆರವಿಗೆ ಬರಬೇಕು, ಅನುದಾನ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ಶಾಸಕರಿಗೆ ಕಿವಿಮಾತು: ಸುವರ್ಣಸೌಧದ ಚಳಿಗಾಲದ ವಿಧಾನಮಂಡಲ ಅಧಿವೇಶನದಲ್ಲಿ ಸರ್ಕಾರದ ವಿರುದ್ಧ ಮುಗಿಬಿದ್ದಿರುವ ಪ್ರತಿಪಕ್ಷ ಬಿಜೆಪಿ, ಅವಿಶ್ವಾಸ ನಿರ್ಣಯ ಮಂಡಿಸುವ ಬಗ್ಗೆ ಚರ್ಚೆ ನಡೆಸಿದೆ. ಇತ್ತ ವಿಪಕ್ಷಗಳನ್ನು ಎದುರಿಸಲು ಹೇಗೆ ಸಜ್ಜಾಗಬೇಕು

■ 6ನೇ ಪುಟಕ್ಕೆ

ಹಾಸನದಲ್ಲಿ ಮೆಕ್ಯಾನಿಕ್ ಹತ್ಯೆ ಮಾಡಿ ಶವದೊಂದಿಗೆ ಸೆಲ್ಫೀ ವೀಡಿಯೊ ಮಾಡಿ ವಿಕೃತಿ ಮೆರೆದ ಹಂತಕರು!

ಹಾಸನ, ಡಿ.9– ಹಾಸನ ಹೊರವಲಯದ ಬಿಟ್ಟಗೌಡನಹಳ್ಳಿ ಬಳಿ ಯುವಕನೋರ್ವನನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಹಾಸನ ತಾಲೂಕಿನ ಹೂವಿನಹಳ್ಳಿ ಕಾವಲು ಗ್ರಾಮದ ನಿವಾಸಿ ಮೆಕ್ಯಾನಿಕ್ ಕೀರ್ತಿ (22) ತಲೆ ಮೇಲೆ ಕಲ್ಲು ಎತ್ತಿಹಾಕಿ ಕೊಲೆ ಮಾಡಲಾಗಿದ್ದು, ಬಳಿಕ ಹಂತಕರು ಶವದ ಮುಂದೆ ಸೆಲ್ಫಿ ವೀಡಿಯೊ ಮಾಡಿ ವಿಕೃತಿ ಮೆರೆದಿದ್ದಾರೆ.



ಮೆಕ್ಯಾನಿಕ್ ಕೀರ್ತಿ

ನಾವೇ ಇವನನ್ನು ಹೊಡೆದು ಕೊಂದಿದ್ದೇವೆಂದು ಶವದೊಂದಿಗೆ ಸೆಲ್ಫಿ ವೀಡಿಯೊ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾರೆ. ಸದ್ಯ ಇದೇ ವೀಡಿಯೊವನ್ನು ಆಧರಿಸಿ ಸ್ಥಳಕ್ಕೆ ಶ್ವಾನದಳ, ಎಎಸ್‌ಪಿ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ಹಂತಕರ ಬಂಧನಕ್ಕೆ ಬಲೆ ಬೀಸಿದ್ದಾರೆ. ಕೀರ್ತಿ ವೃತ್ತಿಯಲ್ಲಿ ಮೆಕ್ಯಾನಿಕ್ ಆಗಿದ್ದು, ರೀಲ್ಸ್ ಮಾಡುತ್ತಾ ಸ್ನೇಹಿತರ ಜೊತೆ ಸುತ್ತಾಡುತ್ತಾ ಇದ್ದವನು ಸೋಮವಾರ ಮನೆಗೆ ಬಂದಿಲ್ಲ. ಮನೆಯವರು ಆತಂಕದಲ್ಲಿರುವಾಗ ಬೆಳಿಗ್ಗೆ ವೀಡಿಯೊವೊಂದು ವೈರಲ್ ಆಗಿದೆ. ಕ್ರೂರಿಯೊಬ್ಬ ಶವದ ಮುಂದೆ ಸೆಲ್ಫೀ ವೀಡಿಯೊ ಮಾಡಿ 'ನಾವು ಕೊಲೆ ಮಾಡಿದ್ದೀವಿ, ಸಾಯಿಸಿದ್ದೇವೆ' ಎಂದು ಹೇಳುತ್ತ ಕ್ರೌರ್ಯ ಮೆರೆದಿದ್ದಾನೆ. ಈ ವೀಡಿಯೋ ಜಾಡು ಹಿಡಿದು ತನಿಖೆಗಿಳಿದ ಪೊಲೀಸರಿಗೆ ಕೊಲೆಯಾಗಿದ್ದು ಓರ್ವ ಮೆಕ್ಯಾನಿಕ್, ಕೊಲೆ ಮಾಡಿದ್ದು

■ 6ನೇ ಪುಟಕ್ಕೆ

ನಾಗರಿಕರಿಗೆ ನಿವೇಶನ ಕಲ್ಪಿಸಲು ಮೈಸೂರಲ್ಲಿ 300 ಎಕರೆ ಭೂಮಿ ಖರೀದಿ

ಮೈಸೂರು, ಡಿ.9(ಪಿಎಂ)– ಮೈಸೂರು ನಗರವನ್ನು ಮತ್ತಷ್ಟು ಅಭಿವೃದ್ಧಿಪಡಿಸುವ ದೃಷ್ಟಿಯಿಂದ ಮುಖ್ಯಮಂತ್ರಿಗಳ ಸಲಹೆ ಪಡೆದು ಗ್ರೇಟರ್ ಮೈಸೂರು ಮಹಾನಗರ ಪಾಲಿಕೆ ರಚಿಸಲು ನಿರ್ಧರಿಸಲಾಗಿದೆ. ಅಲ್ಲಿನ ನಾಗರಿಕರಿಗೆ ನಿವೇಶನ ನೀಡುವ ಸಲುವಾಗಿ 300 ಎಕರೆ ಭೂಮಿ ಖರೀದಿಸಲು ಅಧಿಕಾರಿಗಳಿಗೆ ಈಗಾಗಲೇ ಸೂಚಿಸಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ತಿಳಿಸಿದರು.



ಭೈರತಿ ಸುರೇಶ್

ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನ ಎರಡನೇ ದಿನದ ವಿಧಾನ ಮಂಡಲ ಕಲಾಪದ ಪ್ರಶ್ನೋತ್ತರ ಅವಧಿಯಲ್ಲಿ ವಿಧಾನಪರಿಷತ್ ಸದಸ್ಯ ಕೆ.ಶಿವಕುಮಾರ್ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು. ರಾಜ್ಯದಲ್ಲಿ ಲಕ್ಷಾಂತರ ಜನರು ನಿವೇಶನಕ್ಕಾಗಿ ಬೇಡಿಕೆ ಇಟ್ಟಿದ್ದಾರೆ. ಮೈಸೂರಿನ ಎಂಡಿಎ ವ್ಯಾಪ್ತಿಯಲ್ಲಿ 63 ಸಾವಿರ ಜನರು ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ನಿವೇಶನ ರಹಿತರನ್ನು ಗುರುತಿಸಿ ಅವರಿಗೆ ನಿಯಮಾನುಸಾರ ನಿವೇಶನ ವಿತರಿಸಬೇಕು.

ಶೇ.50ರ ಅನುಪಾತದಲ್ಲಿ ರೈತರಿಂದ ಭೂಮಿ ಪಡೆದ ಮೇಲೆ ನಿಗದಿತ ಅವಧಿಯಲ್ಲಿ ಯೋಜನೆ ಪೂರ್ಣಗೊಳಿಸಿ ರೈತರಿಗೆ ಸೇರಿದ ನಿವೇಶನ ಅವರ ಕೈ ಸೇರಬೇಕು. ಗೃಹ ನಿರ್ಮಾಣ ಸಂಘಗಳು ಇಂದು

■ 6ನೇ ಪುಟಕ್ಕೆ

ಋತುಚಕ್ರದ ರಜೆ: ಗಂಟೆಗಳ ಅಂತರದಲ್ಲೇ ತಮ್ಮದೇ ತಡೆಯಾಜ್ಞೆ ಹಿಂಪಡೆದ ನ್ಯಾಯಮೂರ್ತಿ..!

ಬೆಂಗಳೂರು, ಡಿ.9– ಮಹಿಳಾ ನೌಕರರಿಗೆ ಅವರ ಋತುಚಕ್ರದ ಸಮಯದಲ್ಲಿ ತಿಂಗಳಲ್ಲಿ ಒಂದು ದಿನದ ವೇತನ ಸಹಿತ ರಜೆ ಸೌಲಭ್ಯ ಒದಗಿಸುವಂತೆ ರಾಜ್ಯ ಸರ್ಕಾರ ಹೊರಡಿಸಿರುವ ಅಧಿಸೂಚನೆಗೆ ನೀಡಿದ್ದ ತನ್ನದೇ ತಡೆಯಾಜ್ಞೆಯನ್ನು ಏಕಸದಸ್ಯ ನ್ಯಾಯಪೀಠ, ಕೆಲವೇ ಗಂಟೆಗಳ ಅಂತರದಲ್ಲಿ ತೆರವುಗೊಳಿಸಿದ ಅಪರೂಪದ ಘಟನೆಗೆ ಕರ್ನಾಟಕ ಹೈಕೋರ್ಟ್ ಸಾಕ್ಷಿಯಾಯಿತು.



ಸರ್ಕಾರದ ಅಧಿಸೂಚನೆ ಪ್ರಶ್ನಿಸಿ, 'ಬೆಂಗಳೂರು ಹೋಟೆಲುಗಳ ಸಂಘ'ದ ಅಧ್ಯಕ್ಷ ಎಚ್.ಎಸ್. ಸುಬ್ರಹ್ಮಣ್ಯ ಸಲ್ಲಿಸಿರುವ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಜ್ಯೋತಿ ಮೂಲಿಮನಿ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ಬೆಳಗಿನ ಕಲಾಪದಲ್ಲಿ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಅರ್ಜಿದಾರರ ಪರ ಹೈಕೋರ್ಟ್ ವಕೀಲ ಬಿ.ಕೆ.ಪ್ರಶಾಂತ್ ಕುಮಾರ್ ಅವರ ವಾದ ಆಲಿಸಿದ ನ್ಯಾಯಪೀಠ, ಅಧಿಸೂಚನೆಗೆ ಮಧ್ಯಂತರ ತಡೆ ನೀಡಿತು. 'ರಾಜ್ಯ ಸರ್ಕಾರ ತಡೆಯಾಜ್ಞೆ ತೆರವಿಗೆ ಅರ್ಜಿ ಸಲ್ಲಿಸುವ ಸ್ವಾತಂತ್ರ್ಯ ಹೊಂದಿದೆ' ಎಂದು ಆದೇಶಿಸಿ ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಿತ್ತು. ಈ ತಡೆ ಆದೇಶ ಹೊರಬೀಳುತ್ತಿದ್ದಂತೆಯೇ, ಕಲಾಪ ಕೊನೆಗೊಳ್ಳುವ ಸಮಯದಲ್ಲಿ ಅಡ್ವೊಕೇಟ್ ಜನರಲ್ ಶಶಿಕಿರಣ ಶೆಟ್ಟಿ,

■ 6ನೇ ಪುಟಕ್ಕೆ

ಕರ್ನಾಟಕದ ಕಾಫಿ ಎಸ್ಟೇಟ್‌ಗಳ ಹರಾಜು ಪ್ರಕ್ರಿಯೆಯಲ್ಲಿ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ

ಬ್ಯಾಂಕ್‌ಗಳು, ಇನ್ನಿತರೆ ಹಣಕಾಸು ಸಂಸ್ಥೆಗಳ ವಾಣಿಜ್ಯಕ ನಿರ್ಧಾರಗಳು, ವಸೂಲಾತಿ ಪ್ರಕ್ರಿಯೆಗಳಲ್ಲಿ ಭಾಗಿಯಾಗಲ್ಲ: ಕೇಂದ್ರ ಸರ್ಕಾರ ಸ್ಪಷ್ಟನೆ

ಶಿವಮೊಗ್ಗ, ಡಿ.9– ಸರ್ಫೇಸಿ ಕಾಯ್ದೆಯಡಿಯಲ್ಲಿ ಸುಸ್ತಿದಾರ ಕಾಫಿ ಬೆಳೆಗಾರರ ವಿರುದ್ಧ ಬ್ಯಾಂಕುಗಳು ನಡೆಸುವ ವಸೂಲಾತಿ ಕ್ರಮಗಳಲ್ಲಿ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದ್ದು, ಇದನ್ನು ವಾಣಿಜ್ಯಿಕ ನಿರ್ಧಾರ ಎಂದು ಕರೆದಿದೆ. ಸರ್ಫೇಸಿ ಅಡಿಯಲ್ಲಿ ವಿನಾಯಿತಿಗಾಗಿ ಕಾಫಿ ತೋಟಗಳನ್ನು ಕೃಷಿ ಭೂಮಿಯಾಗಿ ಪರಿಗಣಿಸಲು ಆಗುವುದಿಲ್ಲ ಮತ್ತು ಬಾಧಿತ ಸಾಲಗಾರರು ಸಾಲ ವಸೂಲಾತಿ ನ್ಯಾಯಮಂಡಳಿಗಳ ಮೂಲಕ ಮಾತ್ರ ಪರಿಹಾರ ಪಡೆಯಬಹುದು ಎಂದು ಅದು ಪುನರುಚ್ಚರಿಸಿದೆ.

ಕರ್ನಾಟಕದ ಸಾವಿರಾರು ಕಾಫಿ ಬೆಳೆಗಾರರು ತಮ್ಮ ತೋಟಗಳ ಸನ್ನಿಹಿತ ಹರಾಜಿನಿಂದಾಗಿ ಆತಂಕಕ್ಕೀಡಾಗಿರುವ ಸಮಯದಲ್ಲಿ ಕೇಂದ್ರ ಸರ್ಕಾರ ಈ ಸ್ಪಷ್ಟೀಕರಣ ನೀಡಿದೆ.



ಲೋಕಸಭೆಯಲ್ಲಿ ಔಪಚಾರಿಕ ಪ್ರಶ್ನೆಗೆ ಉತ್ತರಿಸಿದ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಆರ್ಥಿಕ ಸ್ವತ್ತುಗಳ ಭದ್ರತೆ ಮತ್ತು ಪುನರ್‌ರಚನೆ ಹಾಗೂ ಭದ್ರತಾ ಕ್ರಮದ ಜಾರಿ ಕಾಯ್ದೆಯಡಿ ವಸೂಲಾತಿ ಕ್ರಮವು ಬ್ಯಾಂಕುಗಳು ಮತ್ತು ಹಣಕಾಸು ಸಂಸ್ಥೆಗಳ ವಾಣಿಜ್ಯಿಕ ನಿರ್ಧಾರವಾಗಿದ್ದು, ಕೇಂದ್ರವು ಅಂತಹ ವಿಚಾರಗಳಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಹೇಳಿದರು.

ಸಾರ್ವಜನಿಕ ವಲಯದ ಬ್ಯಾಂಕುಗಳು ಬಾಕಿ ಉಳಿದಿರುವ ಸಾಲಗಾರರ ಕಾಫಿ ತೋಟಗಳನ್ನು ಹರಾಜು ಮಾಡುತ್ತಿವೆಯೇ ಮತ್ತು ಬೆಳೆಗಾರರು ಎದುರಿಸುತ್ತಿರುವ ಸಂಕಷ್ಟವನ್ನು ಪರಿಗಣಿಸಿ ಸರ್ಕಾರ ಆನ್‌ಲೈನ್ ಹರಾಜನ್ನು ನಿಲ್ಲಿಸಲು ಯೋಜಿಸಿದೆಯೇ ಎಂಬ ಬಗ್ಗೆ ವಿವರ ಕೇಳಿದ ಉಡುಪಿ–ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರ ಪ್ರಶ್ನೆಗೆ ಉತ್ತರಿಸಿದರು.

ಕರ್ನಾಟಕ ಹೈಕೋರ್ಟ್ ತೀರ್ಪಿನ ಆಧಾರದ ಮೇಲೆ, ಸರ್ಫೇಸಿ ಕಾಯ್ದೆಯ ಸೆಕ್ಷನ್ 31(i) ಅಡಿಯಲ್ಲಿ ವಿನಾಯಿತಿ ನೀಡುವ ಉದ್ದೇಶಕ್ಕಾಗಿ ಕಾಫಿ ತೋಟಗಳನ್ನು 'ಕೃಷಿ ಭೂಮಿ' ಎಂದು ಪರಿಗಣಿಸಲು ಆಗುವುದಿಲ್ಲ ಎಂದು ಹಣಕಾಸು ಸಚಿವಾಲಯ ಸ್ಪಷ್ಟಪಡಿಸಿದೆ. ಕಾಫಿ, ಚಹಾ, ರಬ್ಬರ್, ಮೆಣಸು ಮತ್ತು ಏಲಕ್ಕಿಯಂತಹ ತೋಟಗಾರಿಕಾ ಬೆಳೆಗಳು ಸರ್ಫೇಸಿಯಿಂದ ರಕ್ಷಣೆ ಪಡೆಯಲು ಕೃಷಿ ಭೂಮಿಯ ವ್ಯಾಖ್ಯಾನದ ಅಡಿಯಲ್ಲಿ ಬರುವುದಿಲ್ಲ ಎಂದು ನ್ಯಾಯಾಲಯ ತೀರ್ಪು ನೀಡಿತ್ತು. ಇದರಿಂದಾಗಿ ಬ್ಯಾಂಕುಗಳು ಜಾರಿ ಕ್ರಮವನ್ನು ಮುಂದುವರಿಸಲು ಅವಕಾಶ ನೀಡಲಾಗಿತ್ತು.

ಕಾಫಿ ಎಸ್ಟೇಟ್ ಮಾಲೀಕರ ವಿರುದ್ಧ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಮತ್ತು ಇಂಡಿಯನ್ ಬ್ಯಾಂಕ್ ಈ ಹಿಂದೆ ಆರಂಭಿಸಿದ್ದ ವಸೂಲಾತಿ ಕ್ರಮಗಳನ್ನು ಕರ್ನಾಟಕ

■ 6ನೇ ಪುಟಕ್ಕೆ

ತೊಗರಿ ಬೇಳೆಗೆ ಕನಿಷ್ಠ ಬೆಂಬಲ ಬೆಲೆಗೆ ಒತ್ತಾಯಿಸಿ ಪ್ರಧಾನಿ ನರೇಂದ್ರ ಮೋದಿಗೆ ಸಿಎಂ ಸಿದ್ದರಾಮಯ್ಯ ಪತ್ರ

ಬೆಂಗಳೂರು, ಡಿ.9– ರಾಜ್ಯದಲ್ಲಿ ತೊಗರಿ ಕಟಾವಿಗೆ ಬಂದಿದ್ದು, ಬೆಲೆ ಕುಸಿತದಿಂದ ಕಂಗಾಲಾಗಿರುವ ರೈತರ



ನೆರವಿಗೆ ತಕ್ಷಣವೇ ಧಾವಿಸುವಂತೆ ಒತ್ತಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ.

ಕನಿಷ್ಠ ಬೆಂಬಲ ಬೆಲೆ (MSP) ಯೋಜನೆಯಡಿ ಕೇಂದ್ರದ ಸಂಸ್ಥೆಗಳ ಮೂಲಕ ತೊಗರಿ ಖರೀದಿಗೆ ತಕ್ಷಣವೇ ಅನುಮೋದನೆ ನೀಡಬೇಕು ಮತ್ತು ಈ ಬಾರಿಯ ಬೆಳೆ ಆಗಮನಕ್ಕೂ ಮುನ್ನವೇ ರಾಜ್ಯದ ಪ್ರಮುಖ ಖರೀದಿ ಕೇಂದ್ರಗಳಲ್ಲಿ ತಕ್ಷಣದ ಕಾರ್ಯಾಚರಣೆ ಪ್ರಾರಂಭಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸಿದ್ದಾರೆ.

ಈ ನಿರ್ಣಾಯಕ ಹಂತದಲ್ಲಿ ತೊಗರಿ ಖರೀದಿಯನ್ನು ಮುಂದೂಡಿದರೆ, ಅದು ರೈತರ ಪ್ರತಿಭಟನೆ, ಬೆಲೆಗಳಲ್ಲಿ ಕುಸಿತ ಮತ್ತು ರೈತರಿಗೆ ನ್ಯಾಯಯುತ ಬೆಲೆಗಳನ್ನು ಖಚಿತಪಡಿಸಿಕೊಳ್ಳಲು ಉದ್ದೇಶಿಸಲಾದ ಕನಿಷ್ಠ ಬೆಂಬಲ ಬೆಲೆ (MSP) ವ್ಯವಸ್ಥೆ ಮೇಲಿನ ವಿಶ್ವಾಸ ಗಮನಾರ್ಹವಾಗಿ ಕುಂದಲು ಕಾರಣವಾಗಬಹುದು ಎಂದು ಅವರು ಎಚ್ಚರಿಸಿದ್ದಾರೆ.



ಡಿಸೆಂಬರ್ 8ರಂದು ಪ್ರಧಾನಿ ಮೋದಿ ಅವರಿಗೆ ಬರೆದ ಪತ್ರವನ್ನು ಮಂಗಳವಾರ ಮಾಧ್ಯಮಗಳೊಂದಿಗೆ ಹಂಚಿಕೊಂಡ ಸಿದ್ದರಾಮಯ್ಯ, 'ಕರ್ನಾಟಕ ಸರ್ಕಾರವು ರಾಷ್ಟ್ರೀಯ ಕೃಷಿ ಸಹಕಾರಿ ಮಾರುಕಟ್ಟೆ ಒಕ್ಕೂಟ ಮತ್ತು ರಾಷ್ಟ್ರೀಯ ಸಹಕಾರಿ ಗ್ರಾಹಕರ ಒಕ್ಕೂಟ ಲಿಮಿಟೆಡ್ ಮೂಲಕ ಕನಿಷ್ಠ ಬೆಂಬಲ ಬೆಲೆ (MSP) ಅಡಿಯಲ್ಲಿ ತೊಗರಿ ಬೇಳೆ ಖರೀದಿಗೆ ತಕ್ಷಣದ ಅನುಮೋದನೆ ಕೋರಿ ಔಪಚಾರಿಕ ಪ್ರಸ್ತಾವನೆಯನ್ನು ಈಗಾಗಲೇ ಸಲ್ಲಿಸಿದೆ. ಆದಾಗ್ಯೂ, ಮಾರುಕಟ್ಟೆಗೆ ಹೊಸ ಇಳುವರಿ ಆಗಮನವಾಗುವ ದಿನ ಸಮೀಪಿಸುತ್ತಿದ್ದರೂ ಸಹ, ನಾವು ಇನ್ನೂ ಕೇಂದ್ರ ಸರ್ಕಾರದ ಪ್ರತಿಕ್ರಿಯೆಗಾಗಿ ಎದುರು ನೋಡುತ್ತಿದ್ದೇವೆ' ಎಂದಿದ್ದಾರೆ.

ಮಾದಕ ವ್ಯಸನದಿಂದ ಮಕ್ಕಳ ದೂರವಿರಿಸಿ

ಮೈಸೂರಲ್ಲಿ ಆರಂಭವಾಗಿದೆ ಜನಜಾಗೃತಿ ಅಭಿಯಾನ ರಥಯಾತ್ರೆ

ಮೈಸೂರು,ಡಿ.9(ಎಂಟಿವೈ)– ಸಂಪ್ರದಾಯಸ್ಥ ಕುಟುಂಬದ ಮಕ್ಕಳೇ ಮಾದಕ ವ್ಯಸನಿಗಳಾಗಿ ದೇಶಕ್ಕೆ ಮಾರಕವಾಗುತ್ತಿದ್ದಾರೆ. ಮಕ್ಕಳು ಸಜ್ಜನರ ಸಹವಾಸ ಮಾಡಿ ಸದ್ಗ್ರಂಥ ಓದುವಂತೆ ಪೋಷಕರು ಪ್ರೇರೇಪಿಸಬೇಕು ಎಂದು ಸಾಮಾಜಿಕ ಕಾರ್ಯಕರ್ತ ನಿತ್ಯಾನಂದ ವಿವೇಕವಂಶಿ ಸಲಹೆ ನೀಡಿದ್ದಾರೆ.

ಮೈಸೂರಿನ ಜೆ.ಕೆ.ಮೈದಾನದ ಅಮೃತ ಮಹೋತ್ಸವ ಭವನದಲ್ಲಿ ಮಂಗಳವಾರ ಡ್ರಗ್ಸ್ ಮುಕ್ತ ಕರ್ನಾಟಕ ಅಭಿಯಾನ ಪ್ರಾಂತ ಸಮಿತಿ, ಪರಿವರ್ತನಾ ಟ್ರಸ್ಟ್ ವತಿಯಿಂದ 'ಮಾದಕ ವಸ್ತುಗಳ ವ್ಯಸನದಿಂದ ಯುವ ಸಮುದಾಯವನ್ನು ದೂರವಿರಿಸಿ' ಜನಜಾಗೃತಿ ಅಭಿಯಾನ ರಥಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ಶರೀರ, ಮನಸ್ಸು, ಬುದ್ಧಿ ಮತ್ತು ಆತ್ಮಕ್ಕೆ ಭಾರತದ ಆಧ್ಯಾತ್ಮಿಕತೆ ಯಾವುದೇ ರೀತಿಯ ಹಾನಿಯುಂಟು ಮಾಡುವುದಿಲ್ಲ. ಆದರೆ, ಡ್ರಗ್ಸ್ ಎಂಬ ಸುಳಿಗೆ ಯುವಜನ ದಾಸರಾಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಅದರಲ್ಲೂ ಸಂಪ್ರದಾಯಸ್ಥ ಕುಟುಂಬದ ಮಕ್ಕಳು ಮಾದಕ ವಸ್ತುಗಳ ವ್ಯಸನಕ್ಕೆ ಬಲಿಯಾಗಿ ದೇಶವನ್ನು ಹಾಳು ಮಾಡುತ್ತಿದ್ದಾರೆ ಎಂದು ವಿಷಾದಿಸಿದರು.

ಸಮಾಜದಲ್ಲಿ ವಿದ್ಯಾರ್ಥಿಗಳ ಮನಸ್ಸು, ಇಚ್ಛಾಸಕ್ತಿ ಹಾಳು ಮಾಡುವ ದುಷ್ಟ ಶಕ್ತಿಗಳಿವೆ. ಈ ಶಕ್ತಿಗಳಿಂದ ಯುವ ಜನತೆ ದೂರ ಇರಬೇಕು. ದುಶ್ಚಟ, ಮಾದಕ ವಸ್ತುಗಳಿಂದ ದೂರ ಇರಬೇಕಾದರೆ ಯೋಗ, ಪ್ರಾಣಾಯಾಮ, ಶಿಸ್ತುಬದ್ಧ ಜೀವನ, ಧ್ಯಾನ, ಸತ್ಕರ್ಮ, ಸಜ್ಜನರ ಸಹವಾಸ ಮತ್ತು ಸದ್ಗ್ರಂಥಗಳನ್ನು ಓದುವ ಮೂಲಕ ಉತ್ತಮ ಜೀವನ ಸಾಗಿಸಲು ಮುಂದಾಗಬೇಕು ಎಂದು ಅಭಿಪ್ರಾಯಪಟ್ಟರು.

ವಿದ್ಯಾರ್ಥಿಗಳು ಅಂಕ ಗಳಿಕೆ ಅಥವಾ ಉದ್ಯೋಗ ಆಧಾರಿತ ಶಿಕ್ಷಣ ಪಡೆಯುತ್ತಿದ್ದಾರೆ. ಮೌಲ್ಯಯುತ ಶಿಕ್ಷಣ ಪಡೆಯಬೇಕು. ಸಮಾಜದಲ್ಲಿ ಒಬ್ಬನೂ ಡ್ರಗ್ಸ್ ತೆಗೆದುಕೊಳ್ಳದಂತೆ ನೋಡಿಕೊಳ್ಳಬೇಕಾದ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು. ಬೆಂಗಳೂರಿನ ಆದಿಚುಂಚನಗಿರಿ ಮಠದ ಕಾರ್ಯದರ್ಶಿ ಶ್ರೀ ಅನ್ನದಾನೇಶ್ವರನಾಥ ಸ್ವಾಮೀಜಿ ಮಾತನಾಡಿ, ದೇಶವನ್ನು ನಿಷ್ಕ್ರಿಯಗೊಳಿಸಲು ಶತ್ರು ರಾಷ್ಟ್ರಗಳು ನಡೆಸುತ್ತಲೇ ಇವೆ. ಡ್ರಗ್ಸ್ ಮೂಲಕ ಯುವಕರನ್ನು ಹಾಳು ಮಾಡುವುದು ಹೇಡಿಗಳು ಮಾಡುವ ಕೆಲಸವಾಗಿದೆ. ಯುವಕರು ಯಾರು ಏನೇ ಕೊಟ್ಟರು ತಿನ್ನಬಾರದು. ಭವ್ಯ ಭಾರತ ಕಟ್ಟಲು ಶಪಥ ಮಾಡಬೇಕು ಎಂದು ತಿಳಿಸಿದರು.

ಜಾಗೃತಿ ರಥಕ್ಕೆ ಹಸಿರು ನಿಶಾನೆ: ಮಾದಕ ವಸ್ತುಗಳಿಂದ ಯುವಜನರನ್ನು ರಕ್ಷಿಸುವ ನಿಟ್ಟಿನಲ್ಲಿ ಡ್ರಗ್ಸ್ ಮುಕ್ತ ಕರ್ನಾಟಕ ಅಭಿಯಾನ ಜಾಗೃತಿ ರಥಯಾತ್ರೆಗೆ ಚಾಲನೆ ನೀಡಲಾಯಿತು. 'ನಶೆಗೆ ಬಳಸಿದ ಹಣ ಭಯೋತ್ಪಾದಕರ ಕೈ ಸೇರುತ್ತಿದೆ' ಎಂಬ ಅರಿವು ಮೂಡಿಸುವ ರಥಯಾತ್ರೆಯೂ ಜೆ.ಕೆ.ಮೈದಾನದಿಂದ ಆರಂಭವಾಗಿ ಬಿಎನ್ಎಸ್ ಶಾಲೆ, ಎನ್ಐ ಮೈದಾನದಲ್ಲಿ ಸಾಗಿತು. ಬುಧವಾರ ಜೆ.ಸಿ. ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯದ ಆವರಣ, ಮಹಾಜನ ಕಾಲೇಜಿಗೆ ತೆರಳಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಿದೆ. ನಂತರ ವಿವಿಧ ಜಿಲ್ಲೆಗಳತ್ತ ಪ್ರಯಾಣ ಬೆಳೆಸಲಿದೆ.

ಕಾರ್ಯಕ್ರಮದಲ್ಲಿ ಲೆಫ್ಟಿನೆಂಟ್ ಕರ್ನಲ್ ವೈ.ಕೆ. ಸಂಜೀವ್, ಬೆಂಗಳೂರಿನ ಆದಿಚುಂಚನಗಿರಿ ಮಠದ ಕಾರ್ಯದರ್ಶಿ ಶ್ರೀ ಅನ್ನದಾನೇಶ್ವರನಾಥ ಸ್ವಾಮೀಜಿ, ಕನ್ನಿಕಾಪರಮೇಶ್ವರಿ ದೇವಾಲಯದ ಕಾರ್ಯದರ್ಶಿಯೂ ಆದ ಉದ್ಯಮಿ ಎಸ್.ಕೆ.ದಿನೇಶ್ ಉಪಸ್ಥಿತರಿದ್ದರು.



ಮೈಸೂರಿನ ಜೆ.ಕೆ.ಮೈದಾನದ ಅಮೃತ ಮಹೋತ್ಸವ ಭವನದಲ್ಲಿ ಮಂಗಳವಾರ ಡ್ರಗ್ಸ್ ಮುಕ್ತ ಕರ್ನಾಟಕ ಅಭಿಯಾನ ಪ್ರಾಂತ ಸಮಿತಿಯು ಮಾದಕ ವಸ್ತುಗಳ ಸೇವನೆಯಿಂದ ಯುವಜನರನ್ನು ರಕ್ಷಿಸಲು ಆಯೋಜಿಸಿದ್ದ ಜಾಗೃತಿ ಅಭಿಯಾನಕ್ಕೆ ಬೆಂಗಳೂರಿನ ಆದಿಚುಂಚನಗಿರಿ ಮಠದ ಕಾರ್ಯದರ್ಶಿ ಶ್ರೀ ಅನ್ನದಾನೇಶ್ವರನಾಥ ಸ್ವಾಮೀಜಿ ಚಾಲನೆ ನೀಡಿದರು.

ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಪಾದಯಾತ್ರೆ ಹಮ್ಮಿಕೊಂಡವರ ವಿರುದ್ಧ ಕ್ರಿಮಿನಲ್ ಪ್ರಕರಣ

ಸಾಮಾಜಿಕ ನ್ಯಾಯಕ್ಕಾಗಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿ ಹೋರಾಟ ಸಮಿತಿ ಆಕ್ರೋಶ: ಪ್ರಕರಣ ವಾಪಸ್‌ಗೆ ಆಗ್ರಹ

ಮೈಸೂರು, ಡಿ.9(ಜಿಎ)–ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಸಾಮಾಜಿಕ ನ್ಯಾಯಕ್ಕಾಗಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿ ಹೋರಾಟ ಸಮಿತಿ ಡಿ.6 ರಂದು ಸಿಎಂ ಸ್ವಗ್ರಾಮ ಸಿದ್ದರಾಮನ ಹುಂಡಿಯಿಂದ ಪಾದಯಾತ್ರೆ ಆರಂಭಿಸುತ್ತಿದ್ದ ವೇಳೆ ಪೊಲೀಸರು ವಶಕ್ಕೆ ಪಡೆದು ಸುಳ್ಳು ಕ್ರಿಮಿನಲ್ ಕೇಸ್ ದಾಖಲಿಸಿದ್ದಾರೆ ಎಂದು ಸಮಿತಿಯ ಪದಾಧಿಕಾರಿ ಎಸ್. ಮಾರೆಪ್ಪ ಕಿಡಿಕಾರಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮನಹುಂಡಿ ಗ್ರಾಮದಿಂದ ಡಾ.ಬಿ.ಆರ್.ಅಂಬೇಡ್ಕರ್ ಮಹಾ ಪರಿನಿಬ್ಬಾಣ ಆಚರಣೆ ಹಾಗೂ ಒಳ ಮೀಸಲಾತಿಗಾಗಿ ಮೈಸೂರಿಗೆ ಪಾದಯಾತ್ರೆ ಅಂದು ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿತ್ತು. ಆದರೆ ಈ ವೇಳೆ ವಿನಾಕಾರಣ 144 ಪ್ರತಿಬಂಧಕಾಜ್ಞೆ ಘೋಷಿಸಿ ತಮ್ಮನ್ನು ವಶಕ್ಕೆ ಪಡೆದು ಕ್ರಿಮಿನಲ್ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಹೀಗಾಗಿ ಈ ಪ್ರಕರಣಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಒಳ ಮೀಸಲಾತಿ ಜಾರಿಗೊಳಿಸಬೇಕು. ಅರೆಕಾಲಿಕ, ಹಂಗಾಮಿ ಉದ್ಯೋಗ ನೇಮಕಾತಿಗಳು ಸೇರಿದಂತೆ ಹೊರಗುತ್ತಿಗೆ ಕಾಮಗಾರಿಗಳಲ್ಲೂ ಮತ್ತು ಎಲ್ಲೆಲ್ಲಿ ಮೀಸಲಾತಿ ಇದೆಯೋ ಅಲ್ಲೆಲ್ಲ ಒಳ ಮೀಸಲಾತಿ ಜಾರಿಗೊಳಿಸಬೇಕೆಂದು ಆಗ್ರಹಿಸಿದರು.

ಡಿ.11ರಂದು ಮಧ್ಯಾಹ್ನ 12ಗಂಟೆಗೆ ನಗರದ ಪುರಭವನ ಆವರಣದಲ್ಲಿ ಪೂರ್ಣ ಪ್ರಮಾಣದ ಒಳ ಮೀಸಲಾತಿ ಜಾರಿಗೊಳಿಸಿ, ಇಲ್ಲವೇ ಕುರ್ಚಿ ಬಿಡಿ ಘೋಷಣೆಯೊಡನೆ ಬೃಹತ್ ಪ್ರತಿಭಟನಾ ಸಮಾವೇಶ ಸಮಿತಿ ಹಮ್ಮಿಕೊಂಡಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಶಿವರಾಮು ಅಕ್ಕರಕಿ, ಸಂತೋಷ್, ರಾಜಣ್ಣ ಇದ್ದರು.

ಭತ್ತ ಖರೀದಿ ಕೇಂದ್ರ ಆರಂಭ; ಕಬ್ಬಿನ ಬಾಕಿ ಪಾವತಿಗೆ ಆಗ್ರಹಿಸಿ ಮೈಸೂರಲ್ಲಿ ಕಬ್ಬು ಬೆಳೆಗಾರರ ಪ್ರತಿಭಟನೆ



ಮೈಸೂರು ಜಿಲ್ಲಾಧಿಕಾರಿ ಕಚೇರಿ ಎದುರು ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಸಫಾರಿಗೆ ಸಮ್ಮತಿಸಿದರೆ ಉಗ್ರ ಹೋರಾಟ...

ಮೈಸೂರಿನ ಅರಣ್ಯ ಪ್ರದೇಶಗಳಲ್ಲಿ ಸಫಾರಿ ನಿಲ್ಲಿಸಿದ ಬಳಿಕ ಹುಲಿಗಳು ಕಾಡಿನಿಂದ ನಾಡಿಗೆ ಬರುವುದು ಕಡಿಮೆಯಾಗಿದೆ. ಇದನ್ನು ಸರ್ಕಾರ ಗಮನಿಸಬೇಕು. ಇದರ ಹೊರತಾಗಿಯೂ ಬಂಡವಾಳಶಾಹಿಗಳ, ವ್ಯಾಪಾರಿಗಳ, ಟೂರಿಸಂನವರ ಮಾತು ಕೇಳಿ ಮತ್ತೆ ಸಫಾರಿ ಆರಂಭಕ್ಕೆ ಅನುಮತಿ ನೀಡಿದರೆ ಮೈಸೂರು ಮತ್ತು ಚಾಮರಾಜನಗರದಿಂದ ಸಹಸ್ರಾರು ರೈತರು ಅರಣ್ಯ ಇಲಾಖೆಗೆ ಮುತ್ತಿಗೆ ಹಾಕಲಿದ್ದಾರೆ. ಅಲ್ಲದೆ ಉಗ್ರ ಹೋರಾಟ ನಡೆಸಲಾಗುವುದು.

- ಕುರುಬೂರು ಶಾಂತಕುಮಾರ್,
ರಾಜ್ಯಾಧ್ಯಕ್ಷ, ರಾಜ್ಯ ಕಬ್ಬು ಬೆಳೆಗಾರರ ಸಂಘ

ಮೈಸೂರು, ಡಿ.9(ಎಂಕೆ)– ಭತ್ತ ಖರೀದಿ ಕೇಂದ್ರಗಳ ಆರಂಭ, ಕಬ್ಬಿನ ಬಾಕಿ ಮತ್ತು ಸರ್ಕಾರ ನಿಗದಿ ಮಾಡಿರುವ ಹೆಚ್ಚುವರಿ ಹಣವನ್ನು ನೀಡುವಂತೆ ಆಗ್ರಹಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು ಸಿದ್ಧಾರ್ಥನಗರದಲ್ಲಿರುವ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಜಮಾಯಿಸಿದ ರೈತ ಮುಖಂಡರು, ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತದ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶ ಹೊರ ಹಾಕಿದರು. ರಾಜ್ಯ ಸರ್ಕಾರ ಸಕಾಲದಲ್ಲಿ ಭತ್ತ ಖರೀದಿ ಕೇಂದ್ರಗಳನ್ನು ಆರಂಭಿಸಿ, ರೈತರಿಂದ ಭತ್ತ ಖರೀದಿ ಮಾಡಲು ಮುಂದಾಗಬೇಕು. ಕಬ್ಬಿನ ಬಾಕಿ ಹಣದ ಜೊತೆಗೆ ಪ್ರತೀ ಕ್ವಿಂಟಾಲ್ ಕಬ್ಬಿಗೆ ಸರ್ಕಾರ ನಿಗದಿ ಮಾಡಿರುವ ಹೆಚ್ಚುವರಿ 100 ರೂ.ಹಣವನ್ನು ಕಾರ್ಖಾನೆ ಮಾಲೀಕರಿಂದ ಕೊಡಿಸಿಕೊಡಬೇಕು ಎಂದು ಒತ್ತಾಯಿಸಿದರು.

ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಮಾತನಾಡಿ, ಭತ್ತದ ಪೈರು ಅವಧಿ ಮುಗಿದ ಮೇಲೆ ರೈತರಿಂದ ಖರೀದಿ ಮಾಡುವುದಲ್ಲ. ಸಕಾಲದಲ್ಲಿ ಭತ್ತ ಖರೀದಿ ಕೇಂದ್ರಗಳನ್ನು ಆರಂಭಿಸಿ, ರೈತರ ಬಳಿ ಇರುವ ಭತ್ತ ಖರೀದಿಗೆ ಸರ್ಕಾರ ಮುಂದಾಗಬೇಕು. ಅಲ್ಲದೆ ಕಬ್ಬಿಗೆ ಸರ್ಕಾರ ಹೆಚ್ಚುವರಿಯಾಗಿ ನಿಗದಿ ಮಾಡಿರುವ ಹಣವನ್ನು ಕೊಡಲು ಕಾರ್ಖಾನೆ ಮಾಲೀಕರು ಹಿಂದೇಟು ಹಾಕುತ್ತಿದ್ದು, ಜಿಲ್ಲಾಧಿಕಾರಿಗಳು ಕೊಡಿಸಿಕೊಡಬೇಕು. ಇಲ್ಲವಾದರೆ ಧರಣಿ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್ ಮತ್ತಿತರರಿದ್ದರು.

ಡಿಸಿಆರ್‌ಇ ಪೊಲೀಸ್ ಠಾಣೆ ಬಿಎಸ್‌ಎನ್‌ಎಲ್ ಅನೆಕ್ಸ್ ಬಿಲ್ಡಿಂಗ್‌ಗೆ ಸ್ಥಳಾಂತರ

ಮೈಸೂರು,ಡಿ.9– ಪೊಲೀಸ್ ಅಧೀಕ್ಷಕರು, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ, ದಕ್ಷಿಣ ವಲಯ, ಮೈಸೂರು ಕಚೇರಿ ಮತ್ತು ಪೊಲೀಸ್ ಉಪ ಅಧೀಕ್ಷಕರು, ಡಿಸಿಆರ್‌ಇ ಪೊಲೀಸ್ ಠಾಣೆ ಈ ಹಿಂದೆ ನಂ. 114, 10 ನೇ ಕ್ರಾಸ್, ಸನ್ಮಾರ್ಗ, ಸಿದ್ಧಾರ್ಥನಗರ, ಮೈಸೂರು ಇಲ್ಲಿತ್ತು. ಆದರೆ ಡಿ.8 ರಿಂದ ಈ ಕಚೇರಿ, ಪೊಲೀಸ್ ಠಾಣೆಯನ್ನು ಬಿಎಸ್‌ಎನ್‌ಎಲ್ ಅನೆಕ್ಸ್ ಬಿಲ್ಡಿಂಗ್, ಟೆಲಿಫೋನ್ ಎಕ್ಸ್‌ಚೇಂಜ್ ಕ್ಯಾಂಪಸ್, ಹಾರ್ಡಿಂಗ್ ಸರ್ಕಲ್, ನಜರ್‌ಬಾದ್, ಮೈಸೂರು–570 010 ಈ ವಿಳಾಸಕ್ಕೆ ಸ್ಥಳಾಂತರಿಸಿ ಕಾರ್ಯ ನಿರ್ವಹಿಸುತ್ತಿರುವುದರಿಂದ ಇನ್ನು ಮುಂದೆ ಈ ಕಚೇರಿ, ಪೊಲೀಸ್ ಠಾಣೆಗೆ ತಮ್ಮ ಕುಂದು–ಕೊರತೆಗಳನ್ನು ಸಲ್ಲಿಸಿಕೊಳ್ಳಲು ಸಾರ್ವಜನಿಕರು ಬಿಎಸ್‌ಎನ್‌ಎಲ್ ಅನೆಕ್ಸ್ ಕಟ್ಟಡ ವಿಳಾಸಕ್ಕೆ ಭೇಟಿ ನೀಡಬೇಕು ಎಂದು ದಕ್ಷಿಣ ವಲಯ, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ, ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿ.12ರಿಂದ ಮೈಸೂರಲ್ಲಿ ಕಾಲಭೈರವ ಜನ್ಮಾಷ್ಟಮಿ


ಮೈಸೂರು, ಡಿ.9(ಜಿಎ)–ಮೈಸೂರಿನ ಆರ್.ಟಿ. ನಗರ ಒಂದನೇ ಅಡ್ಡ ರಸ್ತೆಯಲ್ಲಿರುವ ಕಾಲಭೈರವ ಬಳಗ ಟ್ರಸ್ಟ್‌ನಲ್ಲಿ ಡಿ.12 ರಿಂದ 14 ರವರೆಗೆ ಕಾಲಭೈರವ ಜನ್ಮಾಷ್ಟಮಿ ಮತ್ತು ಗಿರಿಜಾ ಕಲ್ಯಾಣ ಮಹೋತ್ಸವ ಹಮ್ಮಿಕೊಳ್ಳಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಸಂಸ್ಥಾಪಕ ಕಿಶೋರ್ ಗುರೂಜಿ ಈ ವಿಷಯ ತಿಳಿಸಿ, ಟ್ರಸ್ಟ್ ವತಿಯಿಂದ ಈಗಾಗಲೇ ಪ್ರತಿ ಸೋಮವಾರ ಸಂಜೆ ಪ್ರಾರ್ಥನೆ ಕಡೆಗೆ ಎಂಬ ವಿಶಿಷ್ಟ ಕಾರ್ಯಕ್ರಮ ಹಮ್ಮಿಕೊಂಡಿದೆ. ಈಗ ಸರ್ವಜನರ ಕಲ್ಯಾಣಕ್ಕಾಗಿ ಈ ಮಹೋತ್ಸವ ಆಯೋಜಿಸಲಾಗಿದೆ. ಜೊತೆಗೆ ಭಕ್ತಾದಿಗಳಿಗೆ ಅನ್ನ ದಾಸೋಹ ಇರಲಿದೆ ಎಂದು ಮಾಹಿತಿ ನೀಡಿದರು.

ಬಿಜೆಪಿ ನಾಯಕರಿಗೆ ಏನೂ ಸಮಸ್ಯೆ ಸಿಗದೇ ಇರುವುದೇ ಸಮಸ್ಯೆಯಾಗಿದೆ!

● ಕಂದಾಯ ಸಚಿವ ಕೃಷ್ಣಬೈರೇಗೌಡ ವ್ಯಂಗ್ಯೋಕ್ತಿ ● ಪ್ರಶ್ನೋತ್ತರ ಅವಧಿಗೆ ಮುನ್ನವೇ ಉ.ಕರ್ನಾಟಕ ಸಮಸ್ಯೆ ಚರ್ಚೆ ಪ್ರಸ್ತಾಪಕ್ಕೆ ಟೀಕೆ

ಬೆಳಗಾವಿ, ಸುವರ್ಣವಿಧಾನಸೌಧ, ಡಿ.9(ಕೆಎಂಶಿ)– ಆಡಳಿತ ಪಕ್ಷವನ್ನು ಸದನದಲ್ಲಿ ಇಕ್ಕಟ್ಟಿಗೆ ಸಿಲುಕಿಸಲು ಏನೂ ಸಮಸ್ಯೆ ಸಿಗಲಿಲ್ಲ ಎಂಬುದೇ ಬಿಜೆಪಿ ಸಮಸ್ಯೆಯಾಗಿದೆ ಎಂದು



ಸಚಿವ ಕೃಷ್ಣ ಬೈರೇಗೌಡ ವಿಧಾನಸಭೆಯಲ್ಲಿಂದು ಟೀಕಿಸಿದ್ದಾರೆ. ಸದನ ಆರಂಭವಾದಾಗ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹಾಗೂ ಶಾಸಕ ಅಶ್ವತ್ಥ ನಾರಾಯಣ ಪ್ರಶ್ನೋತ್ತರ ಅವಧಿಗೆ ಮುನ್ನ ಉತ್ತರ ಕರ್ನಾಟಕದ ಸಮಸ್ಯೆಗಳ ಚರ್ಚೆ ನಡೆಸಬೇಕು ಎಂದು ನಿಲುವಳಿ ಮಂಡಿಸಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸಚಿವ ಕೃಷ್ಣ ಬೈರೇಗೌಡ, ಬಿಜೆಪಿ ನಾಯಕರಿಗೆ ಏನೂ ಸಮಸ್ಯೆ ಸಿಗಲಿಲ್ಲ ಎಂಬುದೇ ಸಮಸ್ಯೆಯಾಗಿದೆ. ಅದಕ್ಕಾಗಿ ಪ್ರಶ್ನೋತ್ತರ ಅವಧಿಗೆ ಮುನ್ನವೇ ಉತ್ತರ ಕರ್ನಾಟಕದ ಸಮಸ್ಯೆಗಳ ಚರ್ಚೆಯಾಗಲಿ ಎನ್ನುತ್ತಿದ್ದಾರೆ. ನಿಯಮದ ಪ್ರಕಾರ ಪ್ರಶ್ನೋತ್ತರ ಅವಧಿಗೆ ಮುನ್ನ ಯಾವುದೇ ಚರ್ಚೆ ಮಾಡಲು ಅವಕಾಶ ಇಲ್ಲ ಎಂದರು.

ಪ್ರಶ್ನೋತ್ತರ ಅವಧಿಯ ನಂತರ ಉತ್ತರ ಕರ್ನಾಟಕದ ಸಮಸ್ಯೆಗಳ ಚರ್ಚೆ ನಡೆಸಲು ಸರ್ಕಾರವೇ ಸಲಹೆ ನೀಡಿದೆ. ಆದರೂ, ವಿರೋಧ ಪಕ್ಷದ ತಕರಾರು ಏಕೆ. ಬಿಜೆಪಿ ನಾಯಕರಲ್ಲಿ ಸೆಲೆಕ್ಟೀವ್ ಜ್ಞಾಪಕ ಶಕ್ತಿ ಅಧಿಕವಾಗಿದೆ. ಈ ಹಿಂದೆ ಅಧಿಕಾರದಲ್ಲಿದ್ದಾಗ ವಿಶ್ವೇಶ್ವರ ಹೆಗಡೆ ಕಾಗೇರಿ ಸ್ಪೀಕರ್ ಆಗಿದ್ದ ಸಂದರ್ಭದಲ್ಲಿ ಪ್ರಶ್ನೋತ್ತರದ ಅವಧಿ ವೇಳೆ ಯಾವುದೇ ವಿಚಾರಗಳ ಚರ್ಚೆ ಬೇಡ ಎಂದಿದ್ದರು. ಈಗ ನಿಯಮ ಗಾಳಿಗೆ ತೂರುತ್ತಿರುವುದು ಸರಿಯಲ್ಲ ಎಂದರು.

ಮಧ್ಯಪ್ರವೇಶಿಸಿದ ಬಸನಗೌಡ ಪಾಟೀಲ್ ಯತ್ನಾಳ್, ಕೆಲವರ ಪ್ರತಿಷ್ಠೆಗಾಗಿ ಪ್ರಶ್ನೋತ್ತರ ಅವಧಿ ಮುಂದೆ ಹಾಕುವುದು ಸರಿಯಲ್ಲ. ಪ್ರತಿಯೊಬ್ಬ ಶಾಸಕರಿಗೂ ಅವರವರ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಮಹತ್ವದ ಪ್ರಶ್ನೆ ಇರುತ್ತದೆ. ನಾನೂ ಸಹಾ ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆ ಪ್ರಶ್ನೆ ಕೇಳಿದ್ದೇನೆ. ಪ್ರಶ್ನೋತ್ತರ ಅವಧಿ ನಂತರ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಯಾಗಲಿ ಎಂದು ಸಲಹೆ ನೀಡಿದರು.

ಸಚಿವ ಎಚ್.ಕೆ.ಪಾಟೀಲ್ ಮಾತನಾಡಿ, ಉತ್ತರ ಕರ್ನಾಟಕದ ಸಮಸ್ಯೆಗಳ ಚರ್ಚೆಗೆ ನಮ್ಮ ಸಹಮತ ಇದೆ. ಈಗಾಗಲೇ ಇಂದಿನ ಕಲಾಪ ಪಟ್ಟಿಯಲ್ಲೂ ಸೇರಿಸಿದೆ. ಪ್ರಶ್ನೋತ್ತರ ಅವಧಿಗೆ ಮುನ್ನ ಚರ್ಚೆ ಆರಂಭಿಸಲು ನಮ್ಮದೇನು ತಕರಾರು ಇಲ್ಲ. ಆ ನಿರ್ಧಾರ ಸ್ಪೀಕರ್ ವಿವೇಚನೆಗೆ ಬಿಟ್ಟಿದ್ದು ಎಂದರು.

ಸಭಾಧ್ಯಕ್ಷ ಯು.ಟಿ.ಖಾದರ್ ಪ್ರಶ್ನೋತ್ತರ ಅವಧಿ ಕೈಗೆತ್ತಿಕೊಂಡಾಗ ವಿಷಯಕ್ಕೆ ತೆರೆ ಬಿದ್ದಿತು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಡಿ.9– ದೊಡ್ಡಕೆರೆ ಮೈದಾನ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ನಿಮಿತ್ತ ಡಿ.10 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಮೈಸೂರು ಸಿ.ಟಿ ಸುತ್ತ–ಮುತ್ತ, ಅಶೋಕ ರಸ್ತೆ, ಇಂದಿರಾ ನಗರ, ಇಟ್ಟಿಗೆಗೂಡು, ನಜರ್‌ಬಾದ್, ನಾಗಮ್ಮ ಆಸ್ಪತ್ರೆ ತಾಲೂಕು ಆಫೀಸ್, ಬಿಎಸ್‌ಎನ್‌ಎಲ್ ಆಫೀಸ್, ಛತ್ರಿ ಮರ ಸುತ್ತ-ಮುತ್ತ ಸಬರ್ ಬಸ್‌ಸ್ಟಾಂಡ್ ಸುತ್ತ-ಮುತ್ತ ಹಳ್ಳದ ಕೆರೆ, ಚಂದ್ರಗುಪ್ತ ರಸ್ತೆ, ಕುರುಬಗೇರಿ, ಕುಂಬಾರಗೇರಿ, ಸಿಟಿ ಬಸ್ ಸ್ಟಾಂಡ್ ಸುತ್ತ–ಮುತ್ತ, ರಮಾವಿಲಾಸ್ ರಸ್ತೆ, ಅರಸು ರಸ್ತೆ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ಅನಿಯಮಿತ ವ್ಯತ್ಯಯವಾಗಲಿದೆ ಎಂದು ಚೆಸ್ಕಾಂ ಪ್ರಕಟಣೆ ತಿಳಿಸಿದೆ.

ಹೆಚ್.ವಿ.ಗಣೇಶ್ ನಿಧನ

ಮೈಸೂರು, ಡಿ.9– ಮೈಸೂರಿನ ಶಿವರಾತ್ರೀಶ್ವರನಗರದ ನಿವಾಸಿ, ನಿವೃತ್ತ ಇಂಜಿನಿ



ಯರ್ ಹೆಚ್.ವಿ.ಗಣೇಶ್(77) ಅವರು ಮಂಗಳವಾರ ನಿಧನರಾದರು.

ರಂಗಭೂಮಿ ಕಲಾವಿದರಾಗಿದ್ದ ಇವರು, ಮೈಸೂರಿನಲ್ಲಿರುವ ಕೆ.ಆರ್.ಪೇಟೆ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷರಾಗಿದ್ದರು. ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರಲ್ಲದೆ, ಒಮ್ಮೆ ದಕ್ಷಿಣ ಪದವೀಧರರ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ, ಪರಾಜಿತರಾಗಿದ್ದರು.

ಇವರು ಪತ್ನಿ, ಇಬ್ಬರು ಪುತ್ರಿಯರು, ನಗರದ ಮಣಿಪಾಲ್ ಆಸ್ಪತ್ರೆಯಲ್ಲಿ ಮೂಳೆ ತಜ್ಞ ವೈದ್ಯರಾಗಿರುವ ಪುತ್ರ ಡಾ.ರವಿಕಿರಣ್ ಸೇರಿದಂತೆ ಅಪಾರ ಬಂಧು–ಬಳಗ, ಮಿತ್ರರನ್ನು ಅಗಲಿದ್ದಾರೆ. ಬುಧವಾರ ಬೆಳಗ್ಗೆ ಗಣೇಶ್ ಅವರ ಪಾರ್ಥೀವ ಶರೀರವನ್ನು ಅಂತಿಮ ದರ್ಶನಕ್ಕಿಟ್ಟು, ಮಧ್ಯಾಹ್ನ 12.30ಕ್ಕೆ ಸ್ವಗ್ರಾಮ ಕೆ.ಆರ್.ಪೇಟೆ ತಾಲೂಕಿನ ಹರಿಹರಪುರ ಗ್ರಾಮದಲ್ಲಿ ಅಂತ್ಯಸಂಸ್ಕಾರ ನಡೆಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಡಿವಾಳರ ತಟ್ಟೆಕೆರೆ ರಾಮಶೆಟ್ಟಿ

ಹುಣಸೂರು, ಡಿ.9– ತಾಲೂಕಿನ ತಟ್ಟೆಕೆರೆ ಗ್ರಾಮದ ಮಡಿವಾಳರ ಟಿ.ಸಿ.ರಾಮಶೆಟ್ಟಿ(75) ಅವರು ಮಂಗಳವಾರ ಸಂಜೆ ನಿಧನರಾದರು. ಇವರು ಪುತ್ರ, ಮೂವರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಆಗಲಿದ್ದಾರೆ. ಬುಧವಾರ ಮಧ್ಯಾಹ್ನ ಗ್ರಾಮದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಸಂತಾಪ: ಮಡಿವಾಳರ ತಟ್ಟೆಕೆರೆ ರಾಮಶೆಟ್ಟಿ ಅವರ ನಿಧನಕ್ಕೆ ಹುಣಸೂರು ತಾಲೂಕು ಮಡಿವಾಳರ ಸಂಘ ಹಾಗೂ ಮೈಸೂರು ಜಿಲ್ಲಾ ಮಡಿವಾಳರ ಸಂಘ ಸೇರಿದಂತೆ ವಿವಿಧ ಸಂಘಟನೆಗಳು ಸಂತಾಪ ಸೂಚಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

10.12.2025 ಬುಧವಾರ, ಮಳೆ ನಕ್ಷತ್ರ: ಜ್ಯೇಷ್ಠ 03.12.2025 ರಿಂದ 15.12.2025
ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಕೃಷ್ಣ ಪಕ್ಷ,
ತಿಥಿ: ಷಷ್ಠಿ, ನಕ್ಷತ್ರ: ಆಶ್ಲೇಷ, ರಾಹುಕಾಲ: ಮಧ್ಯಾಹ್ನ 12 ರಿಂದ 1.30 ರವರೆಗೆ

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಹುಟ್ಟಿನಿಂದ 16 ವರ್ಷ ವಯಸ್ಸಿನ ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ವೃದ್ಧಿಗಾಗಿ ಮಕ್ಕಳಿಗೆ ಸ್ವರ್ಣಪ್ರಾಶನ ಕಾರ್ಯಕ್ರಮ. ಕಿಟಿಬ ಕುಷ್ಟ (Psoriasis). ಋತು ಚಕ್ರದ ಸಮಸ್ಯೆ ಕುರಿತು ತಪಾಸಣೆ ಮತ್ತು ಚಿಕಿತ್ಸಾ ಶಿಬಿರ. ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್ ಬೆಳಗ್ಗೆ 9.30ರಿಂದ.

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನದ 21ನೇ ಅವತರಣಿಕೆ. ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ. ಬೆಳಗ್ಗೆ 10 ರಿಂದ.

■ **ಶ್ರೀ ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನ:** 25ನೇ ವರ್ಷದ ಹನುಮ ಜಯಂತಿ ಮಹೋತ್ಸವ. ಬೆಳಗ್ಗೆಯಿಂದ ವಿಶೇಷ ಪೂಜೆ, ಅಲಂಕಾರ, ಅಭಿಷೇಕ, ಪ್ರಸಾದ ಸೇವೆ, ಧಾರ್ಮಿಕ ಪೂಜಾ ಕಾರ್ಯಕ್ರಮಗಳು. ಸ್ಥಳ: ದೇವಸ್ಥಾನದ ಪ್ರಾಂಗಣ. ಇರ್ವಿನ್ ರಸ್ತೆ.

■ **ವೀರಶೈವ ಲಿಂಗಾಯಿತ ಬಸವ ಬಳಗ :** ವೀರಶೈವ ಲಿಂಗಾಯತ ಬಸವ ಬಳಗ ಉದ್ಘಾಟನೆ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಶ್ರೀ ಮಹಾಂತ ಸ್ವಾಮೀಜಿ, ಶ್ರೀ ಚಂದ್ರಶೇಖರ ಸ್ವಾಮೀಜಿ, ಮುಖ್ಯ ಅತಿಥಿಗಳು : ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಜಿ.ಟಿ. ದೇವೇಗೌಡ, ಹೆಚ್.ಎಂ. ಗಣೇಶ್ ಪ್ರಸಾದ್, ಹೆಚ್.ವಿ. ಬಸವರಾಜು, ಎಸ್.ಸಿ. ಅಶೋಕ್, ಡಾ. ಶೈಲಾ ನಾಗರಾಜ್, ಬಿ.ಕೆ. ನಾಗರಾಜು ಬ್ಯಾತಹಳ್ಳಿ, ಎಂ.ಹೆಚ್. ಚಂದ್ರಶೇಖರ್, ಡಾ. ಕೆ.ಸಿ. ಬಸವರಾಜ್, ಪ್ರೊ. ಮೊರಬದ ಮಲ್ಲಿಕಾರ್ಜುನ, ಅಧ್ಯಕ್ಷತೆ : ಬಳಗದ ಅಧ್ಯಕ್ಷ ಡಿ.ಎಂ. ಶಿವಪ್ರಸಾದ್, ಸ್ಥಳ: ವಿ.ಕೆ. ಪಬ್ಲಿಕ್ ಸ್ಕೂಲ್, ವಿಜಯನಗರ 3ನೇ ಹಂತ, ಡಿ ಬ್ಲಾಕ್, ಸಂಜೆ 5ಕ್ಕೆ.

■ **ಅರಮನೆ ಕೋಟೆ ಉತ್ತರ ಬಾಗಿಲು ಶ್ರೀ ಆಂಜನೇಯಸ್ವಾಮಿ ದೇವಸ್ಥಾನ:** ಶ್ರೀ ಹನುಮ ಜಯಂತಿ ಮಹೋತ್ಸವ, ಸಂಜೆ 5.30 ರಿಂದ ಮೋಹನ್ ದೇವಯ್ಯ ವೃಂದದವರಿಂದ ಭಕ್ತಿಗೀತೆ, ಸಂಜೆ 7 ರಿಂದ ಬಿಳಿಕೆರೆ ಗಂಗಾಧರ ಆಚಾರ್ ಮತ್ತು ತಂಡದವರಿಂದ ಕಥಾ ಕಲಾಕ್ಷೇತ್ರ, ಸ್ಥಳ: ಅರಮನೆ ಕೋಟೆ ಉತ್ತರ ಬಾಗಿಲು ಆಂಜನೇಯ ಸ್ವಾಮಿ ದೇವಸ್ಥಾನ.

■ **ಶ್ರೀ ರಾಘವೇಂದ್ರ ಸೇವಾ ಸಮಿತಿ:** ಶ್ರೀಮತ್ ಭಾಗವತ ಮುಂದುವರೆದ ಭಾಗ ಪ್ರವಚನ: ಪಂಡಿತ ಬಾದರಾಯಣಾಚಾರ್ಯ ಅವರಿಂದ. ಸ್ಥಳ: ಮಠದ ಆವರಣ, ಜಯಲಕ್ಷ್ಮೀಪುರಂ. ಸಂಜೆ 5 ಗಂಟೆಗೆ.

■ **ಸಾಧನಾ ಮಂದಿರ, ಮೈಸೂರು:** ಸರಸ್ವತಿ ಪೂಜೆ ಮಾಡುವ ಬಗ್ಗೆ ವಿಶೇಷ ತರಬೇತಿ. ಸ್ವಾಮಿ ಹಂಸಾನಂದ ಅವರಿಂದ. ಸಂಜೆ 6.30 ರಿಂದ ಶ್ರೀರಾಮಪುರ 2ನೇ ಹಂತದಲ್ಲಿರುವ ಶ್ರೀ ಸಂಕಷ್ಟಹರ ಗಣಪತಿ ದೇವಸ್ಥಾನ, ಸಂಜೆ 7 ರಿಂದ ಮೈಸೂರು ಯೋಗಾಲಯ, ವಿವೇಕಾನಂದ ನಗರ ಎಸ್‌ಬಿಎಂ ಲೇಔಟ್.

■ **ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್ :** ಡಾ. ವಸುಂಧರಾ ದೊರೆಸ್ವಾಮಿ ಅವರಿಗೆ ನೂಪುರಶ್ರೀ ಪ್ರಶಸ್ತಿ ಪ್ರದಾನ, ಶ್ರೀಮತಿ ಕೆ. ವನಜಾಕ್ಷಮ್ಮ ಸಂಸ್ಮರಣಾ 30ನೇ ನೃತ್ಯ ಆರಾಧನೆ, ಸಂಜೆ 6.15 ರಿಂದ ನಾಟ್ಯಾಚಾರ್ಯ ಪ್ರೊ. ಕೆ. ರಾಮಮೂರ್ತಿ ರಾವ್ ಅವರ ಪುತ್ರ ಹಾಗೂ ಶಿಷ್ಯ ವಿದ್ವಾನ್ ಕೆ.ಆರ್. ವಿಶ್ವದೀಪ ಅವರಿಂದ ಭರತನಾಟ್ಯ, ಅಧ್ಯಕ್ಷತೆ : ವಿಜಯ ವಿಠ್ಠಲ ವಿದ್ಯಾಸಂಸ್ಥೆ ಕಾರ್ಯದರ್ಶಿ ಆರ್. ವಾಸುದೇವ ಭಟ್, ಸನ್ಮಾನ : ಹಿರಿಯ ಪತ್ರಕರ್ತ ಅಂಶಿಪ್ರಸನ್ನಕುಮಾರ್, ಸ್ಥಳ: ರಮಾಗೋವಿಂದ ಕಲಾ ವೇದಿಕೆ, ಗಾನಭಾರತಿ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.

■ **ಜಗನ್ನಾಥ ಸೆಂಟರ್ ಫಾರ್ ಆರ್ಟ್ ಅಂಡ್ ಕಲ್ಚರ್ :** ಕಲಾ ಸಪ್ತಮಿ ವಾರದ ಸಾಂಸ್ಕೃತಿಕ ಕಾರ್ಯಕ್ರಮ, ಸಂಜೆ 6 ರಿಂದ ಶ್ರೀಮತಿ ಮಿತ್ರಾ ನವೀನ್, ಎಂ. ಸಿಂಚನಾ, ಎಸ್. ಮೋನಿಷಾ, ರಿತನ್ಯಾ ಆರ್. ಗೌಡ, ವಿ. ದೀಕ್ಷಿತಾ, ಕೆ. ವೈಭವಿ, ಪಿ.ಬಿ. ಪ್ರಗತಿ, ಎಸ್.ಎಂ. ಶ್ರೇಯಶ್ರೀ ಮತ್ತು ಎಸ್. ಧನ್ಯಶ್ರೀ ಅವರಿಂದ 'ಸರ್ವಂ ರಾಮಮಯಂ' ಭರತನಾಟ್ಯ ಪ್ರದರ್ಶನ; ಸಂಜೆ 7 ರಿಂದ ಡಾ. ವೀಣಾಮೂರ್ತಿ ವಿಜಯ್ ಅವರ ಶಿಷ್ಯರಾದ ಯು.ಕೆ. ಲಿಖಿತಾ, ಕೆ.ಬಿ.ಚೈತನ್ಯಾ, ಪಿ.ಎಂ. ಶ್ರೀಲಕ್ಷ್ಮಿ, ಜೆ. ಮನು ಮತ್ತು ವಿ. ಐಶ್ವರ್ಯ ರೋಸ್ ಅವರಿಂದ ಕುಚಿಪುಡಿ ವೈಭವ ನೃತ್ಯ ಪ್ರದರ್ಶನ, ಸ್ಥಳ: ಜಗನ್ನಾಥ ಸೆಂಟರ್ ಫಾರ್ ಆರ್ಟ್ ಅಂಡ್ ಕಲ್ಚರ್, ವಿಜಯನಗರ 1ನೇ ಹಂತ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಅಂಚೆ ದನಿ ಪಾರಿವಾಳದಿಂದ ಡ್ರೋನ್ ವರೆಗೆ ಅಂಚೆ ಪಯಣ – ಬಾನುಲಿ ಸರಣಿ, ಪ್ರಸ್ತುತಿ–ಡಾ. ಅಮ್ಮ ಸಂದ್ರ ಸುರೇಶ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ. ಎಸ್. ಲಕ್ಷ್ಮೀಶ, ವ್ಯಾಖ್ಯಾನ–ಡಾ. ಹೆಚ್. ಎಂ. ಕಲಾಶ್ರೀ, 6.50 ರೈತರಿಗೆ ಸಲಹೆ, 7.15 ನಮ್ಮ ಆರೋಗ್ಯ, 8.30 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಅಲಿ ಅಕ್ಬರ್ ಖಾನ್–ಸರೋದ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಭರತ್ ಸುಂದರ್ –ಹಾಡುಗಾರಿಕೆ, 4.00 ಮಹಿಳಾರಂಗ, 4.30 ಹಿಂದಿ ಚಿತ್ರಗೀತೆಗಳು, 4.45 ಹಿಂದಿ ಪಾಠ, 5.00 ಕಟ್ಟೋಣ ಬನ್ನಿ ನಿರ್ಮಾಣ ತಾಂತ್ರಿಕತೆಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಪ್ರಾಯೋಜಕರು –ಅಸೋಸಿಯೇಷನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಇಂಡಿಯಾ, ಮೈಸೂರು ಛಾಪ್ಟರ್, ವಿಷಯ: ಶೀಘ್ರ ನಿರ್ಮಾಣ ಮತ್ತು ಪ್ರೀಕಾಸ್ಟ್ ತಾಂತ್ರಿಕತೆಗಳು, ಭಾಗವಹಿಸುತ್ತಾರೆ: ಎ.ಸಿ.ಇ. ಟೆಕ್ನಾಲಜಿಸ್ಟ್‌ನ ಚೀಫ್ ಕನ್ಸಲ್ಟಂಟ್ ಎನ್.ಆರ್. ಅಶೋಕ್ ಮತ್ತು ಪಿ.ಜಿ. ಶೆಟ್ಟಿ ಪ್ರೀಕಾಸ್ಟ್‌ನ ಪ್ರಧಾನ ವ್ಯವಸ್ಥಾಪಕ ನಿರ್ದೇಶಕರಾದ ಎಂ.ಜಿ. ಸೋಮಶೇಖರ್, ಪ್ರಸ್ತುತಿ –ಎನ್.ಕೇಶವಮೂರ್ತಿ, 6.50 ಕೃಷಿರಂಗ–ಕೃಷಿ ಹಾಗೂ ಗ್ರಾಮೀಣ ಅಭಿವೃದ್ಧಿ ಈ ಕುರಿತು ಟಿ. ನರಸೀಪುರ ತಾಲೂಕು ವಾಟಾಳು ಗ್ರಾಮದ ಡಾ. ಡಿ. ರವಿಶಂಕರ್ ಅವರೊಂದಿಗೆ ಸಂದರ್ಶನ, ಸಂದರ್ಶಕರು–ಎನ್. ಕೇಶವಮೂರ್ತಿ, 7.45 ಚಿತ್ರಗೀತೆಗಳು, 8.00 ವಿಶೇಷ ಕಾರ್ಯಕ್ರಮ ಸರಣಿ, ಆಕಾಶವಾಣಿ 90–ನೆನಪುಗಳ ಹೊತ್ತು – ವಿಶೇಷ ಕಾರ್ಯಕ್ರಮ ಸರಣಿ, ಭಾಗವಹಿಸುವ ಅತಿಥಿಗಳು ಮೈಸೂರು ಆಕಾಶವಾಣಿ ಕೇಳುಗರಾದ ಕೆ.ವಿ.ಶಿವಕುಮಾರ್ ಅವರೊಂದಿಗೆ, ಸಂದರ್ಶನ. ಸಂದರ್ಶಕರು–ದಿಗ್ವಿಜಯ್ .ಬಿ., 8.30 ಹಿಂದಿ ಚಿತ್ರಗೀತೆಗಳು, 9.30 ಕ್ರೀಡಾಲೋಕ, 10,00 ಜನಪದ ಸಂಗೀತ, 10.30 ಸವಿನೆನಪು

ಛತ್ತೀಸ್‌ಗಢದ ಉದ್ಯಮಿಗೆ 3.29 ಕೋಟಿ ವಂಚನೆ ; ಮೈಸೂರು ಉದ್ಯಮಿ ವಿರುದ್ಧ ಕೇಸ್

ಮೈಸೂರು,ಡಿ.9(ಪಿಎಂ)– ಮುಂಗಡವಾಗಿ 3.29 ಕೋಟಿ ಹಣ ಪಡೆದು ಒಪ್ಪಂದದಂತೆ 25 ಸಾವಿರ ಮೆಟ್ರಿಕ್ ಟನ್ ರಿಫೈನ್ಡ್ ಶುಗರ್ ಪೂರೈಸದೇ ವಂಚಿಸಿರುವ ಆರೋಪದಡಿ ಮೈಸೂರಿನ ದೇವರಾಜ ಮೊಹಲ್ಲಾದ ಟಿಆರ್ ಗ್ರೂಪ್ ಇಂಪೆಕ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಎಸ್.ವಿನಯ್ ವಿರುದ್ಧ ದೇವರಾಜ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಛತ್ತೀಸ್‌ಗಢದ ರಾಯ್‌ಪುರ್‌ನ ಲಾಲಗಂಗಾ ಬಿಸಿನೆಸ್ ಪಾರ್ಕ್‌ನ ಎವಿಐ ಇಂಡಿಯಾ ಇಂಟರ್‌ನ್ಯಾಷನಲ್ ಎಲ್‌ಎಲ್‌ಪಿ ಎಂಬ ಕೃಷಿ ಸರಕು ಉದ್ಯಮಕ್ಕೆ ವಂಚಿಸಿರುವ ಆರೋಪದಡಿ ಈ ಪ್ರಕರಣ ದಾಖಲಾಗಿದೆ. ಛತ್ತೀಸ್‌ಗಢದ ಸದರಿ ಉದ್ಯಮದ ಪಾಲುದಾರ ಅಮಿತ್ ಕುಮಾರ್ ರಾಕೇಚಾ ನೀಡಿದ ದೂರಿನನ್ವಯ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ.

ಆರೋಪಿತರು ಆಮದು ಮತ್ತು ರಫ್ತು ವ್ಯವಹಾರದಲ್ಲಿ ತೊಡಗಿಸಿಕೊಂಡಿದ್ದಾರೆ. 2023ರ ಜನವರಿಯಲ್ಲಿ ಆರೋಪಿಯು ಛತ್ತೀಸ್‌ಗಢದ ನಮ್ಮ ಕಂಪನಿ ಸಂಪರ್ಕಿಸಿ, ತಮ್ಮೊಂದಿಗೆ ವಹಿವಾಟು ನಡೆಸುವಂತೆ ಪ್ರೇರೇಪಿಸಿದರು. ಹೆಚ್ಚಿನ ಪ್ರಮಾಣದಲ್ಲಿ ಸಂಸ್ಕರಿಸಿದ (ರಿಫೈನ್ಡ್ ಶುಗರ್) ಸಕ್ಕರೆ ಪೂರೈಸುವುದಾಗಿ ಆರೋಪಿಯು ತಿಳಿಸಿದರು.

ಅದರಂತೆ 2023ರ ಜ.25ರಂದು ಆರೋಪಿ ಜೊತೆಗೆ ಮಾರಾಟ ಮತ್ತು ಖರೀದಿ ಒಪ್ಪಂದ ಮಾಡಿಕೊಳ್ಳಲಾಯಿತು. ಆ ಪ್ರಕಾರ ಆರೋಪಿಯು 25 ಸಾವಿರ ಮೆಟ್ರಿಕ್ ಟನ್ ರಿಫೈನ್ಡ್ ಶುಗರ್ ಪೂರೈಸಬೇಕಿತ್ತು. ಅದಕ್ಕಾಗಿ 2023ರ ಫೆಬ್ರವರಿ 7ರಂದು ಆರ್‌ಟಿಜಿಎಸ್ ಮೂಲಕ ಆರೋಪಿಯ ಬ್ಯಾಂಕ್ ಖಾತೆಗೆ 3,29,61,250 ರೂ.ಗಳನ್ನು ವರ್ಗಾಯಿಸಲಾಯಿತು. ಒಪ್ಪಂದದಂತೆ ವಾರದೊಳಗೆ ಸಕ್ಕರೆಯ ವಿತರಣೆ ಪ್ರಾರಂಭವಾಗಬೇಕಿತ್ತು. ಆದರೆ ಆರೋಪಿಯು ಉದ್ದೇಶ ಪೂರ್ವಕವಾಗಿ ಒಂದು ಕಿಲೋಗ್ರಾಂ ಸಕ್ಕರೆ ಸಹ ಪೂರೈಸಲಿಲ್ಲ. ಇದು ಆರೋಪಿಯ ಪೂರ್ವ ನಿಯೋಜಿತ ಪಿತೂರಿಯಾಗಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

'ಮುಳುಗದಿರಲಿ ಬದುಕು' ಕೃತಿ ಬಿಡುಗಡೆ



ಲೇಖಕರು ಹಾಗೂ ಅಂಕಣ ಬರಹಗಾರ ಮಿರ್ಲೆ ಚಂದ್ರಶೇಖರ ಅವರ ಪ್ರಬಂಧ ಲೇಖನಗಳನ್ನು ಒಳಗೊಂಡ 'ಮುಳುಗದಿರಲಿ ಬದುಕು' ಕೃತಿಯ ಮೊದಲ ಪ್ರತಿಯನ್ನು ಜೆ.ಎಸ್.ಎಸ್. ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ್ ಅವರಿಗೆ ಅವರ ಕಚೇರಿಯಲ್ಲಿ ನೀಡುವ ಮೂಲಕ ಲೋಕಾರ್ಪಣೆಗೊಳಿಸಲಾಯಿತು.

ಡಿ.16ಕ್ಕೆ ಶ್ರೀ ಶಿವರಾತ್ರೀಶ್ವರರ ಜಯಂತಿ; ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟನೆ

ಮೈಸೂರು, ಡಿ. 9– ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ 1066ನೆಯ ಜಯಂತಿ ಮಹೋತ್ಸವವನ್ನು ರಾಷ್ಟ್ರಪತಿಗಳಾದ ಶ್ರೀಮತಿ ದ್ರೌಪದಿ ಮುರ್ಮು ಅವರು ಮಳವಳ್ಳಿಯಲ್ಲಿ ಡಿ. 16 ರಂದು ಮಧ್ಯಾಹ್ನ 3 ಗಂಟೆಗೆ ಉದ್ಘಾಟಿಸಲಿದ್ದಾರೆ. ಸುತ್ತೂರು ಶ್ರೀಗಳವರ ದಿವ್ಯ ಸಾನ್ನಿಧ್ಯದಲ್ಲಿ ಮತ್ತು ಕನಕಪುರ ಶ್ರೀಗಳ ಸಮ್ಮುಖದಲ್ಲಿ ಕಾರ್ಯಕ್ರಮ ನೆರವೇರಲಿದೆ.


ದ್ರೌಪದಿ ಮುರ್ಮು

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧ್ಯಕ್ಷತೆ ವಹಿಸಲಿದ್ದು, ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ನೆನಪಿನ ಸಂಚಿಕೆ ಬಿಡುಗಡೆ ಮಾಡಲಿದ್ದಾರೆ. ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಶಾಸಕರು, ಮಾಜಿ ಸಚಿವರು ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ ಪಿ.ಎಂ. ನರೇಂದ್ರಸ್ವಾಮಿ ಪಾಲ್ಗೊಳ್ಳಲಿದ್ದಾರೆ.

ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮ

ಮೈಸೂರು, ಡಿ.9– ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ವತಿಯಿಂದ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬೆಂಗಳೂರು ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ, ಮೈಸೂರು ಸಂಯುಕ್ತ ಆಶ್ರಯದಲ್ಲಿ, ಮೈಸೂರು ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವ 'ಯುವನಿಧಿ' ಯೋಜನೆಯಡಿಯಲ್ಲಿ ನೊಂದಾಯಿಸಿರುವ ಆಸಕ್ತ ಫಲಾನುಭವಿಗಳಿಗೆ ಹನ್ನೆರಡು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಬಯಸುವ 'ಯುವ ನಿಧಿ' ಯೋಜನೆಯಡಿಯಲ್ಲಿ ನೋಂದಾಯಿಸಿರುವ ಫಲಾನುಭವಿಗಳಿಗೆ ಉದ್ಯಮ ಶೀಲತಾ ಪ್ರೇರಣೆ ಸ್ವಂತ ಉದ್ಯಮ ಸ್ಥಾಪನೆ ಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು, ಪ್ರೋತ್ಸಾಹ, ಉದ್ಯಮದಾರರಿಗೆ ದೊರೆಯುವ ಸೌಲಭ್ಯಗಳು ಮಾರುಕಟ್ಟೆ ಮುಂತಾದ ವಿಷಯಗಳ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ಯೋಜನೆಯಡಿಯಲ್ಲಿ ತರಬೇತಿಯಲ್ಲಿ ಮಾಹಿತಿಯನ್ನು ನೀಡಲಾಗುವುದು.

ಆಸಕ್ತ 'ಯುವನಿಧಿ' ನೋಂದಾಯಿಸಿರುವ ಫಲಾನುಭವಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಲು ಕೋರಲಾಗಿದೆ. ಭಾಗವಹಿಸುವವರು ಡಿ.25 ರ ಒಳಗೆ ಈ ವಿಳಾಸದಲ್ಲಿ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು ಕಚೇರಿ, ಸಿಡಾಕ್, ಕೇಂದ್ರ ಸಯ್ಯಾಜಿ ರಾವ್ ರಸ್ತೆ ಸಿ.ಟಿ.ಐ ಕಟ್ಟಡ ಮೈಸೂರು ದೂ.ಸಂ: 6361611136/ 8310738819/ 7760145784 ಅನ್ನು ಸಂಪರ್ಕಿಸಬಹುದಾಗಿದೆ

ಬಸವಮಾರ್ಗ ಕೇಂದ್ರದಲ್ಲಿ 'ವಚನಗಳಲ್ಲಿ ವ್ಯಸನಮುಕ್ತ ಜೀವನ' ವಿಶೇಷ ಉಪನ್ಯಾಸ


ಮೈಸೂರಿನ ಹೆಬ್ಬಾಳದಲ್ಲಿರುವ ಬಸವಮಾರ್ಗ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದಲ್ಲಿ ಶರಣ ಸಾಹಿತ್ಯ ತಾಲೂಕು ಪರಿಷತ್ತು ಸಹಯೋಗದೊಂದಿಗೆ ಮಂಗಳವಾರ ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಗಣ್ಯರು ಗಿಡಕ್ಕೆ ನೀರೆರೆದು ಉದ್ಘಾಟಿಸಿದರು.

ಮೈಸೂರು, ಡಿ.9– ಶರಣ ಸಾಹಿತ್ಯ ತಾಲೂಕು ಪರಿಷತ್ತು ಮತ್ತು ಬಸವ ಮಾರ್ಗ ಫೌಂಡೇಷನ್ ಸಹಯೋಗದಲ್ಲಿ ನಗರದ ಹೆಬ್ಬಾಳಿನಲ್ಲಿರುವ ಬಸವಮಾರ್ಗ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದಲ್ಲಿ ಮಂಗಳವಾರ 'ವಚನಗಳಲ್ಲಿ ವ್ಯಸನಮುಕ್ತ ಜೀವನ' ಕುರಿತ ವಿಶೇಷ ಉಪನ್ಯಾಸ ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಮಾತನಾಡಿ, ಆರೋಗ್ಯವೇ ನಿಜವಾದ ಭಾಗ್ಯ, ಆರೋಗ್ಯ ಚೆನ್ನಾಗಿದ್ದರೆ ಮಾತ್ರ ಸಾಧನೆ ಮಾಡಲು ಸಾಧ್ಯ. ಮನುಷ್ಯ ಜನ್ಮ ದೊಡ್ಡದು, ಕೆಟ್ಟ ವ್ಯಸನಗಳಿಗೆ ಬಲಿಯಾಗಬಾರದು. ಆದರೆ ಪ್ರಸ್ತುತ ಮದ್ಯಪಾನ ಫ್ಯಾಷನ್ ಆಗಿಬಿಟ್ಟಿದೆ. ಪರಿಣಾಮ ಹಲವು ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ವ್ಯಸನದಿಂದಾಗುವ ದುಷ್ಪರಿಣಾಮಗಳ ಬಗ್ಗೆ ಶಾಲಾ–ಕಾಲೇಜು ಹಂತದಲ್ಲೆ ಅರಿವು ಮೂಡಿಸಬೇಕು. ಸದೃಢ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರು ಕೈ ಜೋಡಿಸಬೇಕು ಎಂದರು.

ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಮೈಸೂರು ಕೃಷ್ಣಮೂರ್ತಿ 'ವಚನಗಳಲ್ಲಿ ವ್ಯಸನಮುಕ್ತ ಜೀವನ' ಕುರಿತು ಮಾತನಾಡಿ, ವ್ಯಸನಮುಕ್ತ ಸಮಾಜ ನಿರ್ಮಾಣ ಆಶಯದೊಂದಿಗೆ ಶಿವಶರಣರು ದೊಡ್ಡ ಚಳವಳಿಯನ್ನೇ ಮಾಡಿದರು. ವಚನಗಳ ಮೂಲಕ ಸಮಾಜವನ್ನು ಎಚ್ಚರಿಸಿದ್ದಾರೆ. ವೇದ, ಉಪನಿಷತ್ತುಗಳ ಸಾರವನ್ನು ಸರಳ ಪದಗಳಲ್ಲಿ ಕಟ್ಟಿದ್ದಾರೆ. ಬಸವಾದಿ ಶರಣರು ಸಪ್ತ ವ್ಯಸನಗಳ ಬಗ್ಗೆ ಸವಿಸ್ತಾರವಾಗಿ ಹೇಳಿದ್ದಾರೆ. ಶಿವನಿಗೆ ಪ್ರಿಯವಾಗುವಂತೆ ನಡೆಯುವ ವ್ಯಸನವೇ ಅತ್ಯಂತ ಶ್ರೇಷ್ಠ. ಕೆಟ್ಟ ವ್ಯಸನಗಳು ಅನ್ಯಾಯದ ಪಥದತ್ತ ಸೆಳೆಯುತ್ತವೆ. ಆದರೆ ಭಕ್ತಿ ಮಾತ್ರ ನ್ಯಾಯದ ಮಾರ್ಗದಲ್ಲಿ ನಡೆಸುತ್ತದೆ ಎಂಬುದನ್ನು ಸಾರಿದರೆಂದು ತಿಳಿಸಿದರು.

ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಡಾ.ಹೆಳವರಹುಂಡಿ ಸಿದ್ದಪ್ಪ ಮಾತನಾಡಿ, ಯುವಕರು ವ್ಯಸನಕ್ಕೆ ಬಲಿಯಾದರೆ ಆ ದೇಶ ತಂತಾನೆ ದಿವಾಳಿಯಾಗುತ್ತದೆ. ಪಂಜಾಬ್‌ನಲ್ಲಿ ಪ್ರತಿ ಮನೆಯಲ್ಲೂ ವ್ಯಸನಿಗಳಿದ್ದಾರೆ. ಇದನ್ನು ತಡೆಯದಿದ್ದರೆ ದೇಶದ ಸ್ಥಿತಿ ಶೋಚನೀಯವಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು. ನಿಕಟಪೂರ್ವ ಜಿಲ್ಲಾ ಅಧ್ಯಕ್ಷ ಎಂ.ಚಂದ್ರಶೇಖರ್, ಆರೋಗ್ಯ ಪೂರ್ಣ ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಶರಣ ಸಾಹಿತ್ಯ ತಾಲೂಕು ಪರಿಷತ್ತು ಸಾವಿರಾರು ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಬಸವಮಾರ್ಗ ಫೌಂಡೇಷನ್ ಸಂಸ್ಥಾಪಕ ಅಧ್ಯಕ್ಷ ಎಸ್. ಬಸವರಾಜು, ಶರಣ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಶರಣ ದೇವರಾಜು ಪಿ.ಚಿಕ್ಕಹಳ್ಳಿ(ದೇಚಿ), ಸಾಹಿತಿ ಡಾ.ಮುಡಿಗುಂಡ ಎಸ್.ಪುಟ್ಟಪ್ಪ, ಗಾಯಕ ಚನ್ನಬಸಪ್ಪ, ಬಸವಮಾರ್ಗ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದ ವ್ಯವಸ್ಥಾಪಕ ಮಹೇಶ್, ಸಿಬ್ಬಂದಿ ಮಂಜುನಾಥ್, ಆನಂದ್ ಮತ್ತಿತರರು ಉಪಸ್ಥಿತರಿದ್ದರು.

> ವ್ಯಸನಮುಕ್ತ ಸಮಾಜ ನಿರ್ಮಾಣದ ಕನಸು ಹೊತ್ತು ಮುನ್ನಡೆಯುತ್ತಿರುವ ಬಸವಮಾರ್ಗ ಫೌಂಡೇಷನ್, 6 ವರ್ಷಗಳಲ್ಲಿ 55 ಕುಡಿತ ಬಿಡಿಸುವ ಶಿಬಿರಗಳನ್ನು ಆಯೋಜಿಸುವ ಮೂಲಕ ಸುಮಾರು 15 ಸಾವಿರ ವ್ಯಸನಿಗಳಿಗೆ ಹೊಸಜೀವನ ರೂಪಿಸಿದೆ. ಈ ಮೂಲಕ ಸಾವಿರಾರು ಕುಟುಂಬಗಳಿಗೆ ನೆಮ್ಮದಿ ದೊರೆತಿದೆ ಎಂದು ಆತ್ಮತೃಪ್ತಿ ಇದೆ. ಇದೀಗ ಮಹಿಳೆಯರಿಗೂ ವ್ಯಸನಮುಕ್ತಗೊಳಿಸಲು ಪುನರ್ವಸತಿ ಕೇಂದ್ರ ಆರಂಭಿಸಲಾಗಿದೆ. ಭಗವಂತ ನಮ್ಮ ಸಂಸ್ಥೆಗೆ ಫೌಂಡರ್ ಆಗಿದ್ದು, ಇಲ್ಲಿ ದೇಹ ಮತ್ತು ಮನಸ್ಸಿಗೆ ಯಾವುದೇ ರೀತಿಯಲ್ಲೂ ನೋವಾಗದಂತೆ ವ್ಯಸನಮುಕ್ತಗೊಳಿಸುವುದು ಸಂಸ್ಥೆಯ ಉದ್ದೇಶವಾಗಿದೆ.
>
> -ಎಸ್.ಬಸವರಾಜು,
> ಸಂಸ್ಥಾಪಕ ಅಧ್ಯಕ್ಷ
> ಬಸವ ಮಾರ್ಗ ಫೌಂಡೇಷನ್

ಅಶೋಕ್ ಹಾಜರಿದ್ದರೂ ಡೋಂಟ್ ಕೇರ್

ನಾನೇ ನಿಜವಾದ ವಿರೋಧ ಪಕ್ಷದ ನಾಯಕ; ನನಗೆ ಉಪ ಸಭಾಪತಿ ಪಕ್ಕದ 'ಕುರ್ಚಿ' ನೀಡಿ!


ಯತ್ನಾಳ್ (ಸಾಂದರ್ಭಿಕ ಚಿತ್ರ)

ಬೆಳಗಾವಿ, ಡಿ.9– ನಾನು ನಿಜವಾದ ವಿರೋಧ ಪಕ್ಷದ ನಾಯಕ, ನನಗೆ ವಿಧಾನ ಸಭೆಯಲ್ಲಿ ಉಪ ಸಭಾಪತಿಯ ಪಕ್ಕದಲ್ಲಿನ ಕುರ್ಚಿ ನೀಡಿ ಎಂದು ಬಿಜೆಪಿಯಿಂದ ಉಚ್ಚಾಟಿತಗೊಂಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಗ್ರಹಿಸಿದ್ದಾರೆ.

ಬೆಳಗಾವಿ ಅಧಿವೇಶನದಲ್ಲಿ ಮಾತನಾಡಿದ ಅವರು, ತಮಗೆ ಮತ್ತು ಬಿಜೆಪಿಯಿಂದ ಉಚ್ಚಾಟಿಸಲ್ಪಟ್ಟಿರುವ ಇತರ ಇಬ್ಬರು ಶಾಸಕರಿಗೆ ಅವರ ಹಿರಿತನವನ್ನು ಪರಿಗಣಿಸಿ ಮುಂದಿನ ಸಾಲಿನಲ್ಲಿ ಕುಳಿತುಕೊಳ್ಳಲು ವ್ಯವಸ್ಥೆ ಮಾಡುವಂತೆ ಯತ್ನಾಳ್ ಸಭಾಪತಿಗೆ ಮನವಿ ಮಾಡಿದರು.

ಈ ವರ್ಷದ ಆರಂಭದಲ್ಲಿ ಬಿಜೆಪಿಯಿಂದ ಉಚ್ಚಾಟಿಸಲ್ಪಟ್ಟ ನಂತರ ಯತ್ನಾಳ್, ಎಸ್.ಟಿ. ಸೋಮಶೇಖರ್ ಮತ್ತು ಎ. ಶಿವರಾಮ್ ಹೆಬ್ಬಾರ್ ಅವರನ್ನು ಹಿಂದಿನ ಬೆಂಚ್‌ಗಳಿಗೆ ವರ್ಗಾಯಿಸಲಾಗಿದೆ. ಹಿರಿಯ ಶಾಸಕರನ್ನು ಹಿಂದಿನ ಬೆಂಚುಗಳಲ್ಲಿ ಕೂರಿಸುವ ಮೂಲಕ ಅವಮಾನಿಸಲಾಗಿದೆ. ಹಿಂದಿನ ಅಧಿವೇಶನದಲ್ಲೂ ಹೀಗೆ ಮಾಡಲಾಗಿತ್ತು.

ನಾವು ಐದರಿಂದ ಆರು ಬಾರಿ ಆಯ್ಕೆಯಾಗಿದ್ದೇವೆ, ನಮ್ಮನ್ನು ಮುಂದಿನ ಸಾಲಿನಲ್ಲಿ ಕೂರಿಸಲು ವ್ಯವಸ್ಥೆ ಮಾಡಬೇಕು ಎಂದು ಯತ್ನಾಳ್ ಹೇಳಿದರು. ಆಸನ ವ್ಯವಸ್ಥೆಯನ್ನು ಮರುಪರಿಶೀಲಿಸುವಂತೆ ಸ್ಪೀಕರ್‌ಗೆ ಮನವಿ ಮಾಡಿದ ಅವರು, ನಾಳೆಯೊಳಗೆ ಈ ವಿಷಯದಲ್ಲಿ ಸಕಾರಾತ್ಮಕ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಮಧ್ಯಪ್ರವೇಶಿಸಿದ ಸ್ಪೀಕರ್ ಯು.ಟಿ.ಖಾದರ್, ರಾಜಕೀಯದಲ್ಲಿ ಹಿರಿಯರು ಅಥವಾ ಕಿರಿಯರು ಇಲ್ಲ ಎಂದು ಯತ್ನಾಳ್‌ಗೆ ಹೇಳಿದರು. ಹಿರಿತನದ ಆಧಾರದ ಮೇಲೆ ಸ್ಥಾನಗಳನ್ನು ಹಂಚಲಾಗುವುದಿಲ್ಲ, ಬಹುಮತ ಹೊಂದಿರುವವರಿಗೆ ಸದನದಲ್ಲಿ ಬೆಂಚುಗಳು ಸಿಗುತ್ತವೆ ಮತ್ತು ಕಡಿಮೆ ಸಂಖ್ಯೆಯ ಬಲವಿರುವವರಿಗೆ ವಿರೋಧ ಪಕ್ಷದ ಬೆಂಚುಗಳು ಸಿಗುತ್ತವೆ ಎಂದು ಅವರು ಹೇಳಿದರು.

ಯತ್ನಾಳ್ ಅವರಿಗೆ ಬಿಜೆಪಿಯಲ್ಲಿದ್ದಾಗ ಮುಂಭಾಗದ ಆಸನವನ್ನು ನೀಡಲಾಗಿತ್ತು ಎಂದು ಹೇಳಿದ ಸ್ಪೀಕರ್, ಈಗ ಆ ಪಕ್ಷದಿಂದ ಹೊರಗಿದ್ದೀರಾ ಏನು ಮಾಡಬಹುದು ಎಂದು ಪ್ರಶ್ನಿಸಿದರು. ನೀವು (ಯತ್ನಾಳ್) ಆಡಳಿತ ಪಕ್ಷ ಅಥವಾ ವಿರೋಧ ಪಕ್ಷದ ಭಾಗವಾಗಿದ್ದರೆ, ನಿಮಗೆ ಆಯಾ ಕಡೆಗಳಲ್ಲಿ ಮುಂಚೂಣಿಯ ಸ್ಥಾನ ಸಿಗುತ್ತದೆ ಎಂದು ಸ್ಪೀಕರ್ ವಿವರಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಸದನದಲ್ಲಿ ಹಾಜರಿದ್ದರೂ, ತಾವು ವಿಧಾನಸಭೆಯಲ್ಲಿ ನಿಜವಾದ ವಿರೋಧ ಪಕ್ಷದ ನಾಯಕ ಎಂದು ಹೇಳಿಕೊಂಡರು. ನಾನು ಯಾವುದೇ ಹೊಂದಾಣಿಕೆಯಲ್ಲಿ ತೊಡಗಿಸಿಕೊಳ್ಳುವ ವ್ಯಕ್ತಿಯಲ್ಲ. ನಾನು ಯಾರೊಂದಿಗೂ ಯಾವುದೇ ಅಡ್ಜಸ್ಟ್‌ಮೆಂಟ್ ಮಾಡಿಕೊಂಡಿಲ್ಲ ಎಂದರು.

ನಾನು ಮುಖ್ಯಮಂತ್ರಿ ಕಚೇರಿಗೆ ಹೋಗಿಲ್ಲ, ಯಾವುದೇ ಸಚಿವರಿಗೆ ಯಾವುದೇ ವಿನಂತಿಗಳನ್ನು ಮಾಡಿಲ್ಲ. ಆದ್ದರಿಂದ ನಾನು ನಿಜವಾದ ವಿರೋಧ ಪಕ್ಷದ ನಾಯಕ ಮತ್ತು ನೀವು ನನಗೆ ಉಪಸಭಾಪತಿಯ ಪಕ್ಕದ ಸ್ಥಾನವನ್ನು ನೀಡಬಹುದು (ಇದು ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕನಿಗೆ ನಿಗದಿಪಡಿಸಲಾದ ಸ್ಥಾನ) ಎಂದು ಅವರು ಹೇಳಿದರು.

ಎಲ್ಲವೂ ಸಾಮಾನ್ಯ ಸ್ಥಿತಿಗೆ

ಎಲ್ಲಾ ವಿಮಾನ ಸೇವೆಗಳ ಕಾರ್ಯಾಚರಣೆ ಸ್ಥಿರ: ಇಂಡಿಗೋ ಸಿಇಓ ಘೋಷಣೆ



ನವದೆಹಲಿ, ಡಿ.9– ಕಳೆದೊಂದು ವಾರದಿಂದ ತೀವ್ರ ಅಡಚಣೆ ಗೊಳಗಾಗಿದ್ದ ಇಂಡಿಗೋ ವಿಮಾನ ಸೇವೆಗಳಲ್ಲಿನ ಗೊಂದಲ ಕೊನೆಗೂ ನಿವಾರಣೆಯಾಗಿದ್ದು, ಇಂದು ಎಂದಿನಂತೆ ವಿಮಾನ ಸೇವೆಗಳು ಸಾಮಾನ್ಯ ಸ್ಥಿತಿಗೆ ಬಂದಿವೆ ಎನ್ನಲಾಗಿದೆ.

ಇಂಡಿಗೋ ವಿಮಾನಯಾನ ಸಂಸ್ಥೆ ಸಿಇಓ ಪೀಟರ್ ಆಲ್ಬರ್ಸ್, ಇಂಡಿಗೋ ಮತ್ತೆ ತನ್ನ ಕಾರ್ಯತಂತ್ರ ಆರಂಭಿಸಿದೆ. ಎಂದಿನಂತೆ ಸ್ಥಿರ ಕಾರ್ಯಾಚರಣೆ ಸಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪೀಟರ್ ಆಲ್ಬರ್ಸ್, ನಿಮ್ಮ ವಿಮಾನಯಾನ ಸಂಸ್ಥೆ ಇಂಡಿಗೋ ಮತ್ತೆ ತನ್ನ ಕಾರ್ಯ ತಂತ್ರ ಆರಂಭಿಸಿದೆ ಮತ್ತು ನಮ್ಮ ಕಾರ್ಯಾಚರಣೆಗಳು ಸ್ಥಿರವಾಗಿವೆ. ಪ್ರಮುಖ ಕಾರ್ಯಾಚರಣೆಯ ಅಡಚಣೆ ಸಂಭವಿಸಿದಾಗ ನಾವು ನಿಮ್ಮನ್ನು ನಿರಾಸೆ ಗೊಳಿಸಿದ್ದೇವೆ ಮತ್ತು ಅದಕ್ಕಾಗಿ ನಾವು ವಿಷಾದಿಸುತ್ತೇವೆ ಎಂದು ತಿಳಿಸಲಾಗಿದೆ.

ನಾವು ರದ್ದತಿಗಳನ್ನು ರದ್ದುಗೊಳಿಸಲು ಸಾಧ್ಯವಾಗದಿದ್ದರೂ, ನಮ್ಮ ಇಡೀ ಇಂಡಿಗೋ ತಂಡವು ತುಂಬಾ ಶ್ರಮಿಸುತ್ತಿರುವುದರಿಂದ, ವಿಮಾನಯಾನ ಸಂಸ್ಥೆಯು ಸಿಕ್ಕಿಬಿದ್ದ ಪ್ರಯಾಣಿಕರನ್ನು ನೋಡಿಕೊಂಡಿದೆ. ರದ್ದಾದ ಟಿಕೆಟ್‌ಗಳಿಗೆ ಯಾವುದೇ ಪ್ರಶ್ನೆಗಳನ್ನು ಕೇಳಲಾಗಿಲ್ಲ ಮತ್ತು ಲಗೇಜ್ ಅನ್ನು ಅವರ ಸರಿಯಾದ ಮಾಲೀಕರಿಗೆ ಮರುಸ್ಥಾಪಿಸುತ್ತಿದೆ' ಎಂದು ಹೇಳಿಕೆಯಲ್ಲಿ ವಿವರಿಸಲಾಗಿದೆ.

ತಕ್ಷಣದ ಬಿಕ್ಕಟ್ಟನ್ನು ನಿಭಾಯಿಸಲಾಗಿದೆ ಎಂದು ಹೇಳಿದ ಅವರು, ವಿಮಾನಯಾನ ಸಂಸ್ಥೆಯು ಇದಕ್ಕೆ ಕಾರಣವೇನು. ಕಲಿಯಬೇಕಾದ ಪಾಠಗಳು ಮತ್ತು ಇದರಿಂದ ಹೇಗೆ ಬಲವಾಗಿ ಹೊರಹೊಮ್ಮುವುದು ಎಂಬುದರ ಮೇಲೆ ಆಂತರಿಕವಾಗಿ ಗಮನಹರಿಸಲು ಪ್ರಾರಂಭಿಸಿದೆ ಎಂದು ತಿಳಿಸಿದೆ.

ಸನ್ಮಾನ


ಭಾರತೀಯ ದಲಿತ ಸಾಹಿತ್ಯ ಅಕಾಡೆಮಿ ವತಿಯಿಂದ ಕೊಡಮಾಡುವ 'ಡಾ.ಅಂಬೇಡ್ಕರ್ ಫೆಲೋಶಿಪ್' ರಾಷ್ಟ್ರೀಯ ಪ್ರಶಸ್ತಿಗೆ ಭಾಜನರಾಗಿರುವ ಸಮಾಜ ಸೇವಕ ಮುರುಡಗಳ್ಳಿ ಮಹದೇವ್ ಹಾಗೂ ರಂಗಭೂಮಿ ಕಲಾವಿದ ಮುಳ್ಳೂರು ದೇವರಾಜು ಅವರನ್ನು ಅಶೋಕ ಪುರಂ ದೊಡ್ಡ ಗರಡಿ ಅಧ್ಯಕ್ಷ ಆರ್.ಸಿ.ಮಹೇಶ್, ಪೈ.ಬಾಲಣ್ಣ, ಉದ್ಯಮಿ ರಮೇಶ್, ಪೈ.ಹರಿ ದಾಸ್, ಪೈ.ಸುನಿಲ್, ಪೈ.ಅಭಿಷೇಕ್, ಛಲವಾದಿ ಮಹಾಸಭಾ ನಗರಾಧ್ಯಕ್ಷ ಎನ್.ಶಿವು, ಪೈ.ಶಿವು, ಶೆಟ್ಟಿನಾಯ ಕನಹಳ್ಳಿ ಸಿದ್ದೇಶ್, ರಂಗಭೂಮಿ ಕಲಾವಿದ ಎಂ.ನವೀನ್ ಗೆಜ್ಜಗಳ್ಳಿ ಮತ್ತಿತರರು ಅಭಿನಂದಿಸಿದರು.

ಎಸ್‌ಐಆರ್‌ಗೆ ಅಸಹಕಾರ ತೋರಿದ ರಾಜ್ಯಗಳಿಗೆ ಸುಪ್ರೀಂಕೋರ್ಟ್ ತರಾಟೆ; ಬಿಎಲ್‌ಓಗಳಿಗೆ ಬೆದರಿಕೆ ತಡೆಯುವಂತೆ ಇಸಿಐಗೆ ಸೂಚನೆ

ನವದೆಹಲಿ, ಡಿ.9– ಪಶ್ಚಿಮ ಬಂಗಾಳ ಸೇರಿದಂತೆ ದೇಶದ ಹಲವು ರಾಜ್ಯಗಳಲ್ಲಿ ಭಾರತೀಯ ಚುನಾವಣಾ ಆಯೋಗ (ಇಸಿಐ) ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ನಡೆಸುತ್ತಿದ್ದು, ಬೂತ್ ಮಟ್ಟದ ಅಧಿಕಾರಿಗಳಿಗೆ(ಬಿಎಲ್‌ಒ) ಬೆದರಿಕೆ ಹಾಕಲಾಗುತ್ತಿದೆ ಮತ್ತು ಎಸ್‌ಐಆರ್‌ಗೆ ಅಡ್ಡಿಪಡಿಸಲಾಗುತ್ತಿದೆ ಎಂಬ ವರದಿಗಳನ್ನು ಸುಪ್ರೀಂಕೋರ್ಟ್ ಮಂಗಳವಾರ ಗಂಭೀರವಾಗಿ ಪರಿಗಣಿಸಿದೆ.

ಇದೇ ವೇಳೆ ಎಸ್‌ಐಆರ್‌ಗೆ ಸಹಕಾರ ನೀಡದ ಕೆಲವು ರಾಜ್ಯ ಸರ್ಕಾರಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡ ಸುಪ್ರೀಂ ಕೋರ್ಟ್, ಬಿಎಲ್‌ಒಗಳು ಬೆದರಿಕೆ ಎದುರಿಸುತ್ತಿರುವ ಅಥವಾ ಅಧಿಕಾರಿಗಳು ಎಸ್‌ಐಆರ್ ಪ್ರಕ್ರಿಯೆಯನ್ನು ಕೈಗೊಳ್ಳುವಲ್ಲಿ ಅಡೆತಡೆಗಳನ್ನು ಎದುರಿಸುವ ಯಾವುದೇ ಸಂದರ್ಭವನ್ನು ತಕ್ಷಣವೇ ತನ್ನ ಗಮನಕ್ಕೆ ತರುವಂತೆ ಇಸಿಐಗೆ ನಿರ್ದೇಶಿಸಿದೆ. ಅಲ್ಲದೆ ಅಂತಹ ವಿಷಯಗಳನ್ನು ನಮ್ಮ ಗಮನಕ್ಕೆ ತಂದರೆ, ನಾವು ಸೂಕ್ತ ಆದೇಶಗಳನ್ನು ರವಾನಿಸುತ್ತೇವೆ ಎಂದು ಸುಪ್ರೀಂಕೋರ್ಟ್ ಹೇಳಿದೆ.

ಪರಿಸ್ಥಿತಿಯನ್ನು ಪರಿಹರಿಸಲು ವಿಫಲವಾದರೆ ಅರಾಜಕತೆಗೆ ಕಾರಣವಾಗಬಹುದು ಎಂದು ಸರ್ವೋಚ್ಚ ನ್ಯಾಯಾಲಯ ಎಚ್ಚರಿಸಿದೆ ಮತ್ತು ಮತದಾರರ ಪಟ್ಟಿಯ ಸಮಗ್ರ ಪರಿಷ್ಕರಣಾ ಪ್ರಕ್ರಿಯೆ ಸುಗಮ ನಡೆಯುವುದನ್ನು ಖಚಿತಪಡಿಸಿಕೊಳ್ಳಲು ಕಠಿಣ ಕ್ರಮಗಳನ್ನು ತೆಗೆದುಕೊಳ್ಳುವಂತೆ ಇಸಿಐಗೆ ಸೂಚಿಸಿದೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ತೊಡಗಿರುವ ಬಿಎಲ್‌ಓಗಳು ಮತ್ತು ಇತರ ಸಿಬ್ಬಂದಿ ಎದುರಿಸುತ್ತಿರುವ ಬೆದರಿಕೆಗಳನ್ನು ತಡೆಯಲು ಅಗತ್ಯವಿರುವ ಎಲ್ಲಾ ಸಾಂವಿಧಾನಿಕ ಅಧಿಕಾರವನ್ನು ಚುನಾವಣಾ ಆಯೋಗ ಹೊಂದಿದೆ ಎಂದು ಸುಪ್ರೀಂಕೋರ್ಟ್ ಒತ್ತಿ ಹೇಳಿದೆ.

ಹಾರ್ದಿಕ್ ಪಾಂಡ್ಯ ಅಬ್ಬರ: ದ.ಆಫ್ರಿಕಾ ವಿರುದ್ಧ ಭಾರತಕ್ಕೆ ಭರ್ಜರಿ ಜಯ



ಕಟಕ್, ಡಿ.9– ಹಾರ್ದಿಕ್ ಪಾಂಡ್ಯ ಅವರ ಆಲ್‌ರೌಂಡ್ ಆಟದ ನೆರವಿನಿಂದ ಭಾರತ, ದಕ್ಷಿಣ ಆಫ್ರಿಕಾ ವಿರುದ್ಧ 101 ರನ್‌ಗಳ ಭರ್ಜರಿ ಜಯ ಸಾಧಿಸಿ ಟೂರ್ನಿಯಲ್ಲಿ ಶುಭಾರಂಭ ಮಾಡಿದೆ. ಆ ಮೂಲಕ 5 ಪಂದ್ಯಗಳ ಟಿ20 ಸರಣಿಯಲ್ಲಿ 1–0 ಅಂತರದಿಂದ ಮುನ್ನಡೆ ಸಾಧಿಸಿದೆ.

ಇಲ್ಲಿನ ಬಾರಾಬತಿ ಕ್ರೀಡಾಂಗಣದಲ್ಲಿ ನಡೆದ ಮೊದಲ ಟಿ20 ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 175 ರನ್ ಗಳಿಸಿತ್ತು. ಸವಾಲಿನ ಗುರಿ ಬೆನ್ನತ್ತಿದ ದಕ್ಷಿಣ ಆಫ್ರಿಕಾ 12.3 ಓವರ್ ಗಳಲ್ಲೇ ಸುಸ್ತಾಗಿ 74 ರನ್‌ಗಳಿಗೆ ಆಲೌಟ್ ಆಯಿತು. ಹೀಗಾಗಿ ಟಾಸ್ ಗೆದ್ದು ಫೀಲ್ಡಿಂಗ್ ಆಯ್ದುಕೊಂಡಿದ್ದ ದಕ್ಷಿಣ ಆಫ್ರಿಕಾ ತಂಡದ ಲೆಕ್ಕಾಚಾರ ಉಲ್ಟಾಪಲ್ಟಾ ಆಯಿತು.

ತಂಡದ ಪರ ಡಿವಾಲ್ಡ್ ಬ್ರೆವಿಸ್ 22 ರನ್ ಗಳಿಸಿದ್ದು ಗರಿಷ್ಠ ಮೊತ್ತವಾಯಿತು. ಏಡನ್ ಮಾರ್ಕ್‌ಮ್, ಟ್ರಿಸ್ಟನ್ ಸ್ಟಬ್ಸ್ ತಲಾ 14, ಮಾರ್ಕೋ ಯಾನ್ಸನ್ 12 ರನ್ ಗಳಿಸಿದ್ದು ಬಿಟ್ಟರೇ ಉಳಿದವರು ಭಾರತೀಯ ಬೌಲರ್‌ಗಳ ಕರಾರುವಾಕ್ ಬೌಲಿಂಗ್ ದಾಳಿಗೆ ತತ್ತರಿಸಿ ಎರಡಂಕಿ ಮೊತ್ತ ದಾಖಲಿಸಲು ಸಾಧ್ಯವಾಗದೇ ಪೆವಿಲಿಯನ್ ಪರೇಡ್ ನಡೆಸಿದರು.

ಭಾರತದ ಪರ ಅರ್ಷದೀಪ್ ಸಿಂಗ್, ಜಸ್ಪ್ರೀತ್ ಬುಮ್ರಾ, ವರುಣ್ ಚಕ್ರವರ್ತಿ, ಅಕ್ಷರ್ ಪಟೇಲ್ ತಲಾ 2, ಉಳಿದೆರಡು ವಿಕೆಟ್‌ಗಳನ್ನು ಹಾರ್ದಿಕ್ ಪಾಂಡ್ಯ ಮತ್ತು ಶಿವಂ ದುಬೆ ಅವರು ಹಂಚಿಕೊಂಡರು. ಇದೇ ವೇಳೆ ಟಿ20 ಮಾದರಿಯಲ್ಲಿ ಬೂಮ್ರಾ 81ನೇ ಪಂದ್ಯದಲ್ಲಿ 100 ವಿಕೆಟ್ ಮೈಲಿಗಲ್ಲು ದಾಟಿದರು.

ಇದಕ್ಕೂ ಮುನ್ನಾ ಮೊದಲು ಬ್ಯಾಟಿಂಗ್ ಮಾಡಿದ ಭಾರತದ ಪರ ಶುಭ್‌ಮನ್ ಗಿಲ್ ಮೊದಲ ಓವರ್‌ನಲ್ಲೇ 4 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ ಬಂದ ನಾಯಕ ಸೂರ್ಯಕುಮಾರ್ ಯಾದವ್ ಬಂದಷ್ಟೇ ವೇಗವಾಗಿ 12 ರನ್ ಗಳಿಸಿ ನಿರ್ಗಮಿಸಿದರು. ಇದರ ಬೆನ್ನಲ್ಲೇ ಉತ್ತಮವಾಗಿ ಆಡುತ್ತಿದ್ದ ಅಭಿಷೇಕ್ ಶರ್ಮಾ 2 ಬೌಂಡರಿ, 1 ಸಿಕ್ಸರ್ ಒಳಗೊಂಡ 17 ರನ್ ಗಳಿಸಿ ಔಟಾದರು. ನಂತರ ಬಂದ ತಿಲಕ್ ವರ್ಮಾ ಕೂಡ 26 ರನ್ ಗಳಿಸಿ ಬಹುಬೇಗ ವಿಕೆಟ್ ಒಪ್ಪಿಸಿ ನಿರಾಸೆ ಮೂಡಿಸಿದರು.

ಪಾಂಡ್ಯ ಸ್ಫೋಟಕ ಆಟ: ಈ ಹಂತದಲ್ಲಿ ಭಾರತದ ಇನ್ನಿಂಗ್ಸ್‌ಗೆ ವೇಗ ತಂದವರು ಆಲ್ರೌಂಡರ್ ಹಾರ್ದಿಕ್ ಪಾಂಡ್ಯ. ಕೇವಲ 25 ಎಸೆತಗಳಲ್ಲಿ ಅರ್ಧಶತಕ ಪೂರೈಸಿದ ಅವರು 28 ಎಸೆತಗಳಲ್ಲಿ 6 ಬೌಂಡರಿ ಮತ್ತು 4 ಸಿಕ್ಸರ್ ಒಳಗೊಂಡ 59 ರನ್ ಗಳಿಸಿ ನಾಟೌಟ್ ಆಗಿ ಉಳಿದರು. ಉಳಿದಂತೆ ಅಕ್ಷರ್ ಪಟೇಲ್ 23, ಶಿವಂ ದುಬೆ 11, ಜಿತೇಶ್ ಶರ್ಮಾ 10 ರನ್ ಗಳಿಸಿದರು. ದಕ್ಷಿಣ ಆಫ್ರಿಕಾ ಪರ ಲುಂಗಿ ಎನ್‌ಗಿಡಿ 3, ಸಿಂಪಬ್ಲಾ 2, ಡೊನೊವನ್ ಫೆರೀರಾ ಒಂದು ವಿಕೆಟ್ ಪಡೆದರು. ಹಾರ್ದಿಕ್ ಪಾಂಡ್ಯ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಟೆಕ್ ದೈತ್ಯ ಮೈಕ್ರೋಸಾಫ್ಟ್ ಮೆಗಾ ಹೂಡಿಕೆ: 'ಎಐ 1st ಫ್ಯೂಚರ್'ಗಾಗಿ 1.5 ಲಕ್ಷ ಕೋಟಿ ರೂ. ಬಂಡವಾಳ

ಬೆಂಗಳೂರಿನಲ್ಲಿ ಎಐ ಘಟಕ!

ನವದೆಹಲಿ: ಜಾಗತಿಕ ಟೆಕ್ ದೈತ್ಯ ಮೈಕ್ರೋಸಾಫ್ಟ್ ಸಂಸ್ಥೆ ಭಾರತದಲ್ಲಿ ಬಹುದೊಡ್ಡ ಪ್ರಮಾಣದ ಹೂಡಿಕೆ ಮಾಡುತ್ತಿದ್ದು, ತನ್ನ ಎಐ 1st ಫ್ಯೂಚರ್‌ಗಾಗಿ ಬರೊಬ್ಬರಿ 1.5 ಲಕ್ಷ ಕೋಟಿ ರೂ ಬಂಡವಾಳ ಹೂಡಿಕೆ ಮಾಡುತ್ತಿದೆ.

ಮೈಕ್ರೋಸಾಫ್ಟ್ ಸಿಇಓ ಸತ್ಯ ನಾಡೆಲ್ಲಾ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ಅಮೆರಿಕ ಮೂಲದ ಸಾಫ್ಟ್‌ವೇರ್ ದೈತ್ಯ ಸಂಸ್ಥೆಯು ಏಷ್ಯಾದಲ್ಲಿ ಇದುವರೆಗಿನ ಅತಿದೊಡ್ಡ ಹೂಡಿಕೆಯನ್ನು ಬದ್ಧಗೊಳಿಸಿದರು. ಅದರಂತೆ ಕೃತಕ ಬುದ್ಧಿಮತ್ತೆ–ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸುವ ಕಡೆಗೆ 17.5 ಬಿಲಿಯನ್ ಯುಎಸ್ ಡಾಲರ್ ಅಥವಾ ರೂ. 1.5 ಲಕ್ಷ ಕೋಟಿ ರೂ ಹೂಡಿಕೆ ಒಪ್ಪಂದವನ್ನು ಸತ್ಯ ನಾಡೆಲ್ಲ ಬದ್ಧಗೊಳಿಸಿದರು.

ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ನೀಡಿರುವ ಸತ್ಯ ನಾಡೆಲ್ಲಾ ಅವರು, 'ಭಾರತದ ಎಐ ಅವಕಾಶದ ಕುರಿತು ಸ್ಫೂರ್ತಿದಾಯಕ ಮಾತುಕತೆಗಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದಗಳು. ದೇಶದ ಮಹತ್ವಾಕಾಂಕ್ಷೆಗಳನ್ನು ಬೆಂಬಲಿಸಲು, ಮೈಕ್ರೋಸಾಫ್ಟ್ ಏಷ್ಯಾದಲ್ಲಿ ಇದುವರೆಗಿನ ನಮ್ಮ ಅತಿದೊಡ್ಡ ಹೂಡಿಕೆಯಾದ ಯುಎಸ್$ 17.5 ಬಿಲಿಯನ್ ಅನ್ನು ಭಾರತದ ಎಐ–ಮೊದಲ ಭವಿಷ್ಯಕ್ಕೆ ಅಗತ್ಯವಿರುವ ಮೂಲಸೌಕರ್ಯ, ಕೌಶಲ್ಯ ಮತ್ತು ಸಾರ್ವಭೌಮ ಸಾಮರ್ಥ್ಯಗಳನ್ನು ನಿರ್ಮಿಸಲು ಸಹಾಯ ಮಾಡಲು ಬದ್ಧವಾಗಿದೆ ಎಂದು ನಾಡೆಲ್ಲಾ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಎಐ ಮೂಲಸೌಕರ್ಯ ಘಟಕ: ಇದೇ ವೇಳೆ ಇಬ್ಬರು ನಾಯಕರ ಭೇಟಿಯ ಸ್ವಲ್ಪ ಸಮಯದ ನಂತರ ಬಿಡುಗಡೆಯಾದ ಪತ್ರಿಕಾ ಹೇಳಿಕೆಯಲ್ಲಿ, ಮೈಕ್ರೋಸಾಫ್ಟ್ ಭಾರತದಲ್ಲಿ ಹೂಡಿಕೆ ಮಾಡಲಿರುವ ಯುಎಸ್$ 17.5 ಬಿಲಿಯನ್ ಮುಂದಿನ ಎರಡು ವರ್ಷ ಗಳಲ್ಲಿ ಬೆಂಗಳೂರಿನಲ್ಲಿ ಕ್ಲೌಡ್ ಮತ್ತು ಎಐ ಮೂಲಸೌಕರ್ಯವನ್ನು ಸ್ಥಾಪಿಸಲು ಯುಎಸ್$ 3 ಬಿಲಿಯನ್ ಹೂಡಿಕೆಯನ್ನು ಅನುಸರಿಸುತ್ತದೆ ಎಂದು ಹೇಳಿದೆ. ಇದರಲ್ಲಿ ಕೌಶಲ್ಯವರ್ಧನೆ ಮತ್ತು ಹೊಸ ಡೇಟಾ ಕೇಂದ್ರಗಳು ಸೇರಿವೆ. ಕಂಪನಿಯು ಭಾರತದಲ್ಲಿ ಅತಿದೊಡ್ಡ ಹೈಪರ್‌ಸ್ಕೇಲ್ ಉಪಸ್ಥಿತಿಯನ್ನು ಹೊಂದಿದೆ ಎಂದು ಹೇಳಲಾಗಿದೆ

ಭಾರತವು ತನ್ನ ಎಐ ಪ್ರಯಾಣದಲ್ಲಿ ಒಂದು ಪ್ರಮುಖ ಕ್ಷಣದಲ್ಲಿ ನಿಂತಿದೆ... ಪ್ರಮಾಣದಲ್ಲಿ ಪ್ರಭಾವದಿಂದ ವ್ಯಾಖ್ಯಾನಿಸಲ್ಪಟ್ಟಿದೆ. ಮುನ್ನಡೆಸಲು ನಿರ್ಧರಿಸಲಾಗಿದೆ. ತಂತ್ರಜ್ಞಾನವು ಸಮಗ್ರ ಬೆಳವಣಿಗೆ ಮತ್ತು ಆರ್ಥಿಕ ಪರಿವರ್ತನೆಗೆ ವೇಗವರ್ಧಕವಾಗುತ್ತಿದ್ದಂತೆ, ದೇಶವು ಗಡಿನಾಡಿನ AI ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ. ಈ ಹಿನ್ನೆಲೆಯಲ್ಲಿ ಇಂದು ನಾವು ಏಷ್ಯಾದಲ್ಲಿ ನಮ್ಮ ಅತಿ ದೊಡ್ಡ ಹೂಡಿಕೆಯನ್ನು ಘೋಷಿಸುತ್ತಿದ್ದೇವೆ. ನಾಲ್ಕು ವರ್ಷಗಳಲ್ಲಿ ಯುಎಸ್$ 17.5 ಬಿಲಿಯನ್... ಎಂದು ಕಂಪನಿಯು ಹೇಳಿಕೆಯಲ್ಲಿ ತಿಳಿಸಿದೆ.

ನಾಲ್ಕು ವರ್ಷಗಳಲ್ಲಿ ಮೈಕ್ರೋಸಾಫ್ಟ್‌ನ ಸುಮಾರು ಯುಎಸ್$20 ಬಿಲಿಯನ್ ಹೂಡಿಕೆಯು ಜಾಗತಿಕ ಸಾಫ್ಟ್‌ವೇರ್ ದೈತ್ಯರಿಗೆ ಭಾರತದ ಉಬರ್–ಮೌಲ್ಯಯುತ ಮಾರುಕಟ್ಟೆಯ ಸ್ಥಾನವನ್ನು ಒತ್ತಿಹೇಳುತ್ತದೆ. ಇದು ಡಿಜಿಟಲ್ ಮೂಲಸೌಕರ್ಯವನ್ನು ನಿರ್ಮಿಸಲು ಸ್ಪರ್ಧಿಸುತ್ತಿದೆ ಎನ್ನಲಾಗಿದೆ.

ಭಾರತದಲ್ಲಿ ಅತಿ ದೊಡ್ಡ ಹೂಡಿಕೆ: ಅಕ್ಟೋಬರ್‌ನಲ್ಲಿ ಗೂಗಲ್ ಮುಖ್ಯಸ್ಥ ಸುಂದರ್ ಪಿಚೈ ಅವರು ಪ್ರಧಾನಿ ನರೇಂದ್ರ ಮೋದಿಯವರೊಂದಿಗೆ ಚರ್ಚೆ ನಡೆಸಿದ್ದರು. ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ತನ್ನ ಕೃತಕ ಬುದ್ಧಿಮತ್ತೆ ಕೇಂದ್ರಕ್ಕಾಗಿ ಅಮೆರಿಕ ತಂತ್ರಜ್ಞಾನ ದೈತ್ಯ ಮೈಕ್ರೋಸಾಫ್ಟ್‌ನ ಯೋಜನೆಗಳನ್ನು ಹಂಚಿಕೊಂಡಿದ್ದಾರೆ ಎಂದು ಹೇಳಿದರು, ಇದು ಅಮೆರಿಕ ಮೂಲದ ಕಂಪನಿಯ ಭಾರತ ದೇಶದಲ್ಲಿ ಇದುವರೆಗಿನ ಅತಿದೊಡ್ಡ ಹೂಡಿಕೆಯಾಗಿದೆ.

ಅಮೆರಿಕದ ಹೊರಗಿನ ಅದರ ಅತಿ ದೊಡ್ಡ ಕೇಂದ್ರವಾದ ವಿಶಾಖಪಟ್ಟಣದಲ್ಲಿ ಡೇಟಾ ಸೆಂಟರ್ ಮತ್ತು ಎಐ ಬೇಸ್‌ಗಾಗಿ ಗೂಗಲ್ ಅದಾನಿ ಗ್ರೂಪ್‌ನೊಂದಿಗೆ ಪಾಲುದಾರಿಕೆ ಮಾಡಿಕೊಂಡಿದೆ ಮತ್ತು ಮುಂದಿನ ಐದು ವರ್ಷಗಳಲ್ಲಿ $15 ಬಿಲಿಯನ್ ಹೂಡಿಕೆ ಮಾಡಲು ಯೋಜಿಸಿದೆ ಎಂದು ಹೇಳಿದೆ.

ಅಂದಹಾಗೆ ಮೈಕ್ರೋಸಾಫ್ಟ್ ಮಾತ್ರವಲ್ಲದೇ ಅಮೇಜಾನ್ ಸಂಸ್ಥೆ ಕೂಡ ಭಾರತದಲ್ಲಿ ಡೇಟಾ ಸೆಂಟರ್‌ಗಳನ್ನು ನಿರ್ಮಿಸಲು ಶತಕೋಟಿ ಹೂಡಿಕೆ ಮಾಡಿದೆ.

ನಕ್ಕರೆ ಅದೇ ಸ್ವರ್ಗ

ತಿಮ್ಮ : ಲೋ ಗುಂಡ... ಯಾಕೋ ಅವನು ನಿನ್ನನ್ನು ಮೂರ್ಖ ಪೆದ್ದ ನನ್ಮಗ, ಮುಠ್ಠಾಳ ಅಂತ ಬೈಯುತ್ತಿದ್ದರೂ ಸುಮ್ಮನೆ ಯೋಚಿಸುತ್ತಾ ನಿಂತಿದ್ದೀಯಲ್ಲ ಯಾಕೆ?

ಗುಂಡ : ಹಾಗಲ್ಲ... ಅವನಿಗೆ ನಿಜ ಸಂಗತಿ ಹೇಗೆ ಗೊತ್ತಾಯಿತು ಅಂತ ಯೋಚಿಸುತ್ತಿದ್ದೇನೆ.

ಮೈಸೂರು ಮಿತ್ರ

ಬುಧವಾರ, 10 ಡಿಸೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.


ಅಮೃತ ವಾಹಿನಿ..........

ಮುಗುಳ್ನಗೆ ಮತ್ತು ಮೌನ ಇವೆರಡೂ ಅತ್ಯಂತ ಪ್ರಭಾವಿ ಸಾಧನಗಳು. ಮುಗುಳ್ನಗೆ ಸಮಸ್ಯೆಗಳನ್ನು ಬಗೆಹರಿಸಿದರೆ, ಮೌನವು ಸಾಕಷ್ಟು ಸಮಸ್ಯೆಗಳಿಂದ ನಮ್ಮನ್ನು ದೂರವಿರಿಸುತ್ತದೆ.

ವೇದ ಸುಳ್ಳಾದರೂ { ಕುಂಬಾರನಿಗೆ ವರುಷ,
ಗಾದೆ ಸುಳ್ಳಾಗದು { ದೊಣ್ಣೆಗೆ ನಿಮಿಷ

ನಿಮ್ಮ ಪತ್ರಗಳು

ನಂಜನಗೂಡಿನ ಪ್ರಮುಖ ವೃತ್ತ ಅಥವಾ ರಸ್ತೆಗೆ 'ಬಿ.ವಿ ಪಂಡಿತರ ಹೆಸರಿಡಲಿ'



ಮಾನ್ಯರೆ,

ಶತಮಾನದಷ್ಟು ಹಳೆಯದಾದ ಸಾಂಪ್ರದಾಯಿಕ ಗಿಡಮೂಲಿಕೆಗಳಿಂದ ಪ್ರಾಚೀನ ಆಯುರ್ವೇದ ಪಳೆಯುಳಿಕೆ ಹೊಂದಿ ಉಳಿಸಿ, ಬೆಳೆಸಿ ಬಳಸುತ್ತಿರುವುದರಿಂದ ನಂಜನಗೂಡು ಹೆಸರು ವಿಶ್ವದ ಭೂಪಟದಲ್ಲಿ ವಿಶಿಷ್ಟ ಮನ್ನಣೆ ಪಡೆದಿದೆ.

ಇದಕ್ಕೆ ಮೂಲ ಕಾರಣಕರ್ತರು ಇಲ್ಲಿನ ಪ್ರಸಿದ್ಧ ಆಯುರ್ವೇದ ತಜ್ಞ ಸದ್ವೈದ್ಯಾ ಶಾಲಾ ಸ್ಥಾಪಕರು ಆಗಿದ್ದ ಬಿ.ವಿ ಪಂಡಿತರು. ಆಯುರ್ವೇದ ಔಷಧಗಳು ಹಾಗೂ ಸಾಂಪ್ರದಾಯಿಕ, ನೈಸರ್ಗಿಕ ಆರೋಗ್ಯ ಉತ್ಪನ್ನಗಳನ್ನು ರೂಪಿಸಿದ ಹಿರಿಮೆ ಇವರದು.

ದಂತಧಾವನ ಚೂರ್ಣ (ನಂಜನಗೂಡು ಹಲ್ಲು ಪುಡಿ) ಮೈಸೂರಿನ ಸ್ಥಳೀಯ ಕೈಗಾರಿಕೋದ್ಯಮದ ಹೆಗ್ಗುರುತು ಎಂದರೆ ಅತಿಶಯೋಕ್ತಿಯಾಗಲಾರದು. ಈ ಉತ್ಪನ್ನವು ರಾಜ್ಯದಲ್ಲೇ ಅತ್ಯಂತ ಹೆಚ್ಚು ಪ್ರಸಿದ್ಧಿ ಪಡೆದಿದೆ. ಈ ಹಲ್ಲುಪುಡಿ ರಾಜ್ಯದ ಕಡೆಯಾಚೆಗೂ ಕೂಡ ಮನೆ ಮಾತಾಗಿದೆ ಎಂಬುದು ಗಮನಾರ್ಹ.

ಇವರು ಪಟ್ಟಣದಲ್ಲಿ ಸ್ಥಾಪಿಸಿದ ಸದ್ವೈದ್ಯಾ ಶಾಲಾ ನೂರು ವರ್ಷಗಳನ್ನು ಪೂರೈಸಿ ಮುನ್ನುಗ್ಗುತ್ತ ಸರಿ ಸುಮಾರು 200ಕ್ಕೂ ಹೆಚ್ಚು ಉತ್ಪನ್ನಗಳನ್ನು ತಯಾರಿಸುತ್ತ ಆಯುರ್ವೇದ ಆರೋಗ್ಯಕ್ಕೆ ಒತ್ತು ನೀಡುವ ಮೂಲಕ ಸಾಂಪ್ರದಾಯಿಕ ವಿಧಾನಗಳು ಮತ್ತು ಉತ್ತಮ ಗುಣಮಟ್ಟದ ಪದಾರ್ಥಗಳಿಗೆ ಆದ್ಯತೆ ನೀಡುತ್ತ ನೂರಾರು ಮಂದಿಗೆ ಉದ್ಯೋಗ ನೀಡುವ ಮೂಲಕ ಅವರ ಜೀವನ ಭದ್ರತೆಗೂ ಸಹಾಯವಾಗಿದೆ.

ಇಷ್ಟೆಲ್ಲಾ ಇತಿಹಾಸ, ದಾಖಲೆಗಳೆಲ್ಲದರ ನಡುವೆ ವಿಚಿತ್ರವೆಂದರೆ, ಸಾಕಷ್ಟು ಆಯುರ್ವೇದ ಔಷಧಗಳು ಹಾಗೂ ಆಹಾರ ಉತ್ಪನ್ನಗಳ ಮುಖೇನ ಸಾಮಾಜಿಕ ಸೇವೆ ಮಾಡಿದ ಇಲ್ಲಿನ ಸ್ಥಳೀಯರೇ ಆಗಿದ್ದ ಬಿ.ವಿ.ಪಂಡಿತರ ಹೆಸರು ನಂಜನಗೂಡು ಪಟ್ಟಣದ ಯಾವುದೊಂದು ವೃತ್ತ ಅಥವಾ ರಸ್ತೆಗಳಲ್ಲಿ ಇವತ್ತಿಗೂ ಕಾಣಸಿಗುವುದಿಲ್ಲ ಎಂದರೆ ಆಶ್ಚರ್ಯವೆನಿಸದೆ ಇರದು.

ಜನಪ್ರತಿನಿಧಿಗಳಾದವರು ತಮ್ಮ ಜವಾಬ್ದಾರಿಯನ್ನು ಈ ವಿಚಾರ ಸಂಬಂಧ ಸಂಪೂರ್ಣ ಮರೆತಿರುವುದು ಇಲ್ಲಿ ಸ್ಪಷ್ಟವಾಗಿ ಕಾಣುತ್ತಿದೆ. ಇದು ನಾಚಿಕೆಗೇಡಲ್ಲವೇ..?

ಧಾರ್ಮಿಕ, ಕೈಗಾರಿಕಾ, ವಾಣಿಜ್ಯ ಕ್ಷೇತ್ರವಾಗಿ ಬೆಳೆಯುತ್ತ ಮೈಸೂರಿನ ಉಪನಗರವಾಗಿ ಗುರುತಿಸಿಕೊಂಡಿರುವ ನಂಜನಗೂಡು ಪಟ್ಟಣದಲ್ಲಿ ಪ್ರಮುಖ ವೃತ್ತ ಅಥವಾ ರಸ್ತೆಯೊಂದಕ್ಕೆ ಬಿ.ವಿ ಪಂಡಿತರ ಹೆಸರಿಡುವ ಕಾರ್ಯ ಶೀಘ್ರ ಆಗಬೇಕಿದೆ.

ಇನ್ನಾದರೂ, ಸ್ಥಳೀಯ ಆಡಳಿತವಾದ ನಗರಸಭೆ ಹಾಗೂ ಕ್ಷೇತ್ರದ ಶಾಸಕ ದರ್ಶನ್ ಧ್ರುವನಾರಾಯಣ್ ಖುದ್ದು ಗಮನಹರಿಸಿ ಅಸಮಾನ್ಯ ಪ್ರತಿಭೆಯಾಗಿದ್ದ ಬಿ.ವಿ ಪಂಡಿತರ ಹೆಸರನ್ನು ಉಳಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಲು ಇನ್ನಾದರೂ ತಡ ಮಾಡದೆ ಕ್ರಮ ಕೈಗೊಳ್ಳಬೇಕಾಗಿದೆ.

–ಅನಿಲ್ ಕುಮಾರ್, ನಂಜನಗೂಡು.

ಮಸೂದೆ ಅಂಗೀಕಾರಕ್ಕಷ್ಟೇ ಅಧಿವೇಶನ

ಮಾನ್ಯರೆ,

ಅತ್ತ ಸಂಸತ್ತಿನ ಚಳಿಗಾಲದ ಅಧಿವೇಶನ ನಡೆಯುತ್ತಿರುವ ಹೊತ್ತಿನಲ್ಲಿ ಇತ್ತ ಬೆಳಗಾವಿಯಲ್ಲಿ ವಿಧಾನಸಭಾ ಅಧಿವೇಶನ ಆರಂಭವಾಗಿದೆ. ಇತ್ತೀಚಿನ ವರ್ಷಗಳಲ್ಲಿ ಯಾವುದೇ ಸದನದಲ್ಲಿ, ಯಾವುದೇ ವಿಷಯ, ಜನರ ಸಮಸ್ಯೆ, ಮಸೂದೆಗಳ ಬಗ್ಗೆ ರಚನಾತ್ಮಕ ಚರ್ಚೆ ನಡೆದದ್ದೇ ವಿರಳ ಎನ್ನುವಂತಿದೆ. ಸರ್ಕಾರ ತನಗೆ ಬೇಕಾದಂತೆ ಮಸೂದೆಗಳನ್ನು ಸಿದ್ಧಪಡಿಸಿರುತ್ತದೆ. ಇವುಗಳು ಕೆಲವೊಮ್ಮೆ ಜನರಿಗೆ ಮಾರಕ ಎನ್ನುವಂತಿರುತ್ತದೆ. ಹೀಗಿರುವಾಗ ಸದನದಲ್ಲಿ ವಿರೋಧ ಪಕ್ಷಗಳ ಸದಸ್ಯರು ಸರ್ಕಾರದ ಗಮನ ಸೆಳೆದು ಅಗತ್ಯ ತಿದ್ದುಪಡಿಗೆ ಒಳಪಡಿಸುವ ಕೆಲಸವಾಗಬೇಕು. ಆದರೆ ವಿರೋಧ ಪಕ್ಷಗಳು ಯಾವುದೋ ಸಂಬಂಧಪಡದ ವಿಷಯಗಳನ್ನು ಹಿಡಿದು ಚರ್ಚೆಗೆ ಒತ್ತಾಯಿಸುವುದು, ಸರ್ಕಾರ ಒಪ್ಪದಿದ್ದರೆ, ಸದನದಿಂದ ಹೊರ ನಡೆಯುವುದು ಸಾಮಾನ್ಯ ಎನ್ನುವಂತಾಗಿದೆ. ಇದರಿಂದ ಸರ್ಕಾರಗಳು ಯಾವುದೇ ಚರ್ಚೆ ಇಲ್ಲದೆ ಧ್ವನಿ ಮತದ ಮೂಲಕ ಮಸೂದೆ ಪಾಸು ಮಾಡುವ ವ್ಯವಸ್ಥೆ ಸರ್ಕಾರಕ್ಕೆ ವರದಾನವಾಗಿದೆ. ಸದಸ್ಯರು ಸದನಕ್ಕೆ ಹಾಜರಾಗಿ ಭತ್ಯ ಪಡೆಯಲು ಅರ್ಹರಾಗುತ್ತಾರೆ. ನಂತರ ಸದನದಿಂದ ಹೊರ ನಡೆಯುತ್ತಾರೆ. ಹಿಂದೆ ಪ್ರತಿ ವಿಷಯ, ಮಸೂದೆ ಬಗೆಗಿನ ಕೂಲಂಕುಶ ಚರ್ಚೆ ಪತ್ರಿಕೆಗಳ ಪುಟಗಳನ್ನು ತುಂಬಿಕೊಳ್ಳುತ್ತಿತ್ತು. ಈಗ ಅದು ಕೇವಲ ಒಂದು ಕಾಲಮ್‌ನಲ್ಲಿ ಮುಗಿಯುತ್ತಿದೆ. ಸರ್ಕಾರಕ್ಕೂ ಚರ್ಚೆ ಬೇಕಿಲ್ಲ, ಕೇವಲ ಮಸೂದೆಗಳನ್ನು ಅಂಗೀಕಾರ ಮಾಡಿಸಿಕೊಳ್ಳಲು ಅಧಿವೇಶನ ನಡೆಯುವುದು ಎನ್ನುವಂತಾಗಿದೆ. ಇದು ವಿಷಾದನೀಯ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಅಮೃತ ಬೇಕರಿ ಬಳಿ ತಂಗುದಾಣ ನಿರ್ಮಿಸಿ

ಮಾನ್ಯರೆ,

ಮೈಸೂರಿನ ಶ್ರೀರಾಂಪುರದ ಮಾರ್ಗದ ಅಮೃತ್ ಬೇಕರಿ ಬಳಿ ಬಸ್ ಪ್ರಯಾಣಿಕರ ತಂಗುದಾಣ ವಿತ್ತು. ಈಗ ಆ ನಿಲ್ದಾಣದ ಕುರುಹು ಇಲ್ಲದಂತಾಗಿದೆ. ಇದರಿಂದ ಯಾವ ಬಸ್ಸು ನಿಲ್ಲಿಸದೆ ಮುಂದೆ ಹೋಗುತ್ತವೆ. ಬಸ್‌ಗಾಗಿ ಮಳೆ ಬಿಸಿಲು ಎನ್ನದೇ ರಸ್ತೆಯಲ್ಲೇ ಕಾಯಬೇಕಾದ ಪರಿಸ್ಥಿತಿ ಇದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಈ ಸ್ಥಳದಲ್ಲಿ ಬಸ್ ತಂಗುದಾಣ ನಿರ್ಮಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಈ ಮೂಲಕ ಮನವಿ.

– ಎಂ.ಎಸ್. ಉಷಾ ಪ್ರಕಾಶ್, ಲೇಖಕಿ ಹಾಗೂ ಕವಯಿತ್ರಿ, ಮೈಸೂರು.

ಡಿಜಿಟಲ್ ಇ–ಸ್ಟಾಂಪ್ ವ್ಯವಸ್ಥೆ ಜಾರಿ ದಿಟ್ಟ ಹೆಜ್ಜೆ

ಮಾನ್ಯರೆ,

ಕಂದಾಯ ಇಲಾಖೆಯು ಡಿಜಿಟಲ್ ಇ–ಸ್ಟಾಂಪ್ ವ್ಯವಸ್ಥೆ ಜಾರಿಗೆ ತಂದು ದಿಟ್ಟ ಹೆಜ್ಜೆ ಇಟ್ಟಿದೆ. ಇದು ನಾಗರಿಕ ಸ್ನೇಹಿಯೂ ಆಗಿದೆ. ಇಂದಿಗೂ ತಾಲ್ಲೂಕು ಕೇಂದ್ರಗಳಲ್ಲಿ ನಾಗರಿಕರು ಸ್ಟಾಂಪ್ ಪಡೆಯಲು ಸರದಿಸಾಲಲ್ಲಿ ನಿಂತು ಪರದಾಡುತ್ತಿದ್ದಾರೆ. ಹೊಸ ವ್ಯವಸ್ಥೆಯಿಂದ ಮನೆಯಲ್ಲಿಯೆ ಕುಳಿತು ತಮ್ಮ ದಾಖಲೆಗಳನ್ನು ಪಡೆದುಕೊಳ್ಳಲಿದ್ದಾರೆ. ಸ್ಟಾಂಪ್ ಪಡೆಯುವಾಗ ಅವ್ಯವಹಾರ ಸಾಮಾನ್ಯವಾಗಿತ್ತು. ಇಲಾಖೆಗೆ ಇದು ತಲೆನೋವಾಗಿತ್ತು. ಹೊಸ ವ್ಯವಸ್ಥೆಯಿಂದ ಈ ಅಕ್ರಮಕ್ಕೆ ಕಡಿವಾಣ ಬೀಳಲಿದೆ.

–ಸಿದ್ದಲಿಂಗೇಗೌಡ, ಹೈರಿಗೆ ಗ್ರಾಮ, ಹೆಚ್.ಡಿ. ಕೋಟೆ ತಾ.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಮುದ್ದುರಾಮನು ಕಂಡ ಯೋಗ

ಬದುಕಿನ ಎಲ್ಲ ಆಯಾಮಗಳನ್ನು ನೋಡಿ ಪರೀಕ್ಷಿಸಿ ನುಡಿದಿರುವ ಮುದ್ದುರಾಮ ಯೋಗದ ಬಗೆಗೆ ಏನು ಹೇಳಿದ್ದಾನೆ ನೋಡೋಣ.

ನಿಜದರಿವಿಗಣಿಮಾಡಿ ತನ್ನನರಿವುದೆ ಯೋಗ,
ತನುಮನದ ಶುದ್ಧತೆಗೆ ಸಹಕಾರಿ ಯೋಗ.
'ಚಿತ್ತವೃತ್ತಿನಿರೋಧ' ಪತಂಜಲಿಯ ಸೂತ್ರವಿದು
ರೋಗಮಾರಕ ಯೋಗ ಮುದ್ದುರಾಮ.

ನಿಜವಾದ ಜ್ಞಾನ ಎಂದರೆ ತನ್ನನ್ನು ಅರಿತುಕೊಳ್ಳುವುದು. ಆ ನಿಜದ, ಎಂದರೆ ತನ್ನ ಆತ್ಮ ಸ್ವರೂಪದ ಅರಿವಿಗೆ ದೇಹ–ಮನಸ್ಸು–ಬುದ್ಧಿಗಳನ್ನು ಸಿದ್ಧಗೊಳಿಸುವ ಸ್ಥಿತಿಯನ್ನು ತಂದು ತನ್ಮೂಲಕ ತನ್ನನ್ನು ಅರಿತುಕೊಳ್ಳುವುದು ಯೋಗ. ದೇಹ ಸ್ವಾಭಾವಿಕವಾಗಿ ಮಾಲಿನ್ಯವನ್ನುಳ್ಳದ್ದು. ಮನಸ್ಸಿನಲ್ಲಿ ಕಾಮ, ಕ್ರೋಧ, ಲೋಭ, ಮದ, ಮೋಹ, ಮಾತ್ಸರ್ಯ ಮುಂತಾದ ಮಾಲಿನ್ಯವು ತುಂಬಿರುತ್ತದೆ. ಮನಸ್ಸಿನ ಶುದ್ಧತೆಗೆ ಯೋಗವು ಸಹಕಾರಿ. ಮನಸ್ಸಿನ ಕೊಳೆಯನ್ನು ತೊಳೆದು ನೈರ್ಮಲ್ಯವನ್ನು ತರುವ ಸಾಬೂನು ಯೋಗ. 'ಯೋಗಶ್ಚಿತ್ತವೃತ್ತಿ ನಿರೋಧಃ' ಎಂಬುದು ಪತಂಜಲಿಗಳು ಮಾಡಿರುವ, ಯೋಗದ ಲಕ್ಷಣವನ್ನು ತಿಳಿಸುವ ಸೂತ್ರ. ಚಿತ್ತ ಎಂದರೆ ಮನಸ್ಸು. ಅದರಲ್ಲಿ ಉಂಟಾಗುವ ವೃತ್ತಿಗಳನ್ನು ನಿಯಂತ್ರಿಸುವ ಶಾಸ್ತ್ರೀಯ ವಿಧಾನವೇ ಯೋಗ. ಯೋಗವನ್ನು ಗುರುಗಳ ಮಾರ್ಗದರ್ಶನದಲ್ಲಿ ಮಾಡಿದಾಗ ದೇಹದ ವ್ಯಾಧಿ (ರೋಗ)ಗಳನ್ನು ಮನಸ್ಸಿನ ಆಧಿ (ರೋಗ)ಗಳನ್ನೂ ನಿವಾರಿಸಿಕೊಳ್ಳಬಹುದು. ಆದ್ದರಿಂದ ಯೋಗವು ರೋಗಮಾರಕ ಎಂದು ಮುದ್ದುರಾಮನು ಹೇಳಿದ್ದಾನೆ.

ಮುಂದುವರಿದು ಅವನು ನುಡಿಯುತ್ತಾನೆ–
ರೋಗಮುಕ್ತತೆಯಿಂದ ಚೈತನ್ಯ ದೇಹದಲಿ;
ರಾಗ ಸಂಗತಿಯಿಂದ ಮನದಿ ಮಾಧುರ್ಯ.
ಯೋಗ ಸಾಧನೆಯಿಂದ ಚಿರಶಾಂತಿ ಜೀವದಲಿ
ಚಾಗದಿಂದುನ್ನತಿಯೊ ಮುದ್ದುರಾಮ॥

ಆರೋಗ್ಯಕ್ಕೆ ಮಿಗಿಲಾದ ಭಾಗ್ಯವಿಲ್ಲ. ಆರೋಗ್ಯವೆಂದರೆ ರೋಗಮುಕ್ತತೆ. ರೋಗ ಪ್ರಬಲವಾಗಿದ್ದಾಗ ಸಂಸಾರಿಯಾಗಲಿ ಸಂನ್ಯಾಸಿಯಾಗಲಿ, ಭಿಕ್ಷುಕನಾಗಲಿ ಲಕ್ಷ ಕೋಟ್ಯಧಿಪತಿಯಾಗಲಿ, ದೇಹದಲ್ಲಿ ಚೈತನ್ಯ, ಉಲ್ಲಾಸ ಇರುವುದಿಲ್ಲ. ಬುದ್ಧಿ ಧ್ಯಾನದಲ್ಲಿ ಪಸರಿಸುವುದಿಲ್ಲ. ರೋಗ ಮುಕ್ತನಾದಾಗಲೇ ಅದೆಲ್ಲ ಸಾಧ್ಯ. ಹಾಗೆ ಆರೋಗ್ಯ ಭಾಗ್ಯವಿದ್ದಾಗ ರಾಗದ ಎಂದರೆ ಅನುರಾಗದ, ಪ್ರೀತಿಯ ಮಧುರ ಭಾವನೆಗಳು ಉಂಟಾಗುವುದು. ಯೋಗ ಸಾಧನೆಯ ಮುಖ್ಯಫಲಶಾಂತಿ. ಮನಸ್ಸಿಗೆ ಶಾಂತಿ ದೊರಕದಿದ್ದರೆ ಮನಸ್ಸು ಮಧುರತೆ ಅಸಾಧ್ಯ. ಆ ಶಾಂತಿ, ಸಮತ್ವ ಯೋಗ ಸಾಧನೆಯಿಂದಲೇ ಲಭ್ಯ. ಇನ್ನು ಜೀವನದಲ್ಲಿ ಉನ್ನತಿಯನ್ನು ಪಡೆಯುವುದು ಹೇಗೆ? ಚಾಗದಿಂದ. ಚಾಗ ಎಂಬುದು ತ್ಯಾಗ ಎಂಬ ಸಂಸ್ಕೃತಪದದ ತದ್ಭವರೂಪ. ಚಾಗದಿಂದ, ಎಂದರೆ ತ್ಯಾಗದಿಂದ ಬದುಕಿನಲ್ಲಿ ಉನ್ನತಿ. ಇದನ್ನು ವೇದವೂ ಘೋಷಿಸಿದೆ–

'ನ ಕರ್ಮಣಾ ನ ಪ್ರಜಯಾ ಧನೇನ
ತ್ಯಾಗೇನೈಕೇ ಅಮೃತತ್ವ ಮಾನಶುಃ'

ಕರ್ಮದಿಂದಾಗಲಿ, ಮಕ್ಕಳಿಂದಾಗಲಿ, ಹಣದಿಂದಾಗಲಿ ಅಮೃತತ್ವವು ಸಿಕ್ಕುವುದಿಲ್ಲ. ತ್ಯಾಗದಿಂದಲೇ ಅಮೃತತ್ವವನ್ನು ಪಡೆದರು.

ಅಮೃತತ್ವಕ್ಕಿಂತ ಉನ್ನತವಾದುದೇನಿದೆ. ಎಲ್ಲಿಯವರೆಗೆ ಜಗತ್ತಿನ ಧನಕನಕಗಳಿಗೆ ಅಂಟಿಕೊಂಡಿರುವೆವೋ ಅಲ್ಲಿಯವರೆಗೂ ಆಧ್ಯಾತ್ಮಿಕ ಉನ್ನತಿ ಕನಸು ಅಷ್ಟೆ. ಆ ಅಂಟಿನಿಂದ ಬಿಡಿಸಿಕೊಳ್ಳುವುದೇ ತ್ಯಾಗ(=ಚಾಗ).

ಸಿಟ್ಟು ಖಿನ್ನತೆ ದುಗುಡ ಆತಂಕ ದುಮ್ಮಾನ
ವಿಷವರ್ತುಲದ ರಚಿಸಿ ನೂಕುವುದು ಅತ್ತ
ಧ್ಯಾನ ಪ್ರಾಣಾಯಾಮ ದಾರಿ ಸುಖ ಜೀವನಕೆ;
ಉಸಿರಾಡು ಸಂತಸದಿ ಮುದ್ದುರಾಮ ॥

ಸಿಟ್ಟು ಎಂದರೆ ಕೋಪದ ಅತಿರೇಕದ ಸ್ಥಿತಿ. ಸಿಟ್ಟಿಗೆ ವಶರಾದವರು ತಮ್ಮನ್ನೂ ಇತರರನ್ನೂ ನಾಶಪಡಿಸುತ್ತಾರೆ. ಖಿನ್ನತೆ ಎಂದರೆ ಡಿಪ್ರೆಷನ್. ಜಗತ್ತಿನ ಎಲ್ಲ ವಿಷಯಗಳಲ್ಲಿ ಆಸಕ್ತಿಯನ್ನು ಕಳೆದುಕೊಂಡು ನಿರಾಶರಾಗುವುದು. ಇದರಿಂದ ಅನೇಕರು ಆತ್ಮಹತ್ಯೆಯನ್ನು ಮಾಡಿಕೊಳ್ಳುವ ವಾರ್ತೆಯನ್ನು ಪ್ರತಿದಿನವೂ ಪತ್ರಿಕೆಗಳಲ್ಲಿ ಓದುತ್ತಿರುತ್ತೇವೆ. ದುಗುಡ ದುಃಖದಿಂದ ದಿಕ್ಕೇ ತೋಚದ ಸ್ಥಿತಿ. ಆತಂಕ ಮುಂದಿನ ಕ್ಷಣದಲ್ಲಿ ಏನಾಗುವುದೋ ಎಂಬ ಭಯ. ದುಮ್ಮಾನ ಎನ್ನುವುದು ದೌರ್ಮನಸ್ಯವನ್ನು, ಮನಸ್ಸು ಹತೋಟಿಯಲ್ಲಿಲ್ಲದೆ ದಾರ ಹರಿದ ಗಾಳಿಪಟದಂತೆ ಓಡಾಡಿ ಮಾಡಬಾರದ್ದನು ಮಾಡುವ ಸ್ಥಿತಿ. ಇವು ಮನುಷ್ಯನನ್ನು ವಿಷದ ವರ್ತುಲದೊಳಕ್ಕೆ ನೂಕುತ್ತವೆ. ಇವುಗಳಿಂದ ತಪ್ಪಿಸಿಕೊಳ್ಳಲು ಇರುವ ಮಾರ್ಗ ಪ್ರಾಣಾಯಾಮ, ಧ್ಯಾನ, ಇವೆರಡೂ ಯೋಗದ ಮುಖ್ಯ ಅಂಗಗಳು. (ಯಮ, ನಿಯಮ, ಆಸನ, ಪ್ರಾಣಾಯಾಮ, ಪ್ರತ್ಯಾಹಾರ, ಧಾರಣಾ, ಧ್ಯಾನ, ಸಮಾಧಿ ಎಂಬವು ಯೋಗದ ಎಂಟು ಅಂಗಗಳು) ಸಿಟ್ಟು ಮುಂತಾದ ದೋಷಗಳನ್ನು ಮೆಟ್ಟಲು ಪ್ರಾಣಾಯಾಮ, ಧ್ಯಾನಗಳು ಸಿದ್ಧೌಷಧಗಳು. ಅವುಗಳನ್ನು ಅಭ್ಯಸಿಸಿದವರು ನಿಶ್ಚಿಂತರಾಗಿ ಉಸಿರಾಡಬಹುದು ಎಂದು ಮುದ್ದುರಾಮನು ಸೂಚಿಸಿದ್ದಾನೆ.

ಯೋಗವೆಂದರೇನೆಂದು ವಿಶದಪಡಿಸಿದ್ದಾನೆ ಮುದ್ದುರಾಮ ಇನ್ನೊಂದು ಪದ್ಯದಲ್ಲಿ –

ನಡೆ ನುಡಿಯ, ಚಿಂತನೆಯ ಹದಗೊಳಿಪ ಕಲೆ ಯೋಗ;
ಒಳಬನಿಗೆ ಇದು ತರುವುದತ್ಯಂತ ಸೌಖ್ಯ
ದಿವ್ಯತೆಗೆ ತನುಮನವ ಬೆಸೆವ ಸಾಧನ ಯೋಗ;
ಯೋಗವೆನೆ ಕೂಡಿವಿಕೆ ಮುದ್ದುರಾಮ ।

ಯೋಗವೆಂಬುದು ವಿಜ್ಞಾನವೂ ಹೌದು, ಕಲೆಯೂ ಹೌದು. ನಮ್ಮ ನಡೆ ಎಂದರೆ ನಡತೆ, ನಡವಳಿಕೆ, ನಮ್ಮ ನುಡಿ ಎಂದರೆ ಮಾತು, ಚಿಂತನೆ ಎಂದರೆ ನಮ್ಮ ವಿವಿಧ ಆಲೋಚನೆ, ವಿಚಾರ ಸರಣಿ, ಕಲ್ಪನೆಗಳ ಮಾಲೆ. ಇವೆಲ್ಲವನ್ನೂ ಹದಗೊಳಿಸಿ ಚಂಗಾಣಿಸುವ ಕಲೆ ಯೋಗ. ನಮ್ಮ ಅಂತರಾತ್ಮಕ್ಕೆ ಈ ಯೋಗವು ಅತ್ಯಂತ ಸೌಖ್ಯವನ್ನು ತರುತ್ತದೆ. ಬಾಹ್ಯ ವಸ್ತುಗಳ ಸಂಸ್ಪರ್ಶವಿಲ್ಲದೆ, ಅನುಭವ ಮಾತ್ರ ಗೋಚರ ಸುಖ ಅದು. ಅದನ್ನು ಭಗವದ್ಗೀತೆ ಬ್ರಹ್ಮನಿರ್ವಾಣವೆಂದಿದೆ.

ಯೋಽಸಸ್ಸುಖೋಽಂತರಾರಾಮ ಸ್ಥಥಾಂತರ್ಜ್ಯೋತಿರೇವ ಯಃ।
ಸ ಯೋಗೀ ಬ್ರಹ್ಮನಿರ್ವಾಣಂ ಬ್ರಹ್ಮಭೂತೋಽಧಿಗಚ್ಛತಿ॥ (5.24)

(ಯಾವನು ತನ್ನಲ್ಲೇ ತಾನು ಸುಖವನ್ನು ಕಂಡು, ಆತ್ಮರಾಮನಾಗಿ, ಅಂತರ್ಜ್ಯೋತಿಯಿಂದ (ಒಳಗಿನ ಬೆಳಕಿನಿಂದ) ಬೆಳಗುತ್ತಾ ಅವನು ಬ್ರಹ್ಮವೇ ಆಗಿ ಬ್ರಹ್ಮನಿರ್ವಾಣವನ್ನು ಪಡೆಯುತ್ತಾನೆ)

ಮುಂದಿನ ಸಾಲುಗಳೂ ಅತ್ಯಂತ ಅರ್ಥಗರ್ಭಿತವಾಗಿವೆ– ತನುವನ್ನು ಎಂದರೆ ಶರೀರವನ್ನೂ, ಮನವ ಮನಸ್ಸನ್ನೂ, ದಿವ್ಯತೆಗೆ ಪರಮಾತ್ಮನಿಗೆ, ಬೆಸೆವ ಬೆಸೆಯುವ, ಜೋಡಿಸುವ ಸಾಧನೆಯೇ ಯೋಗ. ಯಾಜ್ಞವಲ್ಕ್ಯ ಸ್ಮೃತಿಯಲ್ಲಿ ಬರುವ ವಾಕ್ಯವನ್ನಿಲ್ಲಿ ನೆನಪಿಸಿಕೊಳ್ಳಬೇಕು.

'ಸಂಯೋಗೋ ಯೋಗ ಇತ್ಯುಕ್ತೋ ಜೀವಾತ್ಮ ಪರಮಾತ್ಮನೋಃ'

ಜೀವಾತ್ಮ–ಪರಮಾತ್ಮರ ಸಂಯೋಗದ ಮಾರ್ಗವೇ ಯೋಗ. ಯುಜಿರ್ ಯೋಗೇ ಎಂಬ ಧಾತುವಿನಿಂದ ಹುಟ್ಟಿರುವ ಶಬ್ದಯೋಗ. ಆದ್ದರಿಂದಲೇ ಮುದ್ದುರಾಮನು 'ಯೋಗವೆನೆ ಕೂಡುವಿಕೆ' ಎಂದು ಹೇಳಿದ್ದಾನೆ. ಅಲ್ಲದೆ–

ಯೋಗದರ್ಶನ ಸೂತ್ರ ಇದೆ ಭಾರ ಇಳಿಸಲಿಕೆ
ಸಮಚಿತ್ತ ಸಂಸ್ಥಿತಿಗೆ ಮನವ ನಿಲಿಸಲಿಕೆ.
ಜನದ ಮನಕೆಟುಕಿದರೆ ಈ ಲಾಭ ಅತ್ಯಧಿಕ
ಸಾರ ವಿತರಣೆ ಅರಿವು ಮುದ್ದುರಾಮ ॥

ಯೋಗವೆಂಬುದು ಕೇವಲ ವ್ಯಾಯಾಮವಲ್ಲ, ಅದೊಂದು ದರ್ಶನ, ಸತ್ಯದ ಕಾಣ್ಕೆ, ಬದುಕಿನ ವಿಧಾನ. ಅದರ ಮೂರು ಉದ್ದೇಶಗಳನ್ನು ಮುದ್ದುರಾಮ ಹೇಳಿದ್ದಾನೆ. ಒಂದು ಉದ್ದೇಶ– ಭಾರ ಇಳಿಸಲಿಕೆ. ಅನಾವಶ್ಯಕವಾಗಿ ಜಗತ್ತಿನ ಭಾರವನ್ನು ಹೊತ್ತಿರುವವರಂತೆ ನಾವು ಆಡುತ್ತಿದ್ದೇವೆ. ಭಾರ ಹೊತ್ತು ದಣಿದಿದ್ದೇವೆ. ಅದನ್ನು ಇಳಿಸಲು ಯೋಗವೇ ಶ್ರೇಷ್ಠ ಉಪಾಯ. ಎರಡನೆಯ ಉದ್ದೇಶ ಸಮಚಿತ್ತ ಸಂಸ್ಥಿತಿಗೆ. ಸಮತ್ವಂ ಯೋಗ ಉಚ್ಯತೇ ಎನ್ನುತ್ತದೆ ಭಗವದ್ಗೀತೆ. ಸುಖ ಬಂದಾಗ ಹಿಗ್ಗದೆ, ದುಃಖ ಬಂದಾಗ ಕುಗ್ಗದೆ ಸಮತ್ವವನ್ನು ಕಾಪಾಡಿಕೊಳ್ಳುವುದೇ ಯೋಗ. ಮೂರನೆಯ ಉದ್ದೇಶ ಮನವ, ನಿಲಿಸಲಿಕೆ. ಮನಸ್ಸು ಚಂಚಲ, ಸಮುದ್ರದ ಮೇಲೆ ಹಡಗು ಅತ್ತಿತ್ತ ಓಲಾಡುವಂತೆ ಮನಸ್ಸು ಅಲ್ಲಿ ಇಲ್ಲಿ ಓಡಾಡುತ್ತಿರುತ್ತದೆ. ಅದನ್ನು ಸ್ಥಿರಗೊಳಿಸಲು ಯೋಗ ಶ್ರೇಷ್ಠ ಉಪಾಯ. ಪತಂಜಲಿಯ ಸೂತ್ರ, ವ್ಯಾಸನ ಭಾಷ್ಯ, ವಾಚಸ್ಪತಿಯ ವಿವರಣೆ, ವಿಜ್ಞಾನಭಿಕ್ಷುವಿನ ಯೋಗವಾರ್ತಿಕ ಇತ್ಯಾದಿ ಗ್ರಂಥಗಳ ಅರ್ಥ ಎಲ್ಲ ಜನರ ಮನಸ್ಸಿಗೆ ಎಟುಕಿದರೆ ಜಗತ್ತಿಗೆ ಹೆಚ್ಚಿನ ಲಾಭ. ಅವುಗಳ ಸಾರದ ವಿತರಣೆಯೇ ಅರಿವು, ಅದೇ ಆತ್ಮಜ್ಞಾನ ಎಂದು ಮುದ್ದುರಾಮನು ನುಡಿದಿದ್ದಾನೆ.

ಇಂದು ಯೋಗ ಭಾರತದಲ್ಲಿ ಮಾತ್ರ ಅಲ್ಲ. ಸಕಲ ದೇಶಗಳಲ್ಲೂ ಜನಪ್ರಿಯವಾಗಿದೆ. ಆ ಯೋಗದರ್ಶನದ ಮೂಲ ಗ್ರಂಥಗಳನ್ನು ವಿದ್ವಾಂಸರು ಅಧ್ಯಯನ ಮಾಡಿ ಎಲ್ಲಾ ಭಾಷೆಗಳಲ್ಲಿ ಅನುವಾದ ಮಾಡಿದ್ದಾರೆ. ನಾವೂ ಓದಿ ತಿಳಿದುಕೊಳ್ಳಬೇಕು.

ಆನ್‌ಲೈನ್ ಗೇಮ್ ಗೀಳಿಗೆ 40.71 ಲಕ್ಷ ಹಣ ಕಳೆದುಕೊಂಡ ಮೈಸೂರು ವರ್ತಕ!

ಮೈಸೂರು, ಡಿ.9– ಆನ್‌ಲೈನ್ ಗೇಮ್ ಗೀಳಿನಿಂದ ಮೈಸೂರಿನ ಯುವ ವರ್ತಕ 40.71 ಲಕ್ಷ ಹಣ ಕಳೆದುಕೊಂಡಿದ್ದು, ಲಾಭಾಂಶ ನೀಡುವುದಾಗಿ ನಂಬಿಸಿ ವಂಚಿಸಿರುವುದಾಗಿ ಅವರು ಸೆನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಅಶೋಕ ರಸ್ತೆ ನಿವಾಸಿ, 28 ವರ್ಷದ ಯುವ ವರ್ತಕರೊಬ್ಬರು ಕೆಲ ತಿಂಗಳ ಹಿಂದೆ ರಾಜಸ್ತಾನಕ್ಕೆ ತೆರಳಿದ್ದಾಗ ತಮ್ಮ ಸ್ವಗ್ರಾಮದ ಕೆಲ ಸ್ನೇಹಿತರು ಆನ್‌ಲೈನ್ ಗೇಮ್ ಮೂಲಕ ಅಧಿಕ ಹಣ ಗಳಿಸಬಹುದು ಎಂದು ತಿಳಿಸಿದ್ದಾರೆ. ಅದನ್ನು ನಂಬಿದ ವರ್ತಕ, ಹಣದ ಆಸೆಗೆ ಬಿದ್ದು 'ಫನ್ ಇನ್ ಮ್ಯಾಚ್ 360' ಆಪ್ ಡೌನ್ಲೋಡ್ ಮಾಡಿಕೊಂಡು ಗೇಮ್ ಆಡಲು ಶುರು ಮಾಡಿದ್ದಾರೆ.

ದಿನ ಕಳೆದಂತೆ ಆನ್‌ಲೈನ್ ಗೇಮ್ ಗೀಳು ಹೆಚ್ಚಾಗಿ ಹಂತ ಹಂತವಾಗಿ ಒಟ್ಟು 40.71 ಲಕ್ಷ ಹೂಡಿಕೆ ಮಾಡಿ ಆಟವಾಡಿದ್ದಾರೆ. ಇದರಿಂದ ಬಂದ ಲಾಭಾಂಶವನ್ನು ಡ್ರಾ ಮಾಡಲು ಮುಂದಾದಾಗ ನಿಮ್ಮ ಬ್ಯಾಂಕ್ ಖಾತೆಗೆ ಜಮಾ ಆಗಿರುವುದಾಗಿ ಸಂದೇಶ ಬಂದಿದೆ. ಆದರೆ ಖಾತೆಯ ಬ್ಯಾಲೆನ್ಸ್ ಪರಿಶೀಲಿಸಿದಾಗ ಯಾವುದೇ ಹಣ ಜಮೆ ಆಗಿರುವುದಿಲ್ಲ. ನಂತರ ಎಷ್ಟು ಬಾರಿ ಮನವಿ ಮಾಡಿದರೂ ಇದೇ ರೀತಿ ಸಂದೇಶ ಬಂದಿದೆ. ಇದರಿಂದ ಮೋಸ ಹೋಗಿರುವುದು ಮನವರಿಕೆಯಾಗಿ, ಸೆನ್ ಪೊಲೀಸರಿಗೆ ದೂರು ನೀಡಿದ್ದಾರೆ.

ಬ್ಯಾಂಕ್‌ಗೆ 228 ಕೋಟಿ ರೂ. ವಂಚನೆ: ಅನಿಲ್ ಅಂಬಾನಿ ಪುತ್ರನ ವಿರುದ್ಧ ಸಿಬಿಐ ಕೇಸ್

ಮುಂಬೈ: ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾಗೆ 228 ಕೋಟಿ ರೂ.ಗಳ ವಂಚಿಸಿದ ಆರೋಪದ ಮೇಲೆ ಉದ್ಯಮಿ ಅನಿಲ್ ಅಂಬಾನಿ ಪುತ್ರ ಜೈ ಅನ್ಮೋಲ್ ಅನಿಲ್ ಅಂಬಾನಿ ಮತ್ತು ರಿಲಯನ್ಸ್ ಹೋಮ್ ಫೈನಾನ್ಸ್ ಲಿಮಿಟೆಡ್ ವಿರುದ್ಧ ಸಿಬಿಐ ಪ್ರಕರಣ ದಾಖಲಿಸಿದೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.

ಆರ್‌ಎಚ್‌ಎಫ್‌ಎಲ್‌ನ ನಿರ್ದೇಶಕರಾದ ರಿಲಯನ್ಸ್ ಹೋಮ್ ಫೈನಾನ್ಸ್ ಲಿಮಿಟೆಡ್, ಜೈ ಅನ್ಮೋಲ್ ಅನಿಲ್ ಅಂಬಾನಿ ಮತ್ತು ರವೀಂದ್ರ ಶರದ್ ಸುಧಾಕರ್ ವಿರುದ್ಧ ಬ್ಯಾಂಕ್ (ಹಿಂದಿನ ಆಂಧ್ರ ಬ್ಯಾಂಕ್) ನೀಡಿದ ದೂರಿನ ಆಧಾರದ ಮೇಲೆ ಸಿಬಿಐ ಕೇಸ್ ದಾಖಲಿಸಿದೆ ಎಂದು ಅವರು ಹೇಳಿದ್ದಾರೆ.

ವ್ಯವಹಾರ ಅಗತ್ಯಗಳಿಗಾಗಿ ಕಂಪನಿಯು ಮುಂಬೈನಲ್ಲಿರುವ ಬ್ಯಾಂಕಿನ ಎಸ್‌ಸಿಎಫ್ ಶಾಖೆಯಿಂದ 450 ಕೋಟಿ ರೂ.ಗಳ ಸಾಲ ಪಡೆದುಕೊಂಡಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಸಕಾಲಿಕ ಮರುಪಾವತಿ, ಬಡ್ಡಿ ಸೇವೆ ಮತ್ತು ಇತರ ಶುಲ್ಕಗಳು ಹಾಗೂ ಇತರ ಅಗತ್ಯ ದಾಖಲೆಗಳನ್ನು ಸಕಾಲಿಕವಾಗಿ ಸಲ್ಲಿಸುವುದು ಮತ್ತು ಸಂಪೂರ್ಣ ಮಾರಾಟದ ಆದಾಯವನ್ನು ಬ್ಯಾಂಕ್ ಖಾತೆಯ ಮೂಲಕ ನಡೆಸುವುದು ಸೇರಿದಂತೆ ಆರ್ಥಿಕ ಶಿಸ್ತನ್ನು ಕಾಪಾಡಿಕೊಳ್ಳಲು ಬ್ಯಾಂಕ್ ಷರತ್ತು ವಿಧಿಸಿತ್ತು.

ರಾಜ್ಯ ರೈತ ವಿರೋಧಿ ನೀತಿ ಖಂಡಿಸಿ ಬಿಜೆಪಿ ಸುವರ್ಣಸೌಧ ಮುತ್ತಿಗೆಗೆ ಯತ್ನ

ಕಮಲ ನಾಯಕರು ಪೊಲೀಸರ ವಶಕ್ಕೆ



ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ನೀತಿಗಳನ್ನು ಖಂಡಿಸಿ ಬೆಳಗಾವಿಯಲ್ಲಿ ಬಿಜೆಪಿ ಮಂಗಳವಾರ ರೈತರೊಂದಿಗೆ ಪ್ರತಿಭಟನೆ ನಡೆಸಿತು.

ಬೆಳಗಾವಿ, ಡಿ.9– ಕರ್ನಾಟಕದ ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ನೀತಿಗಳನ್ನು ಖಂಡಿಸಿ ಬಿಜೆಪಿ ಮಂಗಳವಾರ ಬೆಳಗಾವಿಯಲ್ಲಿ ಹೆಚ್ಚಿನ ಸಂಖ್ಯೆಯ ರೈತರೊಂದಿಗೆ ಪ್ರತಿಭಟನೆ ನಡೆಸಿತು.

ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ ಮತ್ತು ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಹಲವಾರು ಶಾಸಕರು, ಎಂಎಲ್‌ಸಿಗಳು ಮತ್ತು ಪಕ್ಷದ ಇತರ ಹಿರಿಯ ನಾಯಕರ ನೇತೃತ್ವದಲ್ಲಿ ಮಾಲಿನಿ ಸಿಟಿ ಮೈದಾನದಲ್ಲಿ ಪ್ರತಿಭಟನಾಕಾರರ ಬೃಹತ್ ಗುಂಪು ಜಮಾಯಿಸಿತು.

ರಾಜ್ಯಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳು ಮತ್ತು ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಎತ್ತಿ ತೋರಿಸಲು ಈ ಪ್ರತಿಭಟನೆಯನ್ನು ಆಯೋಜಿಸಲಾಗಿದೆ. ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ರಾಜ್ಯದ ರೈತರ ಸಂಕಷ್ಟವನ್ನು ನಿರ್ಲಕ್ಷಿಸಿದೆ ಎಂದು ಪಕ್ಷದ ನಾಯಕರು ತಿಳಿಸಿದ್ದಾರೆ.

ಸುವರ್ಣಸೌಧ ಮುತ್ತಿಗೆಗೆ ಯತ್ನ: ರೈತರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಬೆಳಗಾವಿಯಲ್ಲಿ ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದರು. ರೈತರೊಂದಿಗೆ ಸುವರ್ಣ ಸೌಧ ಮುತ್ತಿಗೆಗೆ ಯತ್ನಿಸಿದ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದರು. ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಸಿಟಿ ರವಿ ಸೇರಿ ಹಲವು ನಾಯಕರನ್ನು ಪೊಲೀಸರು ವಶಕ್ಕೆ ಪಡೆದರು.

ಬಿಜೆಪಿ ಶಾಸಕಿ ಶಶಿಕಲಾ ಜೊಲ್ಲೆ ಮಾತನಾಡಿ, ಉತ್ತರ ಕರ್ನಾಟಕದ ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಎತ್ತಿ ತೋರಿಸಲು ನಾವು ಪ್ರತಿಭಟನೆ ನಡೆಸುತ್ತಿದ್ದೇವೆ. ರೈತರ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಹೇಳಿದರು.

ಮೆಕ್ಕೆಜೋಳ ಮತ್ತು ಕಬ್ಬು ಬೆಳೆಗಾರರ ಕಳವಳಗಳನ್ನು ಪರಿಹರಿಸಲು ರಾಜ್ಯ ಸರ್ಕಾರ ವಿಫಲವಾಗಿದೆ. ಮೆಕ್ಕೆಜೋಳ ರೈತರು ಖರೀದಿ ಕೇಂದ್ರಗಳನ್ನು ತೆರೆಯಬೇಕೆಂದು ಒತ್ತಾಯಿಸುತ್ತಿದ್ದಾರೆ. ಆದರೆ, ಸರ್ಕಾರ ಇನ್ನೂ ಕಾರ್ಯ ಪ್ರವೃತ್ತವಾಗಿಲ್ಲ ಎಂದು ಬಿಜೆಪಿ ಆರೋಪಿಸಿದೆ.

ರೈತರು ತಮ್ಮ ಉತ್ಪನ್ನಗಳನ್ನು ಮಧ್ಯವರ್ತಿಗಳಿಗೆ ಕಡಿಮೆ ಬೆಲೆಗೆ ಮಾರಾಟ ಮಾಡುವಂತೆ ಒತ್ತಾಯಿಸ ಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಪ್ರಸಕ್ತ ಆಡಳಿತಾವಧಿಯಲ್ಲಿ 2,500 ರೈತರು ಆತ್ಮಹತ್ಯೆ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಾಗ್ದಾಳಿ

ಬೆಳಗಾವಿ, ಡಿ.9(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರಸಕ್ತ ಆಡಳಿತಾವಧಿಯಲ್ಲಿ ರಾಜ್ಯದಲ್ಲಿ 2,500 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇಂದಿಲ್ಲಿ ಆರೋಪಿಸಿದ್ದಾರೆ.



ರೈತರ ಸಂಕಷ್ಟ ಮುಂದುವರೆದಿದೆ, ರೈತರ ಆತ್ಮಹತ್ಯೆಯಲ್ಲಿ ರಾಜ್ಯ ಎರಡನೇ ಸ್ಥಾನ ಪಡೆದಿದೆ. ಇಷ್ಟು ದೊಡ್ಡ ಪ್ರಮಾಣದಲ್ಲಿ ರೈತರು ಆತ್ಮಹತ್ಯೆ ಮಾಡಿ ಕೊಂಡಿದ್ದೇ ರಾಜ್ಯ ಸರ್ಕಾರದ ಸಾಧನೆಯಾಗಿದೆ ಎಂದು ಟೀಕಿಸಿದರು.

ಭ್ರಷ್ಟ ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ನೀತಿ ಖಂಡಿಸಿ ಬಿಜೆಪಿ ನಡೆಸಿದ ಬೃಹತ್ ಪ್ರತಿಭಟನೆ ವೇಳೆ ಮಾತನಾಡಿದ ಅವರು, ರೈತ ವಿರೋಧಿ ಸರ್ಕಾರಕ್ಕೆ ಉಳಿಗಾಲವಿಲ್ಲ ಎಂದು ಎಚ್ಚರಿಸಿದರು.

ಭತ್ತ, ಕಬ್ಬು, ಹತ್ತಿ, ಮೆಕ್ಕೆಜೋಳ ಮೊದಲಾದ ಉತ್ಪನ್ನ ಬೆಳೆಯುವ ರೈತರ ಮತ್ತು ಅನ್ನದಾತರ ಸಂಕಷ್ಟಕ್ಕೆ ಸ್ಪಂದಿಸಿಲ್ಲ. ಅತಿವೃಷ್ಟಿ ಸಂದರ್ಭದಲ್ಲಿ ಮುಖ್ಯಮಂತ್ರಿ ನೆಲದ ಮೇಲೆ ಓಡಾಡಲಿಲ್ಲ. ವೈಮಾನಿಕ ಸಮೀಕ್ಷೆ ಮಾಡಿದರು.

ಕನಿಷ್ಠ ಬೆಂಬಲ ಬೆಲೆ ಹೆಚ್ಚು ನೀಡಲು ಅವಕಾಶವಿದ್ದರೂ ಏಕೆ ನೀಡಲಿಲ್ಲ ಎಂದು ಸರ್ಕಾರವನ್ನು ಪ್ರಶ್ನಿಸಿದ ಅವರು, ಇದೊಂದು ಲಜ್ಜೆಗೆಟ್ಟ ಸರ್ಕಾರ ಎಂದರು.

ಬಿ.ಎಸ್.ಯಡಿಯೂರಪ್ಪ ನಡೆಸಿದ ರೈತಪರ ನಿರಂತರ ಹೋರಾಟ ಸ್ಮರಿಸಿದ ಅವರು, ನಾನು ಅವರ ಮಗನಾಗಿ, ರೈತರ ಹೋರಾಟಕ್ಕೆ ನ್ಯಾಯ ಸಿಗುವವರೆಗೆ ವಿರಮಿಸುವುದಿಲ್ಲ ಎಂದರು. ಇದೇ ಸಂದರ್ಭದಲ್ಲಿ ಮಾತನಾಡಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ರೈತರ ಧ್ವನಿ ಸುವರ್ಣಸೌಧ, ವಿಧಾನಸೌಧ ಮುಟ್ಟಬೇಕು. ವಿಧಾನಸಭೆ ಒಳಗೆ, ಹೊರಗೆ ಹೋರಾಟ ಮುಂದುವರೆಯಲಿದೆ. ಕರ್ನಾಟಕದಲ್ಲಿ ಸರ್ಕಾರ ಸತ್ತುಹೋಗಿದೆ ಎಂದು ಟೀಕಿಸಿದರು.


ಅನೇಕ ಪ್ರದೇಶಗಳು ಅತಿವೃಷ್ಟಿಗೆ ತುತ್ತಾಗಿ ಬೆಳೆ ನಾಶವಾಗಿವೆ. ಹತ್ತಿ, ತೊಗರಿ, ಉದ್ದು ಬೆಳೆ ನಾಶವಾಗಿದೆ. ಸರ್ಕಾರ ರೈತರ ಸಮಸ್ಯೆಗಳನ್ನು ಪರಿಹರಿಸಬೇಕಿತ್ತು. ಆದರೆ, ರೈತ ವಿರೋಧಿ ನೀತಿ ಅನುಸರಿಸುತ್ತಿದೆ.

ಸಿದ್ದರಾಮಯ್ಯ ಸರ್ಕಾರ ರೈತರ ಸಮಸ್ಯೆಗಳನ್ನು ಪರಿಹರಿಸಬೇಕು. ಇಲ್ಲವೇ ಅಧಿಕಾರ ಬಿಟ್ಟು ತೊಲಗಬೇಕು ಎಂದು ಒತ್ತಾಯಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಜಗತ್ತಿನ 2ನೇ ಅತಿದೊಡ್ಡ ಖಾದಿ ರಾಷ್ಟ್ರಧ್ವಜ: ಸುವರ್ಣಸೌಧ ಮುಂದೆ ಮುಖ್ಯಮಂತ್ರಿ ಅನಾವರಣ





ಬೆಳಗಾವಿ ಸುವರ್ಣ ಸೌಧದ ಪಶ್ಚಿಮ ದ್ವಾರದ ಮೆಟ್ಟಿಲುಗಳ ಮೇಲೆ ಜಗತ್ತಿನ 2ನೇ ಅತೀ ದೊಡ್ಡ ಖಾದಿ ರಾಷ್ಟ್ರ ಧ್ವಜವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಅನಾವರಣಗೊಳಿಸಿದರು.

ಬೆಳಗಾವಿ, ಡಿ.9– ಬೆಳಗಾವಿಯ ಸುವರ್ಣಸೌಧದ ಪಶ್ಚಿಮ ದ್ವಾರದಲ್ಲಿ ಜಗತ್ತಿನ ಎರಡನೇ ಅತಿ ದೊಡ್ಡ ಖಾದಿ ರಾಷ್ಟ್ರಧ್ವಜವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು (ಮಂಗಳವಾರ) ಚರಕ ತಿರುಗಿಸುವ ಮೂಲಕ ಅನಾವರಣಗೊಳಿಸಿದರು.

ಇದೆ ವೇಳೆ ರಾಷ್ಟ್ರಗೀತೆ ಮೊಳಗಿತು. ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರು ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ ನೆನಪಾರ್ಥ ಇತ್ತೀಚೆಗೆ ನಡೆದ ಗಾಂಧೀ ಭಾರತ ಎನ್ನುವ ರಾಷ್ಟ್ರ ಪ್ರೇಮದ ಕಾರ್ಯಕ್ರಮ ಬೆನ್ನಲ್ಲೇ ಮತ್ತೊಂದು ಮಹತ್ವದ ರಾಷ್ಟ್ರಪ್ರೇಮದ ಕಾರ್ಯಕ್ರಮ ಗಂಡುಮೆಟ್ಟಿನ ನಾಡು ಬೆಳಗಾವಿಯಲ್ಲಿ ನೆರವೇರುತ್ತಿದ್ದಂತೆ ಸೇರಿದ್ದ ಜನಸ್ತೋಮದಿಂದ ಕರತಾಡನ ಕೇಳಿ ಬಂದಿತು.

ಎರಡನೇ ಅತಿದೊಡ್ಡ ಧ್ವಜ: 75 ಅಡಿ ಉದ್ದ ಹಾಗೂ 55 ಅಡಿ ಅಗಲದ ವಿಶಾಲ ಧ್ವಜವು ದೇಶಪ್ರೇಮದ ಸಂಕೇತವಾಗಿದ್ದು, ನೋಡುಗರಲ್ಲಿ ದೇಶಭಕ್ತಿಯ ಸುಂದರ ಭಾವನೆಗಳನ್ನು ಬಿತ್ತಲಿದೆ. ಇಂತಹ ಮಹತ್ವದ ಧ್ವಜದ ನಿರ್ಮಾಣಕ್ಕೆ ಶ್ರಮಿಸಿದ ವಿನೋದ ಕುಮಾರ ರೇವಪ್ಪ ಬಮ್ಮಣ್ಣವರ ಅವರಿಗೆ ಮುಖ್ಯಮಂತ್ರಿಗಳು ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಮುಖ್ಯಮಂತ್ರಿಗಳು ಮಾತನಾಡಿ, ಸುವರ್ಣಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಜಗತ್ತಿನ ಎರಡನೆ ಅತಿ ದೊಡ್ಡ ರಾಷ್ಟ್ರಧ್ವಜ ಅನಾವರಣಕ್ಕೆ ಶ್ರಮಿಸಿ ಉತ್ತಮ ಕಾರ್ಯ ಮಾಡಿದ ಸಭಾಧ್ಯಕ್ಷರಾದ ಯು.ಟಿ.ಖಾದರ್ ಮತ್ತು ಅವರ ತಂಡದವರಿಗೆ ಮತ್ತು ಈ ಧ್ವಜ ನೇಯ್ಗೆಗೆ ಶ್ರಮಿಸಿದ ಕಲಬುರಗಿ ಜಿಲ್ಲೆಯ ಕಮಲಾಪುರದ ವಿನೋದಕುಮಾರ ರೇವಪ್ಪ ಬೊಮ್ಮಣ್ಣವರ ಅವರಿಗೆ ಸರ್ಕಾರದಿಂದ ಅಭಿನಂದನೆ ತಿಳಿಸುವೆ ಎಂದರು. ಖಾದಿಯು ಕೇವಲ ವಸ್ತ್ರ ಅಲ್ಲ; ಅದು ದೇಶದ ಹೆಮ್ಮೆಯ ಸಂಕೇತ ಎಂದರು.

ನಾವೆಲ್ಲರೂ ಜಾತ್ಯಾತೀತರಾಗುವುದು ಈಗ ಅತೀ ಅವಶ್ಯವಿದೆ. ಮನುಷ್ಯರು ಮನುಷ್ಯರನ್ನು ಪ್ರೀತಿಸಬೇಕು. ನಾವು ಭ್ರಾತೃತ್ವವನ್ನು ಸಾಧಿಸಿದ್ದೇವೆ. ನಾವು ದೇಶಪ್ರೇಮ ಬೆಳೆಸಿಕೊಳ್ಳದೇ ಹೋದರೆ ಮನುಷ್ಯರಾಗಿ ಬಾಳಲು ಸಾಧ್ಯವಾಗುವುದಿಲ್ಲ. ವಿದ್ಯಾರ್ಥಿ ಯುವಜನರಲ್ಲಿ ದೇಶಭಕ್ತಿಯ ಭಾವ ಬೆಳೆಸುವ ಕಾರ್ಯವಾಗಬೇಕು ಎಂದರು. ಪ್ರತಿಯೊಬ್ಬರಿಗೂ ಸಂವಿಧಾನದ ಮಹತ್ವ ತಿಳಿಸಲು ಎಲ್ಲಾ ಕಡೆ ಸಂವಿಧಾನ ಪೀಠಿಕೆ ಬೋಧಿಸುವ ಕಾರ್ಯಕ್ರಮ ರೂಪಿಸಿದ್ದೇವೆ ಎಂದು ತಿಳಿಸಿದರು.

ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಈ ತ್ರಿವರ್ಣ ಧ್ವಜದಿಂದಾಗಿ ಜನತೆಗೆ ರಾಷ್ಟ್ರ ಭಕ್ತಿ ಮೂಡಲಿದೆ. ಇದರಿಂದ ಮುಂದಿನ ಪೀಳಿಗೆಗೆ ಉತ್ತಮ ಸಂದೇಶ ರವಾನೆಯಾಗಲಿದೆ. ಇದಕ್ಕೆ ಶ್ರಮಿಸಿದ ಸಭಾಧ್ಯಕ್ಷರಾದ ಯು.ಟಿ.ಖಾದರ್, ಉಪಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ ಹಾಗೂ ಅವರ ತಂಡದವರಿಗೆ ಅಭಿನಂದನೆಗಳನ್ನು ತಿಳಿಸುವೆ ಎಂದರು. ಸಾರ್ವಜನಿಕ ವೀಕ್ಷಣೆಗೆ ಅವಕಾಶ ಮಾಡಿಕೊಡಬೇಕು ಎಂದು ತಿಳಿಸಿದರು.

ವಿಧಾನಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್, ಗಾಂಧೀ ಭೇಟಿ ನೀಡಿದ ನೆಲವಾದ ಬೆಳಗಾವಿಯಲ್ಲಿ ಎರಡನೇ ಅತಿ ದೊಡ್ಡ ರಾಷ್ಟ್ರಧ್ವಜದ ಅನಾವರಣ ನಡೆದಿದ್ದು ಸಂತಸ ತಂದಿದೆ. ಇದರ ಹಿಂದಿನ ಶ್ರಮ, ಬದ್ಧತೆ ಹಾಗೂ ಧ್ವಜದ ಮೇಲಿನ ಪ್ರೇಮ ಶ್ಲಾಘನೀಯವಾದುದು ಎಂದರು.

ಇದು ಕೇವಲ ಧ್ವಜವಲ್ಲ; ರಾಷ್ಟ್ರಭಕ್ತಿ, ರಾಷ್ಟ್ರಪ್ರೇಮದ ಸಂಕೇತ ಎಂದು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ್ ತಿಳಿಸಿದರು.

ಈ ಧ್ವಜವನ್ನು ಕಲಬುರಗಿ ಜಿಲ್ಲೆಯ ಕಮಲಾಪುರದ ವಿನೋದ್ ಕುಮಾರ್ ರೇವಪ್ಪ ಬಮ್ಮನ್ನ ಕುಟುಂಬಸ್ಥರು ವೈಯಕ್ತಿಕ ಆಸಕ್ತಿಯಿಂದ ಮಾಡಿಸಿದ್ದಾರೆ.

ಅಲೆಮಾರಿ ಸಮುದಾಯಗಳಿಗೆ ಶೇ.2ರಷ್ಟು ಮೀಸಲಾತಿಗೆ ಆಗ್ರಹಿಸಿ ಮೈಸೂರಲ್ಲಿ ಕದಸಂಸ ಪ್ರತಿಭಟನೆ



ಮೈಸೂರಿನ ಟೌನ್‌ಹಾಲ್ ಎದುರಿನ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಬಳಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಡಿ.9(ಎಂಕೆ)– ಪರಿಶಿಷ್ಟ ಜಾತಿ ಒಳಮೀಸಲಾತಿ ಹಂಚಿಕೆಯಲ್ಲಿ ಪರಿಶಿಷ್ಟ ಜಾತಿಯ ಅಲೆಮಾರಿ ಸಮುದಾಯಗಳಿಗೆ ಶೇ.2 ರಷ್ಟು ಒಳಮೀಸಲಾತಿ ಕಲ್ಪಿಸುವಂತೆ ಆಗ್ರಹಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಕದಸಂಸ) ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಟೌನ್‌ಹಾಲ್ ಎದುರಿನ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಬಳಿ ಜಮಾಯಿಸಿದ ಪ್ರತಿಭಟನಾಕಾರರು, ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಹಂಚಿಕೆ ಐತಿಹಾಸಿಕ ನಿರ್ಣಯವಾಗಿದ್ದರೂ ಕೊರಮ, ಕೊರಚ, ಸಿಳ್ಳೆಕ್ಯಾತ, ಕೋಲೆ ಬಸವ, ಹಂದಿಜೋಗಿ, ದೊಂಬರ, ಸುಡುಗಾಡು ಸಿದ್ಧ, ಚನ್ನದಾಸ ಸೇರಿದಂತೆ ಇನ್ನಿತರೆ ಪರಿಶಿಷ್ಟ ಜಾತಿಯ ಅಲೆಮಾರಿ ಸಮುದಾಯಗಳನ್ನು ಒಂದೂಗೂಡಿಸಿ ಶೇ.2 ರಷ್ಟು ಒಳ ಮೀಸಲಾತಿ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಒಂದೆಡೆ ನೆಲೆ ಇಲ್ಲದ ಅಲೆಮಾರಿ ಸಮುದಾಯಗಳು ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಹಾಗೂ ರಾಜಕೀಯ ಹಿಂದುಳಿದಿದ್ದು, ಅತ್ಯಂತ ಹೀನಾಯ ಸ್ಥಿತಿಯನ್ನು ಬದುಕು ನಡೆಸುತ್ತಿದ್ದಾರೆ. ಅಲೆಮಾರಿ ಸಮುದಾಯದ ಮಕ್ಕಳಿಗೆ ಕನಿಷ್ಠ ವಿದ್ಯಾಭ್ಯಾಸವೂ ದೊರೆಯುತ್ತಿಲ್ಲ. ಪ್ರಾಣಿ–ಪಕ್ಷಿಗಳಂತೆ ಬದುಕು ನಡೆಸುತ್ತಿದ್ದಾರೆ. ಆದ್ದರಿಂದ ಪರಿಶಿಷ್ಟ ಜಾತಿ ಅಲೆಮಾರಿ ಸಮುದಾಯಗಳ ಏಳಿಗೆಗಾಗಿ ಒಳಮೀಸಲಾತಿ ನೀಡಬೇಕು ಎಂದು ಆಗ್ರಹಿಸಿದರು.

ಪರಿಶಿಷ್ಟ ಜಾತಿ ಒಳ ಮೀಸಲಾತಿ ಹಂಚಿಕೆಯಲ್ಲಿ ಎಡಗೈ ಸಮುದಾಯಗಳಿಗೆ ಶೇ.6, ಬಲಗೈ ಸಮುದಾಯಗಳಿಗೆ ಶೇ.6 ಹಾಗೂ ಇನ್ನಿತರೆ ಪರಿಶಿಷ್ಟ ಜಾತಿಗಳನ್ನು ಒಂದುಗೂಡಿಸಿ ಶೇ.5ರಷ್ಟು ಒಳಮೀಸಲಾತಿ ಹಂಚಿಕೆ ಮಾಡಿರುವುದು ಅವೈಜ್ಞಾನಿಕ. ಪರಿಶಿಷ್ಟ ಜಾತಿಯಲ್ಲಿಯೇ 50ಕ್ಕೂ ಹೆಚ್ಚು ಅಲೆಮಾರಿ ಸಮುದಾಯಗಳಿದ್ದು, ಎಲ್ಲಾ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿ ಬದುಕುತ್ತಿದ್ದಾರೆ. ಹಾಗಾಗಿ ನಿರ್ಗತಿಕ ಅಲೆಮಾರಿ ಸಮುದಾಯಗಳನ್ನು ಪ್ರತ್ಯೇಕ ಗುಂಪು ಮಾಡಿ ಒಳಮೀಸಲಾತಿಯಲ್ಲಿ ಶೇ.2 ರಷ್ಟಾದರೂ ಮೀಸಲಿಡಬೇಕು. ಈ ಮೂಲಕ ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯಬೇಕು ಎಂದು ಕೋರಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕರಾದ ನಿಂಗರಾಜ್ ಮಲ್ಲಾಡಿ, ಕೆಂಚಪ್ಪ ಬಸವನಗುಡಿ, ಜಿಲ್ಲಾ ಸಂಚಾಲಕ ಹೆಚ್.ಬಿ.ದಿವಾಕರ್, ನಗರ ಸಂಚಾಲಕ ಪೈಲ್ವಾನ್ ಕೃಷ್ಣ ಮತ್ತಿತರರಿದ್ದರು.

ಚಾಮುಂಡೇಶ್ವರಿ ದೇವಿಯ ಸೇವಾ ಶುಲ್ಕ ಹೆಚ್ಚಳ ಖಂಡಿಸಿ ಕರ್ನಾಟಕ ಸೇನಾ ಪಡೆ ಪ್ರತಿಭಟನೆ



ಕರ್ನಾಟಕ ಸೇನಾ ಪಡೆ ವತಿಯಿಂದ ಹಳೆ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಡಿ.9(ಎಂಕೆ)– ಮೈಸೂರು ಚಾಮುಂಡಿಬೆಟ್ಟದ ಶ್ರೀ ಚಾಮುಂಡೇಶ್ವರಿ ದೇವಿ ದರ್ಶನ ಹಾಗೂ ಪೂಜಾ ಸೇವಾ ಶುಲ್ಕಗಳ ಏರಿಕೆ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ಹಳೆ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಒಂದಲ್ಲಾ ಒಂದು ಪದಾರ್ಥಗಳ ಬೆಲೆ ಏರಿಕೆಯಾಗುತ್ತಲೇ ಇದ್ದು, ಜನ–ಜೀವನ ದುಸ್ತರವಾಗಿದೆ. ಇದರ ನಡುವೆ ಮೈಸೂರಿನ ಧಾರ್ಮಿಕ ಕೇಂದ್ರ ಹಾಗೂ ಕೋಟ್ಯಾಂತರ ರೂ. ಆದಾಯವಿರುವ ಚಾಮುಂಡಿಬೆಟ್ಟದ ಮೇಲು ಕಣ್ಣಿಟ್ಟಿರುವ ರಾಜ್ಯ ಸರ್ಕಾರ ಭಕ್ತಾದಿಗಳಿಗೆ ಅನುಕೂಲ ಮಾಡಿಕೊಡದೆ ಲೂಟಿ ಮಾಡಲು ಹೊರಟಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಲಕ್ಷಾಂತರ ಭಕ್ತರು ಭೇಟಿ ನೀಡುವ ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ಸನ್ನಿಧಿಯಲ್ಲಿ ನಡೆಯುವ ಎಲ್ಲಾ ಬಗೆಯ ಪೂಜಾ ಸೇವಾ ಶುಲ್ಕಗಳನ್ನು ಹೆಚ್ಚಳ ಮಾಡಿರುವುದು ಅತ್ಯಂತ ಖಂಡನೀಯ. ಲಡ್ಡು ಪ್ರಸಾದಕ್ಕೆ 15 ರೂ.ನಿಂದ 25 ರೂ.ಗೆ ಏರಿಕೆ ಮಾಡಿರುವುದಲ್ಲದೆ ಪ್ರವೇಶ ದರ 30 ರಿಂದ 50 ರೂ., 100 ರಿಂದ 200 ರೂ. ಅವೈಜ್ಞಾನಿಕವಾಗಿ ಏರಿಕೆ ಮಾಡಲಾಗಿದೆ ಇತರೆ ಪೂಜಾ ಸೇವೆಗಳ ಶುಲ್ಕದಲ್ಲಿ ಸಾವಿರಾರು ರೂ.ಗಳಿಗೆ ಹೆಚ್ಚಳ ಮಾಡಿರುವುದು ಭಕ್ತ ಸಮೂಹಕ್ಕೆ ಮಾಡಿರುವ ಅನ್ಯಾಯ ಎಂದು ಕಿಡಿಕಾರಿದರು.

ಗ್ಯಾರಂಟಿ ಯೋಜನೆಗಳನ್ನು ನೀಡುತ್ತೇವೆ ಎಂದು ಹೇಳಿಕೊಂಡು ಅಧಿಕಾರಕ್ಕೆ ಬಂದಿರುವ ರಾಜ್ಯ ಕಾಂಗ್ರೆಸ್ ಸರ್ಕಾರ, ಭಕ್ತಾದಿಗಳ ಮೇಲೆ ಹೊರೆ ಹಾಕಲು ಹೊರಟಿರುವುದು ಅತ್ಯಂತ ದುಃಖಕರ ಸಂಗತಿಯಾಗಿದೆ. ಚಾಮುಂಡಿಬೆಟ್ಟದಲ್ಲಿ ವ್ಯವಸ್ಥಿತ ಮೂಲಭೂತ ಸೌಕರ್ಯಗಳಿಲ್ಲ. ಕುಡಿಯುವ ನೀರಿನ ಪೂರೈಕೆ ಇಲ್ಲ. ಭಕ್ತಾದಿಗಳ ವಿಶ್ರಾಂತಿ ತಾಣವಿಲ್ಲ. ಮಧ್ಯಾಹ್ನದ ಪ್ರಸಾದದ ವ್ಯವಸ್ಥೆ ಸರಿಯಿಲ್ಲ. ಇಷ್ಟೆಲ್ಲಾ ಸಮಸ್ಯೆಗಳಿದ್ದರೂ ಭಕ್ತರಿಂದ ವಸೂಲಿ ಮಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಈ ಕೂಡಲೇ ಮುಖ್ಯಮಂತ್ರಿಗಳು ಸಭೆ ನಡೆಸಿ ಶುಲ್ಕ ಹೆಚ್ಚಳ ಕುರಿತು ಪರಿಶೀಲನೆ ನಡೆಸಿ, ಭಕ್ತಾದಿಗಳಿಗೆ ಅನುಕೂಲ ಮಾಡಿಕೊಡಬೇಕು. ದೇವಿ ದರ್ಶನ ಮತ್ತು ಎಲ್ಲಾ ಬಗೆಯ ಪೂಜಾ ಸೇವಾ ಶುಲ್ಕಗಳನ್ನು ಕಡಿಮೆ ಮಾಡಬೇಕು. ಮುಖ್ಯವಾಗಿ ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣದಲ್ಲಿ ನೀಡುವಂತಹ ಊಟದ ವ್ಯವಸ್ಥೆಯೂ ಚಾಮುಂಡಿ ಬೆಟ್ಟದಲ್ಲೂ ಕಲ್ಪಿಸಬೇಕು. ಕಳ್ಳತನಕ್ಕೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಸೇನಾ ಪಡೆ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ, ಗೋಲ್ಡನ್ ಸುರೇಶ್, ಪ್ರಭುಶಂಕರ, ಕೃಷ್ಣಪ್ಪ, ಹನುಮಂತೇಗೌಡ, ಗಿರೀಶ್, ಸಿಂಧುವಳ್ಳಿ ಶಿವಕುಮಾರ್, ಬೋಗಾದಿ ಸಿದ್ದೇಗೌಡ, ಶಿವಲಿಂಗಯ್ಯ, ನೇಹಾ, ಮಂಜುಳಾ, ಮಧುವನ ಚಂದ್ರು, ಹೊನ್ನೇಗೌಡ, ತಾಯೂರು ಗಣೇಶ್, ಡಾ.ನರಸಿಂಹೇಗೌಡ, ಬಸವರಾಜು, ಭಾಗ್ಯಮ್ಮ, ಸುಜಾತಾ, ಪ್ರಭಾಕರ್, ಡಾ.ಶಾಂತರಾಜೇ ಅರಸ್, ರಾಧಾಕೃಷ್ಣ, ನಂದಕುಮಾರ್, ದರ್ಶನ್ ಗೌಡ, ಪ್ರದೀಪ್, ರಘು ಅರಸ್, ಶಿವರಾಂ, ಗಣೇಶ್ ಪ್ರಸಾದ್, ಚಂದ್ರಶೇಖರ್, ರವೀಶ್, ರವಿ ನಾಯಕ್ ಉಪಸ್ಥಿತರಿದ್ದರು.

ಡಾ. ವಸುಂಧರಾ ದೊರೆಸ್ವಾಮಿಯವರಿಗೆ 'ನೂಪುರಶ್ರೀ' ಪ್ರಶಸ್ತಿ ಪ್ರದಾನ



ಮೈಸೂರು, ಡಿ.9– ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ನಾಳೆ (ಡಿ. 10) ಸಂಜೆ 6.15ಕ್ಕೆ ಶ್ರೀಮತಿ ಕೆ. ವನಜಾಕ್ಷಮ್ಮ ಸಂಸ್ಮರಣಾ 30ನೇ ನೃತ್ಯ ಆರಾಧನೆ ಮತ್ತು ಡಾ. ವಸುಂಧರಾ ದೊರೆಸ್ವಾಮಿ ಅವರಿಗೆ ನೂಪುರಶ್ರೀ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆದಿಚುಂಚನಗಿರಿ ರಸ್ತೆ, ಕುವೆಂಪುನಗರದ ಗಾನಭಾರತಿ ರಮಾಗೋವಿಂದ ಕಲಾ ವೇದಿಕೆ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ವಿಜಯ ವಿಠ್ಠಲ ವಿದ್ಯಾಸಂಸ್ಥೆ ಕಾರ್ಯದರ್ಶಿ ಆರ್. ವಾಸುದೇವ ಭಟ್ ಅಧ್ಯಕ್ಷತೆ ವಹಿಸಲಿದ್ದಾರೆ. ಇದೇ ವೇಳೆ ಹಿರಿಯ ಪತ್ರಕರ್ತ ಹಾಗೂ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಅಂಶಿ ಪ್ರಸನ್ನ ಕುಮಾರ್ ಅವರನ್ನು ಸನ್ಮಾನಿಸಲಾಗುವುದು. ನಾಟ್ಯಾಚಾರ್ಯ ಪ್ರೊ. ಕೆ. ರಾಮಮೂರ್ತಿ ರಾವ್ ಅವರ ಪುತ್ರ ಹಾಗೂ ಶಿಷ್ಯ ವಿದ್ವಾನ್ ಕೆ.ಆರ್. ವಿಶ್ವದೀಪ ಅವರಿಂದ ಭರತನಾಟ್ಯ ಪ್ರದರ್ಶನವಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಆತ್ಮೀಯ ಸ್ವಾಗತ...!

ಗಮನ ಸೆಳೆದ ಹೆಬ್ಬಾಳ್ಕರ್ ಸೋದರ ಎಂಎಲ್ಸಿ ಚನ್ನರಾಜಹಟ್ಟಿ ಹೊಳಿ ಪೋಸ್ಟ್

ಬೆಳಗಾವಿ, ಸುವರ್ಣವಿಧಾನಸೌಧ, ಡಿ.9(ಕೆಎಂಶಿ)– ವಿಧಾನಮಂಡಲದ ಚಳಿಗಾಲದ ಅಧಿವೇಶನದಲ್ಲಿ ಪಾಲ್ಗೊಳ್ಳಲು ಆಗಮಿಸಿದ ಉಪ ಮುಖ್ಯಮಂತ್ರಿ ಡಿ.ಕೆಶಿವಕುಮಾರ್ ಅವರನ್ನು ಸ್ವಾಗತಿಸಿದ ವಿಧಾನ ಪರಿಷತ್ ಸದಸ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಿ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಸೋದರ ಚನ್ನರಾಜ ಹಟ್ಟಿ ಹೊಳಿ ಸಾಮಾಜಿಕ ಜಾಲತಾಣದಲ್ಲಿ ಹಾಕಿರುವ ಪೋಸ್ಟ್ ಈಗ ಗಮನ ಸೆಳೆದಿದೆ.



ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು ಮಂತ್ರಿ ಹೆಬ್ಬಾಳ್ಕರ್ ಅವರೊಂದಿಗೆ ಚನ್ನರಾಜ ಹಟ್ಟಿಹೊಳಿ ಬೆಳಗಾವಿಯ ಇತರೆ ಕಾಂಗ್ರೆಸ್ ಶಾಸಕರೊಂದಿಗೆ ಸ್ವಾಗತಿಸಿದರು.

ಈ ಫೋಟೋ ಅನ್ನು ತಮ್ಮ ಸಾಮಾಜಿಕ ಜಾಲತಾಣ ಖಾತೆಯಲ್ಲಿ ಹಾಕಿಕೊಂಡಿರುವ ಅವರು ಬೆಳಗಾವಿಗೆ ಆಗಮಿಸಿದ 'ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್' ಅವರಿಗೆ ಆತ್ಮೀಯ ಸ್ವಾಗತ ಕೋರಲಾಯಿತು ಎಂದು ಅದರಲ್ಲಿ ಹೇಳಿಕೊಂಡಿದ್ದಾರೆ. ಈ ಪೋಸ್ಟ್ ಇದೀಗ ರಾಜಕೀಯ ವಲಯದಲ್ಲಿ ಬಾರಿ ಚರ್ಚೆಗೆ ಗ್ರಾಸವಾಗಿದೆ. ಸಾಕಷ್ಟು ಚರ್ಚೆಯ ನಂತರ ಇದಕ್ಕೆ ಸ್ಪಷ್ಟನೆ ನೀಡಿರುವ ಚನ್ನರಾಜ ಹಟ್ಟಿ ಹೊಳಿ, ಈ ಪೋಸ್ಟ್ ಯಾವುದೇ ಉದ್ದೇಶದಿಂದ ಹಾಕಿರುವುದಿಲ್ಲ. ತಮ್ಮ ಸೋಶಿಯಲ್ ಮೀಡಿಯಾ ಹ್ಯಾಂಡ್ಲರ್ ಮಾಡಿದ ಕಾಗುಣಿತದ ದೋಷದಿಂದಾಗಿ ಗೊಂದಲ ಉಂಟಾಗಿದೆ. ಇದನ್ನು ಈಗಾಗಲೇ ಸರಿಪಡಿಸಲಾಗಿದೆ ಎಂದು ಹೇಳಿದ್ದಾರೆ.

ಡಿ.12ರಿಂದ ಇಂಗ್ಲಿಷ್ ಥಿಯೇಟರ್ ಉತ್ಸವ

ಮೈಸೂರು, ಡಿ.9(ಜಿಎ)– ಮೈಸೂರು ಇಂಗ್ಲಿಷ್ ಥಿಯೇಟರ್ ಫೋರಂ ವತಿಯಿಂದ ಡಿ.12 ರಿಂದ 14 ರವರೆಗೆ ವಿಜಯನಗರದಲ್ಲಿರುವ ಜಗನ್ನಾಥ ಕಲಾ ಮತ್ತು ಸಂಸ್ಕೃತಿ ಕೇಂದ್ರದಲ್ಲಿ ಮೈಸೂರು ಇಂಗ್ಲಿಷ್ ಥಿಯೇಟರ್ ಉತ್ಸವ ಆಯೋಜಿಲಾಗಿದೆ ಎಂದು ಸದಸ್ಯ ಶಶಿಧರ ಡೋಂಗ್ರೆ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನಲ್ಲಿ ಕನ್ನಡದ ನಾಟಕಗಳು ವಿವಿಧ ರಂಗೋತ್ಸವಗಳ ಮೂಲಕ ವಿಜೃಂಭಣೆಯಿಂದ ನಡೆಯುತ್ತಿವೆ. ಅದರಂತೆ ಇಂಗ್ಲಿಷ್ ನಾಟಕಗಳಿಗೆ ಒಂದು ಬಳಗವು ಮೈಸೂರಿನಲ್ಲಿದೆ. ಈ ಹಿನ್ನೆಲೆಯಲ್ಲಿ ಮೊದಲ ಬಾರಿಗೆ ಮೈಸೂರು ಇಂಗ್ಲಿಷ್ ಥಿಯೇಟರ್ ಫೋರಂ ವತಿಯಿಂದ ಮೊದಲ ಆವೃತ್ತಿಯ ಉತ್ಸವವನ್ನು ಏರ್ಪಡಿಸಿದ್ದು, ಮೂರು ದಿನ ನಾಟಕೋತ್ಸವದಲ್ಲಿ ಇಂಗ್ಲಿಷ್ ರಂಗಭೂಮಿ ಪಠ್ಯದ ವಾಚನ, ನಾಟಕ ಪ್ರದರ್ಶನವಿರಲಿದೆ ಎಂದರು. ಡಿ.12ರಂದು ಸಂಜೆ 6 ಗಂಟೆಗೆ ಇಂಗ್ಲಿಷ್ ಥಿಯೇಟರ್ ಉತ್ಸವಕ್ಕೆ ಕಲ್ಪಕ್ಷೇತ್ರ ಹೆರಿಟೇಜ್ ಟ್ರಸ್ಟ್‌ನ ಡಾ.ವಿ.ಆರ್.ಅನಿಲ್‌ಕುಮಾರ್, ಹಿರಿಯ ರಂಗಕರ್ಮಿ ಶ್ರೀಮತಿ ಹರಿಪ್ರಸಾದ್ ಚಾಲನೆ ನೀಡಲಿದ್ದಾರೆ. ನಂತರ 6.30ಕ್ಕೆ ಕಲಾ ಸುರುಚಿ ತಂಡದಿಂದ 'ಟು ಫಾದರ್' ನಾಟಕ ಪ್ರದರ್ಶನವಾಗಲಿದೆ. ಡಿ.13ರಂದು ಸಂಜೆ 6.30ಕ್ಕೆ ವೀಮೂವ್ ಥಿಯೇಟರ್ ತಂಡದಿಂದ 'ಹೂ ಕಿಲ್ಡ್ ಅಗಥಾ' ನಾಟಕ ಪ್ರದರ್ಶನ ಮತ್ತು ಡಿ.14ರಂದು ಸಂಜೆ 6.30ಕ್ಕೆ ದಿ ಆಕ್ಟರ್ಸ್ ಕಲೆಕ್ಟಿವ್ ತಂಡದಿಂದ 'ದಿ ಮಹಾಭಾರತ ಪ್ರಾಜೆಕ್ಟ್' ನಾಟಕ ಪ್ರಸ್ತುತ ಪಡಿಸಲಿದ್ದಾರೆ ಎಂದು ತಿಳಿಸಿದರು. ಪ್ರತಿದಿನ ಸಂಜೆ 5 ಗಂಟೆಯಿಂದ 6ರವರೆಗೆ ಇಂಗ್ಲಿಷ್ ರಂಗಭೂಮಿ ಪಠ್ಯದ ವಾಚನ ಕಾರ್ಯಕ್ರಮ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ 9108290415 ಸಂಪರ್ಕಿಸಿ ಎಂದರು. ಸುದ್ದಿಗೋಷ್ಠಿಯಲ್ಲಿ ಸೀಮಂತಿನಿ ಶರ್ಮ, ನೀಮಾ ಮಂಜ್ರೇಕರ್ ಉಪಸ್ಥಿತರಿದ್ದರು.

ಕೃಷ್ಣ ನ್ಯಾಯ ಮಂಡಳಿ ಐ–ತೀರ್ಪು ಅಧಿಸೂಚನೆ ಪ್ರಕಟವಾಗದೇ ಈ ಭಾಗದಲ್ಲಿ ಯಾವ ಕಾಮಗಾರಿಯನ್ನೂ ಕೈಗೆತ್ತಿಕೊಳ್ಳಲಾಗದು

- ನೀರಾವರಿ ಸಚಿವರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಷಾದ
- ಕೇಂದ್ರದ ಮೇಲೆ ಒತ್ತಡ ತಂದು ಈ ಕಾರ್ಯಕ್ಕೆ ಸಹಕರಿಸುವಂತೆ ಬಿಜೆಪಿ ಸದಸ್ಯರಿಗೆ ಆಗ್ರಹ

ಬೆಳಗಾವಿ, ಸುವರ್ಣವಿಧಾನಸೌಧ, ಡಿ.9(ಕೆಎಂಶಿ)– ಕೇಂದ್ರ ಸರ್ಕಾರ ಕೃಷ್ಣ ನ್ಯಾಯ ಮಂಡಳಿಯ ಐ–ತೀರ್ಪನ್ನು ಅಧಿಸೂಚನೆಯ ಮೂಲಕ ಪ್ರಕಟಿಸದಿರುವ ಹಿನ್ನೆಲೆಯಲ್ಲಿ ಜಲಾನಯನ ಪ್ರದೇಶದಲ್ಲಿ ನೀರಾವರಿ ಕಾಮಗಾರಿ ಕೈಗೊಳ್ಳಲು ರಾಜ್ಯಕ್ಕೆ ಸಾಧ್ಯವಾಗುತ್ತಿಲ್ಲ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿಷಾದಿಸಿದ್ದಾರೆ.

ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ನೀರಾವರಿ ಯೋಜನೆಗಳ ಸಂಬಂಧ ಹಲವರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಕೃಷ್ಣಾ ಮೇಲ್ದಂಡೆ ಯೋಜನೆ ಹಂತ– 3ರ ಅನುಷ್ಠಾನಕ್ಕೆ 2013 ರಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸದೆ ಬಾಕಿ ಉಳಿಸಿ ಕೊಂಡಿದೆ. ಮೊದಲನೇ ಬಾರಿಗೆ ಮಹಾರಾಷ್ಟ್ರ ಎರಡನೇ ಬಾರಿಗೆ ಆಂಧ್ರ ಪ್ರದೇಶದ ಅಡ್ಡಗಾಲು ಹಾಕಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೆಹಲಿಯಲ್ಲಿರುವ ತಮ್ಮ ಸ್ನೇಹಿತರ ಮೇಲೆ ಒತ್ತಡ ಹೇರಿ ಈ ಯೋಜನೆಗೆ ಅನುಮತಿ ಕೊಡಿಸಿದರೆ, ಕೂಡಲೇ ಸಾಲ ಮಾಡಿ ಈ ಯೋಜನೆ ಪೂರ್ಣಗೊಳಿಸಲಾಗುವುದು ಎಂದು ಬಿಜೆಪಿ ಶಾಸಕರಿಗೆ ಸಲಹೆ ಮಾಡಿದ ಅವರು, ಕೇಂದ್ರ ಸಚಿವರಾದ ಸೋಮಣ್ಣ ಅವರ ಜೊತೆ ಮೂರು ಬಾರಿ ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿಯಾಗಿದ್ದೇವೆ. ಕೇಂದ್ರ ಜಲಶಕ್ತಿ ಸಚಿವರು ಈ ಬಗ್ಗೆ ಕರೆದಿದ್ದ ಸಂಬಂಧಪಟ್ಟ ರಾಜ್ಯಗಳ ಸಭೆಯನ್ನು ಕಾರಣಾಂತರಗಳಿಂದ ಮುಂದೂಡಿದ್ದೇನೆ ಎಂದು ತಿಳಿಸಿದ್ದರು ಎಂದು ಸಭೆಯ ಗಮನಕ್ಕೆ ತಂದರು.

ಕೃಷ್ಣಾ ಮೇಲ್ದಂಡೆ ಯೋಜನೆ ವಿಚಾರವಾಗಿ ಸಿದ್ದರಾಮಯ್ಯ ಅವರು ಹಾಗೂ ನಾವು ಚರ್ಚೆ ಮಾಡಿ ಭೂ ಪರಿಹಾರದ ಬಗ್ಗೆ ಐತಿಹಾಸಿಕ ತೀರ್ಮಾನ ತೆಗೆದುಕೊಂಡಿದ್ದೇವೆ. ಬಸವರಾಜ ಬೊಮ್ಮಾಯಿ ಅವರ ಕಾಲದಲ್ಲಿ ಆಗಿದ್ದ ಭೂ ಪರಿಹಾರ ತೀರ್ಮಾನವನ್ನ ವಾಪಾಸ್‌ ಮಾಡಿ ಒಂದು ಹಂತಕ್ಕೆ ತಂದಿದ್ದೇವೆ. ಈ ಯೋಜನೆ ಪೂರ್ಣಗೊಳಿಸಲು ನಾವು ಬದ್ಧವಾಗಿದ್ದೇವೆ. ಎಲ್ಲಾದರೂ ಹಣ ತಂದು ವೆಚ್ಚ ಮಾಡಲು ಯೋಜನೆ ರೂಪಿಸಿದ್ದೇವೆ. ವರ್ಷಕ್ಕೆ 15–20 ಸಾವಿರ ಕೋಟಿ ನೀಡಬೇಕು, ಮುಂದಿನ ಮೂರ್ನಾಲ್ಕು ವರ್ಷದಲ್ಲಿ ಭೂಸ್ವಾಧೀನ ಪೂರ್ಣಗೊಳಿಸಬೇಕು ಎಂದು ಹೊರಟಿದ್ದೇವೆ. ಕೆಲವು ಕಡೆ ಕೆಲಸವನ್ನೂ ಪ್ರಾರಂಭ ಮಾಡಿದ್ದೇವೆ ಎಂದು ಹೇಳಿದರು.

ಭೂ ಪರಿಹಾರ ವಿಚಾರ ಮಾಫಿಯಾವಾಗಿ ಹೋಗಿದೆ. 10 ಲಕ್ಷ ಭೂಮಿ ಬೆಲೆಯಿದ್ದರೆ 10 ಕೋಟಿ ಅವಾರ್ಡ್ ಮಾಡಲಾಗಿದೆ. ವಕೀಲರು ಹಾಗೂ ಅಧಿಕಾರಿಗಳು ಹೊಂದಾಣಿಕೆ ಮಾಡಿಕೊಂಡ ಕಾರಣಕ್ಕೆ ಇಷ್ಟೊಂದು ಪರಿಹಾರ ನೀಡಲು ಆಗುವುದಿಲ್ಲ. ನಾನು ಇದನ್ನು ಒಪ್ಪುವುದಿಲ್ಲ. ನಾವು ರಾಜ್ಯದ ಹಿತ ಕಾಪಾಡಲು ಬದ್ಧ ಎಂದರು.



ಹಿಡಕಲ್ ಜಲಾಶಯದ ಘಟಪ್ರಭಾ ಬಲ ಹಾಗೂ ಎಡ ದಂಡೆ ಕಾಲುವೆಗಳ ಅಭಿವೃದ್ಧಿಗೆ 1722 ಕೋಟಿ ಯೋಜನೆ ತಯಾರಿಸಿ ಕೇಂದ್ರ ಸರ್ಕಾರಕ್ಕೆ ಕಳುಹಿಸಿಕೊಡಲಾಗಿದೆ. ಇದಕ್ಕೆ ಒಪ್ಪಿಗೆ ಸಿಕ್ಕರೆ ಕೇಂದ್ರ ಸರ್ಕಾರದ ಶೇ. 60, ರಾಜ್ಯ ಸರ್ಕಾರದ ಶೇ.40 ವೆಚ್ಚದ ಸಹಭಾಗಿತ್ವದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು. ನೀವು ಹಾಗೂ ನಿಮ್ಮ ಸಂಸದರು ಕೇಂದ್ರ ಸರ್ಕಾರದ ಮೇಲೆ ಹೆಚ್ಚಿನ ಒತ್ತಡ ಹಾಕಬೇಕಿದೆ ಎಂದರು.

ಕಾಲುವೆಗೆ ಪಂಪ್ ಸೆಟ್ ವಿರುದ್ಧ ಕಾನೂನು: ಕಾಲುವೆಗಳಿಗೆ ಅಕ್ರಮ ಪಂಪ್ ಸೆಟ್‌ಗಳನ್ನು ಹಾಕುವುದರ ವಿರುದ್ಧ ಹೊಸ ಕಾನೂನು ತರಲಾಗಿದೆ. ಇದರ ಬಗ್ಗೆ ತರಬೇತಿ ಕಾರ್ಯಕ್ರಮ ನಡೆಯುತ್ತಿದೆ. ಕಾಲುವೆ ಕೊನೆ ಭಾಗಗಳಿಗೆ ನೀರು ತಲುಪಲೇ ಬೇಕಿದೆ. ಉದಾಹರಣೆಗೆ ಪಾಂಡವಪುರ ಭಾಗದವರೇ ಹೆಚ್ಚು ನೀರು ಬಳಸುತ್ತಾರೆ. ಮಳವಳ್ಳಿ ಭಾಗಕ್ಕೆ ನೀರೇ ತಲುಪುತ್ತಿಲ್ಲ. ಇದರ ಬಗ್ಗೆ ಎಲ್ಲಾ ಶಾಸಕರು ಒಪ್ಪಿಕೊಂಡರೆ ಅಭಿಯಾನವನ್ನೇ ಪ್ರಾರಂಭ ಮಾಡೋಣ ಎಂದರು.

ನಾಗರಬೆಟ್ಟ ಏತ ನೀರಾವರಿ ಯೋಜನೆಗೆ ಬಾಕಿ ಉಳಿದಿರುವ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಿ ಕಾಮಗಾರಿ ಪೂರ್ಣಗೊಳಿಸುವ ಮೂಲಕ, 2026 ಮಾರ್ಚ್ ವೇಳೆಗೆ ಲೋಕಾರ್ಪಣೆ ಮಾಡುವಂತೆ ನಾವು ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.

ಸುಮಾರು 3,200 ಹೆಕ್ಟೇರ್‌ಗೆ ನೀರು ಒದಗಿಸುವ ಪ್ರಮುಖ ಯೋಜನೆ ಇದಾಗಿದ್ದು, 170 ಕೋಟಿ ವೆಚ್ಚದಲ್ಲಿ ಈ ಯೋಜನೆ ಮುಕ್ತಾಯಗೊಳಿಸಲು 2017 ರಲ್ಲಿಯೇ ಅನುಮೋದನೆ ನೀಡಲಾಗಿತ್ತು. ಮೂರು ಪ್ಯಾಕೇಜ್ ಗಳಲ್ಲಿ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಸ್ಥಳೀಯ ಸಮಸ್ಯೆಗಳು ಹಾಗೂ ಭೂ ಸ್ವಾಧೀನ ವಿಳಂಬ ಸಮಸ್ಯೆಯಿಂದ ಕಾಮಗಾರಿ ತಡವಾಗಿದೆ. ಇದರ ಬಗ್ಗೆ ಪ್ರತ್ಯೇಕ ತಂಡ ರಚನೆ ಮಾಡಿ ಯೋಜನೆಯನ್ನು ಬೇಗ ಮುಗಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಉತ್ತರಿಸಿದರು.

ಹೇಮಾವತಿ ಎಡ ದಂಡೆ ಅಭಿವೃದ್ಧಿ: 110 ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ಹೇಮಾವತಿ ಎಡದಂಡೆಯ ವಿತರಣಾ ನಾಲೆಗಳ ಅಭಿವೃದ್ಧಿಗೆ ಯೋಜನೆ ರೂಪಿಸಲಾಗಿದೆ. ಆದಷ್ಟು ಬೇಗ ಈ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುವುದು. ವಿತರಣಾ ನಾಲೆ 33ಕ್ಕೆ 10 ಕೋಟಿ ರೂಪಾಯಿ, 34ರಿಂದ 40ರವರೆಗಿನ ನಾಲೆಗಳಿಗೆ 5 ಕೋಟಿ ರೂಪಾಯಿ ನೀಡಲಾಗಿದೆ. ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಎಡದಂಡೆ ನಾಲ ವಿಭಾಗದಲ್ಲಿ ಒಟ್ಟು 14 ವಿತರಣಾ ನಾಲೆಗಳಲ್ಲಿ ಎಂಟು ನಾಲೆಗಳ ಅಭಿವೃದ್ಧಿ ಮಾಡಲಾಗುತ್ತಿದೆ. ಆರು ನಾಲೆಗಳು ಬಾಕಿಯಿವೆ. ಇಲ್ಲಿ ಒಂದಷ್ಟು ಹಳೇ ನಾಲೆಗಳಿವೆ. ಇವುಗಳ ಬಗ್ಗೆ ವರದಿ ತರಿಸಿಕೊಂಡಿದ್ದೇನೆ ಎಂದರು.

ಚನ್ನರಾಯಪಟ್ಟಣ ಅಮಾನಿಕೆರೆಗೆ ಹೇಮಾವತಿ ನೀರು ತುಂಬಿಸುವ ಕೆಲಸ ಹಾಗೂ ಭೂಪರಿಹಾರಕ್ಕೆ ತ್ವರಿತ ಕ್ರಮ ಕೈಗೊಳ್ಳಿ ಎಂದು ಮನವಿ ಮಾಡಿದರು. ಇದರ ಬಗ್ಗೆ ಪ್ರತ್ಯೇಕ ಪ್ರಶ್ನೆಯನ್ನು ಕೇಳಿ ಹಾಗೂ ನನಗೆ ಭೂ ಸ್ವಾಧೀನದ ಬಗ್ಗೆ ಮಾಹಿತಿಯಿಲ್ಲ. ಇದಕ್ಕೆ ಉತ್ತರ ಒದಗಿಸೋಣ ಎಂದರು.

ಡಿ.21ರಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ

5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಿ: ಡಿಸಿ ಡಾ.ಕುಮಾರ್



ಮಂಡ್ಯದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ್ ಮಾತನಾಡಿದರು.

ಮಂಡ್ಯ, ಡಿ.9– ಜಿಲ್ಲೆಯಲ್ಲಿ ಡಿ.21ರಿಂದ 4 ದಿನಗಳ ಕಾಲ ಪಲ್ಸ್ ಪೋಲಿಯೋ ಅಭಿಯಾನ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ್ ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಡಿ.21ರಿಂದ 24ರವರೆಗೆ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸದರಿ ಕಾರ್ಯಕ್ರಮದಲ್ಲಿ 5 ವರ್ಷ ಒಳಪಟ್ಟ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು ಎಂದರು.

ಪಲ್ಸ್ ಪೋಲಿಯೋ ಕುರಿತಾಗಿ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಹೆಚ್ಚಿನ ಜನರಿಗೆ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಕುರಿತು ಮಾಹಿತಿ ಹಾಗೂ ಇದರ ಪ್ರಯೋಜನ ತಿಳಿಸಬೇಕು. ತಾಲೂಕು ಮಟ್ಟದಲ್ಲಿ ಅಧಿಕಾರಿಗಳು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದರು.

ನಗರ ಸ್ಥಳೀಯ ಸಂಸ್ಥೆಗಳು, ಗ್ರಾಮ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಲಸಿಕಾ ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ಮಾಹಿತಿ ತಿಳಿಸಬೇಕು. ಅಂಗನವಾಡಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಪಲ್ಸ್ ಪೋಲಿಯೋ ಲಸಿಕೆ ಕುರಿತು ಹೆಚ್ಚಿನ ಮಾಹಿತಿ ನೀಡಬೇಕು ಎಂದರು.

ಕಾರ್ಯಕ್ರಮಕ್ಕೆ ಸ್ತ್ರೀಶಕ್ತಿ ಗುಂಪುಗಳಿಂದ ನೆರವು ತೆಗೆದುಕೊಳ್ಳಿ. ವಲಸಿಗರು ಹಾಗೂ ಕಟ್ಟಡ ಕಾರ್ಮಿಕರ 5 ವರ್ಷ ಒಳಪಟ್ಟ ಮಕ್ಕಳನ್ನು ಗುರುತಿಸಿ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಬೇಕು ಎಂದರು.

ಜಿಲ್ಲೆಯಲ್ಲಿ 5 ವರ್ಷದೊಳಗಿನ ಒಂದು ಲಕ್ಷದ ಮೂರು ಸಾವಿರ ಮಕ್ಕಳಿದ್ದಾರೆ. 5 ವರ್ಷ ಒಳಪಟ್ಟ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲಿಯೋ ಹಾಕಿಸಬೇಕು. ಚಲನಚಿತ್ರ ಮಂದಿರಗಳು ಹಾಗೂ ಎಲ್ಇಡಿ ಜಾಹೀರಾತು ಪ್ರದರ್ಶನ ಮೂಲಕ ಜಾಗೃತಿ ಪ್ರಚಾರ ಕೈಗೊಳ್ಳಿ. ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಹಾಗೂ ಜನರು ಹೆಚ್ಚು ಸೇರುವ ಜಾಗಗಳಲ್ಲಿ ಲಸಿಕಾ ಬೂತ್‌ಗಳನ್ನು ನಿಯೋಜಿಸಿ. **– ಡಾ.ಕುಮಾರ್, ಜಿಲ್ಲಾಧಿಕಾರಿ.**

ಎನ್‌ಜಿಒಗಳ ಹಾಗೂ ಮಿಮ್ಸ್ ಕಾಲೇಜಿನ ವಿದ್ಯಾರ್ಥಿಗಳ ಸಹಕಾರದೊಂದಿಗೆ ಕಾರ್ಯಕ್ರಮ ಯಶಸ್ವಿಗೊಳಿಸಿ ಸಾಮಾಜಿಕ ಜಾಲತಾಣಗಳ ಮೂಲಕ ಕಾರ್ಯಕ್ರಮದ ಕುರಿತು ಪ್ರಚಾರ ನೀಡಿ ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಮೋಹನ್, ಆರ್‌ಸಿಹೆಚ್ ಅಧಿಕಾರಿ ಡಾ.ಕೆ.ಪಿ.ಅಶ್ವಥ್, ಪಶುಪಾಲನಾ ಇಲಾಖೆ ಉಪ ನಿರ್ದೇಶಕ ಹಾಗೂ ಜಿಪಂ ಉಪ ಕಾರ್ಯದರ್ಶಿ–1 ಶಿವ ಲಿಂಗಯ್ಯ, ನಗರಾಭಿವೃದ್ಧಿ ಕೋಶಾಧಿಕಾರಿ ನರಸಿಂಹ ಮೂರ್ತಿ ಸೇರಿದಂತೆ ಇನ್ನಿತರರಿದ್ದರು.

ತಂಬಾಕು ತ್ಯಜಿಸಿ ಆರೋಗ್ಯಯುತ ಜೀವನ ನಡೆಸಿ

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ.ಬೆನ್ನೂರ್



ಕಾರೇಕುರದಲ್ಲಿ ಗುಲಾಬಿ ಆಂದೋಲನ ಕಾರ್ಯಕ್ರಮ ನಡೆಯಿತು.

ಶ್ರೀರಂಗಪಟ್ಟಣ, ಡಿ.9– ತಂಬಾಕು ಸೇವನೆಯಿಂದ ಕ್ಯಾನ್ಸರ್ ಸೇರಿ ದಂತೆ ಹೃದಯ, ಶ್ವಾಸಕೋಶಕ್ಕೆ ಸಂಬಂಧಿಸಿದ ಮರಣಾಂತಿಕ ಕಾಯಿಲೆಗಳು ಬರುತ್ತವೆ ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ.ಬೆನ್ನೂರ್ ತಿಳಿಸಿದರು.

ತಾಲೂಕಿನ ಕಾರೇಕುರ ಗ್ರಾಮದಲ್ಲಿ ಪಾಲಹಳ್ಳಿ ಆಯುಷ್ಮಾನ್ ಆರೋಗ್ಯ ಕೇಂದ್ರ ಮತ್ತು ಪಿ.ಹೊಸಹಳ್ಳಿ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಆಯೋಜಿಸಿದ್ದ ತಂಬಾಕು ಮುಕ್ತ ಯುವ ಅಭಿಯಾನ ಅಂಗವಾಗಿ ನಡೆದ ಗುಲಾಬಿ ಆಂದೋಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಂಬಾಕಿನಲ್ಲಿ ಸಾವಿರಾರು ವಿಷಕಾರಿ ರಾಸಾಯನಿಕ ವಸ್ತುಗಳಿದ್ದು, ಪ್ರತಿ ವರ್ಷ ವಿಶ್ವಾದ್ಯಂತ ಲಕ್ಷಾಂತರ ಮಂದಿ ತಂಬಾಕು ಸೇವನೆಯಿಂದ ಉಂಟಾಗುವ ಕಾಯಿಲೆಗಳಿಂದ ಸಾವನ್ನಪ್ಪುತ್ತಿದ್ದಾರೆ. ಅದ್ದರಿಂದ ವಿಷಕಾರಿ ತಂಬಾಕು ಸೇವನೆ ತ್ಯಜಿಸಿ, ಆರೋಗ್ಯಯುತ ಜೀವನ ನಡೆಸಬೇಕೆಂದು ಸಲಹೆ ನೀಡಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಜಿ.ಮೋಹನ್ ಮಾತನಾಡಿ, ತಂಬಾಕು ಉತ್ಪನ್ನಗಳ ಸೇವನೆಯಿಂದ ಯುವ ಸಮೂಹ ದಾರಿ ತಪ್ಪುತ್ತಿದ್ದು, ಶಾಲಾ–ಕಾಲೇಜು ಹಂತದಲ್ಲಿಯೇ ತಂಬಾಕು ಸೇವನೆ ಚಟಕ್ಕೆ ಅಂಟಿಕೊಳ್ಳುತ್ತಿರುವುದು ವಿಷಾದನೀಯ ಎಂದರು.

ಪಿಡಿಓ ಶಶಿಕಲಾ ಮಾತನಾಡಿ, ಕಾರೇಕುರ ಗ್ರಾಮವನ್ನು ತಂಬಾಕು ಮುಕ್ತ ಗ್ರಾಮ ಎಂದು ಘೋಷಿಸಲಾಗಿದ್ದು, ಇದಕ್ಕೆ ಸಾರ್ವಜನಿಕರು ಸಹಕರಿಸಬೇಕು. ಕಾಯ್ದೆ ಉಲ್ಲಂಘಿಸಿದಲ್ಲಿ ದಂಡ ವಿಧಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಜಿ.ಬಿ.ಹೇಮಣ್ಣ ಪ್ರತಿಜ್ಞಾ ವಿಧಿ ಬೋಧಿಸಿದರು. ನಂತರ ಗ್ರಾಮದಲ್ಲಿ ಸಂಚರಿಸಿದ ಅಧಿಕಾರಿಗಳು, ತಂಬಾಕು ಸೇವನೆ ಹಾಗೂ ತಂಬಾಕು ಉತ್ಪನ್ನ ಮಾರಾಟ ಮಾಡುತ್ತಿದ್ದ ಅಂಗಡಿಗಳಿಗೆ ಭೇಟಿ ನೀಡಿ ಇನ್ನು ಮುಂದೆ ತಂಬಾಕು ಸೇವನೆ ಹಾಗೂ ಮಾರಾಟ ಮಾಡದಿರಿ ಎಂದು ಕರಪತ್ರದ ಜೊತೆ ಗುಲಾಬಿ ಹೂ ನೀಡಿ ವಿನಂತಿಸಿದರು.

ಗ್ರಾಮದ ಮುಖಂಡರಾದ ಸಿದ್ದೇಗೌಡ, ಕೆ.ಬಿ.ಸ್ವಾಮಿ, ವೆಂಕಟೇಶ್, ಸಮುದಾಯ ಆರೋಗ್ಯ ಅಧಿಕಾರಿ ಅನುಷಾ, ಮುಖ್ಯ ಶಿಕ್ಷಕಿ ಸುಮಾದೇವಿ, ಆರೋಗ್ಯ ನಿರೀಕ್ಷಣಾಧಿಕಾರಿ ರಮ್ಯಾ, ಅಂಗನವಾಡಿ ಕಾರ್ಯಕರ್ತೆ ಗಾಯತ್ರಿ, ಆಶಾ ಕಾರ್ಯಕರ್ತೆಯರಾದ ಬಿಂದು, ಪಾರ್ವತಿ, ನಾಗರತ್ನ, ಮಹಿಳಾ ಸಂಘದ ಪ್ರತಿನಿಧಿಗಳು, ಸಾರ್ವಜನಿಕರು, ಶಾಲಾ ಮಕ್ಕಳಿದ್ದರು.

ಪರಿಶಿಷ್ಟರ 70 ಅರ್ಜಿ ವಿಲೇವಾರಿ



ಮದ್ದೂರಿನ ಪ್ರವಾಸಿ ಮಂದಿರದಲ್ಲಿ ರಾಜ್ಯ ಎಸ್ಸಿ, ಎಸ್ಟಿ ಆಯೋಗದ ಅಧ್ಯಕ್ಷ ಡಾ.ಮೂರ್ತಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಮದ್ದೂರು, ಡಿ.9– ರಾಜ್ಯ ಎಸ್ಸಿ, ಎಸ್ಟಿ ಆಯೋಗದ ಅಧ್ಯಕ್ಷ ಡಾ.ಮೂರ್ತಿ ಅವರು ನಗರದ ಪ್ರವಾಸಿ ಮಂದಿರದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ, ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ನಂತರ ಮಾತನಾಡಿದ ಅವರು, ಆಯೋಗಕ್ಕೆ ಈಗಾಗಲೇ 2800 ಅರ್ಜಿಗಳು ಸಲ್ಲಿಕೆಯಾಗಿವೆ. ಅವುಗಳಲ್ಲಿ 60 ರಿಂದ 70 ಅರ್ಜಿದಾರರ ಸಮಸ್ಯೆಗಳನ್ನು ಬಗೆಹರಿಸಲಾಗಿದೆ. ತಾಲೂಕು ಮಟ್ಟದಲ್ಲಿಯೇ ಸಭೆ ನಡೆಸಿ ಅರ್ಜಿ ಸ್ವೀಕರಿಸಿ ಅಲ್ಲಿಯೇ ಅಧಿಕಾರಿಗಳ ಸಭೆಯನ್ನೂ ನಡೆಸಲು ತೀರ್ಮಾನಿಸಿದ ಹಿನ್ನೆಲೆಯಲ್ಲಿ ಇಂದು ನನ್ನ ಸ್ವಂತ ತಾಲೂಕಾದ ಮದ್ದೂರಿನಲ್ಲಿ ಸಭೆ ನಡೆಸಿದ್ದೇನೆ ಎಂದರು.

ಇಂದು ಸಾರ್ವಜನಿಕವಾಗಿ ಒಟ್ಟು 26 ಅರ್ಜಿಗಳು ಸಲ್ಲಿಕೆಯಾಗಿದ್ದು, ಇದರಲ್ಲಿ ಜಮೀನು, ದೌರ್ಜನ್ಯ, ಸುಳ್ಳು ಜಾತಿ ಸಲ್ಲಿಕೆ ವಿಚಾರಗಳು ಸೇರಿದಂತೆ ಸ್ಮಶಾನ ವಿವಾದಗಳಿಗೆ ಸಂಬಂಧಿಸಿದಂತೆ ಅರ್ಜಿಗಳನ್ನು ಪಡೆಯಲಾಗಿದೆ. ಈ ಬಗ್ಗೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಸಲ್ಲಿಕೆಯಾಗಿರುವ ಅರ್ಜಿಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಶೀಘ್ರ ಬಗೆಹರಿಸಲು ಸೂಚಿಸಿದ್ದೇನೆ ಎಂದರು.

ತಹಸೀಲ್ದಾರ್ ಪರಶುರಾಮ್ ಸತ್ತಿಗೇರಿ, ಸಮಾಜ ಕಲ್ಯಾಣಾಧಿಕಾರಿ ನಾಗರಾಜು, ಮುಖಂಡರಾದ ಚಿದಂಬರ ಮೂರ್ತಿ, ಬಸವರಾಜು, ಕುಮಾರ್, ರಮಾನಂದ್, ಆಲೂರು ಬಸವರಾಜು, ಮಾದೇಶ್, ಕುಮಾರ್, ಮಹದೇವಪ್ಪ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

ಭಾರತೀನಗರದಲ್ಲಿ ಫುಟ್‌ಪಾತ್ ತೆರವು ಕಾರ್ಯಾಚರಣೆ



ಭಾರತೀನಗರದಲ್ಲಿ ಫುಟ್‌ಬಾತ್ ತೆರವು ಕಾರ್ಯಾಚರಣೆ ನಡೆಯಿತು.

ಭಾರತೀನಗರ, ಡಿ.9– ಇಲ್ಲಿನ ಗ್ರಾಪಂ ಸಿಬ್ಬಂದಿ ಹಾಗೂ ಕೆ.ಎಂ.ದೊಡ್ಡಿ ಠಾಣೆ ಪೊಲೀಸರು ಭಾರತೀನಗರದ ಮದ್ದೂರು–ಮಳವಳ್ಳಿ ಮುಖ್ಯರಸ್ತೆಯಲ್ಲಿ ಫುಟ್‌ಪಾತ್ ತೆರವುಗೊಳಿಸಿ, ಬೀದಿ ಬದಿ ವ್ಯಾಪಾರಿಗಳ ವ್ಯಾಪಾರ ವಹಿವಾಟಿಗೆ ಮಾರ್ಗಸೂಚಿ ನಿಗದಿಪಡಿಸಿದರು.

ವ್ಯಾಪಾರಿಗಳು ರಸ್ತೆ ಬದಿ ವ್ಯಾಪಾರ ಮಾಡುತ್ತಿದ್ದರಿಂದ ವಾಹನ ಸವಾರರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ರಸ್ತೆಯಲ್ಲಿ ಸಂಚರಿಸಲು ತೊಂದರೆಯಾಗುತ್ತಿತ್ತು ಅಲ್ಲದೇ ಅನೇಕ ಅಪಘಾತಗಳು ಸಂಭವಿಸುತ್ತಿದ್ದವು. ಇದನ್ನು ಮನಗಂಡ ಪಿಡಿಓ ಎನ್.ಸುಧಾ ಮತ್ತು ಸದಸ್ಯರು ಹಾಗೂ ಕೆ.ಎಂ.ದೊಡ್ಡಿ ಎಸ್‌ಐ ಅನಿಲ್ ಕುಮಾರ್ ನೇತೃತ್ವದಲ್ಲಿ ವರ್ತಕರ ಸಭೆ ಕರೆದು ವಾಹನ ಸಂಚಾರ ಸುಗಮಗೊಳಿಸಿ ಅಪಘಾತ ತಪ್ಪಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ನಿರ್ಧರಿಸಿ, ಫುಟ್‌ಪಾತ್‌ನಲ್ಲಿ ಬಿಳಿ ಪಟ್ಟೆ ಹಾಕುವ ಮೂಲಕ ರಸ್ತೆ ಬದಿ ವ್ಯಾಪಾರಿಗಳಿಗೆ ಜಾಗೃತಿ ಮೂಡಿಸಿದರು.

ಪಿಡಿಓ ಎನ್.ಸುಧಾ ಮಾತನಾಡಿ, ಹಲವು ದಿನಗಳಿಂದ ಸಾರ್ವಜನಿಕರು ಫುಟ್‌ಪಾತ್ ತೆರವುಗೊಳಿಸುವಂತೆ ಗ್ರಾಪಂಗೆ ಅರ್ಜಿ ಸಲ್ಲಿಸುತ್ತಿದ್ದರು. ಹಾಗಾಗಿ ಗ್ರಾಪಂ ಮತ್ತು ಆರಕ್ಷಕ ಸಿಬ್ಬಂದಿ ಒಗ್ಗೂಡಿ ಫುಟ್‌ಪಾತ್ ತೆರವುಗೊಳಿಸಿ 6 ಅಡಿಗೆ ಪಟ್ಟೆ ಹಾಕಲಾಗಿದೆ. ಪಟ್ಟೆ ಬಿಟ್ಟು ರಸ್ತೆ ಬದಿಗೆ ಬಂದು ವ್ಯಾಪಾರ ಮಾಡಿದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಜೊತೆಗೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಗ್ರಾಪಂ ಸದಸ್ಯ ಪುಟ್ಟರಾಮು ಮಾತನಾಡಿ, ಪಟ್ಟಣದಲ್ಲಿ ವಾಹನ ದಟ್ಟಣೆ ಹೆಚ್ಚಾಗುತ್ತಿದ್ದು, ಶ್ರೀಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆಗೆ ನಿತ್ಯ ಎತ್ತಿನಗಾಡಿಗಳು ಕಬ್ಬು ಸಾಗಿಸುತ್ತಿವೆ. ಹೀಗಾಗಿ ಫುಟ್‌ಪಾತ್‌ನಲ್ಲಿ ಅಂಗಡಿ ಹಾಕಿರುವುದರಿಂದ ವಾಹನ ಸವಾರರಿಗೆ ತೊಂದರೆಯಾಗಿ ಅಪಘಾತ ಹೆಚ್ಚಾಗುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ. ಇದಕ್ಕೆ ವ್ಯಾಪಾರಿಗಳು ಸಹಕರಿಸಬೇಕು ಎಂದರು.

ಈ ವೇಳೆ ಕೆ.ಎಂ.ದೊಡ್ಡಿ ಠಾಣೆ ಎಸ್‌ಐ ಅನಿಲ್ ಕುಮಾರ್, ಎಎಸ್‌ಐ ವೆಂಕಟೇಶ್, ಗ್ರಾಪಂ ಅಧ್ಯಕ್ಷೆ ಅನಿತಾ, ಸದಸ್ಯರಾದ ಕೆ.ವಿ.ಶ್ರೀನಿವಾಸ್, ವೆಂಕಟೇಶ್, ಕೆ.ಟಿ.ಶ್ರೀನಿವಾಸ್, ಮಂಜುನಾಥ್, ಸಿದ್ದರಾಜು, ಮಿಥುನ್, ಪೊಲೀಸ್ ಸಿಬ್ಬಂದಿ ಇದ್ದರು.

ಡಿ.12, ಜನಸಂಪರ್ಕ ಸಭೆ

ಮಂಡ್ಯ, ಡಿ.9– ಮಂಡ್ಯ ವಿಭಾಗ ವ್ಯಾಪ್ತಿಯ ಮಂಡ್ಯ, ಕೊತ್ತತ್ತಿ ಮತ್ತು ಕೆರಗೋಡು ಉಪ ವಿಭಾಗಗಳ ವ್ಯಾಪ್ತಿಯ ವಿದ್ಯುತ್ ಸಮಸ್ಯೆಗಳ ಕುರಿತು ಚರ್ಚಿಸಲು ವಿದ್ಯುತ್ ಗ್ರಾಹಕರ ಕುಂದು ಕೊರತೆ ವಿಚಾರಣೆ ಜನ ಸಂಪರ್ಕ ಸಭೆಯನ್ನು ಅಧೀಕ್ಷಕ ಇಂಜಿನಿಯರ್ (ವಿ), ಮಂಡ್ಯ ವೃತ್ತ ಅವರ ಅಧ್ಯಕ್ಷತೆಯಲ್ಲಿ ಡಿ.12ರಂದು ಬೆಳಗ್ಗೆ 11 ಗಂಟೆಗೆ ಮಂಡ್ಯ ವಿಭಾಗ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಚಿರತೆ ದಾಳಿ: ರೈತನಿಗೆ ತೀವ್ರ ಗಾಯ



ಕೆ.ಆರ್.ಪೇಟೆ, ಡಿ.9– ಚಿರತೆ ದಾಳಿಗೆ ರೈತರೊಬ್ಬರು ತೀವ್ರವಾಗಿ ಗಾಯಗೊಂಡಿರುವ ಘಟನೆ ತಾಲೂಕಿನ ಕತ್ತರಘಟ್ಟ ಗ್ರಾಮದಲ್ಲಿ ಸೋಮವಾರ ರಾತ್ರಿ ನಡೆದಿದೆ.

ಗ್ರಾಮದ ನಿವಾಸಿ ಸತೀಶ್ ಅವರ ಪುತ್ರ ಕಿರಣ್ ಗಾಯಗೊಂಡವರು. ಈತ ಸೋಮವಾರ ರಾತ್ರಿ ಜಮೀನಿಗೆ ತೆರಳಿ ಗ್ರಾಮಕ್ಕೆ ವಾಪಸ್ಸಾಗುವಾಗ ಚಿರತೆ ದಾಳಿ ನಡೆಸಿದ್ದು, ತೀವ್ರ ಗಾಯಗೊಂಡ ಕಿರಣ್ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ. ಚಿರತೆ ದಾಳಿ ನಡೆಸಿರುವ ಸಂಬಂಧ ಗ್ರಾಮಸ್ಥರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿದರಾದರೂ ಅಧಿಕಾರಿಗಳು ಕರೆ ಸ್ವೀಕರಿಸಿರಲಿಲ್ಲ.

ಗಾಯಾಳುವಿಗೆ ನೆರವಾದ ತಹಸೀಲ್ದಾರ್: ಅರಣ್ಯ ಇಲಾಖೆ ಅಧಿಕಾರಿಗಳು ದೂರವಾಣಿ ಕರೆ ಸ್ವೀಕರಿಸದ ಕಾರಣ ತಹಸೀಲ್ದಾರ್ ಡಾ.ಎಸ್.ಯು.ಅಶೋಕ್ ಅವರಿಗೆ ಚಿರತೆ ದಾಳಿಗೆ ಒಳಗಾಗಿ ತೀವ್ರ ಗಾಯಗೊಂಡಿರುವ ಕಿರಣ್‌ಗೆ ಅಗತ್ಯ ಚಿಕಿತ್ಸೆ ಕೊಡಿಸಲು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಆದೇಶಿಸುವಂತೆ ಗ್ರಾಮಸ್ಥರು ಮನವಿ ಮಾಡಿದರು.

ಇದಕ್ಕೆ ಸ್ಪಂದಿಸಿದ ತಹಸೀಲ್ದಾರ್ ಡಾ.ಎಸ್.ಯು.ಅಶೋಕ್ ಆರ್‌ಎಫ್‌ಓ ಅನಿತಾ ಅವರಿಗೆ ಕರೆ ಮಾಡಿ ರೈತನ ಚಿಕಿತ್ಸೆಗೆ ನೆರವಾಗುವಂತೆ ತಿಳಿಸಿದರು. ಈ ವೇಳೆ ಅರಣ್ಯ ಇಲಾಖೆ ಅಧಿಕಾರಿಗಳು ಕತ್ತರಘಟ್ಟಕ್ಕೆ ಆಗಮಿಸಿ ಕಿರಣ್‌ನನ್ನು ಕರೆದೊಯ್ದು ತಾಲೂಕು ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ವನ್ಯಜೀವಿ ಸುರಕ್ಷಾ ಇಲಾಖೆ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಗ್ರಾಮಸ್ಥರ ಆಕ್ರೋಶ: ರೈತರ ಸಾಕು ಪ್ರಾಣಿಗಳಾದ ಕುರಿ ಮೇಕೆ, ಹಸು, ಎಮ್ಮೆಯನ್ನು ವಾರಕ್ಕೊಮ್ಮೆಯಾದರೂ ಹೊತ್ತೊಯ್ದು ತಿಂದು ಹಾಕುತ್ತಿರುವ ಚಿರತೆ ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ವಿಫಲವಾಗಿದೆ ಎಂದು ಕತ್ತರಘಟ್ಟ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಂಚೆ ಅದಾಲತ್

ಮಂಡ್ಯ, ಡಿ.9– ಮಂಡ್ಯ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಡಿ.15 ರಂದು ಮಧ್ಯಾಹ್ನ 3 ಗಂಟೆಗೆ ಅಂಚೆ ಅದಾಲತ್ ಏರ್ಪಡಿಸಲಾಗಿದೆ. ಸಾರ್ವಜನಿಕರು ಅಂಚೆ ಸೇವೆಗಳ ಬಗ್ಗೆ, ಕುಂದು ಕೊರತೆ ಇದ್ದಲ್ಲಿ ಡಿ.12ರೊಳಗೆ ಅಂಚೆ ಅಧೀಕ್ಷಕರ ಕಚೇರಿಗೆ ಲಿಖಿತ ರೂಪದಲ್ಲಿ ತಲುಪಿಸುವಂತೆ ಹಾಗೂ ಇಚ್ಛೆಯುಳ್ಳ ಸಾರ್ವಜನಿಕರು ತಮ್ಮ ಸ್ವಂತ ಖರ್ಚಿನಲ್ಲಿ ಅಂಚೆ ಅದಾಲತ್‌ನಲ್ಲಿ ಭಾಗವಹಿಸುವಂತೆ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಪ್ರಕ್ರಿಯೆಯಲ್ಲಿ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ

ಹೈಕೋರ್ಟ್ 2021ರ ಜನವರಿಯಲ್ಲಿ ಎತ್ತಿಹಿಡಿದಿದೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಬಾಧಿತ ಸಾಲಗಾರರಲ್ಲಿ ಒಬ್ಬರು ನಂತರ 2023ರ ಆಗಸ್ಟ್‌ನಲ್ಲಿ ಸುಪ್ರೀಂಕೋರ್ಟ್‌ನಲ್ಲಿ ಸಲ್ಲಿಸಿದ್ದ ತಮ್ಮ ವಿಶೇಷ ರಜೆ ಅರ್ಜಿಯನ್ನು ಹಿಂತೆಗೆದುಕೊಂಡರು. ಆದರೆ, ಇನ್ನೊಂದು ಅರ್ಜಿ ಬಾಕಿ ಇದೆ. ಆದಾಗ್ಯೂ, ಸರ್ಫೇಸಿ ಕ್ರಮಕ್ಕೆ ಯಾವುದೇ ತಡೆಯಾಜ್ಞೆ ಇಲ್ಲ, ಇದರಿಂದಾಗಿ ಬ್ಯಾಂಕುಗಳು ಹರಾಜು ಪ್ರಕ್ರಿಯೆಯನ್ನು ಮುಂದುವರಿಸಬಹುದು.

ಮಾರುಕಟ್ಟೆಯ ಏರಿಳಿತ ಮತ್ತು ಹೆಚ್ಚುತ್ತಿರುವ ಇನ್‌ಪುಟ್ ವೆಚ್ಚಗಳಿಂದಾಗಿ ಮರುಪಾವತಿ ವಿಳಂಬವಾಗಿರುವುದರಿಂದ ಆನ್‌ಲೈನ್ ಹರಾಜನ್ನು ನಿಲ್ಲಿಸಬೇಕೆಂಬ ಬೆಳೆಗಾರರ ಬೇಡಿಕೆಗಳಿಗೆ, ಕೇಂದ್ರವು ವೈಯಕ್ತಿಕ ವಸೂಲಾತಿ ಪ್ರಕರಣಗಳಲ್ಲಿ ಮಧ್ಯಪ್ರವೇಶಿಸುವುದಿಲ್ಲ ಎಂದಿದೆ. 'ಸರ್ಕಾರವು ಬ್ಯಾಂಕ್‌ಗಳು ಅಥವಾ ಹಣಕಾಸು ಸಂಸ್ಥೆಗಳ ವಾಣಿಜ್ಯಿಕ ನಿರ್ಧಾರಗಳು ಅಥವಾ ವಸೂಲಾತಿ ಪ್ರಕ್ರಿಯೆಗಳಲ್ಲಿ ಭಾಗಿಯಾಗುವುದಿಲ್ಲ' ಎಂದು ಸಚಿವರು ತಮ್ಮ ಉತ್ತರದಲ್ಲಿ ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಕಾಫಿ ತೋಟಗಳನ್ನು ದುಬೈನ ವ್ಯಾಪಾರಿಗಳು ಆನ್‌ಲೈನ್‌ನಲ್ಲಿ ಪರವಾನಗಿ ಪಡೆಯುವ ಮೂಲಕ ದುರ್ಬಳಕೆ ಮಾಡುತ್ತಿದ್ದಾರೆ ಎಂಬ ಆರೋಪಗಳಿಗೆ ಪ್ರತಿಕ್ರಿಯಿಸಿದ ಸರ್ಕಾರ, ಕಾಫಿ ಮಂಡಳಿಗೆ ಅಂತಹ ಯಾವುದೇ ಮಾಹಿತಿ ಬಂದಿಲ್ಲ ಎಂದು ಹೇಳಿದೆ. ತೊಂದರೆಗೀಡಾದ ಬೆಳೆಗಾರರಿಗೆ ಇರುವ ಏಕೈಕ ಪರಿಹಾರವೆಂದರೆ ಸರ್ಫೇಸಿ ಕಾಯ್ದೆಯ ಸೆಕ್ಷನ್ 17ರ ಅಡಿಯಲ್ಲಿ ಸಾಲ ವಸೂಲಾತಿ ನ್ಯಾಯಮಂಡಳಿಯನ್ನು ಸಂಪರ್ಕಿಸುವುದು ಎಂದು ಕೇಂದ್ರವು ಗಮನಸೆಳೆದಿದೆ. ಕಾಫಿ ಬೆಳೆಗಾರರಿಗೆ ಪ್ರತ್ಯೇಕ ನೀತಿ ಪರಿಹಾರ ಅಥವಾ ಹರಾಜು ನಿಷೇಧವನ್ನು ಘೋಷಿಸಲಾಗಿಲ್ಲ.

ಕುಗ್ಗುತ್ತಿರುವ ಕಾಫಿ ಇಳುವರಿ, ಕಾರ್ಮಿಕರ ಕೊರತೆ ಮತ್ತು ಹವಾಮಾನ ಒತ್ತಡಗಳ ಮಧ್ಯೆ ಕರ್ನಾಟಕದ ಕಾಫಿ ಬೆಳೆಗಾರರ ಸಂಘಗಳು ಸರ್ಕಾರದ ತುರ್ತು ಬೆಂಬಲ ಕೋರುತ್ತಿರುವಾಗ ಸಂಸತ್ತಿನ ಉತ್ತರವು ಬಂದಿದೆ. ಕರ್ನಾಟಕವು ಭಾರತದ ಅಗ್ರ ಕಾಫಿ ಉತ್ಪಾದಕನಾಗಿ ಉಳಿದಿದೆ. 2022–23ರಲ್ಲಿ 248,020 ಮೆಟ್ರಿಕ್ ಟನ್ ಕಾಫಿ ಕೊಡುಗೆ ನೀಡುವ ಮೂಲಕ ಕೇರಳ ಮತ್ತು ತಮಿಳುನಾಡನ್ನು ಹಿಂದಿಕ್ಕಿದೆ.

ಈ ತಿಂಗಳು ಚಿಕ್ಕಮಗಳೂರು ಜಿಲ್ಲೆಗೆ ಭೇಟಿ ನೀಡುತ್ತಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರನ್ನು ಕಾಫಿ ಬೆಳೆಗಾರರು ಭೇಟಿ ಮಾಡಲಿದ್ದಾರೆ ಎಂದು ಕರ್ನಾಟಕ ಬೆಳೆಗಾರರ ಒಕ್ಕೂಟದ ಅಧ್ಯಕ್ಷ ಎಚ್.ಶಿವಣ್ಣ ತಿಳಿಸಿದ್ದಾರೆ. 'ನಮ್ಮ ಪ್ರಮುಖ ಬೇಡಿಕೆಗಳನ್ನು ಈಡೇರಿಸಲು ಬೆಳೆಗಾರರ ರಕ್ಷಣೆಗೆ ಬರುವ ಅಗತ್ಯವನ್ನು ನಾವು ಅವರಿಗೆ ತಿಳಿಸುತ್ತೇವೆ' ಎಂದು ಅವರು ಹೇಳಿದರು.

ತಡೆಯಾಜ್ಞೆ ಹಿಂಪಡೆದ ನ್ಯಾಯಮೂರ್ತಿ..!

ಹೆಚ್ಚುವರಿ ಅಡ್ವೊಕೇಟ್ ಜನರಲ್ ಪ್ರತಿಮಾ ಹೊನ್ನಾಪುರ ಹಾಗೂ ಮಧ್ಯಂತರ ಅರ್ಜಿದಾರರ ಪರ ಪದಾಂಕಿತ ಹಿರಿಯ ವಕೀಲ ರವಿವರ್ಮ ಕುಮಾರ್ ನ್ಯಾಯಪೀಠದ ಮುಂದೆ ಹಾಜರಾಗಿ, 'ಪ್ರತಿವಾದಿಗಳ ಆಕ್ಷೇಪಣೆ ಆಲಿಸದೇ ಅರ್ಜಿದಾರರ ಮಧ್ಯಂತರ ಆದೇಶ ಮಾನ್ಯ ಮಾಡಲಾಗಿದೆ' ಎಂದು ಆದೇಶಕ್ಕೆ ತೀವ್ರ ತಕರಾರು ವ್ಯಕ್ತಪಡಿಸಿದರು.

ನ್ಯಾಯಪೀಠದ ಮಧ್ಯಂತರ ಆದೇಶಕ್ಕೆ ವಿರೋಧ ವ್ಯಕ್ತಪಡಿಸಿದ ಶಶಿಕಿರಣ ಶೆಟ್ಟಿ ಅವರು, 'ಋತುಚಕ್ರದ ರಜೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ನೀತಿ ರೂಪಿಸಬೇಕು ಎಂದು ಸುಪ್ರೀಂ ಕೋರ್ಟ್ ಪ್ರಕರಣವೊಂದರಲ್ಲಿ ಆದೇಶಿಸಿದೆ. ಇದಕ್ಕೆ ಅನುಗುಣವಾಗಿಯೇ ರಾಜ್ಯ ಕಾನೂನು ಆಯೋಗ ಶಿಫಾರಸು ಮಾಡಿದೆ. ಇದನ್ನೆಲ್ಲಾ ಪರಿಗಣಿಸಿಯೇ, ರಾಜ್ಯ ಸರ್ಕಾರ ಸಾಂವಿಧಾನಿಕವಾಗಿ ಕೊಡಮಾಡಲಾಗಿರುವ 142ನೇ ವಿಧಿಯಡಿ ತನ್ನ ಅಧಿಕಾರ ಬಳಸಿ ಈ ಕ್ರಮ ಕೈಗೊಂಡಿದೆ. ಅಧಿಸೂಚನೆ ಕಾನೂನು ಬದ್ಧವಾಗಿಯೇ ಇದೆ. ಹೀಗಿರುವಾಗ, ಸರ್ಕಾರದ ವಿಸ್ತೃತ ವಾದ ಆಲಿಸದೆಯೇ ಅಧಿಸೂಚನೆಗೆ ತಡೆ ನೀಡಿರುವುದು ಸಲ್ಲ' ಎಂದು ಆಕ್ಷೇಪ ವ್ಯಕ್ತಪಡಿಸಿ ತಡೆ ತೆರವುಗೊಳಿಸುವಂತೆ ಮನವಿ ಮಾಡಿದರು.

ಇದನ್ನು ಪರಿಗಣಿಸಿದ ನ್ಯಾಯಪೀಠ ಬೆಳಿಗ್ಗೆಯಷ್ಟೇ ಸರ್ಕಾರದ ಅಧಿಸೂಚನೆಗೆ ನೀಡಿದ್ದ ತನ್ನದೇ ತಡೆಯಾಜ್ಞೆ ಆದೇಶವನ್ನು ಹಿಂಪಡೆಯಿತು. ಬುಧವಾರ (ಡಿ.10) ಉಭಯ ಪಕ್ಷಕಾರರ ವಾದ ಆಲಿಸಿ, 'ಮಧ್ಯಂತರ ತಡೆ ಆದೇಶದ ಬಗ್ಗೆ ಸೂಕ್ತ ನಿರ್ಣಯ ಹೊರಡಿಸಲಾಗುವುದು' ಎಂದು ತಿಳಿಸಿತು.

ಅರ್ಜಿಯಲ್ಲಿ ಏನಿದೆ: ಮಹಿಳಾ ನೌಕರರಿಗೆ ಋತುಚಕ್ರದ ಸಮಯದಲ್ಲಿ ತಿಂಗಳಲ್ಲಿ ಒಂದು ದಿನದ ಮಟ್ಟಿಗೆ ವೇತನ ಸಹಿತ ಮುಟ್ಟಿನ ರಜೆ ಒದಗಿಸಬೇಕು ಎಂದು ರಾಜ್ಯ ಸರ್ಕಾರದ ಕಾರ್ಮಿಕ ಇಲಾಖೆ 2025ರ ನವೆಂಬರ್ 20ರಂದು ಅಧಿಸೂಚನೆ ಹೊರಡಿಸಿತ್ತು. ಇದು ಸಂವಿಧಾನದ 14ನೇ ವಿಧಿಗೆ ವಿರುದ್ಧವಾಗಿದ್ದು ರದ್ದುಗೊಳಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

ಯತೀಂದ್ರ ವರಿಷ್ಠರೇ...!

ಯತೀಂದ್ರ, ಇಂದೂ ಕೂಡ ತಮ್ಮ ಹೇಳಿಕೆ ಅಚಲ ಎಂದಿದ್ದಾರೆ. ನಿನ್ನೆ ನಾನು ಏನು ಹೇಳಬೇಕೋ ಅದನ್ನು ಹೇಳಿದ್ದೇನೆ. ಮತ್ತೆ ನಾನು ಅದರ ಬಗ್ಗೆ ಚರ್ಚೆ ಮಾಡುವುದಿಲ್ಲ. ನೀವು ಮಾಧ್ಯಮದವರೂ ಸಹ ಅದನ್ನು ಕೇಳಬೇಡಿ ಎಂದರು.

ವರಿಷ್ಠರ ಆದೇಶದವರೆಗೆ ಸಿದ್ದರಾಮಯ್ಯ ಸಿಎಂ: ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ವರಿಷ್ಠರ ಆದೇಶದವರೆಗೂ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿರುತ್ತಾರೆ. ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ, ಉಪಹಾರ ಸಭೆ ಬಳಿಕ ಎಲ್ಲವೂ ತಿಳಿಯಾಗಿದೆ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಒಟ್ಟಾಗಿ ಕೆಲಸ ಮಾಡುತ್ತಿದ್ದಾರೆ. ಯತೀಂದ್ರ ಹೇಳಿಕೆ ವೈಯಕ್ತಿಕವಾದುದು ಎಂದರು.

ಸಿಎಂ ಕುರ್ಚಿ ಖಾಲಿ ಇಲ್ಲ: ಯತೀಂದ್ರ ಹೇಳಿಕೆಯನ್ನು ಸಚಿವ ಕೆ.ಜೆ.ಜಾರ್ಜ್ ಸಮರ್ಥಿಸಿಕೊಂಡರೆ, ಜಮೀರ್ ಅಹಮದ್ ಖಾನ್ ಮಾತ್ರ ಅಡ್ಡಗೋಡೆ ಮೇಲೆ ದೀಪ ಇಟ್ಟಂತೆ, ಸಿಎಂ ಕುರ್ಚಿ ಖಾಲಿ ಇಲ್ಲ ಎಂದಿದ್ದಾರೆ.

ಸಿದ್ದರಾಮಯ್ಯ ಬಳಿಕ ಸತೀಶ್ ಜಾರಕಿಹೊಳಿ ಸಿಎಂ ಆದರೆ ಖುಷಿ

ಸುವರ್ಣ ವಿಧಾನಸೌಧ, ಡಿ.9– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಯಾರಾದರೂ ಒಬ್ಬರು ಉತ್ತರಾಧಿಕಾರಿ ಯಾಗಬೇಕು. ಅದು ಸತೀಶ್ ಜಾರಕಿಹೊಳಿ ಆದರೆ ಬಹಳ ಸಂತೋಷ ಎಂದು ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡುತ್ತಾ ಸಿದ್ದರಾಮಯ್ಯ ಅವರಿಗೆ ಸತೀಶ್ ಉತ್ತರಾಧಿಕಾರಿಯಾಗುತ್ತಾರೆ ಎಂಬ ಚರ್ಚೆ ಇರುವ ಕುರಿತ ಪ್ರಶ್ನೆಗೆ ಉತ್ತರಿಸಿದ ಹರಿಪ್ರಸಾದ್, 'ಸತೀಶ್ ಅಹಿಂದ ಪರ ಧ್ವನಿ ಎತ್ತುವವರು. ಮೌಢ್ಯ, ಮೂಢ ನಂಬಿಕೆ ವಿರುದ್ಧ ಹೋರಾಟ ಮಾಡುವವರು. ದುರ್ಬಲ ವರ್ಗದವರ ಬಗ್ಗೆ ಕಾಳಜಿ ಇರುವವರು. ಇನ್ನು, ಸಿದ್ದರಾಮಯ್ಯ ಅವರಿಗೆ ಯಾರಾದರೂ ಉತ್ತರಾಧಿಕಾರಿ ಬೇಕಲ್ಲವೇ. ಅದು ಸತೀಶ್ ಆದರೆ ಬಹಳ ಸಂತೋಷ' ಎಂದರು.

ಮೈಸೂರಲ್ಲಿ 300 ಎಕರೆ ಭೂಮಿ ಖರೀದಿ

ಜಾತಿ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿವೆ. ಇದು ಸಂವಿಧಾನ ಆಶಯಕ್ಕೆ ವಿರುದ್ಧವಾಗಿದ್ದು, ಅಂತಹ ಸಂಘಗಳಿಗೆ ನಗರಾಭಿವೃದ್ಧಿ ಇಲಾಖೆಯು ಅನುಮೋದನೆ ನೀಡಬಾರದು.

ರಾಜ್ಯದ ಜಲಮೂಲಗಳಾದ ಪ್ರಮುಖ ನದಿಗಳು ಹಾಗೂ ಕೆರೆಗಳು ಕಲುಷಿತವಾಗುತ್ತಿದ್ದು, ಗಂಗಾನದಿ ಸ್ವಚ್ಛಗೊಳಿಸಲು ಕೇಂದ್ರ ಸರ್ಕಾರ ಜಾರಿ ಮಾಡಿರುವ 'ನವಾಮಿ ಗಂಗೆ' ಕಾರ್ಯಕ್ರಮದ ಮಾದರಿಯಲ್ಲಿ ರಾಜ್ಯದ ನದಿಗಳನ್ನೂ ಸ್ವಚ್ಛಗೊಳಿಸಬೇಕು. ರಾಜ್ಯ ಸರ್ಕಾರವು ನದಿಗಳ ಸ್ವಚ್ಛತೆ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಬೇಕು.

ನಗರ ಪ್ರದೇಶಗಳಲ್ಲಿ ಕಲುಷಿತ ನೀರನ್ನು ನದಿ ಅಥವಾ ಕೆರೆಗಳಿಗೆ ಬಿಡುವ ಪ್ರವೃತ್ತಿ ಹೆಚ್ಚಾಗಿದೆ. ಇದರಿಂದಾಗಿ ಮೈಸೂರಿನಲ್ಲೇ ಅನೇಕ ಕೆರೆಗಳು ಕಲುಷಿತಗೊಂಡಿವೆ. ಇದರಂತೆ ಕಲುಷಿತ ನೀರನ್ನು ಕಾವೇರಿ, ಕಪಿಲ ನದಿಗಳಿಗೂ ಬಿಡಲಾಗುತ್ತಿದೆ. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು 14 ನದಿಗಳು ಮಲೀನಗೊಳ್ಳುತ್ತಿರುವ ಬಗ್ಗೆ ವರದಿ ಬಿಡುಗಡೆ ಮಾಡಿದೆ. ಇದು ಆತಂಕಕಾರಿ ಬೆಳವಣಿಗೆ. ಈ ನಿಟ್ಟಿನಲ್ಲಿ ಕಾವೇರಿ ಸೇರಿದಂತೆ ರಾಜ್ಯದ ಎಲ್ಲಾ ನದಿಗಳನ್ನೂ ಕೇಂದ್ರ ಸರ್ಕಾರದ ಸಹಯೋಗದಲ್ಲಿ ಸ್ವಚ್ಛತೆಗೊಳಿಸುವ ಕಾರ್ಯಕ್ರಮ ಜಾರಿ ಮಾಡಬೇಕು ಎಂದು ಶಿವಕುಮಾರ್ ಆಗ್ರಹಪಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ಮೈಸೂರಿನಲ್ಲಿ ಜನತೆಗೆ ನಿವೇಶನ ನೀಡುವ ಸಲುವಾಗಿ 300 ಎಕರೆ ಭೂಮಿ ಖರೀದಿಸಲು ಅಧಿಕಾರಿಗಳಿಗೆ ಈಗಾಗಲೇ ಸಭೆ ನಡೆಸಿ ಸೂಚಿಸಲಾಗಿದೆ ನಗರ ಪ್ರದೇಶದಿಂದ ಕೆರೆಗಳು ಹಾಗೂ ನದಿಗಳಿಗೆ ತ್ಯಾಜ್ಯ ನೀರು ಸೇರಿದಂತೆ ಇಲಾಖೆಯು ಜಾಗೃತಿ ಮೂಡಿಸುತ್ತಿದೆ. ಇದನ್ನೂ ಮೀರಿ ತ್ಯಾಜ್ಯ ನೀರು ಬಿಡುವುದು ಕಂಡುಬಂದರೆ ಅಂತಹವರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಅನಧಿಕೃತ ಬಡಾವಣೆಗಳ ನಿವೇಶನಕ್ಕೆ ಎ–ಖಾತಾ

ಸಂಪುಟ ಸಭೆಯಲ್ಲಿ ನಿರ್ಧಾರ

ಸುವರ್ಣ ವಿಧಾನಸೌಧ (ಬೆಳಗಾವಿ), ಡಿ.9– ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದ, ಅನಧಿಕೃತ ಬಡಾವಣೆಗಳ ಸ್ವತ್ತುಗಳಿಗೆ ಎ–ಖಾತಾ ನೀಡುವ ಕುರಿತು ಸಂಪುಟ ಸಭೆಯಲ್ಲಿ ಚರ್ಚಿಸಿ, ನಿರ್ಧಾರ ಕೈಗೊಳ್ಳ ಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಹೇಳಿದರು. ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್‌ನ ರಾಮೋಜಿಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದ ವಿನ್ಯಾಸಗಳು, ವಿವಿಧ ಯೋಜನೆಗಳಲ್ಲಿ ಮಂಜೂರಾದ ನಿವೇಶನಗಳಿಗೆ ಈಗಾಗಲೇ ಬಿ–ಖಾತಾ ನೀಡಲಾಗುತ್ತಿದೆ. ತೆರಿಗೆ ವ್ಯಾಪ್ತಿಗೆ ಒಳಪಡಿಸಲಾಗುತ್ತಿದೆ. ಎ–ಖಾತಾ ನೀಡಲು ಬೇಡಿಕೆ ಇದೆ ಎಂದರು.

ಪೌರಾಡಳಿತ ಸಚಿವ ರಹೀಂ ಖಾನ್ ಮಾತನಾಡಿ, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದ ವಿನ್ಯಾಸಗಳ, ಗ್ರಾಮ ಠಾಣಾ, ವಿವಿಧ ಯೋಜನೆಯಡಿ ಮಂಜೂರಾದ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಪರವಾನಗಿ ನೀಡಲಾಗುತ್ತಿದ್ದು, ಇದರಿಂದಾಗಿ ಭೂ–ಪರಿವರ್ತನೆ ಹಾಗೂ ಕಟ್ಟಡ ನಿರ್ಮಾಣಕ್ಕೆ ಯಾವುದೇ ರೀತಿಯ ತೊಂದರೆ ಇಲ್ಲ. ಅಧಿಕೃತ ನಿವೇಶನ ಕಟ್ಟಡಗಳಿಗೆ ನಮೂನೆ–3 ಮತ್ತು ಅನುಮೋದನೆ ಪಡೆಯದ ಸ್ವತ್ತುಗಳಿಗೆ ನಮೂನೆ 3–ಎ ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಕಟ್ಟಡ ಪರವಾನಿಗೆ ಕೋರಿ ವಾಸ್ತುಶಿಲ್ಪ ಶಾಸ್ತ್ರಜ್ಞರ ಮೂಲಕ ಅಗತ್ಯ ದಾಖಲೆಗಳ ಜತೆ ಅರ್ಜಿ ಸಲ್ಲಿಸಿದ 15 ದಿನಗಳ ಒಳಗಾಗಿ ಕಟ್ಟಡ ಪರವಾನಗಿ ನೀಡಲಾಗುತ್ತಿದೆ. ಖಾತಾ ಪಡೆಯಲು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಕಾರ್ಯವಿಧಾನ ಹೊರಡಿಸಲಾಗಿದೆ ಎಂದರು.

ವಿಡಿಯೋ ಮಾಡಿ ವಿಕೃತಿ ಮೆರೆದ ಹಂತಕರು!

ಆಟೋ ಚಾಲಕ ಎನ್ನುವುದು ಗೊತ್ತಾಗಿದೆ. ಒಟ್ಟಿಗೆ ಹೋಗಿ ಪಾರ್ಟಿ ಮಾಡಿ, ಕೊನೆಗೆ ಹತ್ಯೆಗೈದಿದ್ದಾರೆ.

ವೀಡಿಯೋ ಮಾಡಿ ಕ್ರೌರ್ಯ: ಕೊಲೆ ಮಾಡಿದ ಬಳಿಕ ಮನುಷ್ಯತ್ವ ಮರೆತ ಕ್ರೂರಿಯೊಬ್ಬ ನಾವು ಇವನನ್ನ ಸಾಯಿಸಿದ್ದೇವೆ ಎಂದು ವಿಕೃತ ಆನಂದ ಪಟ್ಟಿದ್ದಾನೆ. ಮತ್ತೊಂದು ವೀಡಿಯೋದಲ್ಲಿ 'ಹೇಯ್ ನಿಂತ್ಕೊಳ್ರೋ ನಾವು ದೊಡ್ಡದಾಗಿ ಬೆಳೆದು, ನಾವೂ ದೊಡ್ಡವರಾದ್ವಿ' ಎಂದು ಹೇಳುತ್ತಾ ಕೊಲೆಯನ್ನು ಸಂಭ್ರಮಿಸಿದ್ದಾರೆ. ಗಾಂಜಾ ಅಮಲಿನಲ್ಲಿ ಪುಂಡರು ಈ ರಾಕ್ಷಸೀ ಕೃತ್ಯ ಎಸಗಿದ್ದಾರೆ. ಹೀಗಾಗಿ ಈ ಹತ್ಯೆ ವಿಡಿಯೋ ಹಾಸನದಾದ್ಯಂತ ವೈರಲ್ ಆಗಿದ್ದು, ಜನರನ್ನ ಬೆಚ್ಚಿ ಬೀಳಿಸಿದೆ.

ವಿಡಿಯೋ ಮಾಡಿದವನ ಗುರುತು ಪತ್ತೆ: ವೀಡಿಯೋ ಮಾಡಿರುವುದು ಉಲ್ಲಾಸ್ ಎಂದು ತಿಳಿದು ಬಂದಿದೆ. ಆಟೋ ಚಾಲಕನಾಗಿರುವ ಈತ ಹಾಸನ ಜಿಲ್ಲೆ ಆಲೂರು ಮೂಲದವನು ಎಂದು ಪೊಲೀಸರು ಪತ್ತೆ ಮಾಡಿದ್ದಾರೆ. ಉಲ್ಲಾಸ್ ಹಾಗೂ ಕೀರ್ತಿ ಪರಿಚಿತರಾಗಿದ್ದು, ಸೋಮವಾರ ಒಟ್ಟಿಗೆ ಪಾರ್ಟಿ ಮಾಡಿದ್ದಾರೆ. ಬಳಿಕ ಕೀರ್ತಿಯನ್ನು ಕೊಂದು, ಆತನ ಶವದ ಎದುರು ವೀಡಿಯೋ ಮಾಡಿದ್ದಾರೆ. ಕೊಲೆ ಮಾಡಿ ವೀಡಿಯೋ ಮಾಡಿರುವ ಪಾತಕಿ ಉಲ್ಲಾಸ್ ಒಂದು ವೀಡಿಯೋದಲ್ಲಿ ತಾನೊಬ್ಬನೇ ಇದ್ದರೆ, ಇನ್ನೊಂದು ವೀಡಿಯೋದಲ್ಲಿ ಮತ್ತಿಬ್ಬರು ಇರೋದನ್ನ ತೋರಿಸಿದ್ದಾನೆ. ಜೊತೆಗೇ ತೆರಳಿದ್ದ ಯುವಕರ ಗುಂಪಿನ ನಡುವೆ ಗಲಾಟೆ ನಡೆದು ಕೊಲೆ ಆಗಿರುವ ಶಂಕೆ ವ್ಯಕ್ತವಾಗಿದ್ದು, ಹಾಸನ ನಗರ ಠಾಣೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಎದುರಿಸಲು ಸಾಧ್ಯವಿಲ್ಲ

ಎಂದು ಸಿಎಂ ಸಿದ್ದರಾಮಯ್ಯ ಶಾಸಕರಿಗೆ ಪಾಠ ಮಾಡಿದ್ದಾರೆ. ಸದನದಲ್ಲಿ ಬಿಜೆಪಿಯವರ ಆರ್ಭಟಕ್ಕೆ ಮಣಿಯಬೇಡಿ.

ಅವರಿಗೆ ಮಾತಿನಲ್ಲೇ ಸರಿಯಾಗಿ ಚಾಟಿ ಬೀಸಿ. ಸಚಿವರ ಮಾತಿನ ವೇಳೆ ಬೆಂಬಲಕ್ಕೆ ನಿಲ್ಲಿ ಎಂದು ಸಲಹೆ ನೀಡಿದರು. ಯಾವುದೇ ಕಾರಣಕ್ಕೂ ಅವರ ಕೈ ಮೇಲಾಗದಂತೆ ನೋಡಿಕೊಳ್ಳಿ. ಎಲ್ಲಾ ವಿಚಾರಗಳಲ್ಲೂ ನೀವು ಅಗ್ರೆಸ್ಸೀವ್ ಆಗಿರಿ, ಅವರ ಮಾತು ಮೇಲಾಗಬಾರದು ಎಂದು ಸಿಎಂ ಖಡಕ್ ಆಗಿ ಹೇಳಿದರು.

ಸದನಕ್ಕೆ ಯಾರೂ ಗೈರಾಗಬೇಡಿ: ಇಲಾಖಾವಾರು ಸಚಿವರು ಸರಿಯಾಗಿ ಉತ್ತರಿಸಿ. ವಿಷಯ ಅರ್ಥ ಮಾಡಿಕೊಳ್ಳದೇ ಪೇಚಿಗೆ ಸಿಲುಕಬೇಡಿ. ಯಾರೂ ಸದನಕ್ಕೆ ಗೈರಾಗಬೇಡಿ, ಎಲ್ಲರೂ ಹಾಜರಾಗಿ ಎಂದು ಕಟ್ಟಪ್ಪಣೆ ಹೊರಡಿಸಿದ್ದಾರೆ. ಪ್ರಮುಖ ಬಿಲ್‌ಗಳು ಮಂಡನೆ ಮಾಡುತ್ತೇವೆ. ಆಗ ನೀವೆಲ್ಲರೂ ಕಡ್ಡಾಯ ಹಾಜರಿರಬೇಕು. ಎಲ್ಲಾ ಬಿಲ್‌ಗಳೂ ಪಾಸಾಗಲೇಬೇಕು. ಮಾಧ್ಯಮಗಳ ಮುಂದೆ ಬಹಿರಂಗ ಹೇಳಿಕೆ ನೀಡಬೇಡಿ. ಇಲಾಖಾವಾರು ವಿಷಯಾಧಾರಿತ ಚರ್ಚೆ ಮಾಡಿ ಅಂತ ಸಚಿವರು, ಶಾಸಕರಿಗೆ ಸಿಎಂ ನೀತಿ ಪಾಠ ಮಾಡಿದ್ದಾರೆ.

ಸಭೆ ಬಳಿಕ ಕೆಎನ್ ರಾಜಣ್ಣ ಏನಂದ್ರು: ಸಿಎಲ್‌ಪಿ ಸಭೆ ಬಳಿಕ ಮಾತನಾಡಿದ ಮಾಜಿ ಸಚಿವ ಕೆ.ಎನ್. ರಾಜಣ್ಣ, ಉತ್ತರ ಕರ್ನಾಟಕ ಸಮಸ್ಯೆ ಬಗ್ಗೆ ಚರ್ಚೆ, ಸದನದಲ್ಲಿ ಹೇಗೆ ಮಾತನಾಡಬೇಕೆಂದು ಚರ್ಚೆ ನಡೆಯಿತು. ಸಚಿವರು, ಶಾಸಕರಿಗೆ ಸಿಎಂ ಸೂಚನೆ ಕೊಟ್ಟಿದ್ದಾರೆ. ಪ್ರತಿಪಕ್ಷಗಳನ್ನು ಹೇಗೆ ಎದುರಿಸಬೇಕೆಂದು ಹೇಳಿದ್ದಾರೆ. ಈ ವೇಳೆ ಶಾಸಕರು ಮುಕ್ತ ಅಭಿಪ್ರಾಯ ಹೊರಹಾಕಿದ್ದಾರೆ. ಅದು ಬಿಟ್ಟು ಬೇರೆ ವಿಶೇಷ ಚರ್ಚೆಯೇನು ನಡೆದಿಲ್ಲ ಎಂದಿದ್ದಾರೆ.

ಪ್ರಶ್ನೋತ್ತರ ಬೇಗ ಮುಗಿಸದ್ದಕ್ಕೆ ಸಭಾಪತಿ ಹೊರಟ್ಟಿ ಆಕ್ರೋಶ

ಬೆಂಗಳೂರು, ಡಿ.9–ಪ್ರಶ್ನೋತ್ತರ ಕಲಾಪಕ್ಕೆ ಸದಸ್ಯರು ಹೆಚ್ಚಿನ ಸಮಯ ತೆಗೆದುಕೊಂಡ ಹಿನ್ನೆಲೆಯಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅಸಮಾಧಾನ ವ್ಯಕ್ತಪಡಿಸಿದರು.

ನಿಯಮದ ಪ್ರಕಾರ 75 ನಿಮಿಷದೊಳಗೆ ಪ್ರಶ್ನೋತ್ತರ ಕಲಾಪ ಮುಗಿಸಬೇಕು. ಆದರೆ, ನೀವು ಸುಮಾರು 1.45 ಗಂಟೆ ತೆಗೆದುಕೊಂಡಿರುವಿರಿ. ಹೀಗಾದರೆ, ಅಜೆಂಡಾದಲ್ಲಿರುವ ವಿಷಯಗಳಿಗೆ ಸಮಯ ಹೊಂದಿಸುವುದು ಹೇಗೆ, ಸದನ ನಡೆಸುವುದು ಹೇಗೆ ಎಂದು ಸದಸ್ಯರನ್ನು ಪ್ರಶ್ನಿಸಿದರು. ನಾಳೆಯಿಂದ 75 ನಿಮಿಷದೊಳಗೆ ಪ್ರಶ್ನೋತ್ತರ ಕಲಾಪ ಮುಗಿಸಬೇಕು ಎಂದು ಸೂಚಿಸಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಕಾಂಗ್ರೆಸ್ ಸದಸ್ಯ ನಾಗರಾಜ್ ಯಾದವ್, ಪ್ರಶ್ನೋತ್ತರ ಕಲಾಪಕ್ಕೆ ಎರಡು ಗಂಟೆ ಸಮಯ ಕೊಡಿ ಎಂದು ಏರಿದ ದನಿಯಲ್ಲಿ ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಹೊರಟ್ಟಿ, ನಿನಗೇನು ಗೊತ್ತಿದೆ ಕಾನೂನು. ಸುಮ್ಮನೆ ಕೂರು ಎಂದರು.

ಲೂಟಿಕೋರರ ಬಿಡಲ್ಲ !

ಹಾಗೂ ಅವರ ಜೊತೆ ಶಾಮೀಲಾದ ಭೂ ಕಬಳಿಕೆದಾರರಿಗೆ ಒಂದು ಕಾನೂನು ಮಾಡಲಾಗದು ಎಂದು ಸ್ಪಷ್ಟಪಡಿಸಿದರು. ಸದನಕ್ಕೆ ಮತ್ತೊಮ್ಮೆ ಭರವಸೆ ನೀಡಿದ ಅವರು, ನಾವು ಅಮಾಯಕರ, ಪ್ರಮಾಣಿಕರ ಪರ ಇದ್ದೇವೆ. ಹೀಗಾಗಿ, ಭೂ ಮಂಜೂರಾತಿ ವಿಚಾರದಲ್ಲಿ ತಪ್ಪು ಮಾಡದವರ ಹೆಸರು ದೋಷಾರೋಪ ಪಟ್ಟಿಯಲ್ಲಿ ಬಂದಿದ್ದರೆ, ಅಮಾಯಕರ ಮಂಜೂರು ರದ್ದಾಗಿದ್ದರೆ ಆ ಬಗ್ಗೆ ಜಿಲ್ಲಾಧಿಕಾರಿಗಳ ಜೊತೆ ಮಾತಾಡಿ ಸರಿಪಡಿಸುತ್ತೇನೆ. ಆದರೆ, ಅಕ್ರಮದಲ್ಲಿ ಭಾಗಿಯಾದ ಲೂಟಿಕೋರರಿಗೆ ಉದಾರತೆ ತೋರಿಸಲಾಗದು ಎಂದು ಅವರು ಸದನಕ್ಕೆ ತಿಳಿಸಿದರು.

ಜಾರಕಿಹೊಳಿ ಗೈರು

ಇನ್ನಿತರೆ ಶಾಸಕರು ಉಪಸ್ಥಿತರಿದ್ದರು.

ಅವಿಶ್ವಾಸ ನಿರ್ಣಯ ಮಂಡಿಸುವ ಬಗ್ಗೆ ಚರ್ಚೆ: ಅಧಿವೇಶನದಲ್ಲಿ ಸರ್ಕಾರದ ವಿರುದ್ಧ ಒಗ್ಗಟ್ಟಿನ ಹೋರಾಟ ಹಾಗೂ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವ ಬಗ್ಗೆ ತಂತ್ರಗಾರಿಕೆ ಬಗ್ಗೆ ಸಮಾಲೋಚನೆ ನಡೆಯಿತು. ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಬೇಕಾ, ಬೇಡವಾ.. ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿದರೆ ಆಗುವ ಸಾಧಕ–ಭಾದಕಗಳೇನು ಎಂಬ ಬಗ್ಗೆ ಚರ್ಚೆ ನಡೆಯಿತು. ಇನ್ನು ಉತ್ತರ ಕರ್ನಾಟಕ ಸಮಸ್ಯೆಗಳು, ಬೆಂಗಳೂರು ರಸ್ತೆ ಗುಂಡಿ ಸಮಸ್ಯೆ, ರೈತರ ಸಮಸ್ಯೆ ಹಾಗೂ ಸರ್ಕಾರದ ಆಂತರಿಕ ಕಚ್ಚಾಟ, ಈ ವಿಷಯದ ಮೇಲೆ ಚರ್ಚೆ ಮಾಡುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು ಎನ್ನಲಾಗಿದೆ.

ಕಾರಲ್ಲ, ಸರ್ಕಾರದ ಕೆಲಸಕ್ಕೆ ಓಡಾಡಲು ಹೆಲಿಕಾಪ್ಟರ್, ವಿಮಾನ ಖರೀದಿ ಇಲ್ಲವೆ ಬಾಡಿಗೆಗೆ ಡಿಕೆಶಿ ನೇತೃತ್ವದಲ್ಲಿ ಸಭೆ



ಬೆಂಗಳೂರು, ಡಿ.9– ರಾಜ್ಯ ಕಾಂಗ್ರೆಸ್ ಸರ್ಕಾರದ ರಸ್ತೆ ಗುಂಡಿ ಮುಚ್ಚಲು ನೀಡಿದ್ದ ಹಲವು ಗಡುವುಗಳು ಅಂತ್ಯಗೊಂಡರೆ ಸಂಪೂರ್ಣವಾಗಿ ಮುಗಿದಿಲ್ಲ. ಗ್ಯಾರಂಟಿ ಯೋಜನೆಗಳಿಂದ ಸರ್ಕಾರದ ಖಜಾನೆ ಖಾಲಿಯಾಗಿದೆ ಎಂಬ ಬಿಜೆಪಿ ಆರೋಪಗಳು, ಸಾರ್ವಜನಿಕರ ಆಕ್ರೋಶ ಒಂದಡೆಯಾದರೆ, ಮತ್ತೊಂದೆಡೆ ಸರ್ಕಾರ ಸರ್ಕಾರ ಹೆಲಿಕಾಪ್ಟರ್ ಅಥವಾ ವಿಮಾನ ಖರೀದಿಗೆ ಮುಂದಾಗಿದೆ. ಇದಕ್ಕಾಗಿ ಇಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಮಹತ್ವದ ಸಭೆ ನಡೆದಿದೆ. ಸಭೆಯಲ್ಲಿ ವಿಮಾನ/ ಹೆಲಿಕಾಪ್ಟರ್ ಖರೀದಿ, ಟೆಂಡರ್, ಬಾಡಿಗೆ ಪಡೆಯುವ ಸೇರಿದಂತೆ ಹಲವು ವಿಚಾರಗಳ ಕುರಿತು ಚರ್ಚೆಯಾಗಿದೆ.

ಹೆಲಿಕಾಪ್ಟರ್, ಫ್ಲೈಟ್ ನಮಗೆ ಬೇಕಾಗುತ್ತೆ: ಸುವರ್ಣಸೌಧದಲ್ಲಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸಭೆ ನಡೆದಿದೆ. ಸಭೆಯಲ್ಲಿ ಸಚಿವರಾದ ಎಂ.ಬಿ ಪಾಟೀಲ್, ಭೈರತಿ ಸುರೇಶ್, ಸತೀಶ್ ಜಾರಕಿಹೊಳಿ, ಜಾರ್ಜ್ ಭಾಗಿಯಾಗಿದ್ದಾರೆ. ಈ ಸಭೆ ಬಳಿಕ ಡಿ.ಕೆ.ಶಿವಕುಮಾರ್ ಮಾಧ್ಯಮಗಳಿಗೆ ಮಾಹಿತಿ ನೀಡಿ, ಸರ್ಕಾರದ ಕೆಲಸಕ್ಕೆ ಓಡಾಡಲು ನಮಗೆ ವಿಮಾನ, ಹೆಲಿಕಾಪ್ಟರ್ ಬೇಕು. ಖರೀದಿ ಟೆಂಡರ್, ಬಾಡಿಗೆ ಪಡೆಯುವ ಕುರಿತು ಚರ್ಚೆ ನಡೆಸಿದ್ದೇವೆ. ಹಲವು ಸಲಹೆಗಳು ಬಂದಿದೆ ಎಂದು ಹೇಳಿದ್ದಾರೆ.

ಮುಖ್ಯಮಂತ್ರಿಗಳು ಒಂದು ಕ್ಯಾಬಿನೆಟ್ ಸಬ್ ಕಮಿಟಿ ಮಾಡಿದ್ದರು. ಇದರಂತೆ ನಾವು ಹೆಚ್‌ಎಎಲ್‌ಗೆ ಒಂದು ಹೆಲಿಕ್ಯಾಪ್ಟರ್ ಕೊಡಿ ಎಂದು ಕೇಳಿದ್ದೆವು. ಆದರೆ ಹೆಚ್‌ಎಎಲ್‌ನಿಂದ ಪೂರೈಕೆ ವಿಳಂಬವಾಗಲಿದೆ ಎಂದಿದ್ದರು. ಹೀಗಾಗಿ ಪರ್ಯಾಯ ಮಾರ್ಗ ಹುಡುಕಿದ್ದೆವು. ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬೆಂಗಳೂರಿನಲ್ಲಿ ಆಯೋಜನೆಗೊಂಡ ಏರ್‌ಶೋಗೆ ಬಂದಾಗ ವಿಮಾನ, ಹೆಲಿಕಾಪ್ಟರ್‌ಗೆ ಮನವಿ ಮಾಡಿದ್ದೆವು. ನಮಗೆ ವಿಮಾನ, ಹೆಲಿಕಾಪ್ಟರ್ ಮುಖ್ಯವಾಗಿದೆ. ಹೀಗಾಗಿ ಇವತ್ತು ಸಬ್ ಕಮಿಟಿ ಸದಸ್ಯರು ಈ ಕುರಿತು ಚರ್ಚೆ ನಡೆಸಿದ್ದೇವೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

ಸರ್ಕಾರಕ್ಕೆ ಒಳ್ಳೆ ಸರ್ವೀಸ್ ಕೊಡಬೇಕು: ಈ ಕುರಿತು ತಂತ್ರಜ್ಞರ ನೆರವು ಅಗತ್ಯ. ವಿಮಾನ, ಹೆಲಿಕಾಪ್ಟರ್ ಖರೀದಿ, ಬಾಡಿಗೆ ಮೂಲಕ ಬಳಕೆ ಲೆಕ್ಕಾಚಾರ ಮಾಡಬೇಕಿದೆ. ಅದಕ್ಕೆಲ್ಲ ಟೆಕ್ನಿಕಲ್ ಕ್ವಾಲಿಫಿಕೇಷನ್ ಇರುವ ಜನ ಬೇಕು. ಹೀಗಾಗಿ ಮತ್ತೆ ಮಂಗಳವಾರ ಸಭೆ ಸೇರುತ್ತೇವೆ. ಸರ್ಕಾರಕ್ಕೆ ಒಳ್ಳೆ ಸರ್ವೀಸ್ ಕೊಟ್ಟಿರಬೇಕು. ಅಂತಹವರನ್ನ ಮಾತ್ರ ತೆಗೆದುಕೊಂಡು ಮಾಡುತ್ತೇವೆ. ನಮಗೆ ಸರ್ಕಾರದ ಹಣ ಮುಖ್ಯ, ಖರೀದಿ ಮಾಡುವ ಪ್ರಶ್ನೆ ಇಲ್ಲ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

ಹೆಲಿಕಾಪ್ಟರ್, ವಿಮಾನ ಖರೀದಿ ಕುರಿತು ಸಾಕಷ್ಟು ಸಲಹೆ ಕೊಟ್ಟಿದ್ದಾರೆ. ಗಂಟೆಗೆ ಇಷ್ಟು ಅಂತ ಕೊಟ್ಟು ಬಾಡಿಗೆ ಪಡೆಯುವ ಕುರಿತು ಚರ್ಚೆ ಆಗಿದೆ. ಎಲ್ಲಾ ವಿಚಾರಗಳ ಸಾಧಕ–ಬಾಧಕ ಚರ್ಚೆ ಮಾಡಿ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

ಅಂತರ್ಜಾಲ ಯುಗದಲ್ಲೂ ಪರಿಪೂರ್ಣ ಜ್ಞಾನಕ್ಕೆ ಗ್ರಂಥಾಲಯಗಳು ಅಗತ್ಯ

● ಮೈಸೂರು ವಿವಿ ಕುಲಸಚಿವೆ ಎಂ.ಕೆ.ಸವಿತಾ ಅಭಿಮತ ● ಚರ್ಚಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ



ಮೈಸೂರು ವಿಶ್ವವಿದ್ಯಾನಿಲಯದ ಗ್ರಂಥಾಲಯ ವಿಭಾಗದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಚರ್ಚಾ ಸ್ಪರ್ಧೆ ವಿಜೇತರಿಗೆ ಬಹುಮಾನ ಹಾಗೂ ಪ್ರಮಾಣಪತ್ರ ವಿತರಣೆ ಮಾಡಲಾಯಿತು.

ಮೈಸೂರು,ಡಿ.9(ಪಿಎಂ)– ಪ್ರಸ್ತುತದ ಅಂತರ್ಜಾಲದ ಯುಗದಲ್ಲೂ ಪರಿಪೂರ್ಣ ಜ್ಞಾನಾರ್ಜನೆಗೆ ಗ್ರಂಥಾಲಯಗಳು ಅಗತ್ಯ ಎಂದು ಮೈಸೂರು ವಿವಿ ಕುಲಸಚಿವೆ ಎಂ.ಕೆ.ಸವಿತಾ ಅಭಿಪ್ರಾಯಪಟ್ಟರು.

ಮೈಸೂರು ವಿಶ್ವವಿದ್ಯಾನಿಲಯದ ಗ್ರಂಥಾಲಯ ವಿಭಾಗದ ಮಾನಸ ಮೀಡಿಯಾ ಕೇಂದ್ರದ ಗ್ರಂಥಾಲಯ ಸಮ್ಮೇಳನ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 'ಅಂತರ್ಜಾಲ ಯುಗದಲ್ಲಿ ಗ್ರಂಥಾಲಯದ ಪ್ರಸ್ತುತತೆ' ಕುರಿತ ಚರ್ಚಾ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಸಮಾರಂಭದಲ್ಲಿ (ರಾಷ್ಟ್ರೀಯ ಗ್ರಂಥಪಾಲಕರ ದಿನ–2025 ಮತ್ತು ಪದ್ಮಶ್ರೀ ಡಾ.ಎಸ್.ಆರ್.ರಂಗನಾಥನ್ ಅವರ 133ನೇ ಜನ್ಮ ದಿನಾಚರಣೆ ಸ್ಮರಣಾರ್ಥ ನ.28ರಂದು ನಡೆದಿದ್ದ ಚರ್ಚಾ ಸ್ಪರ್ಧೆ) ಅವರು ಮಾತನಾಡಿದರು.

ಅಂತರ್ಜಾಲ ಕಾರಣಕ್ಕೆ ಗ್ರಂಥಾಲಯ ಬಳಕೆ ಕಡಿಮೆಯಾಗಿರಬಹುದು. ಆದರೆ ವಿಷಯ ಜ್ಞಾನವು ಪುಸ್ತಕಗಳಿಂದ ಮಾತ್ರ ಸಿಗಲಿದೆ. ಹಾಗಾಗಿ ಗ್ರಂಥಾಲಯಗಳು ಮಹತ್ವದ ಪಾತ್ರ ವಹಿಸಲಿವೆ. ಅಂತರ್ಜಾಲದ ಮೂಲಕ ವಿಷಯ ಸಂಗ್ರಹಕ್ಕಾಗಿ ಮೊಬೈಲ್ ಮೊರೆ ಹೋದರೆ ಕಾಲಹರಣ ಆಗುವುದೇ ಹೆಚ್ಚು. ಆದ್ದರಿಂದ ವಿದ್ಯಾರ್ಥಿಗಳು ಮೊಬೈಲ್ ಬಿಟ್ಟು ಪುಸ್ತಕಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕಿವಿಮಾತು ಹೇಳಿದರು.

ಈಗಿನ ಅಂತರ್ಜಾಲ ಯುಗದಲ್ಲಿ ಗ್ರಂಥಾಲಯವನ್ನು ಸದ್ಬಳಕೆ ಮಾಡಿಕೊಳ್ಳುವ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಆದರೆ ಜ್ಞಾನದ ದಾಹದೊಂದಿಗೆ ವಿದ್ಯಾರ್ಥಿಗಳು ಗ್ರಂಥಾಲಯದಲ್ಲಿ ಅಧ್ಯಯನ ನಡೆಸಲು ಮುಂದಾದರೆ, ಜ್ಞಾನ, ವಿದ್ಯೆ ತಾನಾಗಿಯೇ ಒಲಿದು ಬರಲಿದೆ. ಗ್ರಂಥಾಲಯಗಳು ಜ್ಞಾನ ಭಂಡಾರ. ಹಾಗಾಗಿ ಕೇವಲ ಅಂತರ್ಜಾಲಕ್ಕೆ ಸೀಮಿತವಾಗದೇ ಗ್ರಂಥಾಲಯ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಯಾವುದೇ ವಿಷಯ ಕುರಿತು ನಿರರ್ಗಳವಾಗಿ ಮಾತನಾಡಲು ಅಪಾರ ವಿಷಯ ಸಂಗ್ರಹದ ಅವಶ್ಯಕತೆಯಿದೆ. ಅದು ಪುಸ್ತಕಗಳನ್ನು ಹೆಚ್ಚು ಓದುವುದರಿಂದ ಮಾತ್ರ ಸಾಧ್ಯ ಅದರ ಹೊರತು, ಓದದೇ ಯಾರು ಜ್ಞಾನಿಗಳಾಗಲು, ವಿಚಾರವಂತರಾಗಲು ಸಾಧ್ಯವಿಲ್ಲ. ರಾಜ್ಯದ ಯಾವುದೇ ವಿವಿಗಳ ಗ್ರಂಥಾಲಯದಲ್ಲಿ ಇರದ ಉತ್ತಮ ಸೌಲಭ್ಯ ಮೈಸೂರು ವಿವಿಯ ಗ್ರಂಥಾಲಯದಲ್ಲಿದ್ದು, ವಿದ್ಯಾರ್ಥಿಗಳು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಚರ್ಚಾ ಸ್ಪರ್ಧೆಯಲ್ಲಿ ವಿಜೇತರಾದ ಮೈಸೂರು ವಿವಿ ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಪ್ರಥಮ ಸ್ಥಾನ ಗಳಿಸಿದ ರಾಜ್ಯಶಾಸ್ತ್ರ ವಿಭಾಗದ ಎ.ಜಿ.ಆಕಾಶ್, ದ್ವಿತೀಯ ಸ್ಥಾನ ಗಳಿಸಿದ ರಸಾಯಾನಶಾಸ್ತ್ರ ವಿಭಾಗದ ಆರ್. ಕುಸುಮ ಬಾಯಿ ಹಾಗೂ ತೃತೀಯ ಸ್ಥಾನ ಗಳಿಸಿದ ಕನ್ನಡ ಅಧ್ಯಯನ ವಿಭಾಗದ ಆರ್.ಪ್ರವೀಣ್‌ಕುಮಾರ್ ಬಹುಮಾನ ಸ್ವೀಕರಿಸಿದರು.

ಮೈಸೂರು ವಿವಿ ಗ್ರಂಥಾಲಯದ ನಿವೃತ್ತ ಗ್ರಂಥಪಾಲಕ ಡಾ.ಸಿ.ಪಿ. ರಾಮಶೇಷ್, ಎಸ್‌ಡಿಎಂ–ಐಎಂಡಿ ಸಂಸ್ಥೆಯ ಸಿಸ್ಟಮ್ ಅಂಡ್ ಜನರಲ್ ಮ್ಯಾನೇಜ್‌ಮೆಂಟ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಎಂ.ವಿ.ಸುನೀಲ್, ಮೈಸೂರು ವಿವಿ ಗ್ರಂಥಾಲಯದ ಗ್ರಂಥಪಾಲಕಿ ಡಾ. ಪಿ.ಸರಸ್ವತಿ ಮತ್ತಿತರರು ಹಾಜರಿದ್ದರು.

ಹುಟ್ಟುಹಬ್ಬದ ಶುಭಾಶಯ



ಮೈಸೂರು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ಆಪ್ತ ಸಹಾಯಕ ಹನುಮೇಶ್ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಅವರನ್ನು ಜಯಪುರ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಮುಖಂಡರು ಆತ್ಮೀಯವಾಗಿ ಅಭಿನಂದಿಸಿದರು. ಈ ವೇಳೆ ಜವರನಾಯಕ, ದಾರಿಪುರ ಬಸವಣ್ಣ, ಸಮಾಜ ಸೇವಕ ಎಸ್.ಶ್ರೀಕಾಂತ್, ಬರಡನಪುರ ಬಸವಣ್ಣ, ಅಬ್ದುಲ್ ಮುತಾಲಿಫ್, ಬಿ.ರೇಣುಕಾ, ಎಂ.ನಾಗರಾಜು, ಕೆಲ್ಲಹಳ್ಳಿ ಬೈರೇಶ್, ಹೊಸಕೆರೆ ಮಂಜುನಾಥ್, ಅರಸನಕೆರೆ ಕೆಂಪರಾಜು ಮತ್ತಿತರರಿದ್ದರು.

ಗೋವಾ ಪಬ್‌ನಲ್ಲಿ ಅಗ್ನಿ ಅನಾಹುತ: ಲೂತ್ರಾಗೆ ಸೇರಿದ 2ನೇ ಕ್ಲಬ್ ಕೂಡ ನೆಲಸಮ

ಪಣಜಿ: 25 ಜನರ ಸಾವಿಗೆ ಕಾರಣವಾದ ಗೋವಾದ ರೋಮಿಯೊ ಲೇನ್‌ನಲ್ಲಿರುವ ನೈಟ್‌ಕ್ಲಬ್ ಅಗ್ನಿ ದುರಂತದ ನಂತರ ಲೂತ್ರಾ ಸೋದರರಿಗೆ ಸೇರಿದ 2ನೇ ಕ್ಲಬ್ ಅನ್ನು ಗೋವಾ ಸರ್ಕಾರ ಮಂಗಳವಾರ ನೆಲಸಮಗೊಳಿಸಿದೆ.

ಸಮುದ್ರ ತೀರಕ್ಕೆ ಹೊಂದಿಕೊಂಡಿರುವ 'ಗೋವಾ ಮೆಟರ್' ಎಂಬ ರೆಸ್ಟೋರೆಂಟ್ ಸಮೂಹವನ್ನು ಲೂತ್ರಾ ಸೋದರರು ನಡೆಸುತ್ತಿದ್ದರು. ಸರ್ಕಾರಿ ಜಾಗದಲ್ಲಿ ಅಕ್ರಮವಾಗಿ ಹೋಟೆಲ್ ಕಟ್ಟಿರುವ ಆರೋಪ ಇವರ ಮೇಲಿದೆ. ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರ ನಿರ್ದೇಶನದಂತೆ ಲೂತ್ರಾ ಅವರ 2ನೇ ಕ್ಲಬ್ ಅನ್ನು ಸ್ಥಳೀಯ ಆಡಳಿತ ನೆಲಸಮಗೊಳಿಸಿತು.

ಲೂತ್ರಾ ಅವರ ಮೇಲೆ ನರಮೇಧದ ಆರೋಪ ಹೊರಿಸಲಾಗಿದೆ. ಕಳೆದ ವಾರ ಗೋವಾದಲ್ಲಿ ಅಗ್ನಿ ದುರಂತ ಸಂಭವಿಸಿದ ಬೆನ್ನಲ್ಲೇ ಗೌರವ್ ಮತ್ತು ಸೌರಭ್ ಲೂತ್ರಾ ದೇಶ ತೊರೆದಿದ್ದಾರೆ.



ಥಾಯ್ಲೆಂಡ್‌ನ ಫುಕೆಟ್‌ಗೆ ಇಂಡಿಗೊ ವಿಮಾನ ಮೂಲಕ ಪ್ರಯಾಣ ಬೆಳೆಸಿದ್ದಾರೆ ಎಂದು ಮೂಲಗಳು ಹೇಳಿವೆ.

ಇವರ ಬಂಧನಕ್ಕೆ ಬ್ಲೂ ಕಾರ್ನರ್ ನೋಟಿಸ್ ಅನ್ನು ಇಂಟರ್‌ಪೋಲ್ ಹೊರಡಿಸಿರುವ ಕುರಿತು ಮುಖ್ಯಮಂತ್ರಿ ಕಚೇರಿ ಖಚಿತಪಡಿಸಿದೆ.

ದೆಹಲಿ, ಗೋವಾ, ಹರಿಯಾಣದ ಯಮುನಾ ನಗರ ಸೇರಿದಂತೆ ಹಲವೆಡೆ 'ರೋಮಿಯೊ ಲೇನ್' ಎಂಬ ಹೆಸರಿನ ಸರಣಿ ಹೋಟೆಲುಗಳನ್ನು ಹೊಂದಿದ್ದಾರೆ. ದೆಹಲಿಯಲ್ಲಿ ತಮ್ಮ ಮೊದಲ ರೆಸ್ಟೋರೆಂಟ್ 'ಮಾಮಾಸ್ ಬುಯಿ' ಆರಂಭಿಸಿದ್ದರು. ಅದು ಯಶಸ್ವಿಯಾದ ಬೆನ್ನಲ್ಲೇ ದೇಶದ ವಿವಿಧ ನಗರಗಳಲ್ಲಿ ರೆಸ್ಟೋರೆಂಟ್ ಆರಂಭಿಸಿದರು.

ಅಭಿನಂದನೆ



ಭಾರತೀಯ ದಲಿತ ಸಾಹಿತ್ಯ ಅಕಾಡೆಮಿ ವತಿಯಿಂದ ಡಿ.12ರಂದು ಪ್ರದಾನ ಮಾಡಲಿರುವ ಡಾ.ಅಂಬೇಡ್ಕರ್ ಫೆಲೋಶಿಪ್ ಪ್ರಶಸ್ತಿಯನ್ನು ಸ್ವೀಕರಿಸಲು ಮಂಗಳವಾರ ರಾತ್ರಿ ನವದೆಹಲಿಗೆ ಪ್ರಯಾಣ ಬೆಳೆಸಿದ ಮುಳ್ಳೂರು ದೇವರಾಜ್ ಹಾಗೂ ಮುರುಡುಗಳ್ಳಿ ಮಹದೇವ್ ಅವರನ್ನು ಕರ್ನಾಟಕ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿಯ ರಾಜ್ಯ ಅಧ್ಯಕ್ಷ ಎನ್.ಭಾಸ್ಕರ್ ಖಾಸಗಿ ಹೋಟೆಲ್‌ನಲ್ಲಿ ಅಭಿನಂದಿಸಿದರು. ಈ ವೇಳೆ ಡಾ.ಅವಿನಾಶ್, ಬೆಳವಾಡಿ ಸ್ವಾಮಿ, ಕಾಂಗ್ರೆಸ್ ಮುಖಂಡ ವಿಜಯಕುಮಾರ್, ಪೈ.ಸುನಿಲ್ ಮತ್ತಿತರರಿದ್ದರು.

ಹಿರಿಯ ನಾಗರಿಕರ ವಿಶ್ವಸ್ಥ ಮಂಡಳಿ ಸಂಸ್ಥಾಪನಾ ದಿನಾಚರಣೆ

ಮೈಸೂರು, ಡಿ. 9 – ಹಿರಿಯ ನಾಗರಿಕರ ವಿಶ್ವಸ್ಥ ಮಂಡಳಿ ಮತ್ತು ಹಿರಿಯ ನಾಗರಿಕರ ಮಂಡಳಿಯ ಸಂಸ್ಥಾಪನಾ ದಿನಾಚರಣೆಯನ್ನು ಡಿ. 12 ರಂದು ಬೆಳಗ್ಗೆ 10.30ಕ್ಕೆ ಜಯಲಕ್ಷ್ಮಿಪುರಂನ ಸರಸ್ವತಿ ಸಮುದಾಯ ಭವನದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನು ಕಾವೇರಿ ಆಸ್ಪತ್ರೆ ಸಂಸ್ಥಾಪಕ ಡಾ.ಜಿ.ಆರ್.ಚಂದ್ರಶೇಖರ್ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್ ಭಾಗವಹಿಸಲಿದ್ದಾರೆ.

ಹಿರಿಯ ನಾಗರಿಕರ ವಿಶ್ವಸ್ಥ ಮಂಡಳಿ ಅಧ್ಯಕ್ಷ ಎಸ್.ವಿ. ಗೌಡಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ.

ವ್ಯಕ್ತಿ ನಾಪತ್ತೆ

ಮೈಸೂರು, ಡಿ.9– ಸುಮಾರು 37 ವರ್ಷದ ಶಿವಕುಮಾರ್ ಸ್ವಾಮಿ ಎಂಬುವವರು ಕಾಣೆಯಾಗಿದ್ದು, ಹೆಬ್ಬಾಳ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸುಮಾರು 37 ವರ್ಷ ವಯಸ್ಸಾಗಿದ್ದು, 5.5 ಅಡಿ ಎತ್ತರ, ಕೋಲು ಮುಖ, ಸಾಧಾರಣ ಶರೀರ, ಎಣ್ಣೆಗೆಂಪು ಮೈಬಣ್ಣ, ಕನ್ನಡ, ಹಿಂದಿ ಮತ್ತು ಇಂಗ್ಲೀಷ್ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಂದರ್ಭದಲ್ಲಿ ಹಳದಿ ಬಣ್ಣ ಅರ್ಧತೋಳಿನ ಶರ್ಟ್ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ವ್ಯಕ್ತಿಯ ಬಗ್ಗೆ ಮಾಹಿತಿ ಕಂಡುಬಂದಲ್ಲಿ ಹೆಬ್ಬಾಳ್ ಪೊಲೀಸ್ ಠಾಣೆಯ ದೂಸಂ: 2418318 ಅಥವಾ ಮೈಸೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂ.ಸಂ: 2418339 ನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತಗಳ್ಳತನ ಮಾಡಿದ್ದು ಇಂದಿರಾ ಗಾಂಧಿ; ಚುನಾವಣಾ ಆಯುಕ್ತರಿಗೆ ಕಾಂಗ್ರೆಸ್‌ನಿಂದ ರಾಜ್ಯಪಾಲ ಹುದ್ದೆ

ಬಿಜೆಪಿ ಸಂಸದ ನಿಶಿಕಾಂತ್ ದುಬೆ ವಾಗ್ದಾಳಿ

ನವದೆಹಲಿ: ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ನಾಶ ಮಾಡಿದ ಕಾಂಗ್ರೆಸ್ ವಿಶೇಷ ಸಮಗ್ರ ಪರಿಷ್ಕರಣೆ ಮಾತನಾಡುತ್ತಿದೆ. ತಮಗೆ ಬೇಕಾದವರನ್ನು ಸಂವಿಧಾನಿಕ ಹುದ್ದೆಯಲ್ಲಿ ಕೂರಿಸಿ ಕಾಂಗ್ರೆಸ್ ಆಡಳಿತ ನಡೆಸಿತ್ತು ಎಂದು ಬಿಜೆಪಿ ಸಂಸದ ನಿಶಿಕಾಂತ್ ದುಬೆ ಕಿಡಿಕಾರಿದರು.



ನಿಶಿಕಾಂತ್

ಲೋಕಸಭೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತಂತೆ ರಾಹುಲ್ ಗಾಂಧಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಬಳಿಕ ನಿಶಿಕಾಂತ್ ದುಬೆ ಮಾತನಾಡಿ ಕಾಂಗ್ರೆಸ್ ಯಾವ ರೀತಿ ವ್ಯವಸ್ಥೆಯನ್ನು ಈ ಹಿಂದೆ ಬದಲಾಯಿಸಿತ್ತು ಎಂದು ದಾಖಲೆಯನ್ನು ಮುಂದಿಟ್ಟು ತಿರುಗೇಟು ನೀಡಿದರು.

ಉತ್ತರ ಪ್ರದೇಶದ ರಾಯ್ ಬರೇಲಿಯಲ್ಲಿ ಇಂದಿರಾ ಗಾಂಧಿ ಮತಕಳ್ಳತನ ಮಾಡಿ ಚುನಾವಣೆಯಲ್ಲಿ ಜಯಗಳಿಸಿದರು. ತನ್ನ ವಿರುದ್ಧ ಕೋರ್ಟ್ ತೀರ್ಪು ಬಂದಾಗ ಮೂವರು ನ್ಯಾಯಾಧೀಶರನ್ನು ಬೈಪಾಸ್ ಮಾಡಿ ಒಬ್ಬರನ್ನೇ 8.5 ವರ್ಷಗಳ ಕಾಲ ಮುಖ್ಯ ನ್ಯಾಯಮೂರ್ತಿಯನ್ನಾಗಿ ಮಾಡಿದ್ದು ಕಾಂಗ್ರೆಸ್ ಎಂದು ವಾಗ್ದಾಳಿ ನಡೆಸಿದರು.

ಸಂವಿಧಾನದ 42ನೇ ತಿದ್ದುಪಡಿಗೆ ಕಾರಣವಾದ 1976ರ ಸ್ವರಣ್ ಸಿಂಗ್ ಸಮಿತಿಯನ್ನು ಉಲ್ಲೇಖಿಸಿದ ದುಬೆ, ಸ್ವರಣ್ ಸಿಂಗ್ ಸಮಿತಿಯನ್ನು 1976 ರಲ್ಲಿ ರಚಿಸಿ ರಾಷ್ಟ್ರಪತಿ ಅವರ ಇದ್ದ ಅಧಿಕಾರವನ್ನು ಕಿತ್ತುಕೊಂಡಿರಿ. ರಾಷ್ಟ್ರಪತಿಗಳು ರಬ್ಬರ್ ಸ್ಟ್ಯಾಂಪ್ ಆದರು. 42ನೇ ತಿದ್ದುಪಡಿ ಮಾಡುವ ಮೂಲಕ ಸಂವಿಧಾನದ ಎಲ್ಲಾ ಸಂಸ್ಥೆಗಳನ್ನು ಕೊನೆಗೊಳಿಸಿದ್ದು ಕಾಂಗ್ರೆಸ್ ಎಂದು ಕಿಡಿಕಾರಿದರು.

ಬಿಜೆಪಿ ಚುನಾವಣಾ ಆಯೋಗವನ್ನು ವಶಪಡಿಸಿಕೊಂಡಿದೆ ಎಂದು ರಾಹುಲ್ ಆರೋಪಕ್ಕೆ ನಿಶಿಕಾಂತ್ ದುಬೆ ಈ ಹಿಂದೆ ಕಾಂಗ್ರೆಸ್ ನಿವೃತ್ತಿಯ ಬಳಿಕ ಚುನಾವಣಾ ಆಯುಕ್ತರಿಗೆ ಸರ್ಕಾರದಲ್ಲಿ ಯಾವ ರೀತಿ ಹುದ್ದೆ ನೀಡಿತ್ತು ಎಂಬುದರ ಬಗ್ಗೆ ಮಾತನಾಡಿದರು.

ಕಾಂಗ್ರೆಸ್ ಈಗ ಚುನಾವಣಾ ಆಯೋಗದ ಬಗ್ಗೆ ಮಾತನಾಡುತ್ತಿದೆ. ದೇಶದ ಮೊದಲ ಚುನಾವಣಾ ಆಯುಕ್ತ ಸುಕುಮಾರ್ ಸೇನ್ ನಿವೃತ್ತರಾದಾಗ ಬಳಿಕ ಅವರನ್ನು ಸುಡಾನ್‌ನ ರಾಯಭಾರಿಯಾಗಿ ನೇಮಿಸಲಾಗುತ್ತದೆ. ನಿವೃತ್ತಿಯ ನಂತರ ವಿ.ಎಸ್. ರಮಾದೇವಿ, ಹಿಮಾಚಲ ಪ್ರದೇಶದ ರಾಜ್ಯಪಾಲರಾಗುತ್ತಾರೆ. ಟಿ.ಎನ್. ಶೇಷನ್ ಅವರು ನಿವೃತ್ತಿಯ ನಂತರ ಗುಜರಾತ್‌ನಲ್ಲಿ ಬಿಜೆಪಿ ವಿರುದ್ಧ ಕಣಕ್ಕೆ ಇಳಿಯುತ್ತಾರೆ. ಎಂ.ಎಸ್. ಗಿಲ್ ನಿವೃತ್ತರಾದ ನಂತರ 10 ವರ್ಷಗಳಿಗೂ ಹೆಚ್ಚು ಕಾಲ ಕೇಂದ್ರ ಸಚಿವರಾಗಿ ಸೇವೆ ಸಲ್ಲಿಸಿದರು. ನೀವು ಯಾವ ಚುನಾವಣಾ ಆಯೋಗದ ಬಗ್ಗೆ ಮಾತನಾಡುತ್ತಿದ್ದೀರಿ, ನೀವು ಯಾವ ನ್ಯಾಯದ ಬಗ್ಗೆ ಮಾತನಾಡುತ್ತಿದ್ದೀರಿ ಎಂದು ಪ್ರಶ್ನಿಸಿದರು.

ಐಎಎಸ್, ಐಪಿಎಸ್ ಮತ್ತು ಅಖಿಲ ಭಾರತ ಸೇವೆಗಳ ಅಧಿಕಾರಿಗಳನ್ನು ದೇಶಕ್ಕೆ ನೀಡುವ ಯುಪಿಎಸ್‌ಸಿ ಸಂಸ್ಥೆಗೆ ಕಾಂಗ್ರೆಸ್ ಕಾರ್ಯಕರ್ತ ಬಟುಕ್ ಸಿಂಗ್ ಅವರನ್ನು 10 ವರ್ಷಗಳ ಕಾಲ ಅಧ್ಯಕ್ಷರನ್ನಾಗಿ ಮಾಡಿದ್ದೀರಿ. ಈ ಮೂಲಕ ಯುಪಿಎಸ್‌ಸಿ ಸಂಸ್ಥೆಯನ್ನೇ ಕಾಂಗ್ರೆಸ್ ಹಾಳು ಮಾಡಿತ್ತು ಎಂದು ಆಕ್ರೋಶ ಹೊರಹಾಕಿದರು.

ಮೈಸೂರಿನಿಂದ ಬೆಂಗಳೂರಿಗೆ ಹೋಗುವವರಿಗೆ ಒಂದು ನೆಮ್ಮದಿ ಸುದ್ದಿ!

ದೀಪಾಂಜಲಿ ನಗರ ಜಂಕ್ಷನ್‌ನಿಂದ ನೈಸ್ ರಸ್ತೆಗೆ ನಾಲ್ಕು ಪಥದ ರಸ್ತೆ ನಿರ್ಮಾಣ

ಟ್ರಾಫಿಕ್ ಜಾಮ್‌ನಲ್ಲಿ 2 ಗಂಟೆ ತೆವಳುವ ಬದಲು ಕೇವಲ 30 ನಿಮಿಷದಲ್ಲಿ ತಲುಪಬಹುದು

ಮೈಸೂರು, ಡಿ.9(ಬಿಎಲ್‌ಯು)– ಮೈಸೂರಿನಿಂದ ಬೆಂಗಳೂರಿನ ಕೆಂಗೇರಿಗೆ ಕೇವಲ ಎರಡು ಕಾಲು ಗಂಟೆಯಲ್ಲಿ ಸಾಗಬಹುದು. ಆದರೆ, ಕೆಂಗೇರಿಯಿಂದ ದೀಪಾಂಜಲಿ ನಗರ ತಲುಪಲು ಕನಿಷ್ಟ ಒಂದೂವರೆ ಗಂಟೆ ಸಮಯ ತಗಲುತ್ತದೆ. ಸಂಚಾರ ದಟ್ಟಣೆ ದಾಟಿ ಬೆಂಗಳೂರಿಗೆ ಪ್ರವೇಶ ಪಡೆಯಲು ಸಾಕು ಸಾಕಾಗುತ್ತದೆ. ಆದರೆ ಮೈಸೂರಿನಿಂದ ಬೆಂಗಳೂರಿಗೆ ಹೋಗುವವರಿಗೆ ಇನ್ನು ಮುಂದೆ ಈ ತಲೆ ನೋವು ಇರುವುದಿಲ್ಲ. ಈಗ ನಿರ್ಮಾಣವಾಗುತ್ತಿರುವ ನಾಲ್ಕು ಪಥದ ರಸ್ತೆ ಕಾಮಗಾರಿಯಿಂದ ನೈಸ್ ರಸ್ತೆಯಿಂದ ದೀಪಾಂಜಲಿ ನಗರ ಜಂಕ್ಷನ್‌ಗೆ ನೇರವಾಗಿ ಸಂಪರ್ಕ ಕಲ್ಪಿಸಲಾಗುತ್ತಿದೆ.

ಟ್ರಾಫಿಕ್ ಜಾಮ್‌ನಲ್ಲಿ ಸಿಲಿಕಾನ್ ಸಿಟಿ ಬೆಂಗಳೂರು ಇಡೀ ವಿಶ್ವದಲ್ಲೆ ಗುರುತಿಸಿಕೊಂಡಿದೆ. ಬೆಂಗಳೂರಿನ ಯಾವುದೇ ಸಣ್ಣ ರಸ್ತೆಗೆ ಹೋಗಬೇಕೆಂದರೂ ಎಲ್ಲೆಡೆ ಟ್ರಾಫಿಕ್ ಜಾಮ್. ಇನ್ನು ಪ್ರಮುಖ ರಸ್ತೆಗಳ ಗೋಳು ಕೇಳುವಂತೆಯೇ ಇಲ್ಲ. ಮುಂಜಾನೆ 6 ಗಂಟೆಗೆ ಆರಂಭವಾದರೆ ರಾತ್ರಿ 12 ಗಂಟೆವರೆಗೆ ಟ್ರಾಫಿಕ್ ಜಾಮ್ ಇರುತ್ತದೆ.

ಮೈಸೂರಿನಲ್ಲಿ ರಾತ್ರಿ 10 ಗಂಟೆಗೆ ಎಲ್ಲಾ ಸಿಗ್ನಲ್ ಲೈಟ್ ಆಫ್ ಮಾಡಲಾಗುತ್ತದೆ. ಆದರೆ ಬೆಂಗಳೂರಿನಲ್ಲಿ ದಿನದ 24 ಗಂಟೆ ಸಿಗ್ನಲ್ ಲೈಟ್‌ಗಳು ಚಾಲನೆಯಲ್ಲಿರುತ್ತವೆ. ಅಲ್ಲಿ ಸಂಚಾರಿ ಪೊಲೀಸರು ಇಲ್ಲವೆಂದು ಸಿಗ್ನಲ್ ದಾಟಿದರೆ ಅಲ್ಲಿರುವ ಸಿಸಿಟಿವಿ ಎಐ ಕ್ಯಾಮರಾದಿಂದ ಮಾರನೆ ದಿನಕ್ಕೆ ದಂಡದ ನೋಟಿಸ್ ಮನೆಗೆ ತಲುಪುತ್ತದೆ. ಇದರಿಂದ ಟ್ರಾಫಿಕ್ ಜಾಮ್ ದಿನದ ನಿತ್ಯದ ಗೋಳಾಗಿದೆ.



ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇ ಮೂಲಕ ಮೈಸೂರಿನಿಂದ ಬೆಂಗಳೂರಿಗೆ ಕೇವಲ ಎರಡು ಕಾಲು ಗಂಟೆಯಲ್ಲಿ ಸಾಗಬಹುದು. ಸ್ವಲ್ಪ ನಿಧಾನವಾಗಿ ಹೋಗುತ್ತೇವೆ ಅಂದರೆ ಎರಡೂವರೆ ಗಂಟೆಯೊಳಗೆ ಬೆಂಗಳೂರಿನ ಕೆಂಗೇರಿ ತಲುಪಬಹುದು. ಆದರೆ ಕೆಂಗೇರಿಯಿಂದ ಬೆಂಗಳೂರು ಪ್ರವೇಶ ಪಡೆದರೆ ಮುಂದೆ ಸಾಗಲು ಪ್ರಯಾಸ ಪಡಬೇಕು.

ದೀಪಾಂಜಲಿ ನಗರದಿಂದ ಚಲಗಟ್ಟದವರೆಗೆ ಕೇವಲ 11 ಕಿಲೋ ಮೀಟರ್ ಅಂತರವಿದೆ. ಟ್ರಾಫಿಕ್ ಜಾಮ್‌ನಲ್ಲಿ ನುಸುಳಿ 11 ಕಿಲೋ ಮೀಟರ್ ತಲುಪಲು ಕನಿಷ್ಟ ಒಂದು ಗಂಟೆ ಬೇಕು. ಇನ್ನು ನಾಯಂಡಹಳ್ಳಿ, ರಾಜರಾಜೇಶ್ವರಿ ನಗರ ಜಂಕ್ಷನ್, ಜ್ಞಾನ ಭಾರತಿ ಹಾಗೂ ಚಲ್ಲಘಟ್ಟದ ಸಿಗ್ನಲ್‌ನಲ್ಲಿ ಗಂಟೆ ಗಟ್ಟಲೆ ಕಾಯಬೇಕು. ಶುಕ್ರವಾರ, ಶನಿವಾರ, ಭಾನುವಾರ ಹಾಗೂ ರಜಾ ದಿನಗಳಲ್ಲಿ ಟ್ರಾಫಿಕ್ ಜಾಮ್ ಇನ್ನು ಭಯಂಕರವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಇಲ್ಲಿನ ಟ್ರಾಫಿಕ್ ಜಾಮ್ ತಪ್ಪಿಸಲು ದೀಪಾಂಜಲಿ ನಗರ ಜಂಕ್ಷನ್‌ನಿಂದ ಪಿಇಎಸ್ ಕಾಲೇಜು ಬಳಿಯ ನೈಸ್ ರಸ್ತೆ ಕ್ಲೋವರ್ ಲೀಫ್‌ಗೆ ಸಂಪರ್ಕ ಕಲ್ಪಿಸುವ 1.5 ಕಿಲೋ ಮೀಟರ್‌ಗಳ ಲಿಂಕ್ ರಸ್ತೆ (ಸಂಪರ್ಕ ರಸ್ತೆ) ಯ ಕಾಮಗಾರಿ ಭರದಿಂದ ಸಾಗುತ್ತದೆ. ಈ ರಸ್ತೆ ನಿರ್ಮಾಣವಾಗಿ ಸಾರ್ವಜನಿಕರ ಬಳಕೆಗೆ ಮುಕ್ತವಾದರೆ ಕೇವಲ 20 ರಿಂದ 30 ನಿಮಿಷದೊಳಗೆ ದೀಪಾಂಜಲಿ ನಗರದ ಜಂಕ್ಷನ್‌ನಿಂದ ನೈಸ್ ರಸ್ತೆಗೆ ಸಾಗಬಹುದು.

ಇದರಿಂದ ಮೈಸೂರಿನಿಂದ ಬೆಂಗಳೂರಿಗೆ ಹಾಗೂ ಬೆಂಗಳೂರಿನಿಂದ ಮೈಸೂರಿಗೆ ಹೋಗುವವರಿಗೆ ಬಹಳ ಅನುಕೂಲವಾಗುತ್ತದೆ. ಮೈಸೂರಿನಿಂದ ಬೆಂಗಳೂರಿಗೆ ಹೋಗುವರು ನೈಸ್ ರಸ್ತೆಯಿಂದ ದೀಪಾಂಜಲಿ ನಗರದ ಜಂಕ್ಷನ್‌ಗೆ ಕೇವಲ 20 ರಿಂದ 30 ನಿಮಿಷದಲ್ಲಿ ಸಾಗಬಹುದು.

ಇದರಿಂದ ಮೈಸೂರಿನಿಂದ ಹೋಗುವರು ನಾಯಂಡಹಳ್ಳಿ, ರಾಜರಾಜೇಶ್ವರಿ ನಗರ ಜಂಕ್ಷನ್, ಜ್ಞಾನ ಭಾರತಿ ಹಾಗೂ ಚಲ್ಲಘಟ್ಟ ಬಳಿಯ ಟ್ರಾಫಿಕ್ ಜಾಮ್ ಗೋಳಿನಿಂದ ಪಾರಾಗಿ ನೈಸ್ ರಸ್ತೆಯಿಂದ ದೀಪಾಂಜಲಿ ನಗರ ಜಂಕ್ಷನ್‌ಗೆ ಕೆಲವೇ ನಿಮಿಷದಲ್ಲಿ ಹೋಗಬಹುದು. ಇದರಿಂದ ಮೈಸೂರು ಹಾಗೂ ಬೆಂಗಳೂರು ನಡುವೆ ಸಂಚಾರ ಮಾಡುವರಿಗೆ ಟ್ರಾಫಿಕ್ ಜಾಮ್ ಗೋಳಾಟವಿಲ್ಲದೆ ಶೀಘ್ರ ತಾವು ತಲುಪಬಹುದಾದ ಜಾಗ ಸೇರಬಹುದು. ದೀಪಾಂಜಲಿ ನಗರದ ಜಂಕ್ಷನ್‌ನಿಂದ ನೈಸ್ ರಸ್ತೆ ಸಂಪರ್ಕಿಸುವ ನಾಲ್ಕು ಪಥದ ರಸ್ತೆಯಲ್ಲಿ ನೈಸ್ ಸಂಸ್ಥೆ ಟೋಲ್ ಶುಲ್ಕ ವಿಧಿಸುತ್ತದೆಯೇ ಅಥವಾ ಇಲ್ಲವೇ ಎಂಬುದು ಇನ್ನು ಸ್ಪಷ್ಟವಾಗಿಲ್ಲ.

ದೇಶ - ವಿದೇಶ

ಜಪಾನ್‌ನಲ್ಲಿ ಪ್ರಬಲ ಭೂಕಂಪ; 23 ಮಂದಿಗೆ ಗಾಯ



ಜಪಾನ್, ಡಿ.9– ಉತ್ತರ ಜಪಾನ್‌ನಲ್ಲಿ 7.5 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದೆ. ಹಲವು ಮನೆಗಳು ನೆಲಸಮಗೊಂಡಿವೆ. ಘಟನೆಯಲ್ಲಿ 23 ಮಂದಿ ಗಾಯಗೊಂಡಿದ್ದಾರೆ. ಸುನಾಮಿ ಅಲೆಗಳು ಎದ್ದಿವೆ. ಅಮೋರಿ ಕರಾವಳಿಯಿಂದ ಸುಮಾರು 80 ಕಿ.ಮೀ ದೂರದಲ್ಲಿರುವ ಪೆಸಿಫಿಕ್ ಮಹಾಸಾಗರದಲ್ಲಿ ರಾತ್ರಿ 11.15ಕ್ಕೆ ಭೂಕಂಪ ಸಂಭವಿಸಿದೆ. ಹಲವು ವಿಡಿಯೋಗಳು ವೈರಲ್ ಆಗಿವೆ. ಹಚಿನೋಹೆಯ ಹೋಟೆಲ್‌ನಲ್ಲಿ ಹಲವಾರು ಜನರು ಗಾಯಗೊಂಡಿದ್ದಾರೆ. ಇವಾಟೆ ಪ್ರಿಫೆಕ್ಚರ್‌ನ ಕುಜಿ ಬಂದರಿನಲ್ಲಿ 70 ಸೆಂ.ಮೀ.ವರೆಗಿನ ಸುನಾಮಿ ಅಲೆಗಳು ಎದ್ದಿವೆ. ಮುನ್ನೆಚ್ಚರಿಕೆಯಾಗಿ ದುರ್ಬಲ ಪ್ರದೇಶಗಳಲ್ಲಿರುವ ನಿವಾಸಿಗಳು ಎತ್ತರದ ಪ್ರದೇಶಗಳಿಗೆ ತೆರಳುವಂತೆ ಸೂಚನೆ ನೀಡಲಾಗಿದೆ.

ವಿವಾಹದ ವೇಳೆ ನೀಡಿದ್ದ ಭರವಸೆ ಈಡೇರಿಸದ ಪತಿ; ಆರ್ಥಿಕ ಸಂಕಷ್ಟದಿಂದ ಕಬಡ್ಡಿ ಆಟಗಾರ್ತಿ ಆತ್ಮಹತ್ಯೆ

ನಾಗ್ಪುರ, ಡಿ.9– ಆರ್ಥಿಕ ಸಂಕಷ್ಟ, ಪತಿಯ ನಂಬಿಕೆ ದ್ರೋಹದಿಂದ ನೊಂದ ಕಬಡ್ಡಿ ಆಟಗಾರ್ತಿಯೊಬ್ಬರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಕಿರಣ್ ಸೂರಜ್ ದಾಧೆ ಆತ್ಮಹತ್ಯೆ ಮಾಡಿಕೊಂಡ ಕಬಡ್ಡಿ ಆಟಗಾರ್ತಿ.



ಆರ್ಥಿಕವಾಗಿ ದುರ್ಬಲರಾಗಿದ್ದ ಕಿರಣ್ ಸೂರಜ್ ದಾಧೆ 2020ರಲ್ಲಿ ಸ್ವಪ್ನಿಲ್ ಜಯದೇವ್ ಲಂಬ್‌ಘರೆ ಎಂಬಾತನನ್ನು ವಿವಾಹವಾದರು. ಮದುವೆ ವೇಳೆ ಆಕೆಗೆ ನೌಕರಿ ಕೊಡಿಸಿ ಆರ್ಥಿಕ ಸಂಕಷ್ಟವನ್ನು ಬಗೆಹರಿಸುವುದಾಗಿ ಸಪ್ನಿಲ್ ಭರವಸೆ ನೀಡಿದ್ದ.

ಆದರೆ ಸ್ವಪ್ನಿಲ್ ನೌಕರಿ ಕೊಡಿಸುವ ವಿಷಯದಲ್ಲಿ ವಿಳಂಬ ಮಾಡಿದ್ದರಿಂದ. ಜೊತೆಗೆ ಲೈಂಗಿಕ ನೆರವು ಕೋರುವುದು ಸೇರಿದಂತೆ ಮಾನಸಿಕ ಕಿರುಕುಳ ನೀಡಿದ್ದರಿಂದ ತಾನು ಮೋಸ ಹೋಗಿದ್ದೇನೆ ಎಂದು ನಂತರ ಅರಿವಾಯಿತು. ಕೊನೆಗೆ ಆತನ ಮನೆಯನ್ನು ತೊರೆದು ತನ್ನ ಪೋಷಕರ ಮನೆಗೆ ಕಿರಣ್ ಮರಳಿದಳು. ಬೆದರಿಕೆ ಮತ್ತು ನಿಂದನೆಯನ್ನು ಎದುರಿಸಿದ ಆಕೆಯ ಕುಟುಂಬವು ಕುಟುಂಬ ನ್ಯಾಯಾಲಯದಲ್ಲಿ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸುವಂತೆ ಒತ್ತಾಯಿಸಿತು. ಕಿರಣ್ ಕಿರುಕುಳ ನೀಡಿದ್ದ ಸಾಕ್ಷಿಗಾಗಿ ತನ್ನ ಫೋನ್‌ನಲ್ಲಿ ಸಂದೇಶಗಳನ್ನು ಸಂರಕ್ಷಿಸಿಟ್ಟಿದ್ದಾಳೆಂದು ವರದಿಯಾಗಿದೆ.

ಬಿಎಂಸಿ ಚುನಾವಣೆಗೆ ಒಟ್ಟಾಗಿ ಸ್ಪರ್ಧಿಸಲು ಶಿಂಧೆ– ಫಡ್ನವೀಸ್ ನಿರ್ಧಾರ!

ಮುಂಬಯಿ, ಡಿ.9– ಭಿನ್ನಾಭಿಪ್ರಾಯ ಮರೆತು ಆಡಳಿತಾರೂಢ ಮಿತ್ರಪಕ್ಷಗಳಾದ ಬಿಜೆಪಿ ಮತ್ತು ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ, ಮುಂಬೈ ಮತ್ತು ಥಾಣೆ



ಸೇರಿದಂತೆ ಮಹಾರಾಷ್ಟ್ರದ ಪುರಸಭೆಗಳಿಗೆ ನಡೆಯುವ ಚುನಾವಣೆಯಲ್ಲಿ ಮೈತ್ರಿಕೂಟವಾಗಿ ಸ್ಪರ್ಧಿಸಲು ನಿರ್ಧರಿಸಿವೆ ಎಂದು ಶಿವಸೇನೆ ಮೂಲಗಳು ತಿಳಿಸಿವೆ.

ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮತ್ತು ಉಪಮುಖ್ಯಮಂತ್ರಿ ಶಿಂಧೆ ಸೋಮವಾರ ತಡರಾತ್ರಿ ನಡೆದ ಸಭೆಯಲ್ಲಿ, ಆಡಳಿತ ಪಕ್ಷಗಳು ಅಸ್ತಿತ್ವದಲ್ಲಿರುವ ಮಹಾಯುತಿ ಮೈತ್ರಿಕೂಟದ ಸದಸ್ಯರಾಗಿ ಈ ಚುನಾವಣೆಯಲ್ಲಿ ಸ್ಪರ್ಧಿಸಲು ನಿರ್ಧರಿಸಿದ್ದಾರೆ ಎಂದು ಹೇಳಲಾಗಿದೆ. ಆದರೆ ಪುರಸಭೆ ಚುನಾವಣೆಗೆ ಇನ್ನೂ ದಿನಾಂಕ ಘೋಷಣೆ ಆಗಿಲ್ಲ. ರಾಜ್ಯ ವಿಧಾನಸಭೆಯ ಚಳಿಗಾಲದ ಅಧಿವೇಶನ ನಡೆಯುತ್ತಿರುವ ನಾಗ್ಪುರದಲ್ಲಿ ಬಿಜೆಪಿ ನಾಯಕರಾದ ಚಂದ್ರಶೇಖರ್ ಬವಾಂಕುಲೆ ಮತ್ತು ರವೀಂದ್ರ ಚವಾಣ್ ಭಾಗವಹಿಸಿದ್ದ ಸಭೆಯಲ್ಲಿ, ಬಿಜೆಪಿ ಮತ್ತು ಶಿವಸೇನೆ ನಾಯಕರು ಮತ್ತು ಕಾರ್ಯಕರ್ತರಿಗೆ ಗಾಳ ಹಾಕುವುದಿಲ್ಲ ಎಂದು ಹೇಳಿದ್ದಾರೆ.

ಏಕಾಏಕಿ ಉರಿದ ಏಳಂತಸ್ತಿನ ಕಟ್ಟಡ; ಕನಿಷ್ಟ 20 ಮಂದಿ ಸಾವು!

ಜಕಾರ್ತಾ, ಡಿ.9– ಇಂಡೋನೇಷ್ಯಾದ ಜಕಾರ್ತದಲ್ಲಿರುವ ಏಳು ಅಂತಸ್ತಿನ ಕಟ್ಟಡದಲ್ಲಿ ಸಂಭವಿಸಿದ ಭಾರಿ ಬೆಂಕಿ ಅವಘಡದಲ್ಲಿ ಕನಿಷ್ಠ 20 ಜನರು ಸಾವನ್ನಪ್ಪಿದ್ದು, ಹಲವಾರು ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಸ್ಥಳೀಯ ಮಾಧ್ಯಮಗಳ ಮಾಹಿತಿಯ ಪ್ರಕಾರ, ಹಲವಾರು ಗಂಟೆಗಳ ಕಾರ್ಯಾಚರಣೆಯ ನಂತರ ಅಗ್ನಿಶಾಮಕ ದಳದವರು ಬೆಂಕಿಯನ್ನು ನಿಯಂತ್ರಣಕ್ಕೆ ತರುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ, ಘಟನೆಯ ಕಾರಣ ಏನು ಅನ್ನೋದನ್ನು ಕಂಡುಹಿಡಿಯಲು ಅಧಿಕಾರಿಗಳು ಕೆಲಸ ಮಾಡುತ್ತಿದ್ದಾರೆ.

ಮಾಹಿತಿ ಪ್ರಕಾರ, ಮಧ್ಯಾಹ್ನದ ಸುಮಾರಿಗೆ ಮೊದಲ ಮಹಡಿಯಲ್ಲಿ ಸ್ಫೋಟಗೊಂಡು ನಂತರ ಮೇಲಿನ ಮಹಡಿಗೆ ಹರಡಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆ ಸಮಯದಲ್ಲಿ ಕೆಲವು ಉದ್ಯೋಗಿಗಳು ಕಟ್ಟಡದಲ್ಲಿ ಊಟ ಮಾಡುತ್ತಿದ್ದರು, ಇತರರು ಕಚೇರಿಯಿಂದ ಹೊರ ಬಂದಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಂಕಿ ಕಾಣಿಸಿಕೊಂಡ ಕಟ್ಟಡವು ಇಂಡೋನೇಷ್ಯಾದ ಟೆರಾ ಡ್ರೋನ್ ಕಚೇರಿಯಾಗಿದ್ದು, ಇದು ಗಣಿಗಾರಿಕೆ ಮತ್ತು ಕೃಷಿ ವಲಯಗಳಲ್ಲಿನ ಗ್ರಾಹಕರೊಂದಿಗೆ ವೈಮಾನಿಕ ಸಮೀಕ್ಷೆ ಚಟುವಟಿಕೆಗಳಿಗಾಗಿ ಡ್ರೋನ್‌ಗಳನ್ನು ಒದಗಿಸುತ್ತದೆ. ಕಂಪನಿಯ ವೆಬ್‌ಸೈಟ್ ಪ್ರಕಾರ, ಈ ಸಂಸ್ಥೆಯು ಜಪಾನಿನ ಡ್ರೋನ್ ಕಂಪನಿ ಟೆರಾ ಡ್ರೋನ್ ಕಾರ್ಪೊರೇಶನ್‌ನ ಇಂಡೋನೇಷ್ಯಾದ ಘಟಕವಾಗಿದೆ.

ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಬಿಆರ್ ಗವಾಯಿ ಮೇಲೆ ಶೂ ಎಸೆದ ವಕೀಲ ರಾಕೇಶ್ ಕಿಶೋರ್‌ಗೆ ಚಪ್ಪಲಿ ಏಟು!

ನವದೆಹಲಿ, ಡಿ.9– ಸುಪ್ರೀಂಕೋರ್ಟ್‌ನಲ್ಲಿ ಭಾರತದ ಮಾಜಿ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಮೇಲೆ ಶೂ ಎಸೆದ ವಕೀಲ ರಾಕೇಶ್ ಕಿಶೋರ್ ಅವರಿಗೆ ಇಂದು ದೆಹಲಿಯ ಕರ್ಕಾಡೂಮ ನ್ಯಾಯಾಲಯದ ಆವರಣದಲ್ಲಿ ಚಪ್ಪಲಿಯಿಂದ ಥಳಿಸಲಾಯಿತು. ಆದಾಗ್ಯೂ, ದಾಳಿಕೋರರ ಗುರುತು ಮತ್ತು ದಾಳಿಯ ಹಿಂದಿನ ಕಾರಣ ಬಹಿರಂಗವಾಗಿಲ್ಲ.



ದೆಹಲಿಯ ಕರ್ಕಾಡೂಮ ನ್ಯಾಯಾಲಯ ಸಂಕೀರ್ಣದಲ್ಲಿ ಕೆಲವರು ತನ್ನ ಮೇಲೆ ದಾಳಿ ಮಾಡಿದ್ದಾರೆ ಎಂದು ರಾಕೇಶ್ ಕಿಶೋರ್ ಹೇಳಿಕೊಂಡಿದ್ದಾರೆ. ಹಲ್ಲೆಯ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ. ವೀಡಿಯೊದಲ್ಲಿ, ರಾಕೇಶ್ ಕಿಶೋರ್ ತನ್ನ ಮೇಲೆ ಹಲ್ಲೆ ನಡೆಸುತ್ತಿರುವ ವ್ಯಕ್ತಿಯನ್ನು 'ನೀವು ಯಾರು? ನನ್ನನ್ನು ಏಕೆ ಹೊಡೆಯುತ್ತಿದ್ದೀರಿ?' ಎಂದು ಕೇಳುತ್ತಿರುವುದು ಕಂಡುಬರುತ್ತದೆ. ನಂತರ ಅವರು 'ಸನಾತನ ಧರ್ಮಕ್ಕೆ ಜಯ' ಎಂದು ಕೂಗುತ್ತಾರೆ. ಆದಾಗ್ಯೂ, ಈ ವಿಷಯದ ಬಗ್ಗೆ ಯಾವುದೇ ಪೊಲೀಸ್ ದೂರು ದಾಖಲಾಗಿಲ್ಲ. ಆದರೆ ಬಿಆರ್ ಗವಾಯಿ ಮೇಲೆ ಶೂ ಎಸೆದಿದ್ದ ಕಾರಣಕ್ಕೆ ರಾಕೇಶ್ ಕಿಶೋರ್ ಮೇಲೆ ದಾಳಿ ಮಾಡಿರಬಹುದು ಎಂದು ಶಂಕಿಸಲಾಗಿದೆ.

ಮೈಸೂರು ಮಿತ್ರ

ದುಬಾರೆ ಸಾಕಾನೆ ಶಿಬಿರದ ತಕ್ಷ ಆನೆ ಸಾವು

ಕುಶಾಲನಗರ, ಡಿ.9–ದುಬಾರೆ ಸಾಕಾನೆ ಶಿಬಿರದಲ್ಲಿ ಕಳೆದ ವರ್ಷದ ಹಿಂದೆ ಕರೆತರಲಾಗಿದ್ದ ಸಾಕಾನೆ ತಕ್ಷ ಅನಾರೋಗ್ಯದಿಂದ ಸೋಮವಾರ ರಾತ್ರಿ ಮೃತಪಟ್ಟಿದೆ.

ಎಲ್ಲ ಆನೆಗಳೊಂದಿಗೆ ಇದ್ದ ತಕ್ಷ 10 ದಿನಗಳ ಹಿಂದೆ ಅನಾರೋಗ್ಯಕ್ಕೊಳಗಾಗಿ ಆಹಾರವನ್ನು ಸರಿಯಾಗಿ ತೆಗೆದುಕೊಳ್ಳದ ಪರಿಣಾಮ ತುಂಬಾ ನಿಶಕ್ತಗೊಂಡಿತ್ತು. ಡಿ.6ರಂದು ಇದರ ಆರೋಗ್ಯದಲ್ಲಿ ತೀವ್ರ ವ್ಯತ್ಯಯ ಕಂಡುಬಂದ ಹಿನ್ನೆಲೆಯಲ್ಲಿ ಕೂಡಲೇ ವೈದ್ಯಾಧಿಕಾರಿ ಡಾ. ಮುಜೀಬ್ ಮತ್ತವರ ತಂಡ ತಕ್ಷನನ್ನು ಉಳಿಸಿಕೊಳ್ಳಲು ಚಿಕಿತ್ಸೆ ನೀಡುತ್ತಿದ್ದರೂ ಚಿಕಿತ್ಸೆಗೆ ಸರಿಯಾಗಿ ಸ್ಪಂದಿಸದೆ ನಿನ್ನೆ ರಾತ್ರಿ ಮೃತಪಟ್ಟಿದೆ ಎಂದು ವೈದ್ಯರು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ರಾಮನಗರ ಜಿಲ್ಲೆಯ ಚನ್ನಪಟ್ಟಣದಲ್ಲಿ ಪುಂಡಾಟ ನಡೆಸುತ್ತಿದ್ದ ಈ ಆನೆಯನ್ನು 2024ರ ಡಿ.28 ರಂದು ಸೆರೆ ಹಿಡಿದು ದುಬಾರೆ ಸಾಕಾನೆ ಶಿಬಿರಕ್ಕೆ ತರಲಾಗಿತ್ತು. ಈ ಶಿಬಿರದ ಕ್ರಾಲ್‌ನಲ್ಲಿ ಹಾಕಿ ಪಳಗಿಸಿದ್ದ ತಕ್ಷ ಆನೆಯನ್ನು 2025ರ ಜು.21 ರಂದು ಅದರಿಂದ ಬಿಡುಗಡೆ ಮಾಡಿದ್ದು, ಶಿಬಿರದಲ್ಲಿರುವ ಇತರೆ ಆನೆಗಳೊಂದಿಗೆ ಸುಮಧುರವಾಗಿಯೇ ಇತ್ತು. ಆದರೆ ಏಕಾಏಕಿ ಆರೋಗ್ಯ ಹದಗೆಡಲು ಕಾರಣವೇನೆಂಬುದರ ಬಗ್ಗೆ ಯಾರೂ ಅಧಿಕಾರಿಗಳು ಸೂಕ್ತ ರೀತಿಯಲ್ಲಿ ಪ್ರತಿಕ್ರಿಯಿಸುತ್ತಿಲ್ಲ ಕೇವಲ ನಿಶಕ್ತಿಗೊಂಡಿತ್ತು ಎಂದೇ ಉತ್ತರಿಸುತ್ತಿದ್ದಾರೆ.

ಕೊಡಗು ವೃತ್ತ ಅರಣ್ಯ ಸಂರಕ್ಷಣಾಧಿಕಾರಿ ಸೋನಲ್ ವಿಷ್ಣು ಉಪಸ್ಥಿತಿಯಲ್ಲಿ ಪಶು ವೈದ್ಯಾಧಿಕಾರಿಗಳಾದ ಡಾ.ಮುಜೀಬ್, ಡಾ.ಚಿಟ್ಟಿಯಪ್ಪ ಹಾಗೂ ಡಾ.ಸಂಜೀವ್ ಕುಮಾರ್ ಸಿಂಧೆ ಆನೆಯ ಮರಣೋತ್ತರ ಪರೀಕ್ಷೆ ನಡೆಸಿ ಅದರ ಸ್ಯಾಂಪಲ್‌ಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿದ್ದಾರೆ. ಮಡಿಕೇರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ವಿ.ಅಭಿಷೇಕ್, ಸೋಮವಾರಪೇಟೆ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಎ.ಎ. ಗೋಪಾಲ್, ಕುಶಾಲನಗರ ವಲಯ ಅರಣ್ಯಾಧಿಕಾರಿ ಆರ್.ರಕ್ಷಿತ್, ದುಬಾರೆ ಉಪ ವಲಯ ಅರಣ್ಯಾಧಿಕಾರಿ ಕೆ.ಪಿ.ರಂಜನ್, ವೆಂಕಟೇಶ್ ನವಾಡ, ದುಬಾರೆ ಶಾಖಾ ಉಪ ವಲಯ ಅರಣ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.


ದುಬಾರೆ ಸಾಕಾನೆ ಶಿಬಿರದಲ್ಲಿ ಕಳೆದ ವರ್ಷದ ಹಿಂದೆ ಇಲ್ಲಿಗೆ ಕರೆತರಲಾಗಿದ್ದ ತಕ್ಷ ಎಂಬ ಆನೆ ಅನಾರೋಗ್ಯದಿಂದ ಸೋಮವಾರ ರಾತ್ರಿ ಮೃತಪಟ್ಟಿದೆ.

ಕಲಾಂ ವಸತಿ ಶಾಲೆಗೆ ಶಾಸಕರ ದಿಢೀರ್ ಭೇಟಿ ; ಸಿಬ್ಬಂದಿ ವಿರುದ್ಧ ಆಕ್ರೋಶ

ಮಡಿಕೇರಿ,ಡಿ.9–ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ ವಿದ್ಯಾರ್ಥಿ ನಿಲಯಕ್ಕೆ ದಿಢೀರ್ ಭೇಟಿ ನೀಡಿ ಅಲ್ಲಿನ ಅವ್ಯವಸ್ಥೆಯನ್ನು ಕಂಡು ಸಿಬ್ಬಂದಿ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಕೊಡ್ಲಿಪೇಟೆ ಬಳಿಯ ಖ್ಯಾತೆ ಗ್ರಾಮದಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಅವ್ಯವಸ್ಥೆ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ದಿಢೀರ್ ಭೇಟಿ ನೀಡಿದ್ದರು. ಬೆಳಿಗ್ಗೆ ಉಪಹಾರ ಸಂದರ್ಭ ಅರೆಬೆಂದ ಅನ್ನ, ತರಕಾರಿಗಳೇ ಇಲ್ಲದ ತರಕಾರಿ ಪಲಾವ್, ಶೌಚಾಲಯದಲ್ಲಿ ಅಶುಚಿತ್ವ, ಹುಳು ತುಂಬಿರುವ ಅಕ್ಕಿ, ನೀರಿನ ಟ್ಯಾಂಕ್‌ನಲ್ಲಿ ಶುದ್ಧತೆ ಇಲ್ಲದಿರುವುದು, ಮಲಗುವ ಕೋಣೆಯಲ್ಲಿ ಸೊಳ್ಳೆಗಳ ಕಾಟ, ಬಿಸಿನೀರಿನ ಸರಬರಾಜು ಇಲ್ಲದೆ ತಣ್ಣೀರಿನಲ್ಲಿ ಸ್ನಾನ ಮಾಡುವ ಪರಿಸ್ಥಿತಿ, ಕೆಟ್ಟು ನಿಂತಿರುವ ಸೋಲಾರ್ ಮತಿತರ ಅವ್ಯವಸ್ಥೆಗಳ ಬಗ್ಗೆ ವಿದ್ಯಾರ್ಥಿಗಳು ಶಾಸಕರ ಗಮನಕ್ಕೆ ತಂದರು.


ಶಾಸಕ ಸುಜಾ ಕುಶಾಲಪ್ಪ ಮಕ್ಕಳಿಗೆ ನೀಡಲಾಗುತ್ತಿದ್ದ ಆಹಾರವನ್ನು ಪರಿಶೀಲಿಸಿದರು

ವಿದ್ಯಾರ್ಥಿಗಳ ಅಳಲು ಆಲಿಸಿದ ಶಾಸಕ ಕುಶಾಲಪ್ಪ ಭೋಜನ ಕೊಠಡಿಗೆ ತೆರಳಿ, ಮಕ್ಕಳಿಗೆ ನೀಡಲಾಗುತ್ತಿದ್ದ ಆಹಾರವನ್ನು ಪರಿಶೀಲಿಸಿ ಆಹಾರದ ಗುಣಮಟ್ಟ ಕಾಯ್ದುಕೊಳ್ಳದಿರುವ ಬಗ್ಗೆ ಅಲ್ಲಿನ ವಾರ್ಡನ್ ಮತ್ತು ಸಿಬ್ಬಂದಿಗಳನ್ನು ತರಾಟೆಗೆ ತೆಗೆದುಕೊಂಡರು. ಮಕ್ಕಳ ಆರೋಗ್ಯದ ದೃಷ್ಟಿಯಿಂದ ಅವ್ಯವಸ್ಥೆಗಳನ್ನು ತಕ್ಷಣವೇ ಸರಿಪಡಿಸಬೇಕು. ಸರಕಾರ ನಿಗದಿಪಡಿಸಿದ ಮಾನದಂಡದಂತೆಯೇ ಆಹಾರ ವಿತರಿಸಬೇಕು ಎಂದು ಸೂಚಿಸಿದರು. ಈ ಕುರಿತು ಇಲಾಖೆ ಅಧಿಕಾರಿಗಳು ಮತ್ತು ಜಿಲ್ಲಾಧಿಕಾರಿಗಳ ಜೊತೆ ಚರ್ಚಿಸುವುದಾಗಿ ಹೇಳಿದರು.


ತಾಯಿಯ ಅಳಲು : ಕೊಡ್ಲಿಪೇಟೆಯ ದೊಡ್ಡ ಭಂಡಾರ ಗ್ರಾಮದ ಶಿವಕುಮಾರ್ ಹಾಗೂ ಕವಿತ ದಂಪತಿ ಪುತ್ರಿ 12 ವರ್ಷದ ಪೂರ್ವಿಕ ಎಂಬ ಬಾಲಕಿ ಮಾರ್ಚ್ ತಿಂಗಳಿನಲ್ಲಿ ಸಾವನ್ನಪ್ಪಿದ್ದು, ಮಗಳ ಸಾವಿಗೆ ವಸತಿ ಶಾಲೆಯ ಸಿಬ್ಬಂದಿ ನಿರ್ಲಕ್ಷ್ಯವೇ ಕಾರಣ ಎಂದು ಮೃತ ಬಾಲಕಿಯ ತಾಯಿ ಕವಿತ ಕುಶಾಲಪ್ಪ ಅವರ ಗಮನ ಸೆಳೆದಿದ್ದರು. ಮಗಳಿಗೆ ಜ್ವರ ಬಂದ ದಿನವೇ ಆಸ್ಪತ್ರೆಗೆ ದಾಖಲಿಸಿದ್ದರೆ ನನ್ನ ಮಗಳು ಬದುಕುಳಿಯುತ್ತಿದ್ದಳು. ಆದರೆ ವಸತಿ ಶಾಲೆಯ ಸಿಬ್ಬಂದಿಯ ನಿರ್ಲಕ್ಷ್ಯದಿಂದ ಮಗಳು ಸಾವನ್ನಪ್ಪುವಂತಾಯಿತು. ತನ್ನ ಮಗಳ ಸಾವಿಗೆ ಸೂಕ್ತ ನ್ಯಾಯ ಒದಗಿಸುವಂತೆ ಮೃತ ಬಾಲಕಿ ಪೂರ್ವಿಕಾಳ ತಾಯಿ ಅಳಲು ತೋಡಿಕೊಂಡರು. ಈ ಸಂಬಂಧ ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸುವುದಾಗಿ ಭರವಸೆ ನೀಡಿದರು.

ಬೋಧನಾ ಸಾಮರ್ಥ್ಯ ಉತ್ತಮೀಕರಣಕ್ಕೆ ನಿರಂತರ ಅಧ್ಯಯನ ಅಗತ್ಯ

ಕುಶಾಲನಗರ: ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ತಾಲೂಕು ಮಟ್ಟದ ಸಹ 'ಪಠ್ಯ ಚಟುವಟಿಕೆ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಪಟ್ಟಣದ ಫಾತಿಮ ಪ್ರೌಢ ಶಾಲೆಯಲ್ಲಿ ಮಂಗಳವಾರ ಸ್ಪರ್ಧಾ ಚಟುವಟಿಕೆಗಳನ್ನು ಉದ್ಘಾಟಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಕೃಷ್ಣಪ್ಪ, ಶಿಕ್ಷಕರು ನಿರಂತರ ವಿದ್ಯಾರ್ಥಿ ಇದ್ದಂತೆ ತಮ್ಮ ಬೋಧನಾ ಸಾಮರ್ಥ್ಯವನ್ನು ಉತ್ತಮಪಡಿಸಿಕೊಳ್ಳಲು ನಿರಂತರ ಅಧ್ಯಯನದಲ್ಲಿ ತೊಡಗಬೇಕು. ಕಲಿಕೆಯೇ ಬಂಡವಾಳವಾಗಿ ನಿರಂತರತೆಯನ್ನು ಕಾಯ್ದುಕೊಳ್ಳುವುದರಿಂದ ಹೆಚ್ಚು ಕ್ರಿಯಾಶೀಲತೆ ಬೆಳೆಯುತ್ತದೆ ಎಂದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಎಚ್.ಎಸ್.ಚೇತನ್ ಮಾತನಾಡಿ, ಇಂತಹ ಚಟುವಟಿಕೆಗಳಿಂದ ಶಿಕ್ಷಕರು ವಿದ್ಯಾರ್ಥಿಗಳ ವ್ಯಕ್ತಿತ್ವ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಲು ಸಾಧ್ಯವಾಗುತ್ತದೆ. ಇದರಿಂದ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಅವು ಸಹಾಯ ಮಾಡುತ್ತವೆ ಎಂದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷ ಎಚ್.ಎನ್.ಮಂಜುನಾಥ್, ತಾಲೂಕು ಅಧ್ಯಕ್ಷ ಟಿ.ಕೆ. ಬಸವರಾಜ್, ಉಪಾಧ್ಯಕ್ಷೆ ಎಸ್.ಕೆ.ಸೌಭಾಗ್ಯ, ಕಾರ್ಯದರ್ಶಿ ಕವಿತ, ನಿರ್ದೇಶಕಿ ಎಚ್.ಎಸ್. ಉಮಾದೇವಿ, ಕೆ.ಆರ್.ರತ್ನಕುಮಾರ್, ಟಿ.ವಿ. ಶೈಲಾ, ಟಿ.ಎಸ್.ಶಶಿಕುಮಾರ್, ಎಂ.ಎಲ್. ಸುಕುಮಾರಿ, ಮುಖ್ಯ ಶಿಕ್ಷಕ ಕೆ.ಎ.ಜಾನ್ಸನ್, ಶಿಕ್ಷಣ ಸಂಯೋಜಕಿ ಯದುಕುಮಾರಿ, ಸಿ.ಆರ್.ಪಿ., ಟಿ.ಈ.ವಿಶ್ವನಾಥ್, ಶಿಕ್ಷಕರ ಸಂಘಟನೆಯ ಪದಾಧಿಕಾರಿಗಳು ಇದ್ದರು.


ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಏರ್ಪಡಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ಪಾಲ್ಗೊಂಡಿರುವ ಶಿಕ್ಷಕರು.

ವಿಜೃಂಭಣೆಯ ಪುತ್ತರಿ ಕೋಲ್ ಮಂದ್ ನಮ್ಮೆ ಆಚರಣೆ


ಕೋಲ್ ಮಂದ್ ನಮ್ಮೆಯ ಅರಳಿ ಮರದ ಸುತ್ತಲೂ ಸಾಮೂಹಿಕವಾಗಿ ಊರ್ ಕೋಲ್ ಕೋಲಾಟ ನಡೆಸಿದರು.

ಮಡಿಕೇರಿ: ಪೊನ್ನಂಪೇಟೆ ತಾಲೂಕಿನ ನೆಮ್ಮಲೆ ಗ್ರಾಮದಲ್ಲಿ 'ಪುತ್ತರಿ ಕೋಲ್ ಮಂದ್ ನಮ್ಮೆ' ವಿಜೃಂಭಣೆಯಿಂದ ಜರುಗಿತು. ಪುತ್ತರಿ ಕೋಲಾಟ್, ಉಮ್ಮತ್ತಾಟ್, ಕತ್ತಿಯಾಟ್, ತಾಲಿಪಾಟ್, ವಾಲಗತಾಟ್, ಪರೆಯಕಳಿ ಸೇರಿದಂತೆ ವಿವಿಧ ನೃತ್ಯಗಳು, ಹಾಡುಗಾರಿಕೆ ಮಂದ್ ನಮ್ಮೆ ಸಡಗರಕ್ಕೆ ಸಾಕ್ಷಿಯಾಯಿತು.

ನೆಮ್ಮಲೆ ಗ್ರಾಮಾಭಿವೃದ್ಧಿ ಮಂಡಳಿಯ ಮಾಜಿ ಅಧ್ಯಕ್ಷ ಚೊಟ್ಟೆಯಾಂಡಮಾಡ ಬೋಸು ವಿಶ್ವನಾಥ್ ಮಾತನಾಡಿ, ನಮ್ಮ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಕಲಿಸುವ ಸಂಕಲ್ಪ ಮಾಡಿದಾಗ ಮಾತ್ರ ಈ ಪ್ರಯತ್ನಕ್ಕೆ ಫಲ ಸಿಕ್ಕಿದಂತಾಗುತ್ತದೆ ಹಾಗೂ ವಿಶ್ವ ಖ್ಯಾತಿಯ ಕೊಡವ ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಸಹಕಾರಿಯಾಗುತ್ತದೆ. ಆ ನಿಟ್ಟಿನಲ್ಲಿ ಎಲ್ಲರೂ ಕೈ ಜೋಡಿಸುವಂತಾಗಬೇಕು ಎಂದರು.

ತಾವಳಗೇರಿ ಮೂಂದ್‌ನಾಡ್ ಕೊಡವ ಸಮಾಜದ ನಿರ್ದೇಶಕಿ ಚಂಗುಲಂಡ ಅಶ್ವಿನಿ ಸತೀಶ್ ಮಾತನಾಡಿ, ಒಂದು ಭಾಷೆ ನಾಶವಾದರೆ ಆ ಜನಾಂಗದ ಸಂಸ್ಕೃತಿ ನಾಶವಾಗುತ್ತದೆ. ಸಂಸ್ಕೃತಿ ನಾಶವಾದರೆ ಆ ಜನಾಂಗವೇ ನಾಶವಾಗಿ ಹೋಗುತ್ತದೆ ಎಂಬ ಸ್ವಾಮಿ ವಿವೇಕಾನಂದರ ನುಡಿಯನ್ನು ನೆನಪಿನಲ್ಲಿಟ್ಟುಕೊಂಡು ಜನಾಂಗ ಹಾಗೂ ನಮ್ಮ ಸಂಸ್ಕೃತಿಯ ಉಳಿವಿಗಾಗಿ ಮಕ್ಕಳು ಹಾಗೂ ಕುಟುಂಬ ಸದಸ್ಯರೊಂದಿಗೆ ಎಲ್ಲರೂ ಮಂದ್ ನಮ್ಮೆಯಲ್ಲಿ ಭಾಗವಹಿಸಬೇಕೆಂದು ತಿಳಿಸಿದರು.

ತಾವಳಗೇರಿ ಮೂಂದ್‌ನಾಡ್ ಕೊಡವ ಸಮಾಜದ ಪೊಮ್ಮಕ್ಕಡ ಕೂಟದ ಅಧ್ಯಕ್ಷೆ ಕೋಟ್ರಮಾಡ ರೇಷ್ಮ ಕಾರ್ಯಪ್ಪ ಮಾತನಾಡಿ, ಪಾಶ್ಚಾತ್ಯ ಸಂಸ್ಕೃತಿ ಕಲಿಯಲು ಪ್ರೋತ್ಸಾಹ ನೀಡುವುದಕ್ಕಿಂತಲೂ ಹೆಚ್ಚಿನ ಮಟ್ಟದಲ್ಲಿ ಪೋಷಕರು ನಮ್ಮ ಜನಾಂಗದ ಹಾಗೂ ಈ ಮಣ್ಣಿನ ಸಂಸ್ಕೃತಿಯ ಕಲಿಕೆಗೆ ಹೆಚ್ಚು ಪ್ರೋತ್ಸಾಹ ನೀಡುವ ಅವಶ್ಯಕತೆ ಇದೆ ಎಂದು ಹೇಳಿದರು.

ನಮ್ಮೆಯ ಸಂದರ್ಭ ಅರಳಿ ಮರದ ಸುತ್ತಲೂ ಸಾಮೂಹಿಕವಾಗಿ ಊರ್ ಕೋಲ್ ಕೋಲಾಟದ ನಂತರ ತಿಂಗಕೊರ್ ವೊಟ್ಟ್ ತಲಕಾವೇರಿಕ್ ಕೂಟದ ಕಲಾವಿದರಿಂದ ಪುತ್ತರಿ ಕೋಲಾಟ್, ಕತ್ತಿಯಾಟ್, ತಾಲಿ ಪಾಟ್, ಪರೆಯಕಳಿ, ಚೆಟ್ಟಂಗಡ ಪೊಮ್ಮಕ್ಕಡ ಉಮ್ಮತ್ತಾಟ್, ತಾವಳಗೇರಿ ಮೂಂದ್ ನಾಡ್ ಕೊಡವ ಸವಾಜ ಪೊಮ್ಮಕ್ಕಡ ಕೂಟದ ಕಲಾವಿದರು, ವಿದ್ಯಾ ಸಂಸ್ಥೆ ಮಕ್ಕಳು, ಟಿ.ಶೆಟ್ಟಿಗೇರಿ ಕೊಡವ ಸಮಾಜದಲ್ಲಿ ತರಬೇತಿ ಪಡೆದ ಮಕ್ಕಳ ಉಮ್ಮತ್ತಾಟ್ ಹಾಗೂ ಪುತ್ತರಿ ಕೋಲಾಟ್ ಪ್ರದರ್ಶನ ನೆರೆದಿದ್ದವರ ಮೆಚ್ಚುಗೆಗೆ ಪಾತ್ರವಾಯಿತು. ನೆಮ್ಮಲೆ ಗ್ರಾಮದ ತಕ್ಕ ಮುಖ್ಯಸ್ಥ ಚೆಟ್ಟಂಗಡ ಸುರೇಂದ್ರ ನಾಣಯ್ಯ ಹಾಗೂ ಗ್ರಾಮಾಭಿವೃದ್ಧಿ ಮಂಡಳಿಯ ಅಧ್ಯಕ್ಷ ಕುಂಞಂಗಡ ಕೃಷ್ಣ ಭೀಮಯ್ಯ ಅವರ ಮುಂದಾಳತ್ವದಲ್ಲಿ ನಡೆಯಿತು.

ಕಾರ್ಮಿಕ ಫಲಾನುಭವಿಗಳಿಗೆ ರಕ್ಷಣ ಕವಚ ಕಿಟ್ ವಿತರಣೆ

ವಿರಾಜಪೇಟೆ: ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಮಂಡಳಿ ವತಿಯಿಂದ ನೋಂದಾಯಿತ ಕಾರ್ಮಿಕರಿಗೆ ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ತಮ್ಮ ಗೃಹ ಕಛೇರಿಯಲ್ಲಿ ನೋಂದಾಯಿತ ಕಾರ್ಮಿಕ ಫಲಾನುಭವಿಗಳಿಗೆ ರಕ್ಷಣ ಕವಚ ಕಿಟ್ ವಿತರಿಸಿದರು.

ಕಾರ್ಮಿಕರ ಅನುಕೂಲಕ್ಕಾಗಿ ಸರಕಾರ ನೀಡುತ್ತಿರುವ ಸೌಲಭ್ಯಗಳನ್ನು ನೋಂದಾಯಿತ ಫಲಾನುಭವಿ ಕಾರ್ಮಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಕಾರ್ಮಿಕರಿಗೆ ನೀಡಿರುವ ಸಂಚಾರಿ ಆರೋಗ್ಯ ಘಟಕವನ್ನು ಉದ್ಘಾಟಿಸಿದರು. ಜಿಲ್ಲಾ ಕಾರ್ಮಿಕ ನಿರೀಕ್ಷಕ ಎಂ.ಎಂ.ಯತ್ನಟ್ಟಿ, ಸೋಮವಾರಪೇಟೆ ವಿರಾಜಪೇಟೆ ಪೊನ್ನಂಪೇಟೆ ಉಸ್ತುವಾರಿ ಹಿರಿಯ ಕಾರ್ಮಿಕ ಅಧಿಕಾರಿ ಎಸ್.ಶಶಿಧರ್, ಸಹಾಯಕ ಅಧಿಕಾರಿಗಳಾದ ಜರಿನಾ, ಡಿ.ಇ. ನವೀನ್, ಸಂಚಾರಿ ಆರೋಗ್ಯ ಘಟಕದ ಡಾ. ಸಂತೋಷ್, ಕಾವ್ಯ, ಹಾಗೂ ಸಿಬ್ಬಂದಿ ಮತ್ತು ಕಾಂಗ್ರೆಸ್ ಪಕ್ಷದ ಮುಖಂಡರು ಭಾಗವಹಿಸಿದ್ದರು.


ಶಾಸಕ ಪೊನ್ನಣ್ಣ ಕಾರ್ಮಿಕ ಫಲಾನುಭವಿಗಳಿಗೆ ರಕ್ಷಣ ಕವಚ ಕಿಟ್ ವಿತರಿಸಿದರು.

ಇಂದು ಲೋಕಾಯುಕ್ತದಿಂದ ದೂರು ಅರ್ಜಿ ಸ್ವೀಕಾರ

ಮಡಿಕೇರಿ: ಲೋಕಾಯುಕ್ತ ಅಧಿಕಾರಿಗಳು ಡಿ.10ರ ಬೆಳಗ್ಗೆ 11ರಿಂದ ಮಧ್ಯಾಹ್ನ 1ಗಂಟೆಯವರೆಗೆ ಪೊನ್ನಂಪೇಟೆ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಲೋಕಾಯುಕ್ತ ಕಾಯಿದೆಯಡಿ ದೂರು ಅರ್ಜಿ ವಿತರಿಸಲಿದ್ದಾರೆ. ಭರ್ತಿ ಮಾಡಿದ ಮತ್ತು ನೋಟರಿಯಿಂದ ಆಫಿಡೆವಿಟ್ ಮಾಡಿಸಿದ ಅರ್ಜಿ ಸ್ವೀಕರಿಸಲಾಗುವುದು. ಹೆಚ್ಚಿನ ವಿವರಗಳಿಗೆ ದೂ.ಸಂ; 08272–295297 ಅನ್ನು ಸಂಪರ್ಕಿಸಬಹುದು.

ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸಿ

ಅಧಿಕಾರಿಗಳಿಗೆ ಜಿಪಂ ಸಿಇಒ ಮೋನಾ ರೋತ್ ಖಡಕ್ ಸೂಚನೆ

ಚಾಮರಾಜನಗರ, ಡಿ.9–ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ವಿವಿಧ ಯೋಜನೆ, ಕಾರ್ಯಕ್ರಮ ಕಾಮಗಾರಿಯನ್ನು ನಿಗದಿತ ಕಾಲಾವಧಿ ಒಳಗೆ ಪೂರ್ಣಗೊಳಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಸೂಚಿಸಿದ್ದಾರೆ.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕರು, ಲೆಕ್ಕಾಧಿಕಾರಿಗಳು, ತಾಲೂಕು ಯೋಜನಾಧಿಕಾರಿಗಳು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಇನ್ನಿತರ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು ಗ್ರಾಪಂಗಳಲ್ಲಿನ ತೆರಿಗೆ ವಸೂಲಾತಿಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕು. ಗ್ರಾ.ಪಂ ಹಾಗೂ ತಾಪಂಗಳಲ್ಲಿ ನಿಗದಿತ ಸಮಯದೊಳಗೆ ಇ–ಹಾಜರಾತಿಯನ್ನು ನಮೂದು ಮಾಡ ಬೇಕು. ಅನುದಾನ ವ್ಯರ್ಥವಾಗದಂತೆ ಕಾಮಗಾರಿಗಳನ್ನು ನಿಗದಿತ ಕಾಲಾವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಆದೇಶಿಸಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುಷ್ಠಾನಗೊಳಿಸಲಾಗಿರುವ ವಿವಿಧ ಸಾಲಿನ ಕಾಮಗಾರಿಗಳಲ್ಲಿ ಅಪೂರ್ಣಗೊಂಡಿರುವ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ತುರ್ತಾಗಿ ಪೂರ್ಣಗೊಳಿಸಬೇಕು. ಮಾನವ ದಿನಗಳ ಸೃಜನೆಯ ಸಂಪೂರ್ಣ ಪ್ರಗತಿಯಾಗಬೇಕು. ಯೋಜನೆಯಡಿ ಬಾಕಿಯಿರುವ ಎಲ್ಲಾ ನೋಂದಾಯಿತ ಸಕ್ರಿಯ ಕೂಲಿ ಕಾರ್ಮಿಕರ ಇ–ಕೆವೈಸಿಯನ್ನು ವಾರದೊಳಗೆ ಪೂರ್ಣಗೊಳಿಸಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕು. ಗ್ರಾಮ ಪಂಚಾಯಿತಿ ತಾಲೂಕು ಹಾಗೂ ಜಿಲ್ಲಾ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಹಾಗೂ ಸಿಬ್ಬಂದಿಗಳ ವೇತನ ಪಾವತಿ ಸಂಬಂಧ ನಿಗದಿತ ಅವಧಿಯೊಳಗೆ ವೇತನ ಪಾವತಿಗೆ ಕ್ರಮ ತೆಗೆದುಕೊಳ್ಳಿ ಎಂದು ತಿಳಿಸಿದರು.


ಜಿಪಂ ಸಹಾಯಕ ಕಾರ್ಯದರ್ಶಿ ಶ್ರೀಕಂಠರಾಜೇ ಅರಸ್, ಸಹಾಯಕ ನಿರ್ದೇಶಕ. ರಾಜೇಂದ್ರ ಪ್ರಸಾದ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಶಾ, ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.


ಜಿ.ಪಂ. ಸಿಇಓ ಮೋನಾ ರೋತ್ ಅಧಿಕಾರಿಗಳ ಸಭೆ ನಡೆಸಿದರು.

ಬಿಳಿಗಿರಿರಂಗನಬೆಟ್ಟದ ಸಮಗ್ರ ಅಭಿವೃದ್ಧಿಗೆ 5.75 ಕೋಟಿ ಅನುದಾನಕ್ಕೆ ಆಗ್ರಹ

ಅಧಿವೇಶನದಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ ಪ್ರಸ್ತಾಪ

ಯಳಂದೂರು, ಡಿ.9.(ವಿ.ಎನ್)– ಬಿಳಿಗಿರಿರಂಗನಬೆಟ್ಟದ ಸಮಗ್ರ ಅಭಿವೃದ್ಧಿಗೆ 5.75 ಕೋಟಿ ಅನುದಾನ ಬಿಡುಗಡೆ ಮಾಡುವಂತೆ ಶಾಸಕ ಎ.ಆರ್.ಕೃಷ್ಣಮೂರ್ತಿ ಸರ್ಕಾರವನ್ನು ಆಗ್ರಹಿಸಿದ್ದಾರೆ.



ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಮಾತನಾಡಿದ ಅವರು, ಬಿಳಿಗಿರಿರಂಗನ ಬೆಟ್ಟವು ಅರಣ್ಯ ಪ್ರದೇಶವಾಗಿದ್ದು, ಪ್ರಸಿದ್ಧ ಯಾತ್ರಾ ಸ್ಥಳಗಳನ್ನು ಒಳಗೊಂಡಿರುವುದರಿಂದ ದೇಶ–ವಿದೇಶಗಳಿಂದ ಪ್ರತಿ ವರ್ಷ ಲಕ್ಷಾಂತರ ಪ್ರವಾಸಿಗರು ಆಗಮಿಸುತ್ತಾರೆ. ಇಂತಹ ಪ್ರಮುಖ ಪ್ರವಾಸಿ ತಾಣವಾಗಿದ್ದರೂ ಇಲ್ಲಿ ಸೂಕ್ತ ಬಸ್ ತಂಗುದಾಣವಿಲ್ಲ. ಹಲವು ವರ್ಷಗಳಿಂದ ನಿರ್ಲಕ್ಷ್ಯಗೊಂಡಿರುವ ವೀಕ್ಷಣಾ ಗೋಪುರ, ದಾಸೋಹ ಭವನ ಸೇರಿದಂತೆ ಮೂಲ ಸೌಕರ್ಯಗಳನ್ನು ಒದಗಿಸಬೇಕು ಎಂದು ಹೇಳಿದರು.

ಶಾಸಕರ ಮನವಿಗೆ ಉತ್ತರಿಸಿದ ಕಾನೂನು ಮತ್ತು ಸಂಸದೀಯ ಇಲಾಖೆ ಸಚಿವ ಎಚ್.ಕೆ. ಪಾಟೀಲ್, ಬಿಳಿಗಿರಿರಂಗನಬೆಟ್ಟದ ಅಭಿವೃದ್ಧಿಗೆ ಸರ್ಕಾರವು ವಿಶೇಷ ಗಮನ ಹರಿಸಿದೆ. ಈ ಯೋಜನೆಗೆ ಸಂಬಂಧಿಸಿದಂತೆ ಈಗಾಗಲೇ 25 ಲಕ್ಷ ರೂ.ಗಳ ಡಿಪಿಆರ್ ಸಿದ್ಧಪಡಿಸಲಾಗಿದ್ದು, ಅಗತ್ಯ ಅನುದಾನ ಬಿಡುಗಡೆ ಮಾಡುವ ಬಗ್ಗೆ ರಾಜ್ಯ ಸರ್ಕಾರ ಗಂಭೀರವಾಗಿ ಚಿಂತನೆ ನಡೆಸುತ್ತಿದೆ ಎಂದರು. ಮುಂದಿನ ಬಜೆಟ್‌ನಲ್ಲಿ ಈ ಯೋಜನೆಗೆ ಪೂರ್ಣ ಅನುದಾನ ನೀಡುವುದಾಗಿ ಭರವಸೆ ನೀಡಿದರು.

ಕೇರಳ ಗಡಿಯಲ್ಲಿ ಮದ್ಯ ಮಾರಾಟ ನಿಷೇಧಕ್ಕೆ ಆದೇಶ

ಚಾಮರಾಜನಗರ, ಡಿ.9–ಕೇರಳ ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಗಡಿಗೆ ಹೊಂದಿಕೊಂಡಿರುವ ಗುಂಡ್ಲುಪೇಟೆ ತಾಲೂಕಿನ ಗಡಿ ಪ್ರದೇಶದ 3 ಕಿ.ಮೀ. ವ್ಯಾಪ್ತಿಯಲ್ಲಿ ಡಿ.9ರ ಸಂಜೆ 6 ಗಂಟೆಯಿಂದ ಡಿ.11ರ ಸಂಜೆ 6 ಗಂಟೆಯವರೆಗೆ ಹಾಗೂ ಡಿ. 13ರ ಮತ ಎಣಿಕೆ ಹಿನ್ನೆಲೆಯಲ್ಲಿ ಡಿ.12ರ ಮಧ್ಯರಾತ್ರಿಯಿಂದ ಮರುದಿನ ಮಧ್ಯರಾತ್ರಿವರೆಗೆ ಯಾವುದೇ ರೀತಿಯ ಮದ್ಯ ಮಾರಾಟ, ಅಕ್ರಮ ಸಾಗಾಣಿಕೆ, ದಾಸ್ತಾನು ನಿಷೇಧಿಸಿ ಒಣದಿನ ಎಂದು ಘೋಷಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಆದೇಶ ಹೊರಡಿಸಿದ್ದಾರೆ.

ವನ್ಯಜೀವಿ ಸಂರಕ್ಷಣೆ ಬಗ್ಗೆ ಅರಿವು ಮೂಡಿಸಿದ ಅರಣ್ಯ ಸಂಚಾರಿ ದಳ



ಗುಂಡ್ಲುಪೇಟೆ, ಡಿ.9 (ಸೋಮ್.ಜಿ)– ಸಿಐಡಿ ಅರಣ್ಯ ಸಂಚಾರಿ ದಳ (ಪೊಲೀಸ್) ಪಟ್ಟಣದ ಜೆಎಸ್‌ಎಸ್ ಮಹಿಳಾ ಪದವಿ ಪೂರ್ವ ಕಾಲೇಜು ಮತ್ತು ಜೆಎಸ್‌ಎಸ್ ಪ್ರೌಢಶಾಲಾ ಮಕ್ಕಳಿಗೆ, ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆಯ ಬಗ್ಗೆ ಅರಿವು ಮತ್ತು ಜಾಗೃತಿ ಕಾರ್ಯಕ್ರಮ ಹಮ್ಮಿ ಕೊಂಡಿತ್ತು

ಇದರ ಅಂಗವಾಗಿ ಪ್ರಬಂಧ ಮತ್ತು ಚರ್ಚಾ ಸ್ಪರ್ಧೆ ಏರ್ಪಡಿಸಿ, ವಿಜೇತರಾದ ಮಕ್ಕಳಿಗೆ ಬಹುಮಾನ ವನ್ನು ವಿತರಿಸಿತು. ಸಿಐಡಿ ಅರಣ್ಯ ಸಂಚಾರಿ ದಳದ ಪಿಎಸ್‌ಐ ಯಾಸ್ಮಿನ್ ತಾಜ್, ಹೆಡ್ ಕಾನ್ಸ್‌ಟೆಬಲ್ ನವೀನ್ ಕುಮಾರ್, ವೀರಭದ್ರಪ್ಪ, ಮಾದೇಶ್ ಕುಮಾರ್ ಮತ್ತು ಜೆಎಸ್‌ಎಸ್ ಬಾಲಕಿಯರ ಪಿಯು ಕಾಲೇಜಿನ ಪ್ರಾಂಶುಪಾಲ ಮಲ್ಲಪ್ಪ ಮತ್ತು ಉಪನ್ಯಾಸಕರು, ಹಾಗೂ ಜೆಎಸ್‌ಎಸ್ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಚ್.ಪಿ. ಪಶುಪತಿ ಶಿಕ್ಷಕರು ಹಾಗೂ ಸಿಬ್ಬಂದಿವರ್ಗ ಹಾಜರಿದ್ದರು.

ಮ.ಬೆಟ್ಟದ ಕಾಡಂಚಿನ ಗ್ರಾಮಗಳಿಗೆ ಮೂಲಸೌಕರ್ಯಕ್ಕೆ ಆಗ್ರಹಿಸಿ ಪ್ರತಿಭಟನೆ


ಮಲೆಮಹದೇಶ್ವರ ಬೆಟ್ಟದ ಕಾಡಂಚಿನ ಗ್ರಾಮಗಳಿಗೆ ಮೂಲಸೌಕರ್ಯ ಒದಗಿಸುವಂತೆ ಆಗ್ರಹಿಸಿ ಕರ್ನಾಟಕ ಸೇನಾಪಡೆ ಪ್ರತಿಭಟನೆ ನಡೆಸಿತು.

ಚಾಮರಾಜನಗರ, ಡಿ.9(ಎಸ್‌ಎಸ್)– ಮಲೆಮಹದೇಶ್ವರಬೆಟ್ಟದ ಕಾಡಂಚಿನ ಗ್ರಾಮಗಳಿಗೆ ಮೂಲಸೌಕರ್ಯ ಒದಗಿಸುವಂತೆ ಆಗ್ರಹಿಸಿ ನಗರದಲ್ಲಿ ಕರ್ನಾಟಕ ಸೇನಾ ಪಡೆ ಪ್ರತಿಭಟನೆ ನಡೆಸಿತು

ನಗರದ ಭುವನೇಶ್ವರಿ ವೃತ್ತದಲ್ಲಿ ಜಮಾವಣೆಗೊಂಡ ಕನ್ನಡಪರ ಸಂಘಟನೆಗಳ ಕಾರ್ಯಕರ್ತರು, ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ಸೇನಾಪಡೆ ರಾಜ್ಯಾಧ್ಯಕ್ಷ ಚಾರಂ ಶ್ರೀನಿವಾಸಗೌಡ ಮಾತನಾಡಿ, ಕಾಡಂಚಿನ ಗ್ರಾಮಸ್ಥರು ಅನಾರೋಗ್ಯ ಕ್ಕೀಡಾದರೆ, ಬೆಟ್ಟಗುಡ್ಡಗಳನ್ನು ಹತ್ತಿ ಇಳಿದು, ಮಹದೇಶ್ವರ ಬೆಟ್ಟದ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯುವ ಅನಿವಾರ್ಯತೆ ಇದೆ. ಉತ್ತಮ ರಸ್ತೆಗಳಂತೂ ಅಲ್ಲಿಯ ಜನರ ಪಾಲಿಗೆ ಗಗನ ಕುಸುಮವಾಗಿದೆ. ಏ.24ರಂದು ಮಲೆಮಹದೇಶ್ವರ ಬೆಟ್ಟದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟ ಸಭೆ ನಡೆಸಿದ್ದರೂ ಕಾಡಂಚಿನ ಗ್ರಾಮದ ಜನರ ಸ್ಥಿತಿ ಶೋಚನೀಯವಾಗಿದೆ. ಕಾಟಾಚಾರಕ್ಕೆ ಸಚಿವ ಸಂಪುಟ ಸಭೆ ನಡೆಸುವ ಅಗತ್ಯವಿತ್ತೆ ಎಂದು ಪ್ರಶ್ನಿಸಿ, ಈಗಲಾದರೂ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡು, ಸೂಕ್ತ ಅನುದಾನ ಮೀಸಲಿಡುವ ಮೂಲಕ ಮಲೆಮಹದೇಶ್ವರ ಬೆಟ್ಟದ ಕಾಡಂಚಿನ ಗ್ರಾಮಗಳಿಗೆ ಉತ್ತಮ ಡಾಂಬರೀಕರಣ ರಸ್ತೆ, ವಿದ್ಯುತ್, ವಸತಿ, ಕುಡಿಯುವ ನೀರು ಒದಗಿಸಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಕನ್ನಡ ಪರ ಹೋರಾಟಗಾರರಾದ ನಿಜದನಿ ಗೋವಿಂದರಾಜು, ಪಣ್ಯದ ಹುಂಡಿ ರಾಜು, ಗಡಿನಾಡು ಹೋರಾಟ ಸಮಿತಿ ಅಧ್ಯಕ್ಷ ರಾಚಪ್ಪ, ವೀರಭದ್ರ, ನಂಜುಂಡಿ, ಸಿ.ಎಂ. ಕೃಷ್ಣಮೂರ್ತಿ, ಎಸ್.ಪಿ.ಬಾಲಸುಬ್ರಹ್ಮಣ್ಯ, ಸಾಂಸ್ಕೃತಿಕ ಕಲಾವೇದಿಕೆ ಅಧ್ಯಕ್ಷ ಶಿವು, ಲೋಕೇಶ್, ಮಹೇಶ್‌ಗೌಡ, ಅರುಣ್ ಕುಮಾರ್ ಗೌಡ, ನಾಗಪ್ಪ, ಹೊನ್ನಳ್ಳಿ, ಗಾಯಕ ಮುತ್ತು ರಾಜ್, ರವಿಚಂದ್ರ ಪ್ರಸಾದ್, ಲಿಂಗರಾಜು, ಮಲ್ಲಣ್ಣ, ಬಿ. ನಾಗರಾಜು, ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಶಿವು ಜನಸ್ನೇಹಿ ಟ್ರಸ್‌ನಿಂದ ನಿರಾಶ್ರಿತರಿಗೆ ಬೆಡ್‌ಶೀಟ್ ವಿತರಣೆ

ಚಾಮರಾಜನಗರ, ಡಿ.9– ಬೀದಿಗಳಲ್ಲಿ ಮಲಗುವ ನಿರಾಶ್ರಿತರಿಗೆ ಉಚಿತವಾಗಿ ಬೆಡ್‌ಶೀಟ್‌ಗಳನ್ನು ಶಿವು ಜನಸ್ನೇಹಿ ಟ್ರಸ್ಟ್‌ನ ಅಧ್ಯಕ್ಷ ಶಿವು ವಿತರಿಸಿದರು.

ನಗರದ ಚಾಮರಾಜೇಶ್ವರ ದೇವಸ್ಥಾನ ಹಾಗೂ ಬಸ್ ನಿಲ್ದಾಣ ಮತ್ತು ಅಂಗಡಿಗಳ ಬಾಗಿಲುಗಳಲ್ಲಿ ರಾತ್ರಿ ವೇಳೆಯಲ್ಲಿ ಮಲಗುವ ನಿರಾಶ್ರಿತರಿಗೆ ಬೆಡ್‌ಶೀಟ್‌ಗಳನ್ನು ನೀಡಲಾಯಿತು.

ಇತ್ತೀಚೆಗೆ ರಾತ್ರಿ ವೇಳೆಯಲ್ಲಿ ಚಳಿಯು ಹೆಚ್ಚಿದ್ದು ಕೆಲವರಿಗೆ ಚಳಿಯನ್ನು ತಾಳಲಾರದೇ ತೊಂದರೆ ಪಡುತ್ತಿರುವುದು ಕಂಡು ಬಂದಿತು. ಅದನ್ನು ಅರಿತು ಟ್ರಸ್ಟ್ ವತಿಯಿಂದ ನಿರಾಶಿತರು ಇರುವ ಸ್ಥಳಗಳಿಗೆ ತೆರಳಿ ಬೆಡ್‌ಶಿಟ್‌ಗಳನ್ನು ವಿತರಣೆ ಮಾಡಿದ್ದೇವೆ. ಇಂತಹ ಸೇವೆಗಳಿಂದ ಪೋಲೀಸ್ ಇಲಾಖೆಯ ಸಿಬ್ಬಂದಿವರ್ಗದವರು, ಟ್ರಸ್ಟ್‌ನ ಸ್ನೇಹಿತರ ಬಳಗದವರು ಹಾಜರಿದ್ದರು.


ನಿರಾಶ್ರಿತರಿಗೆ ಉಚಿತವಾಗಿ ಬೆಡ್‌ಶೀಟ್‌ಗಳನ್ನು ಶಿವು ವಿತರಿಸಿದರು.

ಕೌದಳ್ಳಿ ಅರಣ್ಯ ಸಿಬ್ಬಂದಿಗೆ ಆರೋಗ್ಯ ತಪಾಸಣೆ


ಅರಣ್ಯ ರಕ್ಷಕ ಸಿಬ್ಬಂದಿಗೆ ಆರೋಗ್ಯ ತಪಾಸಣೆ ನಡೆಸುತ್ತಿರುವುದು

ಚಾಮರಾಜನಗರ, ಡಿ.9–ಅರಣ್ಯ ಇಲಾಖೆಯ ನೌಕರರು ಆರೋಗ್ಯವನ್ನು ಉತ್ತಮವಾಗಿ ಇಟ್ಟುಕೊಳ್ಳಬೇಕು ಎಂದು ರಾಮಪುರ ವೈಲ್ಡ್ ಲೈಫ್ ಕೌದಳ್ಳಿ ರೇಂಜ್ ಫಾರೆಸ್ಟ್ ಆಫೀಸರ್ ರೇಂಜ್ ಮಾದೇಶ್ ತಿಳಿಸಿದರು.

ಹನೂರು ತಾಲೂಕಿನ ಕೌದಳ್ಳಿ ಅರಣ್ಯ ವಿಶ್ರಾಂತಿ ಗೃಹದಲ್ಲಿ ಅರಣ್ಯ ಇಲಾಖೆಯ ರಕ್ಷಕ ಸೈನಿಕರಿಗೆ ನೇತ್ರ ಮತ್ತು ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ, ಪ್ರತಿಯೊಬ್ಬರಿಗೂ ಆರೋಗ್ಯ ಬಹಳ ಮುಖ್ಯ ಆರೋಗ್ಯವಂತರಾಗಲು ಪ್ರತಿ ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆಯನ್ನು ಮಾಡಿಸಿಕೊಳ್ಳಿ ಯಾವ ಸಮಯದಲ್ಲಿ ಆರೋಗ್ಯ ಕೆಡುತ್ತದೆ ಎಂದು ತಿಳಿಯುವುದು ಕಷ್ಟಕರವಾಗಿದೆ. ಇಲಾಖೆಯಿಂದ ನಡೆ ಸುವ ಆರೋಗ್ಯ ಶಿಬಿರಗಳಲ್ಲಿ ಚಿಕಿತ್ಸೆ ಯನ್ನು ಪಡೆದುಕೊಳ್ಳಬೇಕು ಎಂದರು

ಪರಿಸರ ಪ್ರೇಮಿ ಹಾಗೂ ಕಲಾವಿದ ಅರುಣ್ ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಧ್ಯಕ್ಷತೆಯನ್ನು ಹನೂರು ತಾಲೂಕು ಆರೋಗ್ಯ ಅಧಿಕಾರಿ ಡಾ. ಪ್ರಕಾಶ್ ವಹಿಸಿದ್ದರು. ಸಂಸ್ಥೆಯ ಕಾರ್ಯದರ್ಶಿ ಭರತ್ ಎಂ.ಎಸ್ ಹಾಗೂ ಸಂಘಟನೆ ಮತ್ತು ನಿರ್ವಹಣೆ ಪ್ರವೀಣ್, ಪಿ ದೇವಾನಂದ, ಸಿ ಚಂದನ್ ಕುಮಾರ್ ಭಾಗವಹಿಸಿದ್ದರು.

ಆರೋಗ್ಯ ಶಿಬಿರದಲ್ಲಿ 65 ಅರಣ್ಯ ರಕ್ಷಕ ಸಿಬ್ಬಂದಿವರ್ಗದವರಿಗೆ ರಕ್ತ ಪರೀಕ್ಷೆ, ಕ್ಷ – ಕಿರಣ ವ್ಯವಸ್ಥೆ, ಹಾಗೂ ನೇತ್ರ ಚಿಕಿತ್ಸೆ ನಡೆಯಿತು.

ಮೈಸೂರು ಮಿತ್ರ

ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಅಡ್ಡದಾರಿ ಹಿಡಿಯದಂತೆ ಹದ್ದಿನ ಕಣ್ಣಿಡಿ

- ಪೊಲೀಸರು ಮೊದಲು ಶುದ್ಧಹಸ್ತರಾಗಿರಬೇಕು
- ಅಪರಾಧ ಕೃತ್ಯ ನಡೆಯದಂತೆ ಸಮಾಜ ಸ್ವಚ್ಛಗೊಳಿಸಿ
- ಪೊಲೀಸರ ಬಗ್ಗೆ ಜನರಲ್ಲಿರುವ ಕೆಟ್ಟ ಭಾವನೆ ಹೋಗಲಾಡಿಸಿ
- ಬಂದೋಬಸ್ತ್ ಕುರಿತ ಕ್ರಮಗಳನ್ನು ದಾಖಲೆಗಳಲ್ಲಿ ನಮೂದಿಸಿ

ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಎಡಿಜಿಪಿ ಚಂದ್ರಶೇಖರ್ ತಾಕೀತು



ಮೈಸೂರು ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಎಡಿಜಿಪಿ ಎಂ.ಚಂದ್ರಶೇಖರ್ ಅವರು ಪೊಲೀಸ್ ಅಧಿಕಾರಿಗಳ ಸಭೆ ನಡೆಸಿದರು.

ಮೈಸೂರು, ಡಿ.9(ಬಿಎಲ್‌ಯು)– ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಅಡ್ಡದಾರಿ ಹಿಡಿಯದಂತೆ ಹದ್ದಿನ ಕಣ್ಣಿಡಬೇಕು ಎಂದು ಆಂತರಿಕ ವಿಭಾಗದ ಎಡಿಜಿಪಿ ಎಂ.ಚಂದ್ರಶೇಖರ್, ಹಿರಿಯ ಪೊಲೀಸ್ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ.

ಎರಡು ದಿನಗಳ ಪ್ರವಾಸಕ್ಕಾಗಿ ಇಂದು ಮೈಸೂರಿಗೆ ಆಗಮಿಸಿದ ಚಂದ್ರಶೇಖರ್ ಅವರು ಮೈಸೂರು ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಇಂದು ಡಿಸಿಪಿ, ಎಸಿಪಿ, ಕೆಎಸ್‌ಆರ್‌ಪಿ ಕಮಾಂಡೆಂಟ್ ಹಾಗೂ ಇನ್ಸ್‌ಪೆಕ್ಟರ್‌ಗಳ ಸಭೆಯಲ್ಲಿ ಮಾತನಾಡಿದ ಅವರು, ಅಪರಾಧ ಕೃತ್ಯ ತಡೆಗಟ್ಟುವ ಹೊಣೆ ಹೊತ್ತಿರುವ ಪೊಲೀಸರು ಯಾವ ರೀತಿಯ ವರ್ತನೆ ಅನುಸರಿಸಬೇಕು ಎಂದು ಮಾರ್ಗದರ್ಶನ ನೀಡಿದರು.

ಪೊಲೀಸರು ಅಪರಾಧ ಕೃತ್ಯಗಳು ನಡೆಯದಂತೆ ಎಚ್ಚರಿಕೆ, ಮುಂಜಾಗ್ರತೆ ವಹಿಸಬೇಕು. ಅದಕ್ಕೂ ಮೊದಲು ಪೊಲೀಸರು ಶುಭ್ರವಾಗಿರಬೇಕು, ವಿವಾದರಹಿತರಾಗಿರಬೇಕು, ಯಾವುದೇ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗದೆ ಸಮಾಜಕ್ಕೆ ಮಾದರಿಯಾಗಿರಬೇಕು, ಅಪರಾಧಿಗಳೊಂದಿಗೆ ಯಾವುದೇ ರೀತಿಯ ಸಂಪರ್ಕ ಹೊಂದಿರಬಾರದು ಎಂದು ಸಲಹೆ ನೀಡಿದರು.

ಮೊದಲು ಇಂತಹ ಆದರ್ಶ ಗುಣಗಳನ್ನು ರೂಢಿಸಿಕೊಂಡ ನಂತರ ಅಪರಾಧ ಕೃತ್ಯಗಳು ನಡೆಯದಂತೆ ಎಚ್ಚರಿಕೆ ವಹಿಸಿ ಸಮಾಜವನ್ನು ಸ್ವಚ್ಛಗೊಳಿಸುವ ಕಾರ್ಯದಲ್ಲಿ ಮಗ್ನರಾಗಿರಬೇಕು ಎಂದು ಚಂದ್ರಶೇಖರ್ ಅವರು ಸಲಹೆಯಿತ್ತರು.

ಹಿರಿಯ ಪೊಲೀಸ್ ಅಧಿಕಾರಿಗಳು ಪೊಲೀಸ್ ಸಿಬ್ಬಂದಿಯನ್ನು ಓಲೈಸಬಾರದು. ಇಂತಹ ವರ್ತನೆ ಅನುಸರಿಸುವುದು ಪೊಲೀಸ್ ಇಲಾಖೆಯಲ್ಲಿ ಅಪಾಯಕಾರಿ ಬೆಳವಣಿಗೆಗೆ ಕಾರಣವಾಗುತ್ತದೆ. ಹಾಗೆಂದ ಮಾತ್ರಕ್ಕೆ ಪೊಲೀಸ್ ಸಿಬ್ಬಂದಿಯನ್ನು ದೂರವಿಡಬೇಕು ಎಂದಲ್ಲ. ಪೊಲೀಸ್ ಸಿಬ್ಬಂದಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರಿಂದ ಕೆಲಸ ತೆಗೆಯಬೇಕು. ಆದರೆ ಅವರನ್ನು ತೀರಾ ಹತ್ತಿರಕ್ಕೆ ಬಿಟ್ಟುಕೊಳ್ಳಬಾರದು ಎಂದು ಕಿವಿಮಾತು ಹೇಳಿದರು.

ಪೊಲೀಸ್ ಇಲಾಖೆಯಲ್ಲಿ ಯಾರೋ ಒಂದಿಬ್ಬರು ಕಾನೂನು ವಿರೋಧಿ ಕೃತ್ಯದಲ್ಲಿ ತೊಡಗಿದರೆ ಇಡೀ ಇಲಾಖೆಯ ಬಗ್ಗೆ ಜನರಲ್ಲಿ ಕೆಟ್ಟ ಭಾವನೆ ಮೂಡುತ್ತದೆ. ಆದ ಕಾರಣ ಪೊಲೀಸರು ಇದಕ್ಕೆ ಅವಕಾಶ ಮಾಡಿಕೊಡಬಾರದು. ಪೊಲೀಸ್ ಸಿಬ್ಬಂದಿ ಅಡ್ಡದಾರಿ ಹಿಡಿದು, ಅವರು ನಿಮ್ಮ ಹಿಡಿತಕ್ಕೆ ಸಿಗುತ್ತಿಲ್ಲ ಎಂದಾದಾಗ ಕೂಡಲೇ ಹಿರಿಯ ಪೊಲೀಸ್ ಅಧಿಕಾರಿಗಳ ಗಮನಕ್ಕೆ ತನ್ನಿ ಎಂದು ಸೂಚಿಸಿದರು.

ಯಾರೋ ಕೆಲವರು ಕೆಟ್ಟ ಕೆಲಸ ಮಾಡಿದಾಗ ಜನರು ಇಡೀ ಪೊಲೀಸ್ ಇಲಾಖೆಯನ್ನು ಕೆಟ್ಟ ದೃಷ್ಟಿಯಿಂದ ನೋಡುತ್ತಾರೆ. ಈ ಹಿನ್ನೆಲೆಯಲ್ಲಿ ಪೊಲೀಸರು ಅಡ್ಡದಾರಿಗೆ ಹೋಗಬಾರದು ಎಂದರು.

ಪೊಲೀಸರು ಬಹಳಷ್ಟು ಒಳ್ಳೆಯ ಕೆಲಸ ಮಾಡುತ್ತಾರೆ. ಈ ಹಿನ್ನಲೆ ಪೊಲೀಸ್ ಇಲಾಖೆ ಮಾಡಿರುವ ಸಮಾಜ ಮುಖಿ ಕಾರ್ಯಗಳನ್ನು ಜನರಿಗೆ ತಿಳಿಸಬೇಕು. ಬಹಳಷ್ಟು ಪೊಲೀಸರು ಜನಪರವಾದ ಹಾಗೂ ಮಾನವೀಯತೆಯ ಕೆಲಸ ಮಾಡಿರುತ್ತಾರೆ. ಇಂತಹ ವಿಚಾರವನ್ನು ಜನರಿಗೆ ಮನದಟ್ಟು ಮಾಡಿದರೆ ಪೊಲೀಸರ ಬಗ್ಗೆ ಜನರಲ್ಲಿರುವ ಕೆಟ್ಟ ಭಾವನೆ ದೂರವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಪೊಲೀಸರು ಮಾಡಿರುವ ಒಳ್ಳೆಯ ಕಾರ್ಯವನ್ನು ಜನರಿಗೆ ತಿಳಿಸಲಿಲ್ಲವೆಂದರೆ ಜನರಲ್ಲಿ ಪೊಲೀಸ್ ಇಲಾಖೆ ಬಗ್ಗೆ ನಕಾರಾತ್ಮಕ (ನೆಗೆಟಿವ್) ನಿಲುವು ಹಾಗೆಯೇ ಉಳಿಯುತ್ತದೆ. ಈ ಹಿನ್ನಲೆ ಪೊಲೀಸರು ಮಾಡುವ ಸಮಾಜ ಮುಖಿ ಕಾರ್ಯವನ್ನು ಜನರಿಗೆ ಮನದಟ್ಟು ಮಾಡಬೇಕು ಎಂದು ಚಂದ್ರಶೇಖರ್ ತಿಳಿಸಿದರು.

ಉತ್ತರ ಕರ್ನಾಟಕದ ಕಾಲ್ತುಳಿತ ಪ್ರಕರಣವನ್ನು ವಿವರಿಸಿದ ಚಂದ್ರಶೇಖರ್ ಅವರು, ಸಾವಿರಾರು ಜನರು ಸೇರುವ ಯಾವುದೇ ಕಾರ್ಯಕ್ರಮ ಜರಗುವ ವೇಳೆ ಜನ ಸಂದಣಿ ನಿಯಂತ್ರಣ ಮಾಡಲು ಹಲವು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಪೊಲೀಸ್ ಇಲಾಖೆ ಕೈಗೊಳ್ಳುವ ಕ್ರಮಗಳನ್ನು ದಾಖಲೆಗಳಲ್ಲಿ ಇಡಬೇಕು. ಏನಾದರೂ ಅವಘಡ ಸಂಭವಿಸಿದ ಸಂದರ್ಭದಲ್ಲಿ ದಾಖಲೆಯಲ್ಲಿ ನಮೂದಾಗಿರುವ ವಿಚಾರವನ್ನು ತಿಳಿಸಿ ನಮ್ಮ ತಪ್ಪು ಇಲ್ಲ ಎಂದು ಸಮರ್ಥನೆ ಮಾಡಿಕೊಳ್ಳಬಹುದು. ಇಲ್ಲವೆಂದರೆ ಯಾವುದೇ ತಪ್ಪು ಮಾಡದಿದ್ದರೂ ಪೊಲೀಸರು ಅದರ ನೇರ ಹೊಣೆ ಹೊರಬೇಕಾಗುತ್ತದೆ. ಇದರಿಂದ ಪೊಲೀಸ್ ಇಲಾಖೆಗೆ ಕೂಡ ಕೆಟ್ಟ ಹೆಸರು ಬರುತ್ತದೆ ಎಂದು ಚಂದ್ರಶೇಖರ್ ಎಚ್ಚರಿಸಿದರು.

ಸಭೆಗೆ ಆಗಮಿಸಿದ ಚಂದ್ರಶೇಖರ್ ಅವರನ್ನು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಡಿಸಿಪಿಗಳಾದ ಬಿಂದುಮಣಿ, ಸುಂದರ್ ರಾಜ್, ಕೆಎಸ್‌ಆರ್ ಪಿ ಕಮಾಂಡೆಂಟ್ ಎ.ಮಾರುತಿ ಅವರು ಪುಷ್ಪಗುಚ್ಛ ನೀಡಿ ಸ್ವಾಗತಿಸಿದರು. ತರುವಾಯ ಚಂದ್ರಶೇಖರ್ ಅವರು ಪೊಲೀಸರಿಂದ ಗೌರವ ವಂದನೆ ಸ್ವೀಕರಿಸಿದರು.

ಎಡಿಜಿಪಿ ಚಂದ್ರಶೇಖರ್ ಅವರು ಇಂದು ಮೈಸೂರಿನಲ್ಲಿ ವಾಸ್ತವ್ಯ ಹೂಡಲಿದ್ದು, ನಾಳೆ ಪೊಲೀಸ್ ಇಲಾಖೆಯ ಕೆಲವು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಬಾಕಿ ಇರುವ ಅಪರಾಧ ಪ್ರಕರಣಗಳ ಬಗ್ಗೆ ಮಾಹಿತಿ ಸಂಗ್ರಹ

ಮೈಸೂರಿನ ಎಲ್ಲಾ ಪೊಲೀಸ್ ಠಾಣೆಗಳ ಕೆಲಸ ಕಾರ್ಯಗಳು ಹಾಗೂ ಪ್ರಕರಣಗಳ ಕುರಿತಂತೆ ಎಡಿಜಿಪಿ ಚಂದ್ರಶೇಖರ್ ಪರಿಶೀಲನೆ ನಡೆಸಿದರು.

ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣಗಳೆಷ್ಟು, ಇವುಗಳಲ್ಲಿ ಪತ್ತೆಯಾದ ಪ್ರಕರಣಗಳೆಷ್ಟು, ಪತ್ತೆಯಾಗದೆ ಇರುವ ಪ್ರಕರಣಗಳೆಷ್ಟು, ಎಷ್ಟು ಆರೋಪಿಗಳು ತಲೆಮರೆಸಿಕೊಂಡಿದ್ದಾರೆ, ಪೊಲೀಸ್ ಠಾಣಾ ವ್ಯಾಪ್ತಿಯ ಸೂಕ್ಷ್ಮ ಸ್ಥಳಗಳು ಯಾವುವು ಎಂಬ ಬಗ್ಗೆ ಇಂಚಿಂಚು ಮಾಹಿತಿ ಪಡೆದರು.

ಪೊಲೀಸ್ ಠಾಣೆಗಳಲ್ಲಿ ಬಾಕಿ ಇರುವ ಪ್ರಕರಣಗಳೆಷ್ಟು, ಯಾವ ಕಾರಣಕ್ಕೆ ಆರೋಪಿಗಳನ್ನು ಇನ್ನೂ ಪತ್ತೆ ಮಾಡಲು ಸಾಧ್ಯವಾಗಿಲ್ಲ ಎಂಬ ಹಲವು ವಿಚಾರಗಳನ್ನು ಚಂದ್ರಶೇಖರ್ ಅವರು ಪ್ರಶ್ನಿಸಿದರು.

ಆರ್‌ಎಂಪಿ, ಆರ್‌ಬಿಐ, ಏರ್‌ಫೋರ್ಸ್ ಸೆಲೆಕ್ಷನ್ ಬೋರ್ಡ್, ಮೈಸೂರು ಅರಮನೆ ಸೇರಿದಂತೆ ಬಹಳಷ್ಟು ಸೂಕ್ಷ್ಮ ಸ್ಥಳಗಳಿವೆ. ಇಲ್ಲಿ ಯಾವ ರೀತಿಯ ಪೊಲೀಸ್ ಬಂದೋಬಸ್ತ್ ಇರುತ್ತದೆ ಎಂಬ ಬಗ್ಗೆ ಕೂಡ ಮಾಹಿತಿ ಪಡೆದರು.

ಒಟ್ಟಾರೆ ಮೈಸೂರಿನಲ್ಲಿ ಅಪರಾಧ ಮುಕ್ತ ವಾತಾವರಣ ನಿರ್ಮಾಣವಾಗಬೇಕು. ಈ ಹಿನ್ನೆಲೆ ಪೊಲೀಸರು ಮೈಮರೆಯದೆ ಚುರುಕಿನಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಚಂದ್ರಶೇಖರ್ ಅವರು ಸಲಹೆ ನೀಡಿದರು.

ಡಿಜಿಪಿ ಡಾ.ಸಲೀಂ ನಿರ್ದೇಶನದ ಮೇರೆಗೆ ಪ್ರಗತಿ ಪರಿಶೀಲನೆ

ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಅವರ ನಿರ್ದೇಶನದ ಮೇರೆಗೆ ಮೈಸೂರಿನ ಪೊಲೀಸರ ಕೆಲಸ ಕಾರ್ಯಗಳ ಬಗ್ಗೆ ಪರಿಶೀಲನೆ ನಡೆಸುತ್ತಿದ್ದೇನೆ.

ಆಂತರಿಕ ಭದ್ರತೆ ಮಾತ್ರವಲ್ಲದೆ ಕಾನೂನು ಮತ್ತು ಸುವ್ಯವಸ್ಥೆ, ಅಪರಾಧ, ಸಂಚಾರ, ಆಂತರಿಕ ಭದ್ರತೆ ಸೇರಿದಂತೆ ಬಹಳಷ್ಟು ವಿಚಾರಗಳ ಬಗ್ಗೆ ಪರಿಶೀಲನೆ ನಡೆಸುತ್ತೇನೆ.

ನಿಖರವಾಗಿ ಇಂತಹುದೇ ವಿಚಾರವಾಗಿ ಪರಿಶೀಲನೆ ನಡೆಸುವುದಿಲ್ಲ. ಪೊಲೀಸ್ ಇಲಾಖೆಗೆ ಸಂಬಂಧಿಸಿದಂತೆ ಒಟ್ಟಾರೆಯಾಗಿ ಪರಿಶೀಲನೆ ನಡೆಸುತ್ತೇನೆ.

- ಎಂ.ಚಂದ್ರಶೇಖರ್, ಎಡಿಜಿಪಿ, ಆಂತರಿಕ ಭದ್ರತೆ

ಶ್ರೀಗಂಧದ ತುಂಡುಗಳ ಸಾಗಿಸುತ್ತಿದ್ದ ವ್ಯಕ್ತಿ ಬಂಧನ

● ಮೂರ್‍ನಾಲ್ಕು ದಿನಗಳ ಹಿಂದೆ ಕೆಸರೆ ಚಿಕ್ಕೆರೆ ಬಳಿ ಮರ ಕತ್ತರಿಸಿದ್ದ ಖದೀಮ ● ಟ್ರಿಮ್ ಮಾಡಲು ಮನೆಗೆ ಒಯ್ಯುವಾಗ ಸಿಸಿಬಿ ಪೊಲೀಸರ ಬಲೆಗೆ ಬಿದ್ದ

ಕ್ರೈಂ ಬಾಕ್ಸ್

ಮೈಸೂರು, ಡಿ.9– ಮೂರ್‍ನಾಲ್ಕು ದಿನಗಳ ಹಿಂದೆ ಕತ್ತರಿಸಿದ್ದ ಗಂಧದ ಮರವನ್ನು ತುಂಡುಗಳಾಗಿ ಮಾಡಿ ಮನೆಗೆ ಸಾಗಿಸುತ್ತಿದ್ದ ಖದೀಮ, ಪೊಲೀಸರಿಗೆ ಸಿಕ್ಕಿಬಿದ್ದಿರುವ ಘಟನೆ ಸೋಮವಾರ ಮೈಸೂರಿನಲ್ಲಿ ನಡೆದಿದೆ.

ನಗರದ ಕೆಸರೆ ಬಡಾವಣೆ ಉಸ್ಮಾನಿಯಾ ಬ್ಲಾಕ್ ನಿವಾಸಿ ನವಾಜ್ ಷರೀಫ್(32) ಬಂಧಿತನಾಗಿದ್ದು, ಈತ ಸಾಗಿಸುತ್ತಿದ್ದ 33 ಕೆಜಿ 690 ಗ್ರಾಂ ತೂಕದ ತೊಗಟೆ ಸಹಿತ 9 ಹಸಿ ಗಂಧದ ಮರದ ತುಂಡುಗಳು, ಚಕ್ಕೆಗಳು, ಮೊಬೈಲ್ ಹಾಗೂ ಬಜಾಜ್ ಪಲ್ಸರ್(ಕೆಎ–03, ಹೆಚ್‌ಸಿ–5702) ಅನ್ನು ವಶಪಡಿಸಿಕೊಳ್ಳಲಾಗಿದೆ.

ಸಿಸಿಬಿ ಘಟಕದ ಸಂಘಟಿತ ಅಪರಾಧ ಮತ್ತು ರೌಡಿ ಪ್ರತಿಬಂಧಕ ದಳದ ಇನ್ಸ್‌ಪೆಕ್ಟರ್ ಶಬ್ಬೀರ್ ಹುಸೇನ್ ಹಾಗೂ ಸಿಬ್ಬಂದಿ ಸೋಮವಾರ ಮಧ್ಯಾಹ್ನ ಹಳೆ ಕೆಸರೆಯ ಕಾಮನಕೆರೆಹುಂಡಿ ಮುಖ್ಯರಸ್ತೆಯಲ್ಲಿ ಗಸ್ತಿನಲ್ಲಿದ್ದಾಗ ಪಲ್ಸರ್ ಬೈಕ್‌ನಲ್ಲಿ ಚೀಲವಿಟ್ಟುಕೊಂಡು ವ್ಯಕ್ತಿಯೊಬ್ಬ ನಿಂತಿದ್ದನ್ನು ಗಮನಿಸಿದ್ದಾರೆ. ಅಷ್ಟರಲ್ಲಿ ಪೊಲೀಸ್ ವಾಹನ ಗಮನಿಸಿ ಗಲಿಬಿಲಿಗೊಂಡ ಆತ ಬೈಕ್ ಸ್ಟಾರ್ಟ್ ಮಾಡಿ, ಪರಾರಿಯಾಗಲು ಯತ್ನಿಸಿದ್ದಾನೆ.

ಕೂಡಲೇ ಪೊಲೀಸರು ಆತನನ್ನು ಸುತ್ತುವರೆದು, ಚೀಲವನ್ನು ಪರಿಶೀಲಿಸಿದಾಗ ಗಂಧದ ತುಂಡುಗಳು ಪತ್ತೆಯಾಗಿವೆ. ಈ ಬಗ್ಗೆ ಆರೋಪಿಯನ್ನು ವಿಚಾರಿಸಿದಾಗ, ಮೂರ್‍ನಾಲ್ಕು ದಿನಗಳ ಹಿಂದೆ ಕೆಸರೆ ಚಿಕ್ಕೆರೆ ಬಳಿ ಬೆಳೆದಿದ್ದ ಶ್ರೀಗಂಧದ ಮರವನ್ನು ಕತ್ತರಿಸಿ, ಇಂದು ತುಂಡುಗಳನ್ನಾಗಿ ಮಾಡಿಕೊಂಡು ಮನೆಗೆ ಸಾಗಿಸುತ್ತಿದ್ದೆ. ಇವುಗಳ ತೊಗಟೆ ತೆಗೆದು, ಟ್ರಿಮ್ ಮಾಡಿದ ನಂತರ ಮಾರಾಟ ಮಾಡುವ ಯೋಜನೆಯಿತ್ತೆಂದು ತಿಳಿಸಿದ್ದಾನೆ.

ಆರೋಪಿ ನವಾಜ್ ಸಾಗಿಸುತ್ತಿದ್ದ ಗಂಧದ ತುಂಡುಗಳು ಒಂದೂವರೆ ಲಕ್ಷಕ್ಕೂ ಹೆಚ್ಚು ಬೆಲೆಬಾಳಬಹುದು ಎಂದು ಅಂದಾಜಿಸಲಾಗಿದ್ದು, ಈ ಸಂಬಂಧ ನರಸಿಂಹರಾಜ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗಿದೆ.

ಕೇಂದ್ರದ ಸ್ವದೇಶ ದರ್ಶನದಡಿ ಮೈಸೂರಿನ ಎರಡು ಯೋಜನೆಗಳಿಗೆ ಅನುಮೋದನೆ

ಪ್ರವಾಸೋದ್ಯಮ ಸಚಿವರ ಭೇಟಿ ನಂತರ ಮಾಹಿತಿ ಹಂಚಿಕೊಂಡ ಸಂಸದ ಯದುವೀರ್



ನವದೆಹಲಿಯಲ್ಲಿ ಮೈಸೂರು–ಕೊಡಗು ಸಂಸದ ಯದುವೀರ್, ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರನ್ನು ಭೇಟಿಯಾಗಿ ಮೈಸೂರಿನ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳ ಬಗ್ಗೆ ಚರ್ಚಿಸಿದರು.

ನವದೆಹಲಿ,ಡಿ.9– ಕೇಂದ್ರ ಪ್ರವಾಸೋದ್ಯಮ ಸಚಿವಾಲಯದ ಸ್ವದೇಶ ದರ್ಶನ 2.0 ಯೋಜನೆಯಡಿ ಮೈಸೂರಿನಲ್ಲಿ ಎರಡು ಪ್ರಮುಖ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳಿಗೆ ಅನುಮೋದನೆ ದೊರೆತಿದೆ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರೊಂದಿಗೆ ಮಾತುಕತೆ ನಡೆಸಿದ್ದರ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಸಂಸದರು, ಮೈಸೂರಿನಲ್ಲಿ ಇಕಾಲಜಿಕಲ್ ಎಕ್ಸ್‌ಪೀರಿಯನ್ಸ್ ಝೋನ್ ಅಭಿವೃದ್ಧಿಗೆ 18.47 ಕೋಟಿ ರೂ. ಹಾಗೂ ಟಾಂಗಾ ರೈಡ್ ಎಕ್ಸ್‌ಪೀರಿಯನ್ಸ್ ಝೋನ್ ಅಭಿವೃದ್ಧಿಗೆ 2.71 ಕೋಟಿ ರೂ. ಅನುದಾನಕ್ಕೆ ಅನುಮೋದನೆ ನೀಡಲಾಗಿದ್ದು, ಈ ಎರಡೂ ಯೋಜನೆಗಳನ್ನು ಕರ್ನಾಟಕ ಪ್ರವಾಸೋದ್ಯಮ ಮೂಲ ಸೌಲಭ್ಯ ನಿಗಮವು ಅನುಷ್ಠಾನಕ್ಕೆ ತರಲಿದೆ ಎಂದಿದ್ದಾರೆ.

ಈ ಎರಡು ಯೋಜನೆಗಳಿಗೆ ಅಂತಿಮ ಅನುಮೋದನೆ ದೊರೆತಿರುವುದು ಅತೀವ ಸಂತಸ ತಂದಿದೆ. ಭೂಮಿ ಪೂಜೆಗೆ ಶೀಘ್ರ ದಿನಾಂಕ ನಿಗದಿಪಡಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಈ ಮೂಲಕ ಮೈಸೂರಿನಲ್ಲಿ ಪ್ರವಾಸೋದ್ಯಮ ಮತ್ತಷ್ಟು ವೃದ್ಧಿಯಾಗಲಿದೆ. ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರು ಯೋಜನೆಗಳ ಅನುಷ್ಠಾನಕ್ಕೆ ಸಂಪೂರ್ಣ ಬೆಂಬಲ ನೀಡುವ ಭರವಸೆ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ಮೈಸೂರಿನ ಪಾರಂಪರಿಕತೆ ಸಂರಕ್ಷಣೆಯೊಂದಿಗೆ ಪ್ರವಾಸೋದ್ಯಮದ ಸರ್ವಾಂಗೀಣ ಬೆಳವಣಿಗೆಗೆ ಆದ್ಯತೆ ನೀಡಲಾಗುವುದು. ಇನ್ನೂ ಕೆಲವು ಪ್ರಮುಖ ಪ್ರವಾಸೋದ್ಯಮ ಯೋಜನೆಗಳಿಗೆ ಕೇಂದ್ರ ಸರ್ಕಾರದ ಅನುಮತಿಗಾಗಿ ನಿರಂತರ ಪ್ರಯತ್ನ ನಡೆಸಲಾಗುವುದು. ಮೈಸೂರು ಪ್ರವಾಸೋದ್ಯಮ ಕ್ಷೇತ್ರ ಉತ್ತೇಜನಕ್ಕೆ ಕೇಂದ್ರ ಬಿಜೆಪಿ ಸರ್ಕಾರ ಎಂದೂ ಸಹಕಾರ ನೀಡಲಿದೆ. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಉನ್ನತಿಗೆ ಎಲ್ಲಾ ರೀತಿಯ ಪ್ರಯತ್ನಗಳನ್ನು ಮುಂದುವರೆಸುತ್ತೇನೆ ಎಂದು ಸಂಸದ ಯದುವೀರ್ ಭರವಸೆ ನೀಡಿದ್ದಾರೆ.

ನಕ್ಸಲ್ ಪೀಡಿತ ರಾಜ್ಯ, ಜಿಲ್ಲೆಗಳ ಸಂಖ್ಯೆ ಇಳಿಕೆ: ಕೇಂದ್ರ ಸರ್ಕಾರ

ನವದೆಹಲಿ, ಡಿ.9– ನಕ್ಸಲ್ ಪೀಡಿತ ರಾಜ್ಯ ಮತ್ತು ಜಿಲ್ಲೆಗಳ ಸಂಖ್ಯೆ ಕಳೆದ ಹತ್ತು ವರ್ಷಗಳಲ್ಲಿ ಗಣನೀಯ ಪ್ರಮಾಣದಲ್ಲಿ ಇಳಿಕೆಯಾಗಿದೆ ಎಂದು ಕೇಂದ್ರ ಸರ್ಕಾರ ಮಂಗಳವಾರ ತಿಳಿಸಿದೆ.

ಲೋಕಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ಪ್ರತಿಕ್ರಿಯಿಸಿದ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಅವರು, ನಕ್ಸಲ್ ಪೀಡಿತ ರಾಜ್ಯಗಳ ಸಂಖ್ಯೆ 10ರಿಂದ 5ಕ್ಕೆ ಇಳಿಕೆಯಾಗಿದೆ. ನಕ್ಸಲ್ ಪೀಡಿತ ಜಿಲ್ಲೆಗಳ ಸಂಖ್ಯೆಯು 126ರಿಂದ 11ಕ್ಕೆ ಇಳಿಕೆಯಾಗಿದೆ ಎಂದು ತಿಳಿಸಿದ್ದಾರೆ.

ಮೈಸೂರಿನ ಕುಂಬಾರ ಕೊಪ್ಪಲಲ್ಲಿ ಕೆಟ್ಟಿರುವ ವಿದ್ಯುತ್ ಚಿತಾಗಾರ

ಕೂಡಲೇ ರಿಪೇರಿಗೆ ಮಾಜಿ ಕಾರ್ಪೊರೇಟರ್ ಕೆ.ವಿ.ಶ್ರೀಧರ್ ಆಗ್ರಹ



ಕೆಟ್ಟು ನಿಂತಿರುವ ಮೈಸೂರಿನ ಕುಂಬಾರಕೊಪ್ಪಲ್ ಸ್ಮಶಾನದ ವಿದ್ಯುತ್ ಚಿತಾಗಾರ.

ಮೈಸೂರು, ಡಿ.9(ಬಿಎಲ್‌ಯು)– ಕೆಟ್ಟು ನಿಂತಿರುವ ಮೈಸೂರಿನ ಕುಂಬಾರ ಕೊಪ್ಪಲಿನ ವಿದ್ಯುತ್ ಚಿತಾಗಾರವನ್ನು ಕೂಡಲೇ ರಿಪೇರಿ ಮಾಡಿಸಿ ಪುನಾರಂಭಿಸುವಂತೆ ಮಾಜಿ ಕಾರ್ಪೊರೇಟರ್ ಕೆ.ವಿ.ಶ್ರೀಧರ್ ಆಗ್ರಹಿಸಿದ್ದಾರೆ.

ಶವ ಸಂಸ್ಕಾರ ಮಾಡಲು ಸ್ಥಳವಿಲ್ಲದೆ ಜನರು ಪರದಾಡುತ್ತಿದ್ದು, ಇದನ್ನು ಮೈಸೂರು ನಗರ ಪಾಲಿಕೆಯ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು ಎಂದು ಸಲಹೆ ನೀಡಿದ್ದಾರೆ.

ಕಳೆದ ಎರಡು ವರ್ಷಗಳ ಹಿಂದೆ ವಿದ್ಯುತ್ ಚಿತಾಗಾರ ನಿರ್ಮಾಣ ಮಾಡಲಾಯಿತು. ವಿದ್ಯುತ್ ಚಿತಾಗಾರಕ್ಕೆ ಪ್ರತಿ ಆರು ತಿಂಗಳಿಗೊಮ್ಮೆ ತಾಮ್ರದ ಕಾಯಲ್ ಅಳವಡಿಸಬೇಕು. ಆದರೆ ನಗರ ಪಾಲಿಕೆ ಅಧಿಕಾರಿಗಳು ಕಾಯಲ್ ಅಳವಡಿಸದೆ ಕಳೆದ ಆರು ತಿಂಗಳಿಂದ ಹಾಗೆ ಬಿಟ್ಟಿದ್ದಾರೆ.

ಕೆಟ್ಟು ನಿಂತಿರುವ ವಿದ್ಯುತ್ ಚಿತಾಗಾರವನ್ನು ರಿಪೇರಿ ಮಾಡಿಸುವ ಗೋಜಿಗೆ ಅಧಿಕಾರಿಗಳು ಹೋಗಿಲ್ಲ. ಇದರಿಂದ ಶವ ಸಂಸ್ಕಾರಕ್ಕೆ ಜನರು ಪರದಾಡುತ್ತಿದ್ದಾರೆ.



ಕೆ.ವಿ.ಶ್ರೀಧರ್

ಕೆಲವರು ಹೂಳುವುದರ ಮೂಲಕ ಶವ ಸಂಸ್ಕಾರ ಮಾಡಿದರೆ, ಕೆಲವರು ಚಿತೆಗೆ ಬೆಂಕಿ ಸ್ಪರ್ಶ ಮಾಡಿ ಸಂಸ್ಕಾರ ಮಾಡುತ್ತಾರೆ. ಇದು ಅವರವರ ಸಂಪ್ರದಾಯ. ಆದರೆ ಈಗ ವಿದ್ಯುತ್ ಚಿತಾಗಾರ ಇಲ್ಲದ ಕಾರಣ ಸೌದೆಯಲ್ಲಿ ಸುಡಬೇಕಾಗಿದೆ. ಆದರೆ ಹುಡುಕಿದರೂ ಸೌದೆ ಸಿಗದ ಕಾರಣ ಶವ ಸಂಸ್ಕಾರಕ್ಕೆ ಜನರು ಪರದಾಡುತ್ತಿದ್ದಾರೆ.

ಪರಿಶಿಷ್ಟ ಜಾತಿ ಮತ್ತು ಪಂಗಡದವರ ಶವ ಸಂಸ್ಕಾರಕ್ಕೆ ಉಚಿತ ಹಾಗೂ ಇತರರಿಗೆ 500 ರೂಪಾಯಿ ದರ ನಿಗದಿ ಮಾಡಲಾಗಿತ್ತು. ಆದರೆ, ಇತ್ತೀಚೆಗೆ ಎಲ್ಲರಿಗೂ ಉಚಿತವಾಗಿ ಸಂಸ್ಕಾರ ಮಾಡಲು ವಿದ್ಯುತ್ ಚಿತಾಗಾರದಲ್ಲಿ ವ್ಯವಸ್ಥೆ ಮಾಡಲಾಗಿತ್ತು.

ಜನರ ಬವಣೆ ಅರಿತು ಈಗಲಾದರೂ ನಗರ ಪಾಲಿಕೆ ಅಧಿಕಾರಿಗಳು ಕೂಡಲೇ ವಿದ್ಯುತ್ ಚಿತಾಗಾರವನ್ನು ರಿಪೇರಿ ಮಾಡಿಸಿ, ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಬೇಕು ಎಂದು ಶ್ರೀಧರ್ ಆಗ್ರಹಿಸಿದ್ದಾರೆ.

ಸ್ವಾವಲಂಬನೆಯ ಜೀವನಕ್ಕೆ ದಿಟ್ಟ ಹೆಜ್ಜೆ ಇಡಲು ಎನ್‌ಎಸ್‌ಎಸ್ ಸಹಕಾರಿ

ಶ್ರೀ ನಟರಾಜ ಬಾಲಕಿಯರ ಪದವಿಪೂರ್ವ ಕಾಲೇಜಿನ ಎನ್‌ಎಸ್‌ಎಸ್ ಶಿಬಿರದ ಸಮಾರೋಪದಲ್ಲಿ ಸಾಹಿತಿ ಡಿ.ಎನ್. ಕೃಷ್ಣಮೂರ್ತಿ ಅಭಿಮತ



ಶ್ರೀ ನಟರಾಜ ಬಾಲಕಿಯರ ಪದವಿಪೂರ್ವ ಕಾಲೇಜು ವತಿಯಿಂದ ರಾಷ್ಟ್ರೀಯ ಸೇವಾ ಯೋಜನೆಯ ಸಮಾರೋಪ ಸಮಾರಂಭ ಹಮ್ಮಿಕೊಳ್ಳಲಾಗಿತ್ತು

ಮೈಸೂರು, ಡಿ. 9– ಸ್ವಾವಲಂಬನೆಯ ಜೀವನಕ್ಕೆ ದಿಟ್ಟ ಹೆಜ್ಜೆ ಇಡಲು ಎನ್‌ಎಸ್‌ಎಸ್ ಸಹಕಾರಿ ಎಂದು ಸಾಹಿತಿ ಡಿ.ಎನ್. ಕೃಷ್ಣಮೂರ್ತಿ ಹೇಳಿದರು.

ಶ್ರೀ ನಟರಾಜ ಬಾಲಕಿಯರ ಪದವಿ ಪೂರ್ವ ಕಾಲೇಜು ವತಿಯಿಂದ ಗೆಜ್ಜಗಳ್ಳಿಯಲ್ಲಿ ನಡೆದ ರಾಷ್ಟ್ರೀಯ ಸೇವಾ ಯೋಜನೆಯ ಸಮಾರೋಪ ಸಮಾರಂಭದಲ್ಲಿ ವಿಶೇಷ ಆಹ್ವಾನಿತರಾಗಿ ಮಾತನಾಡಿದ ಅವರು, ವ್ಯಾಸಂಗಕ್ಕಿಂತ ವಿಭಿನ್ನವಾದ ಅನೇಕ ವಿಚಾರಗಳನ್ನು ಶಿಬಿರದಲ್ಲಿ ಕಲಿಯಬಹುದು. ಸಹಬಾಳ್ವೆಯ ಜೀವನಕ್ಕೂ ಅತ್ಯಗತ್ಯವಾದ ಕಾರ್ಯಕ್ರಮ ಇದಾಗಿದೆ ಎಂದರು.

ವಿದ್ಯಾರ್ಥಿನಿಯರು ಸ್ಪಷ್ಟ ಗುರಿಯೊಂದಿಗೆ ವಿದ್ಯಾಭ್ಯಾಸ ಮಾಡಬೇಕು. ವಿದ್ಯೆ ಕಲಿತು ಸತ್ಪ್ರಜೆ ಆಗುವುದರ ಜೊತೆಗೆ ಸಮಾಜವನ್ನು ಗುರಿಯಾಗಿಟ್ಟುಕೊಂಡು ಕೆಲಸ ಮಾಡಬೇಕು. ಜೀವನದಲ್ಲಿ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ವಿದ್ಯಾಭ್ಯಾಸ ಜೀವನ ರೂಪಿಸಿದರೆ, ಜೀವನ ಪಾಠ ಕಲಿಸಿಕೊಡುತ್ತದೆ. ಮಕ್ಕಳ ಭವಿಷ್ಯವನ್ನು ರೂಪಿಸಲು ಹೆಣಗುವ ಪೋಷಕರನ್ನು ಆತಂಕಕ್ಕೆ ದೂಡಬಾರದು. ಅವರನ್ನು ಚೆನ್ನಾಗಿ ನೋಡಿಕೊಳ್ಳಬೇಕು. ಎಂದು ಸಲಹೆ ಮಾಡಿದರು.

ಪ್ರತಿಭಾ ಪಲಾಯನದಿಂದಾಗಿ ನಮ್ಮ ದೇಶದಲ್ಲಿ ವೃದ್ಧಾಶ್ರಮಗಳು ಹೆಚ್ಚುತ್ತಿವೆ. ಪ್ರತಿಭೆ ಇದ್ದವರಿಗೆ ಇಲ್ಲಿಯೇ ಅವಕಾಶ ಕಲ್ಪಿಸಿಕೊಟ್ಟರೆ ಇದನ್ನು ತಪ್ಪಿಸಬಹುದು ಎಂದ ಅವರು, ಎನ್‌ಎಸ್‌ಎಸ್ ಶಿಬಿರಗಳಲ್ಲಿ ಶಿಕ್ಷಣ, ಪರಿಸರ ಮಾಲಿನ್ಯ, ಸ್ವಚ್ಛತೆ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಕನ್ನಡ ಉಳಿಸಿ, ಬೆಳೆಸಿ, ಜೊತೆಗೆ ಇಂಗ್ಲಿಷ್ ಅನ್ನೂ ಕೂಡ ಕಲಿಯಿರಿ. ಪುಸ್ತಕಗಳನ್ನು ಓದಿ ಎಂದು ಅವರು ಕಿವಿಮಾತು ಹೇಳಿದರು.

ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ.ಎಸ್. ಶಿವರಾಜಪ್ಪ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್‌ಸಮಾರೋಪ ಭಾಷಣ ಮಾಡಿದರು. ಶಿಬಿರಾರ್ಥಿಗಳಾದ ಶಾಲಿನಿ, ಗಗನ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಗ್ರಾಮಸ್ಥರ ಪರವಾಗಿ ನಟರಾಜು ಮಾತನಾಡಿದರು. ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಎ.ಆರ್. ಕಾವ್ಯಶ್ರೀ, ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ನಾಗೇಂದ್ರ, ಮಾಜಿ ಅಧ್ಯಕ್ಷ ಗುರುಸ್ವಾಮಿ, ಗುತ್ತಿಗೆದಾರ ನಾಗೇಂದ್ರ, ಗುಡ್ಡಪ್ಪನವರಾದ ಮಾದಪ್ಪ, ಶರತ್, ಆಕಾಶ್, ಸಂಜಯ್, ವಾಟರಮನ್ ಕೆಂಚಪ್ಪ, ಶೇಖರ್, ಮಲ್ಲೇಶ್, ಪ್ರಕಾಶ್, ಪ್ರಾಂಶುಪಾಲೆ ವಿ.ಡಿ. ಸುನೀತಾ ರಾಣಿ, ಉಪನ್ಯಾಸಕರಾದ ಪ್ರದೀಪ್‌ಕುಮಾರ್, ಸಚಿನ್, ಸಹ ಕಾರ್ಯಕ್ರಮಾಧಿಕಾರಿ ಬಿ.ಎಲ್. ವಿದ್ಯಾ ಇದ್ದರು.

ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಆರ್. ರಾಧಾ ಸ್ವಾಗತಿಸಿದರು. ನಾಗಲಾಂಬಿಕಾ ನಿರೂಪಿಸಿದರು.

47 ಬಾಲಕಿಯರ ವಾಸ್ತವ್ಯಕ್ಕಾಗಿ ಗ್ರಾಪಂ ಮಾಜಿ ಸದಸ್ಯ ಲೋಕೇಶ್ ತಮ್ಮ ಮನೆಯನ್ನು ನೀಡಿದ್ದರು. ಗ್ರಾಮದ ಎಲ್ಲಾ ಮುಖಂಡರು ಸೇರಿ ಶಿಬಿರಾರ್ಥಿಗಳಿಗೆ ಫೈಲ್ ಹಾಗೂ ಪೆನ್ ಕೊಡುಗೆಯಾಗಿ ನೀಡಿದರು.

ವ್ಯಕ್ತಿತ್ವ ವಿಕಸನ

ಎನ್‌ಎಸ್‌ಎಸ್ ಶಿಬಿರಗಳಲ್ಲಿ ಭಾಗವಹಿಸುವುದರಿಂದ ವ್ಯಕ್ತಿತ್ವ ವಿಕಸನವಾಗುತ್ತದೆ ಎಂದು ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ.ಎಸ್. ಶಿವರಾಜಪ್ಪ ಹೇಳಿದರು.

ಸೇವೆ, ಸಹಕಾರ, ಸಹಿಷ್ಣುತೆ ಹೊಂದಾಣಿಕೆಯನ್ನು ಶಿಬಿರ ಕಲಿಸಿಕೊಡುತ್ತದೆ. ಧರ್ಮ ಧರ್ಮಗಳ ನಡುವಿನ ಸಂಘರ್ಷದಿಂದ ಇಡೀ ದೇಶ ಮಾತ್ರವಲ್ಲದೇ ವಿಶ್ವವೇ ನಲುಗುತ್ತಿದೆ. ಇಂತಹ ಸಂದರ್ಭದಲ್ಲಿ ಪ್ರಾಮಾಣಿಕತೆ, ಭಾತೃತ್ವ, ಸಂಘಜೀವನವನ್ನು ಕಲಿಸುವ ಎನ್‌ಎಸ್‌ಎಸ್ ಅಗತ್ಯ ಎಂದರು.

ಹಣ, ಓದು, ಸೌಂದರ್ಯಕ್ಕಿಂತ ಪ್ರಾಮಾಣಿಕ ನಡವಳಿಕೆ ಮುಖ್ಯ. ದೇಶ ನನ್ನದು ಎಂಬ ಭಾವನೆಯಿಂದ ಸೇವೆ ಮಾಡಬೇಕು ಎಂದು ಹೇಳಿದರು.

ನಾಳೆಯಿಂದ ಮೈಸೂರಲ್ಲಿ 'ಮೈಬಿಲ್ಡ್–25' ಬೃಹತ್ ವಸ್ತುಪ್ರದರ್ಶನ

ಕಟ್ಟಡ ಸಾಮಾಗ್ರಿಗಳು, ಸೌರಶಕ್ತಿ, ವಿದ್ಯುತ್ ಉಪಕರಣ, ಜಲ ಸಂರಕ್ಷಣಾ ವಿಧಾನ ಅಡುಗೆ ಮನೆ ಸೇರಿದಂತೆ 300ಕ್ಕೂ ಹೆಚ್ಚು ಮಳಿಗೆಗಳಲ್ಲಿ ವಸ್ತುಪ್ರದರ್ಶನ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ಬಿಎಐ)ದ ಮೈಸೂರು ಘಟಕದ ವತಿಯಿಂದ 25ನೇ ವಾರ್ಷಿಕ ಕಟ್ಟಡ ಸಾಮಾಗ್ರಿಗಳ 'ಮೈಬಿಲ್ಡ್–25' ಬೃಹತ್ ವಸ್ತು ಪ್ರದರ್ಶನದ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಮೈಸೂರು, ಡಿ.9(ಜಿಎ)–ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ಬಿಎಐ)ದ ಮೈಸೂರು ಘಟಕದ ವತಿಯಿಂದ 25ನೇ ವಾರ್ಷಿಕ ಕಟ್ಟಡ ಸಾಮಾಗ್ರಿಗಳ 'ಮೈಬಿಲ್ಡ್–25' ಬೃಹತ್ ವಸ್ತುಪ್ರದರ್ಶನವನ್ನು ಡಿ.11ರಿಂದ 15ವರೆಗೆ ಮೈಸೂರಿನ ಮಹಾರಾಜ ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಬಿಎಐ ಅಧ್ಯಕ್ಷ ವಿ.ಶ್ರೀನಾಥ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೊದಲು ಸಣ್ಣ ಪ್ರಮಾಣದಲ್ಲಿ ಆರಂಭವಾದ ವಸ್ತು ಪ್ರದರ್ಶನವು ಉತ್ತಮ ಪ್ರತಿಕ್ರಿಯೆ ಪಡೆದುಕೊಂಡು ಹೆಮ್ಮರವಾಗಿ ಬೆಳೆದು ನಿಂತಿದೆ. ದೇಶ ಮತ್ತು ವಿದೇಶಗಳ ಕಟ್ಟಡ ಸಾಮಾಗ್ರಿಗಳ ಪ್ರದರ್ಶನವನ್ನು ಆಯೋಜಿಸಿದ್ದು, ಸೌರಶಕ್ತಿ ಯೋಜನೆ, ವಿದ್ಯುತ್ ಉಪಕರಣಗಳು, ಕಟ್ಟಡ ನಿರ್ಮಾಣದ ಯಂತ್ರಗಳು, ಜಲ ಸಂರಕ್ಷಣಾ ವಿಧಾನ, ನೆಲಹಾಸುಗಳು, ಅಡುಗೆ ಮನೆ ಮತ್ತು ಸ್ನಾನದ ಮನೆಯ ಅಲಂಕಾರ ಸಾಮಾಗ್ರಿ, ವಿಶೇಷ ಮೇಲ್ಛಾವಣಿ, ಹೊರಾಂಗಣ ನೆಲ ಹಾಸಿಗೆ ಸೇರಿದಂತೆ 300 ಮಳಿಗೆಗಳನ್ನು ವಸ್ತು ಪ್ರದರ್ಶನ ಒಳಗೊಂಡಿದೆ ಎಂದರು.

ಪ್ರತಿ ವರ್ಷ ಮೈಬಿಲ್ಡ್ ವಸ್ತು ಪ್ರದರ್ಶನದಿಂದ ಹಲವಾರು ಮಂದಿ ಅನುಕೂಲ ಪಡೆದುಕೊಂಡಿದ್ದು, ಮುಂದಿನ ಬಾರಿ ಯಾವಾಗ ಆಯೋಜಿಸಲಾಗುತ್ತದೆ ಎಂದು ಕಚೇರಿಗೆ ಕರೆ ಮಾಡುತ್ತಾರೆ. ಅಷ್ಟು ಕಚ್ಚುಕಟ್ಟಾಗಿ ವಸ್ತುಪ್ರದರ್ಶನ ಮೂಡಿಬಂದಿದೆ. ಗುಣಮಟ್ಟದ ಸಾಮಾಗ್ರಿ ಜೊತೆ ಅಸೋಸಿಯೇಷನ್‌ನಲ್ಲಿರುವ ನುರಿತ ಬಿಲ್ಡರ್‌ಗಳು ಗ್ರಾಹಕರಿಗೆ ಸಾಕಷ್ಟು ಸಲಹೆಗಳನ್ನು ನೀಡುತ್ತಿದ್ದಾರೆ ಎಂದು ತಿಳಿಸಿದರು.

ನಂತರ 'ಮೈಬಿಲ್ಡ್–25' ಶೋನ ಅಧ್ಯಕ್ಷ ಆರ್.ರಮೇಶ್‌ರಾವ್ ಮಾತನಾಡಿ, ಡಿ.11ರಂದು ಸಂಜೆ 4.30ಕ್ಕೆ ಪಬ್ಲಿಕ್ ಟಿವಿ ಮುಖ್ಯಸ್ಥ ಹೆಚ್.ಆರ್.ರಂಗನಾಥ್ ಚಾಲನೆ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾದ ರಾಷ್ಟ್ರೀಯ ಅಧ್ಯಕ್ಷ ರಾಜೇಂದ್ರ ಸಿಂಗ್ ಕಾಂಬೋ, ದಕ್ಷಿಣ ವಿಭಾಗದ ಉಪಾಧ್ಯಕ್ಷ ಡಿ.ವಿ.ಎನ್.ರೆಡ್ಡಿ ಆಗಮಿಸಲಿದ್ದಾರೆ ಎಂದರು.

ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾದ ಮಹಿಳಾ ಘಟಕವಾದ ಸ್ಫೂರ್ತಿ ಸಂಸ್ಥೆ ವತಿಯಿಂದ ಪ್ರತಿದಿನ ಸಂಜೆ 6.30ರಿಂದ 8.30ರವರೆಗೆ ಸಾಂಸ್ಕೃತಿಕ ಕಾರ್ಯಕ್ರಮವನ್ನು ನಡೆಸಿಕೊಡಲಿದ್ದಾರೆ. ಗಾಯನ ಸ್ಪರ್ಧೆಗೆ ಪ್ರೋತ್ಸಾಹ ನೀಡಲು ವಾಯ್ಸ್ ಆಫ್ ಮೈಬಿಲ್ಡ್–25 ಪ್ರಶಸ್ತಿ ನೀಡಿ ಅಭಿನಂದಿಸಲಾಗುತ್ತದೆ. ವಸ್ತು ಪ್ರದರ್ಶನವು ಬೆಳಗ್ಗೆ 10 ಗಂಟೆಯಿಂದ ರಾತ್ರಿ 9 ಗಂಟೆವರೆಗೂ ನಡೆಯಲಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಿ.ಡಿ.ಕೃಷ್ಣ, ಎನ್.ಲೋಕೇಶ್‌ಗೌಡ ಉಪಸ್ಥಿತರಿದ್ದರು.

ಡಿ.16, ನಾಗರಹೊಳೆಯಲ್ಲಿ 'ವನಮಿತ್ರ' ಕಾರ್ಯಕ್ರಮ

ಹುಣಸೂರು: ಮೈಸೂರಿನ ಸಂಸ್ಕೃತಿ ಮಹಿಳಾ ಸಂಘಟನೆ ವತಿಯಿಂದ ಡಿ.16 ರಂದು ನಾಗರಹೊಳೆಯ ಅನ್ನೆಮಲು ಎಂಬಲ್ಲಿ 'ವನಮಿತ್ರ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷೆ ಶ್ರೀ ದೇವಿ ಭೂಪಾಲಮ್ ತಿಳಿಸಿದ್ದಾರೆ.

ಅಂದಿನ ಕಾರ್ಯಕ್ರಮದಲ್ಲಿ ಕಾಡಿನಲ್ಲಿ ವಾಸವಾಗಿರುವ ಆದಿವಾಸಿಗಳಿಗೆ ತಟ್ಟೆ-ಲೋಟಗಳು, ಸೀರೆ, ನೈಟಿ, ಪ್ಲಾಸ್ಟಿಕ್ ಮ್ಯಾಟ್, ಬೆಡ್‌ಶೀಟ್ ಸೇರಿದಂತೆ ದಿನ ಬಳಕೆಯ ವಸ್ತುಗಳನ್ನು ವಿತರಿಸಲಾಗುವುದು ಎಂದು ಅವರು ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷೆ ಶ್ರೀದೇವಿ ಭೂಪಾಲಮ್, ಕಾರ್ಯದರ್ಶಿ ಕೀರ್ತಿ ರಮೇಶ್, ಸರ್ವಿಸ್ ಕೋಆರ್ಡಿನೇಟರ್ ರಶ್ಮಿ ನಾಗೇಂದ್ರ ಮತ್ತು ಉಪಾಧ್ಯಕ್ಷೆ ಸುಮ ರಮೇಶ್ ಸೇರಿದಂತೆ ಸಂಸ್ಥೆಯ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ. ಅಂದು ಬೆಳಗ್ಗೆಯಿಂದ ಸಂಜೆಯವರೆಗೂ ಕಾರ್ಯಕ್ರಮ ನಡೆಯಲಿದೆ.

4 ವರ್ಷಗಳಿಂದ ಸ್ಥಗಿತಗೊಂಡಿರುವ ಶ್ರೀ ತ್ರಿಪುರ ಸುಂದರಿ ಅಮ್ಮನವರ ತೆಪ್ಪೋತ್ಸವ

ಮುಖಂಡರು, ಜನಪ್ರತಿನಿಧಿಗಳ ಸಮನ್ವಯತೆ, ಇಚ್ಛಾಶಕ್ತಿಯ ಕೊರತೆಯ ಕಾರಣವೇ?

● ಕಲ್ಯಾಣಿಯ ತಾಂತ್ರಿಕ ದೋಷ ಸರಿಪಡಿಸಲು ಹಿಂದೇಟು, ಭಕ್ತರಲ್ಲಿ ಅಸಮಾಧಾನ



> ಕಟ್ಟಡದ ರೀತಿ ಸರಿಯಿಲ್ಲ ಎಂಬ ಸೂಚನೆ ಮೇರೆಗೆ ಕಲ್ಯಾಣಿಯ ದುರಸ್ತಿ ಕಾರ್ಯಕ್ಕೆ ದೊಡ್ಡ ಮಟ್ಟದ ಅನುದಾನ ಬೇಕಾಗಿದ್ದು ತೆಪ್ಪ ನಡೆಸುವ ಏಕಾಏಕಿ ನಿರ್ಧಾರ ಕೈಗೊಳ್ಳಲಾಗದ ಕಾರಣ ಈ ಬಾರಿಯೂ ತೆಪ್ಪೋತ್ಸವ ಡೌಟು
> – ಸುರೇಶಾಚಾರ್ ಟಿ.ಜಿ. ತಹಸೀಲ್ದಾರ್, ತಿ.ನರಸೀಪುರ.

ಮೂಗೂರು: ಗ್ರಾಮದ ಮುಖಂಡರು, ಜನಪ್ರತಿನಿಧಿಗಳ ಸಮನ್ವಯತೆ ಮತ್ತು ಇಚ್ಛಾಶಕ್ತಿಯ ಕೊರತೆಯಿಂದ ಐತಿಹಾಸಿಕ ಹಿನ್ನೆಲೆಯುಳ್ಳ ಧಾರ್ಮಿಕ ಕ್ಷೇತ್ರ ಶ್ರೀ ತ್ರಿಪುರ ಸುಂದರಿ ಅಮ್ಮನವರ ಜಾತ್ರಾ ಮಹೋತ್ಸವದ ಅಂಗವಾಗಿ ನಡೆಯುತಿದ್ದ ತೆಪ್ಪೋತ್ಸವ ಕಳೆದ ನಾಲ್ಕು ವರ್ಷಗಳಿಂದ ಸ್ಥಗಿತಗೊಂಡಿದ್ದು, ಈ ಬಾರಿಯೂ ನಡೆಯುವುದು ಅನುಮಾನವಾಗಿದೆ. ನೂತನವಾಗಿ ನಿರ್ಮಿಸಲಾಗಿರುವ ಕಲ್ಯಾಣಿಯಲ್ಲಿ ತಾಂತ್ರಿಕ ದೋಷವಿರುವ ಕಾರಣ ತೆಪ್ಪೋತ್ಸವ ನಡೆಸಲಾಗುತ್ತಿಲ್ಲ ಎಂದು ಹೇಳಲಾಗುತ್ತಿದೆ ಆದರೆ ಈ ತಾಂತ್ರಿಕ ದೋಷವನ್ನು ಸರಿಪಡಿಸುವ ಇಚ್ಛಾಶಕ್ತಿ ಯಾರಿಗೂ ಇದ್ದಂತಿಲ್ಲ.

ಗ್ರಾಮದ ಶ್ರೀ ತ್ರಿಪುರ ಸುಂದರಿ ಅಮ್ಮನವರನ್ನು ಹೂವಿನ ಪಲ್ಲಕ್ಕಿಯೊಂದಿಗೆ ತೆಪ್ಪ ನಡೆಸುವುದು ವಾಡಿಕೆ. ಐತಿಹಾಸಿಕ (ಹಳೆಯ) ಕಲ್ಯಾಣಿಯನ್ನು ಕೆಡವಿ ಸುಮಾರು 1.60 ಕೋಟಿ ರೂ. ವೆಚ್ಚದಲ್ಲಿ ವಿನೂತನ ರೀತಿಯಲ್ಲಿ ನಿರ್ಮಾಣ ಮಾಡಲಾಗಿದೆಯಾದರೂ ಕೆಲವೊಂದು ತಾಂತ್ರಿಕ ಸಮಸ್ಯೆಯಿಂದ ತೆಪ್ಪೋತ್ಸವ ನಡೆಸಲು ಸಾಧ್ಯವಾಗಿಲ್ಲ ಎನ್ನಲಾಗಿದೆ.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಸರ್ಕಾರದ ಅವಧಿಯಲ್ಲಿ ಅಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಎಸ್.ಟಿ.ಸೋಮಶೇಖರ್ ಅವರು ನೂತನ ಕಲ್ಯಾಣಿಯನ್ನು ಆಗಸ್ಟ್ 2022ರಲ್ಲಿ ಉದ್ಘಾಟಿಸಿ ಲೋಕಾರ್ಪಣೆ ಮಾಡಿದರು. ಅಂದಿನಿಂದ ಇಂದಿನವರೆಗೂ 4 ವರ್ಷಗಳು ಕಳೆದರೂ ತೆಪ್ಪೋತ್ಸವ ಮಾತ್ರ ನಡೆಯುತ್ತಿಲ್ಲ.

ಇದಕ್ಕೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಾಗಲಿ, ಜನಪ್ರತಿನಿಧಿಗಳಾಗಲಿ ನೂತನ ಕಲ್ಯಾಣಿಯ ತಾಂತ್ರಿಕ ಸಮಸ್ಯೆಯನ್ನು ಗುರುತಿಸಿ ಅದಕ್ಕೆ ಪರಿಹಾರ ಕಂಡು ಹಿಡಿಯುವಲ್ಲಿ ವಿಫಲರಾಗಿದ್ದಾರೆ.

ಮೂಡದ ಒಮ್ಮತ: ಗ್ರಾಮದ ವಿವಿಧ ಸಮುದಾಯದ ಮುಖಂಡರು ಮತ್ತು ಜನಪ್ರತಿನಿಧಿಗಳ ಸಮನ್ವಯತೆ ಹಾಗೂ ಇಚ್ಛಾಶಕ್ತಿಯ ಕೊರತೆ ತೆಪ್ಪೋತ್ಸವ ಸ್ಥಗಿತಕ್ಕೆ ಕಾರಣವಾಗಿದೆ. ಕಲ್ಯಾಣಿಯ ಮೂಲ ಉದ್ದೇಶವನ್ನು ಮರೆತು ನಿರ್ಮಾಣ ಕೈ ಗೊಂಡಿರುವುದರ ಜತೆಗೆ ಹಾಗೂ ಕೆಲವು ಕುಂಟು ನೆಪಗಳು ಸಹ ಕಾರಣ ಎಂಬ ಮಾತುಗಳು ಕೇಳಿಬರುತ್ತಿವೆ.



ಶ್ರೀ ತ್ರಿಪುರ ಸುಂದರಿ ಅಮ್ಮನವರ ತೆಪ್ಪೋತ್ಸವದ ನೂತನ ಕಲ್ಯಾಣಿ.

> ಸ್ಥಳೀಯರ ಸಲಹೆ ಪಡೆಯದೇ ಮಾಡಿರುವ ಯಡವಟ್ಟನ್ನು ಸರಿಪಡಿಸಿಕೊಂಡು ತಜ್ಞರ ಮಾರ್ಗದರ್ಶನದಲ್ಲಿ ನೂತನ ಕಲ್ಯಾಣಿಯಲ್ಲಿ ತೆಪ್ಪೋತ್ಸವ ನಡೆಯಲು ಅಧಿಕಾರಿಗಳು ಮುಂದಾಗಬೇಕಿದೆ.
> – ಎಂ.ಎಂ.ಜಗದೀಶ್, ಸದಸ್ಯ ಎಸ್ಸಿ, ಎಸ್ಟಿ ಹಿತರಕ್ಷಣಾ ಸಮಿತಿ.

ಶ್ರೀ ಸಾಯಿಬಾಬಾ ಪೂಜಾ ಕಾರ್ಯಕ್ರಮ

ಭೇರ್ಯ: ಸಾಲಿಗ್ರಾಮ ತಾಲೂಕಿನ ಬಟಿಗನಹಳ್ಳಿ ಗ್ರಾಮದಲ್ಲಿರುವ ಶ್ರೀ ಸಾಯಿಬಾಬಾ ಚಾರಿಟಬಲ್ ಟ್ರಸ್ಟ್ ವತಿಯಿಂದ ಶ್ರೀ ಸಾಯಿಬಾಬಾ ದೇವಸ್ಥಾನದಲ್ಲಿ 4ನೇ ವರ್ಷದ ಶ್ರೀ ಸಾಯಿಬಾಬಾ ಪೂಜಾ ಮತ್ತು ದೀಪೋತ್ಸವ ಹಬ್ಬವನ್ನು ಡಿ.11ರಂದು ಶ್ರೀ ಸಾಯಿಬಾಬಾ ಇಂಟರ್ನ್ಯಾಷನಲ್ ಸ್ಕೂಲ್ ಆವರಣದಲ್ಲಿ ಆಚರಿಸಲಾಗುತ್ತಿದೆ.

ಪೂಜಾ ಕಾರ್ಯಕ್ರಮಕ್ಕೆ ಎಲ್ಲಾ ಜಾತಿ ಮತ ಪಕ್ಷ ಬೇಧ ಬಿಟ್ಟು ಸಾರ್ವಜನಿಕರು ಭಾಗವಹಿಸಿ ಶ್ರೀ ಸಾಯಿಬಾಬಾರ ಕೃಪೆಗೆ ಪಾತ್ರರಾಗಬೇಕೆಂದು ಶ್ರೀಸಾಯಿಬಾಬಾ ಚಾರಿಟಬಲ್ ಟ್ರಸ್ಟ್‌ನವರು ಪತ್ರಿಕಾ ಹೇಳಿಕೆ ನೀಡಿದ್ದಾರೆ. ಈ ಹಬ್ಬಕ್ಕೆ ಆಗಮಿಸುವ ಭಕ್ತಾದಿಗಳಿಗೆ ಟ್ರಸ್ಟಿನ ವತಿಯಿಂದ ಶಾಲಾ ಆವರಣದಲ್ಲಿ ಪ್ರಸಾದ ವಿನಿಯೋಗ ಹಾಗೂ ಅನ್ನದಾಸೋಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟಿನ ಕಾರ್ಯದರ್ಶಿ ಮಂಜುಳಾ ಲೋಕೇಶನ್ ತಿಳಿಸಿದರು.

ಬಸವ ತತ್ವ, ವಚನಕಾರರ ಸಿದ್ಧಾಂತ ಅಳವಡಿಸಿಕೊಂಡಿರುವೆ

ತಿ.ನರಸೀಪುರ, ಡಿ.9– ಬಸವ ತತ್ವದಲ್ಲಿ ಬದ್ಧತೆ, ಶರಣರ ಚಿಂತನೆಯಲ್ಲಿ ನಂಬಿಕೆ ಇಟ್ಟು, ವಚನಕಾರರ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಾರ್ವಜನಿಕ ಬದುಕಿನಲ್ಲಿ ನಡೆದುಕೊಳ್ಳುತ್ತಿದ್ದೇನೆ ಎಂದು ಮೈಸೂರು ಜಿಲ್ಲಾ ಗ್ರಾಮಾಂತರ ಬಿಜೆಪಿಯ ಹಿರಿಯ ಉಪಾಧ್ಯಕ್ಷರಾದ ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಅಪರ ಆಯುಕ್ತ ಹೆಳವರಹುಂಡಿ ಡಾ.ಸಿದ್ದಪ್ಪ ಹೇಳಿದರು.

ಎರಡನೇ ಬಾರಿಗೆ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾಗಿ ಆಯ್ಕೆಗೊಂಡ ಹಿನ್ನೆಲೆಯಲ್ಲಿ ಪಟ್ಟಣದ ಹೆಳವರಹುಂಡಿಯಲ್ಲಿರುವ ಬಸವ ಭವನದಲ್ಲಿ ಶ್ರೀ ಶಿವಕುಮಾರಸ್ವಾಮಿ ಸೇವಾ ಟ್ರಸ್ಟ್, ಶರಣ ಸಾಹಿತ್ಯ ಪರಿಷತ್ ಹಾಗೂ ಅಭಿಮಾನಿ ಬಳಗ ವತಿಯಿಂದ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ಹುಟ್ಟಿ ಬೆಳೆದು ವಿದ್ಯಾಭ್ಯಾಸ ಮಾಡಿದ ಊರಿನಲ್ಲಿ ಗೌರವ ಸ್ವೀಕರಿಸುತ್ತಿರುವುದು ನನಗೆ ತುಂಬಾ ಹೆಮ್ಮೆಯನ್ನು ತಂದಿದೆ. ಆದ್ದರಿಂದಲೇ ನಿಮ್ಮೆಲ್ಲರ ವಿಶ್ವಾಸವನ್ನು ಉಳಿಸಿಕೊಳ್ಳಲು ಸಾಮಾಜಿಕ ಮತ್ತು ರಾಜಕೀಯ ಚಟುವಟಿಕೆಗಳಲ್ಲಿ ಭಾಗಿಯಾಗುತ್ತಿದ್ದೇವೆ ಎಂದರು. ಹಿರಿಯ ಶಸ್ತ್ರ ಚಿಕಿತ್ಸಕ ಡಾ.ಎಂ.ರೇವಣ್ಣ ಮಾತನಾಡಿ, ವಿಶ್ವದಲ್ಲಿ ಅತಿ ದೊಡ್ಡ ಪಕ್ಷ ರಾಷ್ಟ್ರೀಯ ಪಕ್ಷ ಬಿಜೆಪಿಯಲ್ಲಿ ಎರಡನೇ ಬಾರಿಗೆ ಜಿಲ್ಲಾ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವುದು ಸಿದ್ದಪ್ಪನವರ ಪಕ್ಷದ ನಿಷ್ಠೆ, ವರಿಷ್ಠರ ನಂಬಿಕೆ ಇರುವುದು ತಿಳಿಯುತ್ತದೆ. ಹಲವು ವರ್ಷಗಳಿಂದ ಪಕ್ಷದ ಸಂಘಟನೆಗೆ ದುಡಿಯುತ್ತಿದ್ದಾರೆ ಎಂದರು.



ಬಿಜೆಪಿ ನೂತನ ಜಿಲ್ಲಾ ಉಪಾಧ್ಯಕ್ಷ ಹೆಳವರಹುಂಡಿ ಡಾ.ಸಿದ್ದಪ್ಪ ಅವರನ್ನು ಶ್ರೀ ಶಿವಕುಮಾರ ಮಹಾಸ್ವಾಮಿಗಳ ಸೇವಾ ಟ್ರಸ್ಟ್, ಶರಣ ಸಾಹಿತ್ಯ ಪರಿಷತ್ ಹಾಗೂ ಅಭಿಮಾನಿ ಬಳಗದವರಿಂದ ಸನ್ಮಾನಿಸಲಾಯಿತು.

ಕಸಾಪ ಹಾಗೂ ಶಸಾಪ ನಿಕಟ ಪೂರ್ವ ಅಧ್ಯಕ್ಷ ಚಂದ್ರಶೇಖರ್ ಅಭಿನಂದನಾ ನುಡಿಗಳನ್ನಾಡಿದರು. ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ಸದಾನಂದ, ನಿರ್ದೇಶಕ ಮಲ್ಲಣ್ಣ, ವಕೀಲರ ಸಂಘದ ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ದಯಾನಂದ್ ಪಟೇಲ್, ಮಂಡಲ ಅಧ್ಯಕ್ಷ ಹಿರಿಯೂರು ಶಿವಕುಮಾರ್, ನಗರ್ಲೆ ಮಹದೇವಸ್ವಾಮಿ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆಬ್ಬೆಹುಂಡಿ ಸೋಮಶೇಖರ್, ಬಾಬು ಜಗಜೀವನ್ ರಾಮ್ ಸಂಘದ ಮಾಜಿ ಅಧ್ಯಕ್ಷ ಮೂಗೂರು ಸಿದ್ದರಾಜು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಪ್ರಧಾನ ಕಾರ್ಯದರ್ಶಿ ಕೆ.ವಿ.ಶಿವಶಂಕರ್, ಯುವ ಘಟಕದ ಅಧ್ಯಕ್ಷ ಕೆ.ಎನ್.ಅಶೋಕ್, ಮಹಿಳಾ ಘಟಕದ ಅಧ್ಯಕ್ಷೆ ರೂಪಶ್ರೀ ಪರಮೇಶ್, ಶ್ರೀ ಶಿವಕುಮಾರ ಸ್ವಾಮಿ ಸೇವಾ ಟ್ರಸ್ಟ್ ಅಧ್ಯಕ್ಷ ಬಜ್ಜಿ ನಿಂಗಪ್ಪ, ಪ್ರಧಾನ ಕಾರ್ಯದರ್ಶಿ ಮಲ್ಲೇಶ್, ಖಜಾಂಚಿ ಮಾಯಪ್ಪ, ಸಂಚಾಲಕರಾದ ಅದೃಷ್ಟ ಮಾದಪ್ಪ, ಹೆಳವರಹುಂಡಿ ಮೂರ್ತಿ, ಬಸಪ್ಪ, ಪಿಎಸಿಸಿಎಸ್ ಅಧ್ಯಕ್ಷ ಪಿ.ನಟರಾಜು, ವಕೀಲ ಜ್ಞಾನೇಂದ್ರ ಮೂರ್ತಿ, ಉಪನ್ಯಾಸಕ ಮೂಗೂರು ಕುಮಾರಸ್ವಾಮಿ, ಪುಟ್ಟಬುದ್ಧಿ, ಅಂಗಡಿ ಎನ್.ಶೇಖರ, ಫ್ಯಾನ್ಸಿ ಮೋಹನ, ಕೆಬ್ಬೆಹುಂಡಿ ಶಿವಕುಮಾರ್, ದೊಡ್ಡನಹುಂಡಿ ನಿರಂಜನ, ಮುಡಕನಪುರ ನಾಗಭೂಷಣ್, ಓಂಕಾರ್ ಸ್ವಾಮಿ, ಕಿರಗಸೂರು ಮಹದೇಸ್ವಾಮಿ, ಬೆನಕನಹಳ್ಳಿ ವಿಜಯಕುಮಾರ್ ಹಾಗೂ ಇತರರು ಇದ್ದರು.

ಹುಣಸೂರು ಚೆಸ್ಕಾಂ ಸಬ್‌ಸ್ಟೇಷನ್‌ನಲ್ಲಿ ಬೆಂಕಿ: ಸಹಾಯಕ ಇಂಜಿನಿಯರ್‌ಗೆ ಗಾಯ

ಹುಣಸೂರು: ವಿದ್ಯುತ್ ಸಬ್‌ಸ್ಟೇಷನ್‌ನಲ್ಲಿ ನಿರ್ವಹಣೆ ಮಾಡುತ್ತಿದ್ದ ವೇಳೆ ಏಕಾಏಕಿ ಬೆಂಕಿ ಹೊತ್ತಿಕೊಂಡ ಪರಿಣಾಮ ಸಹಾಯಕ ಇಂಜಿನಿಯರ್ ಗಂಭೀರ ಗಾಯಗೊಂಡಿರುವ ಘಟನೆ ಹುಣಸೂರಿನಲ್ಲಿ ಸಂಭವಿಸಿದೆ.

ಹುಣಸೂರು ಚೆಸ್ಕಾಂ ಸಹಾಯಕ ಇಂಜಿನಿಯರ್ ಆನಂದ್ ಎಂಬುವವರೆ ಗಾಯಗೊಂಡವರಾಗಿದ್ದಾರೆ.

ಹುಣಸೂರು 66/11 ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಿರ್ವಹಣೆಗಾಗಿ ಬೆಳಗ್ಗೆ 10ರ ವೇಳೆಯಲ್ಲಿ ಸಬ್‌ಸ್ಟೇಷನ್‌ನಲ್ಲಿ ದುರಸ್ತಿ ಕಾರ್ಯ ನಿರ್ವಹಿಸುತ್ತಿದ್ದ ವೇಳೆ ಒಮ್ಮೆಲೆ ಬೆಂಕಿ ಹೊತ್ತಿಕೊಂಡು ಎದೆ, ಕೈ, ಕಾಲುಗಳಿಗೆ ತೀವ್ರ ಸುಟ್ಟಗಾಯಗಳಾಗಿವೆ ತಕ್ಷಣವೇ ಜೊತೆಗಿದ್ದ ಸಿಬ್ಬಂದಿಗಳು ಹುಣಸೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

ವಿಷಯ ತಿಳಿದ ಹುಣಸೂರು ಉಪ ವಿಭಾಗದ ಇ.ಇ.ಮಹೇಶ್ ಕುಮಾರ್, ಎಇಇ ಜಗದೀಶ್, ಜೆ.ಇ.ಚನ್ನಕೇಶವ ಸಹೋದ್ಯೋಗಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಬೆಂಕಿ ಅನಾಹುತಕ್ಕೆ ಕಾರಣವೇನೆಂದು ಪತ್ತೆ ಹಚ್ಚುತ್ತಿದ್ದಾರೆ ಎನ್ನಲಾಗಿದೆ.

ಇಂದು ವಿದ್ಯುತ್ ವ್ಯತ್ಯಯ

ಚುಂಚನಕಟ್ಟೆ, ಡಿ.9– ಸಾಲಿಗ್ರಾಮ ತಾಲೂಕಿನ ಚುಂಚನಕಟ್ಟೆ ವಿದ್ಯುತ್ ಸ್ವೀಕರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಕಾರಣ ಡಿ.10 ರಂದು ಬೆಳಗ್ಗೆ 10 ರಿಂದ ಸಂಜೆ 6ರವರೆಗೆ ಹಳಿಯೂರು, ಹೊಸಕೋಟೆ, ಕುಪ್ಪೆ, ಮಾಯಗೌಡನಹಳ್ಳಿ, ಮಾವತ್ತೂರು ಮತ್ತು ಕೆಸ್ತೂರು ಗ್ರಾಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಇನ್ನೂ ಪತ್ತೆಯಾಗದ ತಾಯಿ ಹುಲಿ

ಬನ್ನೇರುಘಟ್ಟಕ್ಕೆ ಹುಲಿ ಮರಿ ಸ್ಥಳಾಂತರ



ಹುಣಸೂರು, ಡಿ.9– ನಾಗರಹೊಳೆ ಉದ್ಯಾನವನದ ವೀರನ ಹೊಸಹಳ್ಳಿ ವನ್ಯಜೀವಿ ವಲಯದಂಚಿನ ಗುರುಪುರ ಗ್ರಾಮದ ಹೊಲದಲ್ಲಿ ಸಿಕ್ಕಿರುವ ಹುಲಿ ಮರಿಯ ತಾಯಿ ಎರಡನೇ ದಿನದ ಕಾರ್ಯಾಚರಣೆಯಲ್ಲೂ ಕಾಣಿಸಿಕೊಂಡಿಲ್ಲ.

ನಾಗರಹೊಳೆ ಉದ್ಯಾನದ ವೀರನಹೊಸಹಳ್ಳಿ ವನ್ಯಜೀವಿ ವಲಯದಂಚಿನಲ್ಲಿ ಶನಿವಾರ, ಭಾನುವಾರ ಇಡೀ ದಿನ ಥರ್ಮಲ್ ಡ್ರೋನ್ ಮೂಲಕ ತಾಯಿ ಹುಲಿಗಾಗಿ ಕಾರ್ಯಾಚರಣೆ ನಡೆಸಿದರೂ ಹುಲಿ ಮಾತ್ರ ಕಾಣಿಸಲೇ ಇಲ್ಲ. ಇತ್ತ ಹುಲಿ ಮರಿಗಳು ಸಹ ತಾಯಿಗಾಗಿ ಹಂಬಲಿಸುತ್ತಿವೆ.

ವೀರನಹೊಸಹಳ್ಳಿ ವಲಯ ಕಚೇರಿಯ ಅರಣ್ಯ ಸಿಬ್ಬಂದಿ ಆರೈಕೆಯಲ್ಲಿದ್ದರೂ ಮರಿಗಳ ಆರೋಗ್ಯದ ಹಿತ ದೃಷ್ಟಿಯಿಂದ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಂತೆ 3 ತಿಂಗಳ ಹೆಣ್ಣು ಹುಲಿ ಮರಿಯನ್ನು ಬನ್ನೇರುಘಟ್ಟದ ಪುನರ್ವಸತಿ ಕೇಂದ್ರಕ್ಕೆ ಸೋಮವಾರ ರಾತ್ರಿ ಸ್ಥಳಾಂತರಿಸಲಾಗಿದೆ.

ಹಳ್ಳಕ್ಕೆ ಉರುಳಿ ಬಿದ್ದ ಕಾರು



ಮೂಗೂರು: ಕಾರೊಂದು ಚಾಲಕನ ನಿಯಂತ್ರಣ ಕಳೆದುಕೊಂಡು ಸೇತುವೆಗೆ ಡಿಕ್ಕಿ ಹೊಡೆದು ಹಳ್ಳಕ್ಕೆ ಬಿದ್ದ ಘಟನೆ ಮಂಗಳವಾರ ಮುಂಜಾನೆ ರಾಷ್ಟ್ರೀಯ ಹೆದ್ದಾರಿ ಮೂಗೂರು ವೃತ್ತದ ಬಸ್ ನಿಲ್ದಾಣದ ಬಳಿ ನಡೆದಿದೆ.

ಮಂಡ್ಯದಿಂದ ಮಲೈಮಹದೇಶ್ವರ ಬೆಟ್ಟಕ್ಕೆ ಕಾರಿನಲ್ಲಿ ತೆರಳುತ್ತಿದ್ದ ನಿತಿನ್(26) ಹಾಗೂ ಮನೋಜ್ ರಾಜ್(28)ಕಾರಿನ ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ನಾಗಮಂಗಲದ ಬಳಿ ಹುಲಿ ಪ್ರತ್ಯಕ್ಷ

ಹನಗೋಡು: ಹನಗೋಡು ಹೋಬಳಿಯ ನಾಗಮಂಗಲ ಗ್ರಾಮದ ಹೊರವಲಯದ ಜಮೀನಿನಲ್ಲಿ ಮಂಗಳವಾರ ಹುಲಿ ಕಾಣಿಸಿಕೊಂಡು ದಾಳಿ ನಡೆಸಲು ಮುಂದಾಯಿತಾದರೂ ಗ್ರಾಮಸ್ಥರು ಪಾರಾಗಿದ್ದಾರೆ.

ಅರಸುಕಲ್ಲಹಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಯ ನಾಗಮಂಗಲ ಗ್ರಾಮದ ಬಳಿಯ ಜಮೀನಿನಲ್ಲಿ ಕೆಲಸ ಮಾಡಲು ತೆರಳುತ್ತಿದ್ದ ವೇಳೆಯೇ ಹುಲಿ ಘರ್ಜಿಸಿ ಗ್ರಾಮಸ್ಥರ ಮೇಲೆ ದಾಳಿ ಮಾಡಲು ಪ್ರಯತ್ನಿಸಿದೆ. ಘರ್ಜನೆ ಕೇಳಿ ಗಾಬರಿಗೊಂಡ ರೈತರು ಕೂಗುತ್ತಾ ಗ್ರಾಮಕ್ಕೆ ವಾಪಾಸ್ ಆಗಿ ಗ್ರಾಮಸ್ಥರಿಗೆ ಮಾಹಿತಿ ನೀಡಿದ್ದಾರೆ. ಗ್ರಾಮಸ್ಥರು ಸ್ಥಳಕ್ಕೆ ಬಂದು ನೋಡಿದಾಗ ದೊಡ್ಡ ಹುಲಿಯೊಂದು ಪಕ್ಕದ ಮುತ್ತುರಾಯನ ಹೊಸಹಳ್ಳಿ ಬೆಟ್ಟದ ಕಡೆಗೆ ಓಡಿ ಹೋಗಿದೆ. ವಿಷಯವನ್ನು ಅರಣ್ಯಾಧಿಕಾರಿಗಳಿಗೆ ತಿಳಿಸಿದ ಮೇರೆಗೆ ಹುಲಿ ಕಾಣಿಸಿಕೊಂಡ ಸುತ್ತಮುತ್ತಲಿನಲ್ಲಿ ಡಿಸಿಎಫ್ ಮಹಮ್ಮದ್ ಫಯಾಜ್ ಮಾರ್ಗದರ್ಶನದಲ್ಲಿ ಆರ್‌ಎಫ್‌ಓ ನಂದಕುಮಾರ್ ನೇತೃತ್ವದಲ್ಲಿ ಸಿಬ್ಬಂದಿಗಳು ಥರ್ಮಲ್‌ಡ್ರೋಣ್ ಬಳಸಿ ಕಾರ್ಯಾಚರಣೆ ಕೈಗೊಂಡಿದ್ದಾರೆ. ಮುತ್ತುರಾಯನಹೊಸಹಳ್ಳಿ ಬೆಟ್ಟದಲ್ಲಿ ಹುಲಿ ಓಡಾಡುತ್ತಿರುವುದನ್ನು ಗ್ರಾಮಸ್ಥರು ಮೊಬೈಲ್ ಮೂಲಕ ವೀಡಿಯೊ ಮಾಡಿದ್ದು, ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಕಣಗಾಲು ಡೇರಿಗೆ ಪ್ರತಿಮಾ ಅಧ್ಯಕ್ಷೆ, ಆರತಿ ಉಪಾಧ್ಯಕ್ಷರಾಗಿ ಆಯ್ಕೆ



ಬೆಟ್ಟದಪುರ: ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಸಮೀಪದ ಕಣಗಾಲು ಗ್ರಾಮದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತೆ ಪ್ರತಿಮಾ ಮಂಜುನಾಥ್ ಹಾಗೂ ಉಪಾಧ್ಯಕ್ಷರಾಗಿ ಆರತಿ ಕೃಷ್ಣಮೂರ್ತಿ ಅವಿರೋಧವಾಗಿ ಆಯ್ಕೆಯಾದರು.

ತಾಲೂಕಿನ ಕಣಗಾಲು ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಆವರಣದಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ಚುನಾವಣೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಜೆಡಿಎಸ್ ಬಂಬಲಿತ ಸದಸ್ಯೆ ಪ್ರತಿಮಾ ಮಂಜುನಾಥ್ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ಆರತಿ ಕೃಷ್ಣಮೂರ್ತಿ ತಲಾ ಒಂದೊಂದು ನಾಮಪತ್ರ ಸಲ್ಲಿಸಿದ್ದು ಇವರ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದ ಹಿತೇಂದ್ರ ಘೋಷಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡ ಮಹಾದೇವ್ ಮಾತನಾಡಿ ಕಣಗಾಲ್ ಗ್ರಾಮಸ್ಥರ ಸಹಕಾರದಿಂದ ನಮ್ಮ ಪಕ್ಷದ ಬೆಂಬಲಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಯ್ಕೆಯಾದ ಕಾರಣ ಸಂಘದ ಅಧಿಕಾರದ ಚುಕ್ಕಾಣಿ ಹಿಡಿಯಲು ಸಾಧ್ಯವಾಗಿದೆ. ಆದ್ದರಿಂದ ಸಂಘದ ಸರ್ವ ಸದಸ್ಯರು ಹಾಗೂ ಗ್ರಾಮಸ್ಥರಿಗೆ ಧನ್ಯವಾದಗಳು. ಸಂಘದ ನೂತನ ಅಧ್ಯಕ್ಷರು ತಮಗೆ ಸಿಕ್ಕಿರುವ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ಸಂಘದ ಅಭಿವೃದ್ಧಿಗೆ ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಂಘದ ನೂತನ ಉಪಾಧ್ಯಕ್ಷೆ ಆರತಿ ಕೃಷ್ಣಮೂರ್ತಿ, ಜಯಮ್ಮ, ಪಾರ್ವತಮ್ಮ, ಭಾರತಿ, ಶಿವಮ್ಮ, ಲತಾ, ಜಯಮ್ಮ, ಮುಖಂಡರಾದ ಶ್ರೀನಿವಾಸ್, ನಾಗಯ್ಯ, ರಮೇಶ್, ಸುಬ್ರಹ್ಮಣ್ಯ, ಅಣ್ಣೇಗೌಡ, ವಾಸು, ಪ್ರಕಾಶ್, ಸ್ವಾಮಿ, ಪ್ರಭಾಕರ್, ಜಗದೀಶ್, ಮಧು, ಗೋವಿಂದೇಗೌಡ, ಶ್ಯಾಮ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡುತ್ತಿರುವ ಲಯನ್ಸ್ ಶಾಲೆ

ಸರಗೂರು: ಪಟ್ಟಣದ ಲಯನ್ಸ್ ಅಕಾಡೆಮಿ ಶಾಲೆಯಲ್ಲಿ 36ನೇ ವರ್ಷದ 'ಸಾಂಸ್ಕೃತಿಕ ಸೌರಭ-36' ವಾರ್ಷಿಕೋತ್ಸವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮವನ್ನು ಲಯನ್ ಟಿ.ಹೆಚ್.ವೆಂಕಟೇಶ್ ಉದ್ಘಾಟಿಸಿ, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರೊಂದಿಗೆ ಉತ್ತಮ ಮೌಲ್ಯಗಳನ್ನು ಕಲಿಸುತ್ತಿರುವ ಲಯನ್ಸ್ ಶಾಲೆಯ ಕಾರ್ಯ ವೈಖರಿ ಶ್ಲಾಘನೀಯ. ಮುಂದಿನ ದಿನಗಳಲ್ಲಿ ಶಿಕ್ಷಣ ಸಂಸ್ಥೆ ಮತ್ತಷ್ಟು ಹೆಸರು ಮಾಡಲಿ. ಲಾಭದ ಗಳಿಕೆಯ ಬದಲಿಗೆ ಸಮಾಜ ಸೇವೆಯಲ್ಲಿ ನಿರಂತರವಾಗಿ ತೊಡಗಿಸಿಕೊಳ್ಳಲಿ, ಮಕ್ಕಳು ಇಲ್ಲಿ ನೀಡುವ ಉತ್ತಮ ಶಿಕ್ಷಣ ಪಡೆದು ಉನ್ನತ ಉದ್ದೆ ಅಲಂಕರಿಸಿ ಎಂದು ಕರೆ ನೀಡಿದರು.



ಸಂಸ್ಥೆ ಕಾರ್ಯದರ್ಶಿ ಲಯನ್ ಎಸ್.ಎಸ್.ಪ್ರಭುಸ್ವಾಮಿ ಮಾತನಾಡಿದರು. ವಿಶೇಷ ಆಹ್ವಾನಿತರಾದ ಲಯನ್ ಜಯಕುಮಾರ್, ಲಯನ್ ಸಿದ್ದೇಗೌಡ್ರು, ಲಯನ್ ಎಸ್.ವಾಸುಕಿ, ಲಯನ್ ಶಶಿಕುಮಾರ್, ಶಾಲೆ ಅಭಿವೃದ್ಧಿ ಕುರಿತು ಮಾತನಾಡಿದರು. ಲಯನ್ ಎಸ್.ಬಿ. ನಾಗರಾಜು, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮ್ಯಾನೇಜಿಂಗ್ ಟ್ರಸ್ಟಿ ಬ್ರಹ್ಮದೇವಯ್ಯ, ಶಾಲೆಯ ಪ್ರಾಂಶುಪಾಲ ಬಿ.ಡಿ.ದಾಸಾಚಾರಿ, ಮುಖ್ಯ ಶಿಕ್ಷಕಿ ಪದ್ಮಶ್ರೀ ಅವರನ್ನು ಅಭಿನಂದಿಸಲಾಯಿತು.

2024-25ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಮತ್ತು ಅತ್ಯುತ್ತಮ ಸಾಧನೆ ಮಾಡಿದ ಮಕ್ಕಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪಪಂ ಅಧ್ಯಕ್ಷೆ ಚೈತ್ರಸ್ವಾಮಿ, ಉಪಾಧ್ಯಕ್ಷ ವಿರೇಶ್, ಸದಸ್ಯರಾದ ಶ್ರೀನಿವಾಸ್, ವಿನಾಯಕ ಪ್ರಸಾದ್, ಲಯನ್ ಗೋಪಾಲ್, ಶಾಲೆಯ ಖಜಾಂಚಿ ಎಸ್.ವಿ.ಯೋಗೀಶ್, ನಿರ್ದೇಶಕರಾದ ಎಸ್.ನಾರಾಯಣ್, ಎಸ್.ಎಸ್.ಸೋಮಪ್ರಭ, ಸುರೇಶ್ ಜೈನ್, ಮೋಹನ್ ಕುಮಾರ್, ಶಾಲಾ ಪೋಷಕ ಸಮಿತಿಯ ಅಧ್ಯಕ್ಷ ಶ್ರೀನಿವಾಸ್, ಸಾಲಾ ಮಂತ್ರಿಮಂಡಲದ ಮುಖ್ಯಮಂತ್ರಿ ಎನ್.ಚಿರಾಗ್ ಇದ್ದರು.

ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಸಾಂಸ್ಕೃತಿಕ ಉಪಸಮಿತಿಗೆ ನೇಮಕ

ತಿ.ನರಸೀಪುರ, ಡಿ.9–ಮೈಸೂರು ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಸಾಂಸ್ಕೃತಿಕ ಉಪ ಸಮಿತಿಯ ಅಧ್ಯಕ್ಷರಾಗಿ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆಯಂತೆ ತಾಲೂಕಿನ ದೊಡ್ಡೇಬಾಗಿಲು ಗ್ರಾಮದ ತಾ.ಪಂ ಮಾಜಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನಸ್ವಾಮಿ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅಧಿಕೃತ ಜ್ಞಾಪನ ಆದೇಶದಲ್ಲಿ ತಿಳಿಸಿದ್ದಾರೆ.



ಸರ್ಕಾರಿ ಜಾಗವನ್ನು ಉಳಿಸಿದ ಉಪವಿಭಾಗಾಧಿಕಾರಿ

ಸಾಗುವಳಿ ಪತ್ರ ವಜಾಗೊಳಿಸಿ, ಕಟ್ಟೆ ಉಳಿಸಿದವರಿಗೆ ಅಭಿನಂದನೆ

ಹೆಚ್.ಡಿ.ಕೋಟೆ: ಕಟ್ಟೆ ಜಾಗಕ್ಕೆ ಅಕ್ರಮವಾಗಿ ಸಾಗುವಳಿ ಮಂಜೂರು ಮಾಡಿದ್ದ ಹಕ್ಕು ಪತ್ರವನ್ನು ಉಪ ವಿಭಾಗಾಧಿಕಾರಿಗಳು ರದ್ದು ಮಾಡಿ ಮತ್ತೆ ಕಟ್ಟೆಯನ್ನು ಉಳಿಸುವ ಮೂಲಕ ಸರ್ಕಾರಿ ಜಾಗ ಬೇರೆಯವರ ಪಾಲಾಗುವುದನ್ನು ತಪ್ಪಿಸಿದ್ದು, ಇದರಿಂದ ಗ್ರಾಮದ ಜನರಿಗೆ ತುಂಬಾ ಅನುಕೂಲವಾಗಿದೆ ಎಂದು ದಿ.ಚಿಕ್ಕಮಾದು ಅಭಿಮಾನಿ ಬಳಗದ ಅಧ್ಯಕ್ಷ ಜಿನ್ನಹಳ್ಳಿ ರಾಜನಾಯಕ ತಿಳಿಸಿದ್ದಾರೆ.

ಈ ಕುರಿತು ಪತ್ರಿಕೆ ಹೇಳಿಕೆ ನೀಡಿರುವ ಅವರು 1965-66ರಲ್ಲಿ ಕಂದಾಯ ಇಲಾಖೆಯ ಕೈತಪ್ಪಿನಿಂದ ಹೊಮ್ಮರಗಳ್ಳಿ ಗ್ರಾಮದ ಸರ್ವೆ ನಂಬರ್ 131ರಲ್ಲಿ ಒಂದು ಎಕರೆ 24 ಗುಂಟೆ ಕಟ್ಟೆ ಜಾಗವನ್ನು ತಹಸೀಲ್ದಾರ್ ಕಚೇರಿಯಿಂದ ವ್ಯಕ್ತಿಯೊಬ್ಬರು ಸಾಗುವಳಿ ಹಕ್ಕು ಪತ್ರ ಪಡೆದಿದ್ದರು. ಅವರ ನಿಧನದ ನಂತರ ಅವರ ಮಕ್ಕಳು ಪೌತಿ ಖಾತೆ ಮಾಡಿಸಿಕೊಂಡು ಕಟ್ಟೆ ಜಾಗವನ್ನು ಕೋಟ್ಯಾಂತರ ರೂ.ಗೆ ಬೇರೆಯವರಿಗೆ ಮಾರಾಟ ಮಾಡಲು ಪ್ರಯತ್ನ ಮಾಡಿದ್ದರು ಎಂದಿದ್ದಾರೆ.

ಈ ವಿಚಾರ ತಿಳಿದ ಗ್ರಾಮಸ್ಥರು ಕಟ್ಟೆ ಜಾಗವನ್ನು ಉಳಿಸುವಂತೆ ಶಾಸಕ ಅನಿಲ್ ಚಿಕ್ಕಮಾದು ಅವರಿಗೆ ಮನವಿ ಮಾಡಿದ್ದರು. ಶಾಸಕರು ಹುಣಸೂರು ಉಪ ವಿಭಾಗಾಧಿಕಾರಿಗಳಿಗೆ ಕಟ್ಟೆ ಜಾಗವನ್ನು ಪರಿಶೀಲನೆ ನಡೆಸಿ ಕಾನೂನು ರೀತಿ ಕ್ರಮ ಕೈಗೊಳ್ಳಲು ಪತ್ರ ಬರೆದಿದ್ದರು ಎಂದಿದ್ದಾರೆ.

ತಹಸೀಲ್ದಾರ್ ಮತ್ತು ಕಂದಾಯ ಅಧಿಕಾರಿಗಳ ವರದಿ ಪಡೆದು ಉಪ ವಿಭಾಗಾಧಿಕಾರಿಗಳು ಸಾಗುವಳಿ ಮಂಜೂರು ಮಾಡಿರುವ ಜಾಗವು ಕಟ್ಟೆ ಜಾಗ ಎಂದು ತಿಳಿದು ಬಂದ ಹಿನ್ನೆಲೆಯಲ್ಲಿ ಅಕ್ರಮವಾಗಿ ಮಂಜೂರು ಆಗಿದ್ದ ಸಾಗುವಳಿ ವಜಾ ಮಾಡಿ ಗ್ರಾಮದ ಕಟ್ಟೆ ಜಾಗವನ್ನು ಉಳಿಸಿ ಅನುಕೂಲ ಮಾಡಿದ್ದಾರೆ. ಹಾಗಾಗಿ ಶಾಸಕರಿಗೆ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಗ್ರಾಮ ಪಂಚಾಯಿತಿ ಸದಸ್ಯರಾದ ಮುರುಳಿ, ರವಿಕುಮಾರ್, ರಮೇಶ್, ರಾಜಣ್ಣ, ಮಹೇಶ್ ನಾಯಕ, ನಾಗರಾಜು, ದಾಸನಾಯಕ ಹೇಳಿಕೆ ಮೂಲಕ ಕೃತಜ್ಞತೆ ಸಲ್ಲಿಸಿದ್ದಾರೆ.

> ಭೂಗಳ್ಳರ ಪಾಲಾಗಬೇಕಾಗಿದ್ದ ಕಟ್ಟೆ ಜಾಗವನ್ನು ಶಾಸಕ ಅನಿಲ್ ಚಿಕ್ಕಮಾದು ಅವರ ಮಾರ್ಗದರ್ಶನದ ಮೂಲಕ ಅಧಿಕಾರಿಗಳು ಉಳಿಸಿದ್ದಾರೆ. ಸರ್ಕಾರಿ ಜಾಗ ಉಳಿವಿಗಾಗಿ ಹಲವಾರು ವರ್ಷಗಳಿಂದ ಹೋರಾಟ ಮಾಡಿದವರಿಗೆ ಇದು ಸಂದ ಜಯವಾಗಿದೆ.
> ದಿ.ಚಿಕ್ಕಮಾದು ಅಭಿಮಾನಿ ಬಳಗ

ಗ್ರಾಪಂ ವತಿಯಿಂದ ನಿವೃತ್ತ ಶಿಕ್ಷಕರಿಗೆ ಸನ್ಮಾನ



ಹುಲ್ಲಹಳ್ಳಿ: ನಂಜನಗೂಡು ತಾಲೂಕಿನ ಶಿರಮಳ್ಳಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹುಸ್ಕೂರು ಮತ್ತು ಬೆಳಲೆ ಶಿರಮಳ್ಳಿ ಸರ್ಕಾರಿ ಶಾಲೆಯಲ್ಲಿ ಇತ್ತೀಚೆಗೆ ನಿವೃತ್ತರಾದ ಶಿಕ್ಷಕರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು.

ಸನ್ಮಾನವನ್ನು ಸ್ವೀಕರಿಸಿದ ಮುಖ್ಯ ಶಿಕ್ಷಕ ಸ್ವಾಮಿ ಮಾತನಾಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಅಭಿವೃದ್ಧಿ ಅಧಿಕಾರಿ ಮತ್ತು ಸದಸ್ಯರುಗಳ ಸಂಪೂರ್ಣ ಸಹಕಾರದೊಂದಿಗೆ ನಮ್ಮ ಶಾಲೆಯನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲು ಸಾಧ್ಯವಾಯಿತು. ಎಲ್ಲ ಮೂಲ ಸೌಕರ್ಯದೊಂದಿಗೆ ಉತ್ತಮ ಶಿಕ್ಷಣವನ್ನು ನೀಡಲಾಯಿತು. ಇದನ್ನೇ ಮುಂದುವರೆಸಿದರೆ ನಮ್ಮ ಶಾಲೆ ಯಶಸ್ವಿಯಾಗಲು ಕಾರಣವಾಗುತ್ತದೆ ಎಂದರು.

ಗ್ರಾಮ ಪಂಚಾಯಿತಿ ಸದಸ್ಯ ಮಾದೇಶ್ ಶೆಟ್ಟಿ ಮಾತನಾಡಿದರು. ಈ ಸಂದರ್ಭದಲ್ಲಿ ಸನ್ಮಾನವನ್ನು ಸ್ವೀಕರಿಸಿದಂತಹ ನಿವೃತ್ತ ಮುಖ್ಯ ಶಿಕ್ಷಕರಾದ ಸ್ವಾಮಿ, ಮಹದೇವ್, ಪರಮಳ, ಅನ್ನಪೂರ್ಣ, ವರ್ಗಾವಣೆಗೊಂಡಿರುವ ಮುಖ್ಯ ಶಿಕ್ಷಕರಾದ ಶ್ರೀನಿವಾಸ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭಾಗ್ಯ ಸ್ವಾಮಿ, ಉಪಾಧ್ಯಕ್ಷೆ ರತ್ನಮ್ಮ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಯಾಸಿನ್ ಶರೀಫ್ ಸದಸ್ಯರುಗಳಾದ ಮಾದೇವ ಶೆಟ್ಟಿ, ಎನ್.ಮಹದೇವ್, ಎಸ್ ಪ್ರಭುಸ್ವಾಮಿ, ಅಂಕಶೆಟ್ಟಿ, ರುದ್ರಯ್ಯ, ದ್ವಾರಕೀಶ, ಲಿಂಗನಾಯಕ, ಕಾಳಮ್ಮ, ಎನ್.ಪ್ರೇಮ, ಸಣ್ಣಮ್ಮ, ಮಹದೇವಮ್ಮ, ರತ್ನಮ್ಮ, ಗೌರಮ್ಮ, ನಾಗಮ್ಮ, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಾದೇವಸ್ವಾಮಿ ಕಾರ್ಯದರ್ಶಿ ದೇವರಾಜ್, ಕಂಪ್ಯೂಟರ್ ಆಪರೇಟರ್ ಪೃಥ್ವಿ, ಸಿಬ್ಬಂದಿಗಳಾದ ಗಿರೀಶ್, ಮಲ್ಲೇಶ್, ಬೀರೇಶ್, ಮಹದೇವ್ ಸೇರಿದಂತೆ ಇನ್ನು ಮುಂತಾದ ಸಿಬ್ಬಂದಿ ವರ್ಗದವರು ಹಾಗೂ ಗ್ರಾಮಸ್ಥರು ಹಾಜರಿದ್ದರು.

ಶಾಸಕರ ಅನುದಾನದಿಂದ ವಿಶೇಷ ಚೇತನರಿಗೆ ತ್ರಿಚಕ್ರ ವಾಹನ

ಹುಣಸೂರು, ಡಿ.9– ವಿಶೇಷ ಚೇತನರಿಗೆ ತಮ್ಮ ಅಂಗವೈಕಲ್ಯವನ್ನು ಮೀರಿಸುವ ವಿಶೇಷ ಶಕ್ತಿ ಇರುತ್ತದೆ. ಅವರನ್ನು ಪ್ರೋತ್ಸಾಹಿಸುವ ಗುರುತರ ಜವಾಬ್ದಾರಿ ನಮ್ಮ ಮೇಲಿದೆ ಎಂದು ಶಾಸಕ ಜಿ.ಡಿ.ಹರೀಶ್ ಗೌಡ ವಿಶೇಷ ಚೇತನರಿಗೆ ತಮ್ಮ ಶಾಸಕರ ಅನುದಾನದಲ್ಲಿ ತ್ರಿಚಕ್ರ ವಾಹನವನ್ನು ಕೊಡಿಸುವೆ ಎಂದರು.

ನಗರದ ಗುರುಭವನದಲ್ಲಿ ಶ್ರೀ ಮೂರುರಮ್ಮ ವಿಶೇಷ ಚೇತನರ ಕ್ಷೇಮಾಭಿವೃದ್ಧಿ ಸಂಘ, ಸ್ವಾಮಿ ವಿವೇಕಾನಂದ ಯೂತ್ ಮ್ಯೂವ್‌ಮೆಂಟ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ರೋಟರಿ ಸಂಸ್ಥೆ, ರೋಟರಿ ಇನ್ನರ್ ವೀಲ್ಹ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಸಹಯೋಗದಲ್ಲಿ ನಡೆದ ಅಂತಾರಾಷ್ಟ್ರೀಯ ವಿಶೇಷ ಚೇತನರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ವಿಶೇಷ ಚೇತನರ ದಿನಾಚರಣೆಯನ್ನು ಉದ್ಘಾಟಿಸುತ್ತಿರುವ ಶಾಸಕ ಜಿ.ಡಿ.ಹರೀಶ್‌ಗೌಡ.

ಅಂಗವೈಕಲ್ಯತೆ ಹೊಂದಿದ್ದೇವೆ ಎಂದು ಜೀವನೋತ್ಸಾಹವನ್ನು ಕಳೆದುಕೊಳ್ಳಬೇಡಿ. ನಿಮ್ಮಲ್ಲಿ ಸಾಮಾನ್ಯರು ಸಾಧಿಸಲಾಗದ ಕಾರ್ಯಗಳನ್ನು ಸಾಧಿಸಿದ ವಿಶೇಷ ಚೇತನರ ಉದಾಹರಣೆಗಳಿವೆ. ಅದು ನಿಮಗೆ ಸ್ಪೂರ್ತಿಯಾಗಬೇಕು. ಇತ್ತೀಚಿನ ದಿನಗಳಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ವಿಶೇಷ ಚೇತನರು ನಾವು ಯಾರಿಗೇನು ಕಡಿಮೆ ಇಲ್ಲದಂತೆ ಸಾಧನೆ ಮಾಡಿ ತೋರಿಸಿದ್ದಾರೆ. ಸಮುದಾಯ ಅವರನ್ನು ಪ್ರೋತ್ಸಾಹಿಸುವ ಮತ್ತು ಜೀವನದ ಭರವಸೆ ನೀಡುವತ್ತ ಗಮನ ಹರಿಸಬೇಕೆಂದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಯಡಿ ವಿಶೇಷ ಚೇತನರಿಗೆ ಕಳೆದ ಸಾಲಿನಲ್ಲಿ 8 ತ್ರಿಚಕ್ರ ವಾಹನಗಳನ್ನು ವಿತರಿಸಲಾಗಿದೆ. ಆದರೂ ತಾಲೂಕಿನಲ್ಲಿ ಸಾಕಷ್ಟು ಮಂದಿಗೆ ತ್ರೀಚಕ್ರ ವಾಹನಗಳ ಅವಶ್ಯಕತೆ ಇದೆ ಎಂದು ತಿಳಿದು ಬಂದಿದೆ. ಹಾಗಾಗಿ 60 ವರ್ಷ ಮೀರಿದ ವಿಶೇಷ ಚೇತನರಿಗೆ ಶಾಸಕರ ಅನುದಾನದಲ್ಲಿ ತ್ರಿಚಕ್ರ ವಾಹನಗಳನ್ನು ವಿತರಿಸಲು ಸಿದ್ದನಿದ್ದೇನೆ. ಇದಕ್ಕಾಗಿ ಅನುದಾನವನ್ನು ಮೀಸಲಿಟ್ಟಿದ್ದು ಫಲಾನುಭವಿಗಳು ತಮ್ಮನ್ನು ಭೇಟಿ ಮಾಡುವಂತೆ ಕೋರಿದರು.

ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಪ್ರಾಯೋಜಕತ್ವದಡಿ ಎರಡು ವೀಲ್ಹ್ ಚೇರ್‌ಗಳನ್ನು ಫಲಾನುಭವಿಗಳಿಗೆ ಶಾಸಕ ಜಿ.ಡಿ. ಹರೀಶ್‌ಗೌಡ ವಿತರಿಸಿದರು. ಕಾರ್ಯಕ್ರಮದಲ್ಲಿ ಸ್ವಾಮಿ ವಿವೇಕಾನಂದ ಯೂತ್‌ಮೂವ್ ಮೆಂಟ್‌ನ ನಿರ್ದೇಶಕಿ ಡಾ.ಎಸ್.ಆರ್. ದೀಪಶ್ರೀ, ಮೂರೂರಮ್ಮ ವಿಕಲ ಚೇತನರ ಕ್ಷೇಮಾಭಿವೃದ್ಧಿ ಒಕ್ಕೂಟದ ಅಧ್ಯಕ್ಷ ಕೃಷ್ಣೇಗೌಡ, ಕಾರ್ಯದರ್ಶಿ ಪುಷ್ಪಲತಾ, ಸದಸ್ಯೆ ಮಂಗಳಗೌರಿ, ಎಸ್‌ವಿವೈಎಂನ ಪರೀನಾ, ರೋಟರಿ ಅಧ್ಯಕ್ಷ ಹೆಚ್.ಆರ್.ಕೃಷ್ಣಕುಮಾರ್, ಕಾರ್ಯದರ್ಶಿ ಶಾಮಣ್ಣ, ನಗರಸಭಾ ಮಾಜಿ ಸದಸ್ಯ ದೇವರಾಜ್.ಸಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ಪಿ.ಮಹದೇವ್, ಟಿಪಿ ಪಿಸಿಎಂಎಸ್ ನಿರ್ದೇಶಕ ಗೋವಿಂದೇಗೌಡ, ವಿಕಲಚೇತನರು, ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ತಾಲೂಕು ಸಂಯೋಜಕ ರಮೇಸ್.ಎಂ.ಪಿ, ಉಪಸ್ಥಿತರಿದ್ದರು.

ರಾಜಶೇಖರಯ್ಯ ನಿಧನ



ಕಂಪಲಾಪುರ: ಇಲ್ಲಿನ ಬೆಂಗಳೂರು ಟಿಫಾನಿಸ್ ಮಾಲಿಕ ಎ.ಸಿ.ರಾಜಶೇಖರಯ್ಯ (ಬೆಂಗಳೂರಯ್ಯ) ಅನಾರೋಗ್ಯದಿಂದ ಮಂಗಳವಾರ ಸಂಜೆ ನಿಧನರಾದರು. ಅವರಿಗೆ 82 ವರ್ಷ ವಯಸ್ಸಾಗಿತ್ತು. ಹಲವು ದಶಕಗಳ ಹಿಂದೆ ಹೋಟೆಲ್ ನಡೆಸುತ್ತಿದ್ದರಿಂದ ಇವರು ಬೆಂಗಳೂರಯ್ಯ ಎಂದೇ ಹೆಸರು ವಾಸಿಯಾಗಿದ್ದರು. ಮೃತರು ಪತ್ನಿ, ನಾಲ್ವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಬುಧವಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿದೆ.

ರೈತರ ಸಮಸ್ಯೆಗಳ ನಿವಾರಣೆ ಮಾಡುವಲ್ಲಿ ಸರ್ಕಾರದ ವೈಫಲ್ಯ ಆರೋಪ: ಮೈಸೂರಲ್ಲಿ ಬಿಜೆಪಿ ಪ್ರತಿಭಟನೆ

ಮೈಸೂರು, ಡಿ.9(ಎಂಕೆ)– ರಾಜ್ಯ ಸರ್ಕಾರ ರೈತರ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಸಂಪೂರ್ಣ ವಿಫಲವಾಗಿದ್ದು, ಕಬ್ಬಿಗೆ ಏಕ ಬೆಲೆ ನಿಗದಿ ಮಾಡದೆ, ಬೆಂಬಲ ಬೆಲೆಯಡಿ ಭತ್ತ ಮತ್ತು ಮೆಕ್ಕೆ ಜೋಳ ಖರೀದಿಸದೆ ರಾಜ್ಯದ ರೈತರನ್ನು ಸಂಕಷ್ಟಕ್ಕೆ ದೂಡಿದೆ ಎಂದು ಆರೋಪಿಸಿ ಬಿಜೆಪಿ ಮೈಸೂರು ನಗರ ಮತ್ತು ಜಿಲ್ಲಾ ರೈತ ಮೋರ್ಚಾ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಕಾಡಾ ಕಚೇರಿ ಆವರಣದಲ್ಲಿ ಜಮಾವಣೆಗೊಂಡ ನೂರಾರು ಬಿಜೆಪಿ ಕಾರ್ಯಕರ್ತರು, ಮುಖಂಡರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು. ರಾಜ್ಯ ಸರ್ಕಾರ ಕಳೆದ ಎರಡೂವರೆ ವರ್ಷದಲ್ಲಿ ಮಾನವ–ವನ್ಯಜೀವಿ ಸಂಘರ್ಷದಿಂದ 84 ಸಾವುಗಳಾಗಿದ್ದು, ನೊಂದ ಕುಟುಂಬದವರಿಗೆ ಪರಿಹಾರ ನೀಡಿಲ್ಲ. ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ರೈತರ ಬೆಳೆಗಳು ಸಂಪೂರ್ಣ ಹಾಳಾಗಿದ್ದು, ಸಮೀಕ್ಷೆ ನಡೆಸಿ ಬೆಳೆ ಪರಿಹಾರ ನೀಡಿಲ್ಲ. ರೈತರಿಗೆ ವಿದ್ಯುತ್ ಪೂರೈಕೆಯಲ್ಲಿ ಹಾಗೂ ನೀರಾವರಿ ಯೋಜನೆಗಳನ್ನು ಕೈಗೊಳ್ಳುವಲ್ಲಿ ವಿಫಲವಾಗಿದೆ. ಆಹಾರ ಪದಾರ್ಥಗಳಿಗೆ ತಗುಲುತ್ತಿರುವ ರೋಗ ನಿಯಂತ್ರಣಕ್ಕೆ ಕ್ರಮವಹಿಸಿಲ್ಲ. ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಿಲ್ಲ ಹಾಗೂ ರೈತರಿಗೆ ಆರ್ಥಿಕ ಬೆಂಬಲ ನೀಡುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ದೂರಿದರು.

ಬಿಜೆಪಿ ನಗರಾಧ್ಯಕ್ಷ ಹಾಗೂ ಮಾಜಿ ಶಾಸಕ ಎಲ್.ನಾಗೇಂದ್ರ ಮಾತನಾಡಿ, ರಾಜ್ಯ ಸರ್ಕಾರ ಕಬ್ಬು ಬೆಳೆಗಾರರ ಶ್ರಮಕ್ಕೆ ಬೆಂಬಲ ನೀಡಿದೆ ಅವರ ಭವಿಷ್ಯದ ಚೆಲ್ಲಾಟವಾಡುತ್ತಿದೆ. ಮೆಕ್ಕೆಜೋಳ ಬೆಳೆದ ರೈತರು ಮಾರಾಟ ಮಾಡಲಾಗದೆ ಕಂಗಾಲಾಗಿದ್ದಾರೆ. ಭತ್ತ ಖರೀದಿ ಕೇಂದ್ರಗಳಾಗಿಲ್ಲ. ಕಳೆದೊಂದು ವರ್ಷದಿಂದ ಅಧಿಕಾರಕ್ಕಾಗಿ ಕಿತ್ತಾಡುತ್ತಿದ್ದಾರೆಯೇ ಹೊರತು ರೈತರ ಅನುಕೂಲಕ್ಕೆ ಯಾವುದೇ ಕ್ರಮ ಕೈಗೊಂಡಿಲ್ಲ. ರಾಜ್ಯ ಸರ್ಕಾರ ವರ್ತನೆ ಇದೇ ರೀತಿ ಮುಂದುವರೆದರೆ ಬೆಳಗಾವಿ ಸುವರ್ಣಸೌಧ ಮುತ್ತಿಗೆ ಹಾಕುತ್ತಿರುವಂತೆ ವಿಧಾನಸೌಧಕ್ಕೂ ಮುತ್ತಿಗೆ ಹಾಕಿ ಬಂದ್ ಮಾಡಲಾವುದು ಎಂದು ಎಚ್ಚರಿಕೆ ನೀಡಿದರು.

ಜಿಲ್ಲಾಧ್ಯಕ್ಷ ಕೆ.ಎನ್.ಸುಬ್ಬಣ್ಣ ಮಾತನಾಡಿ, ಬೆಳಗಾವಿ ಸುವರ್ಣಸೌಧಕ್ಕೆ 20 ಸಾವಿರ ಜನ ರೈತರು ಮುತ್ತಿಗೆ ಹಾಕುತ್ತಿರುವುದನ್ನು ಬೆಂಬಲಿಸಿ ಮೈಸೂರಲ್ಲಿ ಪ್ರತಿಭಟನೆ ನಡೆಸುತ್ತಿದ್ದೇವೆ. ರಾಜ್ಯ ಸರ್ಕಾರ ಮೆಕ್ಕೆಜೋಳಕ್ಕೆ ಮತ್ತು ಕಬ್ಬಿಗೆ ಬೆಂಬಲ ಬೆಲೆ ಕೊಡಬೇಕು ಎಂದು ಆಗ್ರಹಿಸಿದರು.

ಮಾಜಿ ಶಾಸಕ ಹರ್ಷವರ್ಧನ್ ಮಾತನಾಡಿ, ರಾಜ್ಯದಲ್ಲಿ ಕಳೆದೆರಡು ವರ್ಷದಿಂದ ಮಳೆ–ಬೆಳೆ ಉತ್ತಮವಾಗಿ ಬಂದಿದೆ. ಆದರೆ ಬೆಳೆ ಬೆಳೆಯುವ ರೈತರಿಗೆ ಸಿಗಬೇಕಾದ ಬೆಂಬಲ ಬೆಲೆ ಸಿಕ್ತಾ ಇಲ್ಲ. ರೈತರು ಸಂಕಷ್ಟದಲ್ಲಿದ್ದಾರೆ. ರಾಜ್ಯ ಸರ್ಕಾರ ಇದೇ ರೀತಿ ನಡೆದರೆ ರೈತ ವಿರೋಧ ವರ್ತನೆ ತೋರಿದರೆ, ಮುಂದಿನ ದಿನಗಳಲ್ಲಿ ರೈತರು ಬೀದಿಗಿಳಿದು ಪ್ರತಿಭಟನೆ ನಡೆಸಲಿದ್ದಾರೆ ಎಂದು ಎಚ್ಚರಿಸಿದರು.



ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಮೈಸೂರು ನಗರ ಮತ್ತು ಜಿಲ್ಲಾ ರೈತ ಮೋರ್ಚಾ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ರೈತರನ್ನು ಭಿಕ್ಷುಕರನ್ನಾಗಿ ಮಾಡಿದೆ: ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಮಿರ್ಲೆ ಶ್ರೀನಿವಾಸ್‌ಗೌಡ ಮಾತನಾಡಿ, ಹಾಲಿಗೆ ಪ್ರೋತ್ಸಾಹ ಧನ ಕೊಟ್ಟಿಲ್ಲ. ರೈತ ನಿಧಿ ನಿಲ್ಲಿಸಿದ್ದಾರೆ. ರೈತರಿಗೆ ಸಾಲ ಕೊಡ್ತಾ ಇಲ್ಲ. ಬೆಳೆ ವಿಮೆ ಹಣ ಬರ್ತಾ ಇಲ್ಲ. ಕಬ್ಬಿಗೆ ಏಕ ರೀತಿಯ ಬೆಲೆ ನಿಗದಿಯಾಗಿಲ್ಲ. ಅಡಿಕೆಗೂ ಬೆಂಬಲ ಬೆಲೆ ನೀಡದ ರಾಜ್ಯ ಸರ್ಕಾರ ಅನ್ನ ಬೆಳೆಯುವ ರೈತರನ್ನು ಭಿಕ್ಷುಕರನ್ನಾಗಿ ಮಾಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಮಾಜಿ ಮೇಯರ್ ಶಿವಕುಮಾರ್, ಮಾಜಿ ಕಾಂಪೋಸ್ಟ್ ಅಧ್ಯಕ್ಷ ಮಹದೇವಯ್ಯ, ರಾಜ್ಯ ಅಲ್ಪಸಂಖ್ಯಾತ ಮೋರ್ಚಾ ಕಾರ್ಯದರ್ಶಿ ಪ್ರಭಾಕರ್ ಜೈನ್, ಜಿಪಂ ಮಾಜಿ ಸದಸ್ಯರಾದ ಸದಾನಂದ, ಕೆಂಪಣ್ಣ, ಬಿಜೆಪಿ ನಗರಉಪಾಧ್ಯಕ್ಷ ಅರುಣ್‌ಕುಮಾರ್‌ಗೌಡ, ಕಾರ್ಯದರ್ಶಿ ಪ್ರಶಾಂತ್‌ಗೌಡ, ಬಿಜೆಪಿ ರೈತ ಮೋರ್ಚಾ ಜಿಲ್ಲಾ ಕಾರ್ಯದರ್ಶಿಗಳಾದ ಎನ್.ವಿ. ವಿನಯ್ ಕುಮಾರ್, ಪರೀಕ್ಷಿತ್ ರಾಜೇ ಅರಸ್, ಎನ್.ಎಂ.ರಾಮಚಂದ್ರ, ನಗರಾಧ್ಯಕ್ಷ ದೇವರಾಜ್, ಕಾರ್ಯದರ್ಶಿಗಳಾದ ಮೈ.ಪು.ರಾಜೇಶ್, ಬಿ.ಎಂ. ರಘು, ರುದ್ರಮೂರ್ತಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಳಿನಿ, ಎಸ್ ಸಿ ಮೋರ್ಚಾ ಜಿಲ್ಲಾಧ್ಯಕ್ಷ ಅನಿಲ್, ಮುಖಂಡ ಇಲವಾಲ ಗೋಪಾಲ್ ರಾವ್, ಮಾಧ್ಯಮ ಸಂಚಾಲಕ ಮಹದೇವಸ್ವಾಮಿ ಮತ್ತಿತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಆಂಧ್ರ ಕಿಂಗ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಐ ಆ್ಯಮ್ ಗಾಡ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಧುರಂದರ್ (ಹಿ)	4 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಮಸ್ತಿ ಪೊಲೀಸ್ (ತ)	4 ಪ್ರದರ್ಶನಗಳು
ಗಾಯಿತ್ರಿ	
---	---
ರಾಜಕಮಲ್	
ತೇರೇ ಇಷ್ಕ್ ಮೇ (ತ)	4 ಪ್ರದರ್ಶನಗಳು
ಸಂಗಂ	
ಧುರಂದರ್ (ಹಿ)	3 ಪ್ರದರ್ಶನಗಳು
ಲಿಡೋ	
ಮಾಸ್ ಯಾತ್ರಾ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಧರ್ಮಂ (ಕ)	4 ಪ್ರದರ್ಶನಗಳು

ಇಂಡಿಗೋ ಸಮಸ್ಯೆ ಕೇಂದ್ರ ಸರಕಾರದ ವೈಫಲ್ಯ

ಪಾಲಿಕೆ ಮಾಜಿ ಸದಸ್ಯ ಕೆ.ವಿ. ಮಲ್ಲೇಶ್ ಆರೋಪ

ಮೈಸೂರು, ಡಿ. 9– ದೇಶದ ವಿಮಾನಯಾನ ವ್ಯವಸ್ಥೆಯಲ್ಲಿ ಅಲ್ಲೋಲ, ಕಲ್ಲೋಲ ಉಂಟಾಗಿರುವುದು ಕೇಂದ್ರ ಸರಕಾರದ ವೈಫಲ್ಯವಲ್ಲದೆ ಬೇರೇನೂ ಅಲ್ಲ. ಒಂದು ವ್ಯವಸ್ಥೆಯಲ್ಲಿನ ಏಕಸ್ವಾಮ್ಯ ಹೇಗೆ ದುಷ್ಪರಿಣಾಮ ಉಂಟುಮಾಡುತ್ತದೆ ಎಂಬುದಕ್ಕೆ ಇದು ನಿದರ್ಶನವಾಗಿದೆ ಎಂದು ಮೈಸೂರು ನಗರ ಪಾಲಿಕೆ ಮಾಜಿ ಸದಸ್ಯರು ಹಾಗೂ ಅನಿಕೇತನ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ವಿ. ಮಲ್ಲೇಶ್ ಅಭಿಪ್ರಾಯಪಟ್ಟಿದ್ದಾರೆ.



ವಿಮಾನ ಸಿಬ್ಬಂದಿಯ ಕರ್ತವ್ಯದ ಅವಧಿಗೆ ಸಂಬಂಧಪಟ್ಟಂತೆ ಕೇಂದ್ರ ಸರಕಾರ ಹೊಸದಾಗಿ ಜಾರಿಗೊಳಿಸಿದ ನಿಯಮ ಎಫ್‌ಡಿಟಿಎಲ್ (ವಿಮಾನ ಸಂಚಾರ ಕರ್ತವ್ಯಾವಧಿಯ ಮಿತಿ) ಈ ದ್ವಂದ್ವಕ್ಕೆ ಕಾರಣವಾಗಿದೆ. ಫೈಲಟ್‌ಗಳು ಹಾಗೂ ವಿಮಾನಯಾನ ಸಿಬ್ಬಂದಿ ಎಷ್ಟುಗಂಟೆಗಳ ಕಾಲ ಕರ್ತವ್ಯ ನಿರ್ವಹಿಸಬೇಕು ಎಂಬ ನಿಯಮಗಳ ಗುಚ್ಛವೇ ಈ ಎಫ್‌ಡಿಟಿಎಲ್. ಆದರೆ, ಎಫ್‌ಡಿಟಿಎಲ್ ಬಗ್ಗೆ ಫೈಲಟ್‌ಗಳು ಬೇಸರ ವ್ಯಕ್ತಪಡಿಸಿದ್ದು, ಇದು ಅಸುರಕ್ಷಿತ ಮತ್ತು ಒತ್ತಡ ಹೇರುವ ತಂತ್ರ ಎಂದು ವಿಶ್ಲೇಷಿಸುತ್ತಾರೆ.

ಉದ್ಯೋಗಿಗಳ ಒತ್ತಡ ನಿವಾರಣೆ, ಸುರಕ್ಷಿತ ವಾತಾವರಣ ಒದಗಿಸಬೇಕಾದದ್ದು ಕೇಂದ್ರ ಸರಕಾರದ ಜವಾಬ್ದಾರಿ. ಆದರೆ, ಒತ್ತಡ ಹೇರುವ, ಅಸುರಕ್ಷಿತ ನಿಯಮಗಳನ್ನು ಜಾರಿಗೊಳಿಸಿ ಉದ್ಯಮಪತಿಗಳ ಅನುಕೂಲಕ್ಕೆ ತಕ್ಕಂತೆ ನಿಯಮ ಜಾರಿಗೊಳಿಸುವುದು ಅಕ್ಷಮ್ಯ. ಕೇಂದ್ರ ಸರಕಾರ ಇಂತಹ ಅಕ್ಷಮ್ಯಗಳನ್ನು ಮೇಲಿಂದ ಮೇಲೆ ಮಾಡುತ್ತಲೇ ಇದೆ ಅದರ ಪರಿಣಾಮ ಇಂದು ಇಂಡಿಗೋ ವಿಮಾನಯಾನ ಸಂಸ್ಥೆಯಲ್ಲಿ ಧ್ವನಿಸಿದೆ.

ಶೈಕ್ಷಣಿಕ ಸಂಸ್ಥೆಗಳ ಸುತ್ತಮುತ್ತ ಉತ್ತಮ ರಸ್ತೆ, ಒಳಚರಂಡಿ ಅಭಿವೃದ್ಧಿ

ಎಂಎಲ್‌ಸಿ ವಿವೇಕಾನಂದರಿಗೆ ಸಚಿವ ರಹೀಂಖಾನ್ ಭರವಸೆ

ಮೈಸೂರು, ಡಿ.9(ಎಂಕೆ)– ದಕ್ಷಿಣ ಶಿಕ್ಷಕರ ಕ್ಷೇತ್ರ ವ್ಯಾಪ್ತಿಯ ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಯ ನಗರಸಭೆ, ಪುರಸಭೆ, ಪಪಂ ವ್ಯಾಪ್ತಿಯಲ್ಲಿರುವ ಸರ್ಕಾರಿ ಶೈಕ್ಷಣಿಕ ಸಂಸ್ಥೆಗಳ ಸಂಪರ್ಕ ಕಲ್ಪಿಸುವ ರಸ್ತೆಗಳ ದುರಸ್ಥಿಗೆ ವಿಧಾನ ಪರಿಷತ್ ಸದಸ್ಯ ವಿವೇಕಾನಂದ ಆಗ್ರಹಿಸಿದರು.



ವಿವೇಕಾನಂದ

ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಶೈಕ್ಷಣಿಕ ಸಂಸ್ಥೆಗಳ ರಸ್ತೆಗಳ ದುರಸ್ತಿ, ಕಾಂಪೌಂಡ್ ಮತ್ತು ಕಟ್ಟಡಗಳ ಅಭಿವೃದ್ಧಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳ ತಿಳಿಸುವಂತೆ ಪೌರಾಡಳಿತ ಸಚಿವ ರಹಿಂಖಾನ್ ಅವರಲ್ಲಿ ಮನವಿ ಮಾಡಿದರಲ್ಲದೆ ನಿರ್ಲಕ್ಷ್ಯ ಮಾಡದೆ ಸಂಬಂಧಿಸಿದ ಅಧಿಕಾರಿ ವರ್ಗಕ್ಕೆ ತುರ್ತಾಗಿ ಕಾಮಗಾರಿಗಳನ್ನು ಕೈಗೊಳ್ಳುವಂತೆ ಸೂಚಿಸುವಂತೆ ಕೋರಿದರು.

ಪ್ರತಿಕ್ರಿಯಿಸಿದ ಸಚಿವರು, ಮತ್ತೊಮ್ಮೆ ಈ ವಿಷಯವಾಗಿ ಚರ್ಚಿಸಿ, ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಅಗತ್ಯವಿರುವ ಕಾಮಗಾರಿಗಳನ್ನು ಕೂಡಲೇ ಕೈಗೊಳ್ಳುವಂತೆ ಹಾಗೂ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು. ಶೈಕ್ಷಣಿಕ ಸಂಸ್ಥೆಗಳ ಸುತ್ತಮುತ್ತಲಿನ ರಸ್ತೆ, ಒಳಚರಂಡಿ ಅಭಿವೃದ್ಧಿ ಮಾಡಲಾಗುವುದು ಎಂದು ತಿಳಿಸಿದರು.

ಡಿ. 28ಕ್ಕೆ 'ಫ್ಯೂಚರ್ ಮಾಡೆಲ್ ಆಫ್ ಇಂಡಿಯಾ ಸೀಜನ್–7' ಫ್ಯಾಷನ್ ಶೋ

ಮೈಸೂರು,ಡಿ.9(ಎಂಟಿವೈ)– ದಸರಾ ವಸ್ತು ಪ್ರದರ್ಶನ ಆವರಣದ ಪಿ.ಕಾಳಿಂಗ ರಾವ್ ಗಾನ ಮಂಟಪದಲ್ಲಿ ಡಿ.28ರಂದು ಸಂಜೆ 5.30ಕ್ಕೆ 'ಫ್ಯೂಚರ್ ಮಾಡೆಲ್ ಆಫ್ ಇಂಡಿಯಾ ಸೀಜನ್ – 7' ಫ್ಯಾಷನ್ ಶೋ ಸ್ಪರ್ಧೆ ಆಯೋಜಿಸಲಾಗಿದೆ ಎಂದು ವಸ್ತು ಪ್ರದರ್ಶನ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರುದ್ರೇಶ್ ತಿಳಿಸಿದ್ದಾರೆ.

ದಸರಾ ವಸ್ತು ಪ್ರದರ್ಶನ ಆವರಣದಲ್ಲಿರುವ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರವು ಮೇ.ತಿಬ್ಬಾಸ್ ಗ್ರೂಪ್ ಮಾಡೆಲಿಂಗ್ ಕಂಪನಿ ಸಂಯುಕ್ತಾಶ್ರಯದಲ್ಲಿ 'ಫ್ಯಾಷನ್ ಶೋ' ನಡೆಸುತ್ತಿದೆ ಈ ಶೋನಲ್ಲಿ ಆಧುನಿಕ ಉಡುಪು ಬಳಸದೇ, ಸಾಂಪ್ರದಾಯಿಕ ಉಡುಪು ತೊಟ್ಟು ಫ್ಯಾಷನ್ ಶೋನಲ್ಲಿ ಪಾಲ್ಗೊಳ್ಳಲಿದ್ದಾರೆ. ಸ್ಪರ್ಧೆಯಲ್ಲಿ ಚಿಕ್ಕ ಮಕ್ಕಳಿಂದ 70 ವರ್ಷದ ಹಿರಿಯರು ಭಾಗವಹಿಸಬಹುದು. ಮಾಡಲಿಂಗ್‌ನಲ್ಲಿ ಆಸಕ್ತಿ ಇರುವವರು ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದು ಎಂದರು.



ದಸರಾ ವಸ್ತು ಪ್ರದರ್ಶನದ ಸಭಾಂಗಣದಲ್ಲಿ ಫ್ಯಾಷನ್ ಶೋ ಸ್ಪರ್ಧೆಯ ಪೋಸ್ಟರ್ ಅನ್ನು ವಸ್ತು ಪ್ರದರ್ಶನ ಪ್ರಾಧಿಕಾರ ಸಿಇಒ ರುದ್ರೇಶ್ ಬಿಡುಗಡೆ ಮಾಡಿದರು.

ತಿಬ್ಬಾಸ್ ಗ್ರೂಪ್ ಮಾಡೆಲಿಂಗ್ ಕಂಪನಿಯ ಸಂಸ್ಥಾಪಕ ಡಿ.ಸಿ.ನಾಗೇಶ್ ಮಾತನಾಡಿ, ಭಾರತೀಯರು ಧರಿಸುವ ಸಾಂಪ್ರದಾಯಿಕ ಉಡುಪು ಧರಿಸಿ ಫ್ಯಾಷನ್ ಶೋ ನಡೆಸಲು ಉದ್ದೇಶಿಸಲಾಗಿದೆ ಪ್ರತಿಯೊಂದು ಜಿಲ್ಲೆ ಎಲ್ಲಾ ರಾಜ್ಯದಲ್ಲೂ ಬೇರೆ ಬೇರೆ ಸಾಂಪ್ರದಾಯಿಕ ಉಡುಪು ಧರಿಸುವ ಸಂಪ್ರದಾಯವಿದೆ. ಈ ಹಿನ್ನೆಲೆಯಲ್ಲಿ ಮೈಸೂರಲ್ಲಿ ಸಾಂಪ್ರದಾಯಿಕ ಉಡುಪು ಧರಿಸಿ ಫ್ಯಾಷನ್ ಶೋ ನಡೆಸಲಾಗುತ್ತಿದೆ. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಕ್ರೌನ್, ನಗದು ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಲಾಗುವುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ತಿಬ್ಬಾಸ್ ಗ್ರೂಪ್ ಮಾಡೆಲಿಂಗ್ ಕಂಪನಿಯ ಡೈರೆಕ್ಟರ್ ಐ.ಡಿ.ಶಿವಾನಿ, ಸಾಂಸ್ಕೃತಿಕ ಸಮಿತಿಯ ಕಾರ್ಯಾಧ್ಯಕ್ಷ ಪ್ರಕಾಶ್, ಛಾಯಾ ಇನ್ನಿತರರು ಇದ್ದರು.

ನಿರ್ಮಲಾ ಸೀತಾರಾಮನ್ ಬಗ್ಗೆ ಸಿಎಂ ಸಿದ್ದರಾಮಯ್ಯ ಅಸಂಬದ್ಧ ಹೇಳಿಕೆಗೆ ಖಂಡನೆ

ಮೈಸೂರು, ಡಿ. 9– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರ ಹಣ ಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಏಕವಚನದಲ್ಲಿ, ಅಗೌರವದಿಂದ ಸಂಭೋದನೆ ಮಾಡಿರುವುದು ರಾಜ್ಯ ಕಾಂಗ್ರೆಸ್‌ನ ಮಹಿಳಾ ವಿರೋಧಿ ಸಂಸ್ಕೃತಿಗೆ ಹಿಡಿದ ಕೈಗನ್ನಡಿ ಎಂದು ಬಿಜೆಪಿ ಮುಖಂಡರಾದ ಹೇಮಾನಂದೀಶ ಅಸಮಾಧಾನ ಹೊರಹಾಕಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಿದ್ದರಾಮಯ್ಯ ಇತ್ತೀಚೆಗೆ ಮಿಸ್ಟರ್, ಮಿಸೆಸ್ ಎಂತೋಳೋ ಅವಳು ನಿರ್ಮಲಾ ಸೀತಾರಾಮನ್ ಎಂದು ಸಂಭೋದಿಸುವ ಮೂಲಕ ಮಹಿಳೆಯರಿಗೆ ಅಗೌರವ ತೋರಿದ್ದಾರೆ. ಮಹಿಳೆಯರ ಯಾರೇ ಆಗಲಿ ಮಾತನಾಡುವಾಗ ಗೌರವಯುತವಾಗಿ ಮಾತನಾಡಬೇಕು ಎಂಬ ಪರಿಜ್ಞಾನ ಸಿಎಂ ಸ್ಥಾನದಲ್ಲಿ ಇರುವವರಿಗೆ ಇಲ್ಲದಿರುವುದು ಅತ್ಯಂತ ದುರಾದೃಷ್ಟಕರ ಮತ್ತು ದುರಂಹಕಾರವನ್ನು ಎತ್ತಿ ತೋರಿಸುತ್ತದೆ.

ಸೋನಿಯಾ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿಯವರ ಬಗ್ಗೆ ಮಾತನಾಡುವಾಗಲೂ ಇದೇ ರೀತಿ ಏಕವಚನದಲ್ಲಿ ಎಂತವಳೊ ಅವಳು ಎಂದು ಸಂಭೋದಿಸುವ ಧೈರ್ಯ, ತಾಕತ್ತು ಸಿದ್ದರಾಮಯ್ಯನವರಿಗೆ ಇದೇಯಾ? ಎಂದು ಪ್ರಶ್ನಿಸಿದ್ದಾರೆ. ಅಲ್ಲದೆ ತಮ್ಮ ಪಕ್ಷದ ಮಹಿಳಾ ಹೈ ಕಮಾಂಡ್ ಮುಂದೆ ಕೈಕಟ್ಟಿ ಮಾತನಾಡುವ ಸಿದ್ದರಾಮಯ್ಯನವರು ಬೇರೆ ಮಹಿಳೆಯರ ಬಗ್ಗೆ ಮಾತನಾಡುವಾಗ ಏಕವಚನದಲ್ಲಿ ಮಾತನಾಡುವುದು ಸಾಮಾನ್ಯ ಮಹಿಳೆಯರಿಗೆ ಮಾಡುವ ಅಪಮಾನ ಮತ್ತು ಅತ್ಯಂತ ಖಂಡನೀಯ ವಿಚಾರ ಎಂದಿದ್ದಾರೆ.

ನಾಳೆಯಿಂದ ಮೈಸೂರಲ್ಲಿ ಅಂತರ ವಿವಿಗಳ ಕ್ರೀಡಾಕೂಟ

ಮೈಸೂರು, ಡಿ.9(ಜಿಎ)–ತೋಟಗಾರಿಕೆ ವಿಜ್ಞಾನಗಳ ವಿಶ್ವ ವಿದ್ಯಾನಿಲಯದ ವತಿಯಿಂದ ಡಿ.11 ರಿಂದ 14 ರವರೆಗೆ ಮೈಸೂರು ವಿವಿಯ ಓವಲ್ ಮೈದಾನದಲ್ಲಿ 16ನೇ ಅಂತರ ಮಹಾವಿದ್ಯಾಲಯಗಳ ಕ್ರೀಡಾ ಕೂಟ ಕ್ರೀಡೋತ್ಕರ್ಷ ಆಯೋಜಿಸಲಾಗಿದೆ ಎಂದು ಡೀನ್ ಡಾ. ಚಂದ್ರಶೇಖರ ಹಂಚಿನಮನಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.11 ರಂದು 11 ಗಂಟೆಗೆ ಖೋ ಖೋ ಪಟು ಚೈತ್ರ ಕ್ರೀಡಾಕೂಟಕ್ಕೆ ಚಾಲನೆ ನೀಡಲಿದ್ದಾರೆ. ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ಬಾಗಲಕೋಟೆ ಮಹಾ ವಿದ್ಯಾಲಯದ ಕುಲಪತಿ ಡಾ.ವಿಷ್ಣುವರ್ಧನ್, ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ಪ್ರಾಧ್ಯಾಪಕರಾದ ಡಾ.ಸಿ.ವೆಂಕಟೇಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲಾ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ ಎಂದರು.

ಡಿ.14ರಂದು ಮಧ್ಯಾಹ್ನ 2ಗಂಟೆಗೆ ಕ್ರೀಡಾಕೂಟ ಸಮಾರೋಪ ಸಮಾರಂಭ ನಡೆಯಲಿದ್ದು, ಶಾಸಕ ಜಿ.ಟಿ. ದೇವೇಗೌಡ, ವಿಶ್ರಾಂತ ಕುಲಪತಿ ಡಾ.ಎಸ್.ಬಿ. ದಂಡಿನ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್ ಅಂಗಡಿ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಸಿಇಒ ಕೆ.ರುದ್ರೇಶ್, ಆಗಮಿಸಲಿದ್ದಾರೆ ಎಂದರು.

ಕ್ರೀಡಾಕೂಟದಲ್ಲಿ ತೋಟಗಾರಿಕ ವಿಜ್ಞಾನಗಳ ವಿಶ್ವ ವಿದ್ಯಾನಿಲಯದ ಹತ್ತು ಮಹಾವಿದ್ಯಾಲಯಗಳಿಂದ 630 ವಿಧ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಖೋ ಖೋ, ಕಬ್ಬಡಿ, ವಾಲಿಬಾಲ್, ಬಾಸ್ಕೆಟ್ ಬಾಲ್ ನಂತಹ ಗುಂಪು ಸ್ಪರ್ಧೆ ಮತ್ತು ಎಲ್ಲಾ ರೀತಿ ಅಥ್ಲೆಟಿಕ್ ಸ್ಪರ್ಧೆಗಳು ನಡೆಯಲಿವೆ. ಉತ್ತಮ ಪ್ರದರ್ಶನ ನೀಡಿದ ವಿದ್ಯಾರ್ಥಿಗಳನ್ನು ರಾಷ್ಟ್ರಮಟ್ಟದ ಅಂತರ ವಿವಿ ಕ್ರೀಡಾಕೂಟಕ್ಕೆ ನಾಮನಿರ್ದೇಶನ ಮಾಡಲಾಗುತ್ತದೆ ಎಂದರು. ಸುದ್ದಿಗೋಷ್ಠಿಯಲ್ಲಿ ಡಾ. ರಾಮೇಗೌಡ, ಶಿವಕುಮಾರ್, ಗಿರೀಶ್ ಉಪಸ್ಥಿತರಿದ್ದರು.

ಚಂದನದಲ್ಲಿ ಉಷಾ ನರಸಿಂಹನ್

ಮೈಸೂರು, ಡಿ. 9 – ಮೈಸೂರಿನ ಹಿರಿಯ ಲೇಖಕಿ ಉಷಾ ನರಸಿಂಹನ್ ಅವರ ನೇರ ಸಂದರ್ಶನ ದೂರದರ್ಶನದ ಚಂದನದಲ್ಲಿ 'ಶುಭೋದಯ ಕರ್ನಾಟಕ' ಕಾರ್ಯಕ್ರಮದಲ್ಲಿ ಡಿಸೆಂಬರ್ 10ರಂದು ಬೆಳಿಗ್ಗೆ 8 ಗಂಟೆಗೆ ಪ್ರಸಾರವಾಗಲಿದೆ. ಕಥೆ, ಕಾದಂಬರಿಗಳ ಮೂಲಕ ಪ್ರಸಿದ್ಧರಾಗಿರುವ ಉಷಾ ಅವರ 'ಆರ್ಯಾವರ್ತ' ಹೊಸ ಕಾದಂಬರಿಯನ್ನು ಬೆಂಗಳೂರಿನ ಅಂಕಿತ ಪ್ರಕಾಶನ ಪ್ರಕಟಿಸಿದ್ದು, ಕಳೆದ ಭಾನುವಾರವಷ್ಟೇ ಬಿಡುಗಡೆಗೊಂಡಿದೆ.



ಲೋಕಸಭೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಚರ್ಚೆ: ಬ್ಯಾಲೆಟ್ ಪೇಪರ್ ವ್ಯವಸ್ಥೆಗೆ ಮರಳಲು ವಿಪಕ್ಷಗಳ ಪಟ್ಟು

ನವದೆಹಲಿ, ಡಿ.9– ಎಸ್‌ಐಆರ್ ಮಾಡಲು ಕಾನೂನಿನಲ್ಲಿ ಅವಕಾಶ ಇಲ್ಲ, ದೇಶಾದ್ಯಂತ ಹಲವು ರಾಜ್ಯಗಳಲ್ಲಿ ನಡೆಸುತ್ತಿರುವ ಎಸ್‌ಐಆರ್ ಕೂಡಲೇ ನಿಲ್ಲಿಸಬೇಕು, ಚುನಾವಣಾ ಆಯೋಗದ ಅಧಿಕಾರಿಗಳ ನೇಮಕ ಸಮಿತಿಯಲ್ಲಿ ಸಿಜೆಐ, ರಾಜ್ಯಸಭೆ ವಿಪಕ್ಷ ನಾಯಕ ಸೇರ್ಪಡೆಯಾಗಬೇಕು, ಚುನಾವಣಾ ಸಮಯದಲ್ಲಿ ಖಾತೆಗಳಿಗೆ ಹಣ ಹಾಕುವ ವ್ಯವಸ್ಥೆ ನಿಲ್ಲಿಸಬೇಕು ಎಂದು ಕಾಂಗ್ರೆಸ್ ನಾಯಕ ಮನೀಶ್ ತಿವಾರಿ ಆಗ್ರಹಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ಲೋಕಸಭೆಯಲ್ಲಿ ನಡೆದ ಚರ್ಚೆಯಲ್ಲಿ ಮಾತನಾಡಿದ ಅವರು, ನಿಷ್ಪಕ್ಷಪಾತ ಚುನಾವಣೆ ನಡೆಸಲು ಆಯೋಗವನ್ನು ರಚಿಸಲಾಯಿತು. ಆದರೆ ಇಂದು ಆಯೋಗದ ಕಾರ್ಯವೈಖರಿ ಬಗ್ಗೆ ಪ್ರಶ್ನೆ ಎತ್ತುವ ಪರಿಸ್ಥಿತಿ ಬಂದಿದೆ. ಪ್ರಜಾಪ್ರಭುತ್ವ ಭರವಸೆ ಮೇಲೆ ನಡೆಯುತ್ತದೆ. ಮತದಾನ ಮಾಡುವ ಜನರಿಗೆ ಸರಿಯಾದ ವ್ಯಕ್ತಿಗೆ ತಮ್ಮ ಮತ ತಲುಪಿದೆಯೇ ಎಂದು ಸ್ಪಷ್ಟವಾಗಬೇಕು. ಆದರೆ ಈಗ ಇವಿಎಂ ಕೂಡ ಹ್ಯಾಕ್ ಆಗಬಹುದು ಎಂದು ಸಾಬೀತಾಗಿದೆ ಎಂದರು.

ಇವಿಎಂ ಸೋರ್ಸ್ ಕೋಡ್ ಮಿಷನ್ ತಯಾರಿಸುವ ಕಂಪನಿ ಅಥವಾ ಆಯೋಗ ಯಾರ ಬಳಿ ಇದೆ. ನಾನು ಕೇಳಿದ ಪ್ರಶ್ನೆಗೆ ಈವರೆಗೂ ಸರ್ಕಾರ ಉತ್ತರ ನೀಡಿಲ್ಲ. ಅನುಮಾನ ಬಗೆಹರಿಸಲು 100% ವಿವಿಪ್ಯಾಟ್ ಎಣಿಕೆಯಾಗಬೇಕು. ಇಲ್ಲದಿದ್ದರೆ ಬ್ಯಾಲೆಟ್ ಪೇಪರ್ ವ್ಯವಸ್ಥೆಗೆ ಮರಳಬೇಕು. ಮುಂದುವರಿದ ದೇಶಗಳು ಬ್ಯಾಲೆಟ್ ಪೇಪರ್‌ಗೆ ಏಕೆ ಮರಳಿವೆ. ಮಷಿನ್ ಹ್ಯಾಕ್ ಆಗಬಹುದು ಎನ್ನುವ ಅನುಮಾನ ಅವರಿಗೂ ಇದೆ. ಬ್ಯಾಲೆಟ್ ಪೇಪರ್ ಎಣಿಕೆಗೆ ವಿಳಂಬ ಆದರೂ ಪರವಾಗಿಲ್ಲ. ಕನಿಷ್ಠ ಜನರ ನಂಬಿಕೆ ಗಟ್ಟಿಯಾಗಿರುತ್ತೆ ಎಂದು ಹೇಳಿದರು.

ಅಖಿಲೇಶ್ ಯಾದವ್ ಮಾತನಾಡಿ, ರಾಂಪುರ ಬೈ ಎಲೆಕ್ಷನ್‌ನಲ್ಲಿ ನಮಗೆ ಮತಗಳವು ಅರಿವಿಗೆ ಬಂದಿದೆ, ಮತದಾನದ ದಿನ ಪೊಲೀಸರು ಬಿಜೆಪಿ ಪರವಾಗಿ ಕೆಲಸ ಮಾಡುತ್ತಿದ್ದರು. ಎಸ್ಪಿ ಮತದಾರರು ಮನೆಯಿಂದ ಹೊರಗೆ ಬಾರದ ಹಾಗೇ ಮಾಡಿದರು. ಸಾಕ್ಷ್ಯಾಧಾರಗಳ ಜೊತೆಗೆ ಆಯೋಗಕ್ಕೆ ದೂರು ನೀಡಿದರು. ಆದರೂ ಕ್ರಮ ತೆಗೆದುಕೊಂಡಿಲ್ಲ. ಚುನಾವಣೆಯಲ್ಲಿ ಒಮ್ಮೆ ಅವರು ಇವರು ಗೆಲ್ಲುವುದು ಸಾಮಾನ್ಯ. ಆದರೆ ಆಯೋಗ ನಿಷ್ಪಪಾತವಾಗಿರಬೇಕು.

ಮಿಲ್ಕಿಪುರ ಉಪಚುನಾವಣೆಯಲ್ಲೂ ಅಕ್ರಮ ನಡೆದಿದೆ. ಕಾಂಗ್ರೆಸ್ ನೀಡಿದ ಮೂರು ಬದಲಾವಣೆಗಳು ಆಗಬೇಕು. ಚುನಾವಣೆ ಬ್ಯಾಲೆಟ್ ಪೇಪರ್ ಮೂಲಕ ಆಗಬೇಕು, ಇವಿಎಂ ಮೇಲೆ ಸಾಕಷ್ಟು ಪ್ರಶ್ನೆಗಳಿವೆ. ತಂತ್ರಜ್ಞಾನದಲ್ಲಿ ಮುಂದುವರಿದ ದೇಶಗಳು ಇವಿಎಂ ಕೈಬಿಡಲಾಗಿದೆ. ಭಾರತದಲ್ಲಿ ನಾವು ಯಾಕೆ ಬ್ಯಾಲೆಟ್ ಪೇಪರ್‌ಗೆ ಮರಳಬಾರದು ಎಂದು ಪ್ರಶ್ನಿಸಿದರು.

ಬಿಜೆಪಿ ಸಂಸದ ಸಂಜಯ್ ಜೈಸ್ವಾಲ್ ಮಾತನಾಡಿ, ಮನೀಶ್ ತಿವಾರಿ ಚುನಾವಣಾ ಮುನ್ನ ಹತ್ತು ಸಾವಿರ ಖಾತೆಗೆ ವರ್ಗಾವಣೆ ಮಾಡಿದ್ದರ ಬಗ್ಗೆ ಮಾತನಾಡಿದರು. ಇದು ನಿಲ್ಲಿಸುವ ಮೊದಲು ಅವೈಜ್ಞಾನಿಕ ಘೋಷಣೆಗಳನ್ನು ನಿಲ್ಲಿಸಬೇಕು. ಬಿಹಾರದಲ್ಲಿ ಪ್ರತಿ ಮನೆಗೂ ಸರ್ಕಾರಿ ಉದ್ಯೋಗ ನೀಡುವ ಭರವಸೆ ನೀಡಿದರು, ಇದಕ್ಕೂ ಮೊದಲು ನ್ಯಾಯ ಯೋಜನೆಯ ಬಗ್ಗೆ ಮಾತನಾಡಿದರು ಇದಕ್ಕೆಲ್ಲ ಹಣ ಎಲ್ಲಿಂದ ಬರುತ್ತದೆ ಎಂದು ಕೇಳಿದರು. ಮತದಾರರು ಯಾರು ವೋಟ್ ಚೋರಿ ಬಗ್ಗೆ ಮಾತನಾಡುತ್ತಿಲ್ಲ. ಅವರಿಗೆ ಮತಗಳ್ಳತನ ಆಗುತ್ತೆ ಎಂದು ಗೊತ್ತಿಲ್ಲ, ಕಾಂಗ್ರೆಸ್ ದೇಶದಲ್ಲಿ ಮೊದಲು ಬೂತ್ ಕ್ಯಾಪ್ಚರ್ ಮಾಡಿದ್ದು, ರಾಜೀವ್ ಗಾಂಧಿ ಹತ್ಯೆಯಾದಾಗ ದೇಶದಲ್ಲೇ ಚುನಾವಣೆ ಮುಂದೂಡಲಾಯಿತು. ತುರ್ತು ಪರಿಸ್ಥಿತಿ ಹೇರಿ ಚುನಾವಣಾ ವ್ಯವಸ್ಥೆಯನ್ನು ಪ್ರಶ್ನಿಸಿತು ಎಂದು ಕಾಂಗ್ರೆಸ್ ನಾಯಕರಿಗೆ ತಿರುಗೇಟು ನೀಡಿದರು.

ತ್ರಿಮತಸ್ಥ ಬ್ರಾಹ್ಮಣ ವಧು–ವರರ ಸಮಾವೇಶ

ಮೈಸೂರು, ಡಿ. 9 – ಬೆಂಗಳೂರಿನ ಬ್ರಾಹ್ಮಣ ಕಂಕಣ ಮಾಹಿತಿ ಸಭಾ ವತಿಯಿಂದ ಮೈಸೂರಿನ ಬ್ರಾಹ್ಮಿನ್ ಸರ್ಕಲ್ ಸಹಯೋಗದಲ್ಲಿ ಡಿ. 14 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ ಜೆಎಲ್‌ಬಿ ರಸ್ತೆಯ ಶ್ರೀ ನಾದಬ್ರಹ್ಮ ಸಂಗೀತ ಸಭಾದಲ್ಲಿ ತ್ರಿಮತಸ್ಥ ಬ್ರಾಹ್ಮಣ ವಧು–ವರರ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಆಸಕ್ತ ವಧು–ವರರು ಮೊ. 9342734832 ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳಲು ಕೋರಲಾಗಿದೆ.

ಪಂಚ ಗ್ಯಾರಂಟಿಗಳ ಅರ್ಹ ಫಲಾನುಭವಿಗಳಿಗೆ ತಲುಪಿಸಿ

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕು ಅಧ್ಯಕ್ಷ ಗುರುಸ್ವಾಮಿ ಅಧಿಕಾರಿಗಳಿಗೆ ಸೂಚನೆ

ಮೈಸೂರು,ಡಿ.9(ಎಂಟಿವೈ)– ಎಲ್ಲಾ ಜಾತಿ, ಧರ್ಮಗಳ ಬಡ ಜನರ ಏಳಿಗೆಗಾಗಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವುದರೊಂದಿಗೆ ಹೊಸ ಫಲಾನುಭವಿಗಳ ನೋಂದಣಿಗೆ ಕ್ರಮ ಕೈಗೊಳ್ಳಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕು ಸಮಿತಿ ಅಧ್ಯಕ್ಷ ಗುರುಸ್ವಾಮಿ ತಿಳಿಸಿದರು.

ಮೈಸೂರಿನ ನಜ್ಜರ್‌ಬಾದ್‌ನಲ್ಲಿರುವ ಮಿನಿ ವಿಧಾನಸೌಧದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಎಲ್ಲಾ ವರ್ಗದ ಬಡಜನರಿಗೆ ನೆರವಾಗುವ ನಿಟ್ಟಿನಲ್ಲಿ ಐದು ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದೆ. ಈ ಯೋಜನೆಗಳು ಯಾವುದೇ ಒಂದು ಜಾತಿ, ಧರ್ಮಕ್ಕೆ ಸೀಮಿತವಾದ ಯೋಜನೆಗಳಲ್ಲ. ಎಲ್ಲಾ ಜಾತಿ, ಧರ್ಮದ ಬಡ ಜನರು ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯ ಪಡೆದು ಗೌರವಯುತವಾಗಿ ಜೀವನ ಸಾಗಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮುಂದಾಗಬೇಕು. ಯೋಜನೆಗಳ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಿರುವವರಿಗೆ ನೆರವಾಗಬೇಕು ಎಂದರು.



ಮೈಸೂರಿನ ಮಿನಿ ವಿಧಾನಸೌಧದಲ್ಲಿನ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸಭೆಯಲ್ಲಿ ತಾಲೂಕು ಸಮಿತಿಯ ಅಧ್ಯಕ್ಷ ಗುರುಸ್ವಾಮಿ ಮಾತನಾಡಿದರು.

ಈಗಾಗಲೇ ರಾಜ್ಯದಾದ್ಯಂತ ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದು, ಲಕ್ಷಾಂತರ ಮಂದಿ ಸೌಲಭ್ಯ ಪಡೆದುಕೊಳ್ಳುತ್ತಿದ್ದಾರೆ. ಅಲ್ಲದೆ, ಕಳೆದ ಎರಡು ವರ್ಷದಿಂದ ಸರ್ಕಾರ ಗ್ಯಾರಂಟಿ ಯೋಜನೆಯನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗುತ್ತಿದೆ ಮುಂದಿನ ದಿನದಲ್ಲೂ ಗ್ಯಾರಂಟಿ ಯೋಜನೆಗಳ ಯಶಸ್ವಿಗೆ ಅಧಿಕಾರಿಗಳು ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಅನ್ನಭಾಗ್ಯ ಯೋಜನೆಯ ಕೆಲ ಫಲಾನುಭವಿಗಳ ಬಿಪಿಎಲ್ ಪಡಿತರ ಚೀಟಿಯನ್ನು ಎಪಿಎಲ್ ಕಾರ್ಡ್ ಆಗಿ ಪರಿವರ್ತಿಸಲಾಗಿದೆ ಎಂಬ ದೂರು ಕೇಳಿ ಬಂದಿದೆ. ತೆರಿಗೆ ಪಾವತಿದಾರರು ಎಂಬ ಕಾರಣಕ್ಕೆ ಹಲವಾರು ಬಿಪಿಎಲ್ ಕಾರ್ಡ್‌ನ್ನು ಎಪಿಎಲ್ ಕಾರ್ಡ್ ಆಗಿ ಮಾರ್ಪಡಿಸಲಾಗಿದೆ. ಎಪಿಎಲ್ ಕಾರ್ಡ್‌ಗೆ ಪರಿವರ್ತಿಸುವ ಮುನ್ನ ಕೂಲಂಕುಷವಾಗಿ ಪರಿಶೀಲಿಸಬೇಕು. ಅನಗತ್ಯವಾಗಿ ಅರ್ಹರ ಕಾರ್ಡ್‌ಗಳನ್ನು ಕಿತ್ತುಕೊಳ್ಳುವ ಪ್ರಯತ್ನ ಮಾಡಬಾರದು. ಕೆಲವರು ಸಾಲ ಸೌಲಭ್ಯ ಪಡೆಯುವಾಗ ತೆರಿಗೆ ಪಾವತಿಸಿರುತ್ತಾರೆ. ಅದನ್ನು ಎಪಿಎಲ್ ಕಾರ್ಡ್ ಆಗಿ ಪರಿವರ್ತಿಸುವುದಕ್ಕೆ ಮಾನದಂಡವಾಗಿಸಬಾರದು. ವಾಸ್ತವಾಂಶ ಪರಿಶೀಲಿಸಿ, ನೈಜ ಫಲಾನುಭವಿಗಳು ಅನ್ನಭಾಗ್ಯ ಯೋಜನೆಯಿಂದ ವಂಚಿತರಾಗದಂತೆ ಕಟ್ಟೆಚ್ಚರ ವಹಿಸಬೇಕು ಎಂದು ತಿಳಿಸಿದರು.

ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ನೋಂದಣಿ ಮಾಡಿಕೊಳ್ಳುವವರಿಗೆ ಅಗತ್ಯ ದಾಖಲೆ ಪರಿಶೀಲಿಸಿ ನೋಂದಣಿ ಮಾಡಿಕೊಡಬೇಕು. ತಾಲೂಕಿನಲ್ಲಿ ಯುವನಿಧಿ ಯೋಜನೆಗೆ ಒಟ್ಟು 5,646 ಅಭ್ಯರ್ಥಿಗಳು ನೋಂದಣಿಯಾಗಿದ್ದಾರೆ. ಸೆಪ್ಟೆಂಬರ್ ಅಂತ್ಯದವರೆಗೆ 12.87 ಕೋಟಿ ರೂ. ಯೋಜನೆಯ ಫಲಾನುಭವಿಗಳಿಗೆ ತಲುಪಿದೆ ಎಂದರು.

ಶಕ್ತಿ ಯೋಜನೆಯಡಿ ತಾಲೂಕಿನ ವ್ಯಾಪ್ತಿಗೆ ಬರುವ ಸಾತಗಳ್ಳಿ ಘಟಕದಿಂದ ಒಟ್ಟು 2.6 ಕೋಟಿ ಮಹಿಳಾ ಪ್ರಯಾಣಿಕರು ಉಚಿತವಾಗಿ ಸಾರಿಗೆ ಬಸ್‌ನಲ್ಲಿ ಪ್ರಯಾಣಿಸಿದ್ದಾರೆ. ಅದಕ್ಕಾಗಿ 44.27 ಕೋಟಿ ರೂ. ಸಾರಿಗೆ ಸಂಸ್ಥೆಗೆ ಭರಿಸಲು ಸರ್ಕಾರ ಕ್ರಮ ಕೈಗೊಂಡಿದೆ. ಶಾಲಾ, ಕಾಲೇಜು ಮಕ್ಕಳಿಗೆ ತೊಂದರೆ ಉಂಟಾಗದಂತೆ ನಿಗದಿತ ಸಮಯಕ್ಕೆ ಬಸ್‌ಗಳು ಸಂಚರಿಸಬೇಕು ಎಂದು ಸೂಚನೆ ನೀಡಿದರು.

ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಿ.ಕೃಷ್ಣ ಮಾತನಾಡಿದರು. ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕು ಸಮಿತಿಯ ಸದಸ್ಯರಾದ ಬಿ.ರವಿ, ರಾಣಿ, ಎಂ. ಸೋಮಣ್ಣ, ಕರೀಗೌಡ, ಹೆಚ್.ಡಿ.ಚನ್ನಯ್ಯ, ತಾಲೂಕು ಪಂಚಾಯಿತಿ ಪ್ರಗತಿ ಸಹಾಯಕರಾದ ಕಿಶೋರ್, ವಿಷಯ ನಿರ್ವಾಹಕರಾದ ಸೋಮಶೇಖರ್ ಹಾಗೂ ವಿವಿಧ ಇಲಾಖೆಗಳ ತಾಲೂಕು ಅಧಿಕಾರಿಗಳು ಪಾಲ್ಗೊಂಡಿದ್ದರು.

ಡಿಎವಿ ಪಬ್ಲಿಕ್ ಶಾಲೆ ವಾರ್ಷಿಕೋತ್ಸವ



ಮೈಸೂರಿನ ಡಿಎವಿ ಪಬ್ಲಿಕ್ ಶಾಲೆಯ ವಾರ್ಷಿಕ ದಿನ 'ಶಿಶಿರೋತ್ಸವ' ಮಾನಸಗಂಗೋತ್ರಿಯ ಬಯಲು ರಂಗ ಮಂದಿರದಲ್ಲಿ ನಡೆಯಿತು. ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಕಾರ್ಯಕ್ರಮ ಉದ್ಘಾಟಿಸಿದರು. ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ ಅಧ್ಯಕ್ಷ ಕೆ.ಬಿ. ಲಿಂಗರಾಜು, ಶಾಲೆ ಅಧ್ಯಕ್ಷ ಎನ್. ಸಚ್ಚಿದಾನಂದಮೂರ್ತಿ, ಕಾರ್ಯದರ್ಶಿ ಆರ್. ಆನಂದ್, ಶಾಲೆಯ ಸಿಇಒ ಶ್ರೀಮತಿ ಎಂ.ಎ. ಜಯಶ್ರೀ, ಪ್ರಾಂಶುಪಾಲರಾದ ಶ್ರೀಮತಿ ಕಾವ್ಯಶ್ರೀ ಬಸಪ್ಪ, ಉಪ ಪ್ರಾಂಶುಪಾಲರಾದ ಶ್ರೀಮತಿ ಟಿ.ಎಂ. ಕಾವ್ಯ ಉಪಸ್ಥಿತರಿದ್ದರು.

ಸರ್ಕಾರ ಮತ್ತೆ ಟಿಪ್ಪು ಜಯಂತಿ ಆಚರಿಸಬೇಕು; ಕಾಂಗ್ರೆಸ್ ಶಾಸಕ ಕಾಶಪ್ಪನವರ್ ಒತ್ತಾಯ



ಬಿಜೆಪಿ ನಾಯಕರು ಕಿಡಿ

ಬೆಳಗಾವಿ, ಡಿ.9– ಕರ್ನಾಟಕದಲ್ಲಿ ಟಿಪ್ಪು ಜಯಂತಿ ವಿವಾದ ಮತ್ತೆ ಭುಗಿಲೆದ್ದಿದ್ದು, ಬಿಜೆಪಿ ನಾಯಕರು ಕಿಡಿಕಾರಿದ್ದಾರೆ. ಕಾಂಗ್ರೆಸ್ ಶಾಸಕ ಕಾಶಪ್ಪನವರ್ ವಿಧಾನಸಭೆಯ ಕಲಾಪದಲ್ಲಿ ಟಿಪ್ಪು ಜಯಂತಿಯನ್ನು ಮತ್ತೆ ಆರಂಭಿಸುವಂತೆ ಪ್ರಸ್ತಾಪಿಸಲು ನಿರ್ಧರಿಸಿದ್ದಾರೆ.

ಹಿಂದಿನ ಅವಧಿಯಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಸಿದ್ದರಾಮಯ್ಯನವರು ಈ ಸಂಪ್ರದಾಯವನ್ನು ಪ್ರಾರಂಭಿಸಿದ್ದರು ಮತ್ತು ನಂತರ ಕೊಡಗಿನಲ್ಲಿ ನಡೆದ ಹಿಂಸಾತ್ಮಕ ಪ್ರತಿಭಟನೆ ಸೇರಿದಂತೆ ವ್ಯಾಪಕ ಪ್ರತಿಭಟನೆಗಳ ನಂತರ ಅದಕ್ಕೆ ಬ್ರೇಕ್ ಹಾಕಿದ್ದರು. ಈ ಪ್ರತಿಭಟನೆಯ ನಂತರ, ಟಿಪ್ಪುವಿನ ಜನ್ಮ ದಿನಾಚರಣೆಯನ್ನು ಸರಳವಾಗಿ ಆಚರಿಸಲಾತ್ತಿತ್ತು. ಕ್ರಮೇಣ ಅದನ್ನು ಸ್ಥಗಿತಗೊಳಿಸಲಾಯಿತು.

ಈಗ ಹುನಗುಂದ ಶಾಸಕ ಕಾಶಪ್ಪನವರ್, ರಾಜ್ಯದಲ್ಲಿ ಟಿಪ್ಪು ಜಯಂತಿ ಆಚರಿಸಬೇಕೆಂದು ಬಯಸಿದ್ದು, ವಿರೋಧ ಪಕ್ಷವಾದ ಬಿಜೆಪಿ ಇದನ್ನು ತೀವ್ರವಾಗಿ ಪ್ರತಿಭಟಿಸುವುದಾಗಿ ಹೇಳಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಕಾಶಪ್ಪನವರ್, ಟಿಪ್ಪು ಜಯಂತಿಯನ್ನು ಆಯೋಜಿಸುವ ಪ್ರಸ್ತಾವನೆಯನ್ನು ಮಂಡಿಸಿದ್ದೇನೆ. ರಾಜ್ಯ ಸರ್ಕಾರದ ಪ್ರತಿಕ್ರಿಯೆಗಾಗಿ ನಾವು ಕಾಯಬೇಕಾಗಿದೆ. ಬಿಜೆಪಿ ನಾಯಕ ಬಿಎಸ್ ಯಡಿಯೂರಪ್ಪ ಅವರೇ ಟಿಪ್ಪುವಿನ ವೇಷಭೂಷಣ ಧರಿಸಿ ಜಯಂತಿ ಆಚರಿಸಿದ್ದರು ಎಂದಿದ್ದಾರೆ.

ಅವರು ಅಗತ್ಯವಿದ್ದಾಗ ಅದನ್ನು ಆಚರಿಸಿದರು. ಈಗ ಅವರಿಗೆ ಅದು ಬೇಡ. ಆದರೆ, ನಾವು ಅದನ್ನು ನಡೆಸಬೇಕೆಂದು ಬಯಸುತ್ತೇವೆ. ಟಿಪ್ಪು ಕರ್ನಾಟಕದವನು, ಅವನು ತನ್ನ ಕುಟುಂಬ ಸೇರಿದಂತೆ ಈ ರಾಜ್ಯಕ್ಕಾಗಿ ಎಲ್ಲವನ್ನೂ ತ್ಯಾಗ ಮಾಡಿದನು ಎಂದು ಕಾಂಗ್ರೆಸ್ ಶಾಸಕ ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಅಶೋಕ್, 'ಟಿಪ್ಪು ಜಯಂತಿ, ಒಸಾಮಾ ಬಿನ್ ಲಾಡೆನ್ ಜನ್ಮ ದಿನಾಚರಣೆ ಮತ್ತು ಪಾಕಿಸ್ತಾನದ ಸ್ವಾತಂತ್ರ್ಯ ದಿನವನ್ನು ಆಚರಿಸಲಿ. ಇದು ಅವರ ಸರ್ಕಾರ. ಅವರು ಯಾರ ಪರವಾಗಿದ್ದಾರೆಂದು ಜನರಿಗೆ ತಿಳಿಯುತ್ತದೆ' ಎಂದು ಸುದ್ದಿಗಾರರಿಗೆ ತಿಳಿಸಿದರು.

ಕರ್ನಾಟಕ ವಕ್ಫ್ ಮತ್ತು ವಸತಿ ಸಚಿವ ಬಿಝೆಡ್ ಜಮೀರ್ ಅಹ್ಮದ್ ಖಾನ್ ಅವರು ಟಿಪ್ಪು ಜಯಂತಿಯನ್ನು ಆಯೋಜಿಸುತ್ತಿರುವುದಾಗಿ ತಿಳಿಸಿದರು. ದೇಶದಾದ್ಯಂತ ಟಿಪ್ಪು ಅನುಯಾಯಿಗಳು ಟಿಪ್ಪು ಜಯಂತಿಯನ್ನು ಆಯೋಜಿಸುತ್ತಿದ್ದಾರೆ. ನಾವು ಕೂಡ ಕಳೆದ ತಿಂಗಳು ಇದನ್ನು ಆಯೋಜಿಸಿದ್ದೇವೆ. ಸಿದ್ದರಾಮಯ್ಯ ಅವರು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಇದನ್ನು ಆಯೋಜಿಸುತ್ತಿದ್ದರು. ಈಗ ಅದನ್ನು ನಿಲ್ಲಿಸಲಾಗಿದೆ. ಅದನ್ನು ನಿಲ್ಲಿಸಿದ ನಂತರ ನಾವು ಅದನ್ನು ಬೇರೆಡೆ ಆಯೋಜಿಸ ಬೇಕಲ್ಲವೇ ಎಂದು ಅವರು ಕೇಳಿದರು.

ಕೊಡಗಿನ ಒಂದು ವರ್ಗದ ಜನರು ಇದನ್ನು ವಿರೋಧಿಸಿದರು. ಟಿಪ್ಪು ಒಂದೇ ದಿನದಲ್ಲಿ 16,000 ಕೊಡವರನ್ನು ಕೊಂದಿದ್ದಾನೆ ಎಂದು ಆರೋಪಿಸಿದರು.

ಅದೇ ರೀತಿ, ಮಂಗಳೂರಿನ ಕೆಲವು ಕ್ರೈಸ್ತರು ಸಹ ಟಿಪ್ಪು ಜಯಂತಿ ಆಚರಣೆಗೆ ವಿರೋಧ ವ್ಯಕ್ತಪಡಿಸಿದರು. ಮೈಸೂರು ಆಡಳಿತಗಾರ ತಮ್ಮ ಪೂರ್ವಜರಿಗೆ ಕ್ರೂರನಾಗಿದ್ದ ಎಂದು ಹೇಳಿದರು.

ಇಂಡೋನೇಷ್ಯಾ ಪೊಲೀಸರಿಂದ 'ಓನ್ಲಿ ಫ್ಯಾನ್ಸ್' ಸ್ಟಾರ್ ಬೋನಿ ಬ್ಲೂ ಬಂಧನ

ಬಾಲಿ, ಡಿ.9– ಈ ಹಿಂದೆ ಕೇವಲ 12 ಗಂಟೆಗಳಲ್ಲಿ ಸಾವಿರಕ್ಕೂ ಹೆಚ್ಚು ಪುರುಷರೊಂದಿಗೆ ಸೆ** ಮಾಡಿ ದಾಖಲೆ ನಿರ್ಮಿಸಿದ್ದ ಓನ್ಲಿ ಫ್ಯಾನ್ಸ್ ಸ್ಟಾರ್ ಬೋನಿ ಬ್ಲೂ ಅವರನ್ನು ಇಂಡೋನೇಷ್ಯಾ ಪೊಲೀಸರು ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ.



ಕಳೆದ ವಾರ ಇಂಡೋನೇಷ್ಯಾದ ಬಾಲಿಯಲ್ಲಿ 'ಓನ್ಲಿಫ್ಯಾನ್ಸ್' ಸ್ಟಾರ್ ಬೋನಿ ಬ್ಲೂ ಅವರನ್ನು ಬಂಧಿಸಲಾಗಿದೆ. ಬಾಲಿಯಲ್ಲೂ ಬೋನಿಬ್ಲೂ ಅಶ್ಲೀಲ ಚಿತ್ರ ನಿರ್ಮಾಣ ಮತ್ತು ವಿತರಿಸಿದ ಶಂಕೆಯ ಮೇರೆಗೆ ಆಕೆಯನ್ನು ಬಂಧಿಸಲಾಗಿದೆ. ಮುಸ್ಲಿಂ ಬಹುಸಂಖ್ಯಾತ ದೇಶದ ನೈತಿಕ ಕಾನೂನುಗಳನ್ನು ಉಲ್ಲಂಘಿಸಿದ್ದಾರೆ ಎಂಬ ಆರೋಪದ ಮೇಲೆ ಬಂಧಿಸಲಾಯಿತು. ಅವರ ಜೊತೆಗೆ, 15 ಆಸ್ಟ್ರೇಲಿಯನ್ನರು ಸೇರಿದಂತೆ 17 ಪುರುಷ ಪ್ರವಾಸಿಗರನ್ನು ಸಹ ಬಂಧಿಸಲಾಗಿದೆ ಎಂದು ಇಂಡೋನೇಷ್ಯಾ ಮಾಧ್ಯಮಗಳು ವರದಿ ಮಾಡಿದೆ.

ಬೋನಿ ಬ್ಲೂ ಅವರು ಬಾಲಿಯಲ್ಲಿ ತಮ್ಮ 'ಬ್ಯಾಂಗ್‌ಬಸ್' ಪ್ರವಾಸವನ್ನು ಪ್ರಚಾರ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಇದು ಕಾನೂನುಬದ್ಧ ಆಸ್ಟ್ರೇಲಿಯಾದ ಶಾಲಾ ವಿದ್ಯಾರ್ಥಿಗಳೊಂದಿಗೆ ಸ್ಪಷ್ಟ ವಿಷಯವನ್ನು ಒಳಗೊಂಡಿತ್ತು. ಪೊಲೀಸರ ಪ್ರಕಾರ, ಅವರ ಗುಂಪಿನಲ್ಲಿ ಬ್ರಿಟಿಷ್ ಮತ್ತು ಆಸ್ಟ್ರೇಲಿಯಾದ ರಾಷ್ಟ್ರೀಯತೆಗಳ ಕನಿಷ್ಠ 17 ಪುರುಷ ಪ್ರವಾಸಿಗರು ಸೇರಿದ್ದಾರೆ. ಅವರು 19 ರಿಂದ 40 ವರ್ಷ ವಯಸ್ಸಿನವರಾಗಿದ್ದರು. ತಮ್ಮ ಅಶ್ಲೀಲ ಚಿತ್ರ ತಯಾರಿಕೆಗೆ ಇವರನ್ನು ಬಳಸಿಕೊಂಡು ಇಂಡೋನೇಷ್ಯಾ ಕಾನೂನು ಉಲ್ಲಂಘನೆ ಮಾಡಿದ ಆರೋಪದ ಮೇರೆಗೆ ಬೋನಿ ಬ್ಲೂ ಅವರನ್ನು ಬಂಧಿಸಲಾಗಿದೆ ಎನ್ನಲಾಗಿದೆ.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಡಿ.9– ವಿಜಯನಗರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಿರ್ವಹಣಾ ಕೆಲಸದ ನಿಮಿತ್ತ ಡಿ.11 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಗೋಕುಲಂ 1ನೇ, 2ನೇ ಮತ್ತು 3ನೇ ಹಂತ, ಮಹದೇಶ್ವರ ಬಡಾವಣೆ, ವಿಜಯನಗರ 1ನೇ ಮತ್ತು 2ನೇ ಹಂತ, ಹಿನಕಲ್, ಯಾದವಗಿರಿ, ಮಂಜುನಾಥಪುರ, ಮಹಾಜನ ಲೇಔಟ್, ಒಂಟಿಕೊಪ್ಪಲ್, ಜಯಲಕ್ಷ್ಮಿಪುರಂ, ಆಕಾಶವಾಣಿ, ಇಎಸ್‌ಐ ಆಸ್ಪತ್ರೆ, ಹಸುಕರು ಪಾರ್ಕ್, ಗೋಕುಲಂ ಪಾರ್ಕ್, ಕಾಳಿದಾಸ ರಸ್ತೆ ಯಾದವಗಿರಿ ಕೈಗಾರಿಕಾ ಪ್ರದೇಶ, ವಿಜಯನಗರ ವಾಟರ್ ಸಪ್ಲೈ, ಆದಿಪಂಪಾ ರಸ್ತೆ ಜನರಲ್ ತಿಮ್ಮಯ್ಯರಸ್ತೆ, ಬೃಂದಾವನ ಬಡಾವಣೆ, ಯೋಗನರಸಿಂಹಸ್ವಾಮಿ ದೇವಸ್ಥಾನ, ಆಯಿಸ್ಟಾರ್ ಬೇ, ಸಿ.ಎಸ್.ಆರ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.